ಸಂಪುಟ: 04 ಸಂಚಿಕೆ: 233 ಪುಟಗಳು: 08 ಬುಧವಾರ 06 ನವೆಂಬರ್ 2024
www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail.com
ಸಂಪಾದಕರು: ಟಿ. ಹೊಂಬೇಗೌಡ
RNI No. KARKAN/2021/80833
9448225696 +91 8035841833 ₹5

# ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

**ಮುಂಜಾನೆ ಮಾತು**

ನಿನ್ನನ್ನು ನೋಡಿ ಚಪ್ಪಾಳೆ ತಟ್ಟುವ ಹತ್ತು ಬೆರಳು ಗಳಿಗಿಂತಲೂ ಕಣ್ಣೀರು ಒರೆಸುವ ಒಂದು ಬೆರಳು ಮೇಲು


ಉದಯ ವಾಹಿನಿ

**ವರದಿಗಾರರು ಬೇಕಾಗಿದ್ದಾರೆ**

ಎಂಎ., ಜರ್ನಲಿಸಂ ಮಾಡಿರುವಂತಹ ಉತ್ಸಾಹಿ ಯುವಕ ಯುವತಿಯರು ತಾಲ್ಲೂಕು ಹಾಗೂ ಜಿಲ್ಲಾ ಮಟ್ಟಗಳಲ್ಲಿ ಕೆಲಸ ಮಾಡುವಂತಹ

**ರಾಜ್ಯಾದ್ಯಂತ ವರದಿಗಾರರು ಬೇಕಾಗಿದ್ದಾರೆ**

ಹೆಚ್ಚಿನ ಮಾಹಿತಿಗಾಗಿ ಸಂಪರ್ಕಿಸಿ:
9448225696
+91 8035841833

#: 1230 'JAYAMAHAL 13th cross, 2nd phase, Girinagar, Bangalore-560085. (Near to Bangalore one park, opposite mandya medical)
udayavahininews@gmail.com


# ಕಟುಕರಿಗೆ ಕಣ್ಣೀರು ಬರೋದಿಲ್ಲ

## ಭಾವನಾತ್ಮಕ ಜೀವಿಗಳಿಗೆ ಮಾತ್ರ ಬರುತ್ತೆ

• ಉದಯವಾಹಿನಿ, ರಾಮನಗರ

ತಮ್ಮ ಆರೋಗ್ಯ ಹಾಗೂ ನಿಖಿಲ್ ಅವರ ಕಣ್ಣೀರಿನ ಬಗ್ಗೆ ಲಘುವಾಗಿ ಮಾತನಾಡಿರುವ ಕಾಂಗ್ರೆಸ್ ನಾಯಕರ ವಿರುದ್ಧ ಗುಡುಗಿದ ಮಾಜಿ ಪ್ರಧಾನಿಗಳಾದ ಹೆಚ್.ಡಿ.ದೇವೇಗೌಡರು; ಕಟುಕರಿಗೆ ಕಣ್ಣೀರು ಬರುವುದಿಲ್ಲ, ಹೃದಯವಿರುವ ಭಾವುಕ ಜೀವಿಗಳಿಗೆ ಮಾತ್ರ ಕಣ್ಣೀರು ಬರುತ್ತದೆ ಎಂದರು.

ಚನ್ನಪಟ್ಟಣ ವಿಧಾನಸಭೆ ಕ್ಷೇತ್ರದ ವಿರೂಪಾಕ್ಷಪುರ, ಕೊಡಂಬಹಳ್ಳಿ ಗ್ರಾಮಗಳಲ್ಲಿ ಎನ್ ಡಿಎ ಅಭ್ಯರ್ಥಿ ನಿಖಿಲ್ ಕುಮಾರಸ್ವಾಮಿ ಅವರ ಪರವಾಗಿ ಪ್ರಚಾರ ಭಾಷಣ ಮಾಡಿದ ಅವರು; ಕಾಂಗ್ರೆಸ್ ನಾಯಕರ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು. ಕಾಂಗ್ರೆಸ್ ನಾಯಕರು ನನ್ನ ಹೊರಗಿನವರು ಎನ್ನುತ್ತಿದ್ದಾರೆ. ನಾನು ಅವರಿಗೆ ಹೊರಗಿನವನು ಎಂದು ಈಗ ಅನ್ನಿಸುತ್ತಿದೆ. ಆದರೆ, ನಾನು ಈ ತಾಲ್ಲೂಕಿಗೆ ಶಾಶ್ವತ ನೀರಾವರಿ ಒದಗಿಸಲು ಇಗ್ಗಲೂರು ಬ್ಯಾರೇಜ್ ಕಟ್ಟಿಸಿದಾಗ ಹಾಗೆಂದು ಅನಿಸಲಿಲ್ಲವೇ ರಾಜಕೀಯಕ್ಕಾಗಿ ಕಾಂಗ್ರೆಸ್ ನಾಯಕರು ಜನರಿಗೆ ಬರೀ ಸುಳ್ಳನ್ನೇ ಹೇಳುತ್ತಿದ್ದಾರೆ ಎಂದು ಅವರು ಆಕ್ರೋಶ ವ್ಯಕ್ತಪಡಿಸಿದರು.

ಮುದ್ದೆ ಸೊಪ್ಪಿನ ಸಾಂಬಾರು ಹಾಕಿ ಅಡುಗೆ ಮಾಡಿ ಬಡಿಸಿದ ತಾಯಂದಿರು ಇಲ್ಲಿದ್ದೀರಿ. ನಿಮ್ಮನ್ನು ಎಂದಿಗೂ ಮರೆಯೋಕೆ ಸಾಧ್ಯವಿಲ್ಲ. ನಿಮ್ಮ ಪಾದಕ್ಕೆ ನಾನು ನಮಸ್ಕಾರ ಮಾಡ್ತೀನಿ. ನಾನು ಈ ತಾಲ್ಲೂಕಿಗೆ ಏನೇನು ಮಾಡಿದ್ದೇನೆ, ಹೇಗೆಲ್ಲಾ ಶ್ರಮಪಟ್ಟು ಇಗ್ಗಲೂರು ಅಣೆಕಟ್ಟು ಕಟ್ಟಿದ್ದೇನೆ, ಆ ಬಗ್ಗೆ ನಾನು ಚರ್ಚೆ ಮಾಡಲ್ಲ, ಆದರೆ ಇಗ್ಗಲೂರು ಅಣೆಕಟ್ಟು ನಿಮ್ಮ ಮುಂದೆ ಇದೆ ಎಂದರು ಅವರು. ನನಗೆ ನಿಮ್ಮ ಆಶೀರ್ವಾದ ಇದೆ. ನಾನು ಶತಾಯು ಆಗುತ್ತೇನೆಯೋ ಇಲ್ಲವೋ ಗೊತ್ತಿಲ್ಲ. ಆದರೆ, ಬದುಕಿರುತ್ತೇನೆ ಎನ್ನುವ ಭರವಸೆ ಹೊಂದಿದ್ದೇನೆ. ದೇವರ, ನಿಮ್ಮೆಲ್ಲರ ಆಶೀರ್ವಾದ ಇದ್ದರೆ ನೂರು ವರ್ಷ ಬದುಕುತ್ತೇನೆ. ಆದರೆ, ಕಾಂಗ್ರೆಸ್ ನಾಯಕರಿಗೆ ನನ್ನ ಆರೋಗ್ಯದ ಬಗ್ಗೆಯೇ ಚಿಂತೆಯಾಗಿದೆ ಎಂದು ಮಾಜಿ ಪ್ರಧಾನಿಗಳು ಅತೀವ ನೋವು ವ್ಯಕ್ತಪಡಿಸಿದರು.

ಅವರ ತಂದೆ ಕುಮಾರಸ್ವಾಮಿ ಕೇಂದ್ರದಲ್ಲಿ ಮಂತ್ರಿ ಆಗಿದ್ದಾರೆ. ನನ್ನ ಅರವತ್ತು ವರ್ಷದ ರಾಜಕಾರಣದಲ್ಲಿ ಇಂತಹ ಕೆಟ್ಟ ರಾಜಕಾರಣವನ್ನು ನಾನು ನೋಡಿಲ್ಲ ಎಂದು ಕಳವಳ ವ್ಯಕ್ತಪಡಿಸಿದರು ಮಾಜಿ ಪ್ರಧಾನಿಗಳು.

ನಾನು ಇದನ್ನು ಅಸೂಯೆ ದ್ವೇಷದಿಂದ ಹೇಳುತ್ತಿಲ್ಲ. ವೈಯಕ್ತಿಕವಾಗಿ ನಾನು ಯಾರ ಬಗ್ಗೆಯೂ ಮಾತಾಡಲ್ಲ ಎಂದ ಅವರು; ನಾನು 11ನೇ ತಾರೀಕಿನ ವರೆಗೂ ಬರುತ್ತೇನೆ. ಮೊಮ್ಮಗನ ಗೆಲ್ಲಿಸೋಕೆ ಬರುತ್ತಿಲ್ಲ. ನನಗೆ ಜೀವನದಲ್ಲಿ ಒಂದೇ ಒಂದು ಗುರಿ ಇದೆ. ಋಣಾನುಬಂಧವೋ ಏನೋ, ಈಗ ಯಾರ ಮನೆ ಅನ್ನ ತಿನ್ನುತ್ತೇನೆಯೋ ಗೊತ್ತಿಲ್ಲ. ಅನ್ನದ ಋಣ ಯಾರ ಮನೆಗೆ ಕರೆದುಕೊಂಡು ಹೋಗುತ್ತದೊ ಗೊತ್ತಿಲ್ಲ. ಮಾಧ್ಯಮದವರು ದೇವೇಗೌಡರು ಮಾತಾಡ್ತಾರಾ ಎಂದು ಕೇಳುತ್ತಿದ್ದರು. ದೇವೇಗೌಡ್ರು ಏನು ಇಂಟರ್ ನ್ಯಾಶನಲ್ ಅಪರಾಧಿ ಆಗಿದ್ನಾ ಮೂರು ತಿಂಗಳು ನನ್ನ ಮನೆ ಮುಂದೆ ಇದ್ದರಲ್ಲ. ಇವತ್ತು ನಿಮ್ಮ ಮುಂದೆ ಎದೆ ಚಾಚಿ ಮಾತನಾಡುತ್ತಿದ್ದೇನೆ. ಇನ್ನೂ ನಾಲ್ಕಾರು ವರ್ಷ ನಿಮ್ಮ ಆಶೀರ್ವಾದದಿಂದ ಇರುತ್ತೇನೆ. ನನ್ನ ಕೊನೆ ಉಸಿರು ಇರೋ ತನಕ ನನ್ನ ಶರೀರ ಇರೋ ತನಕ ಜನರ ಪರವಾಗಿ ಕೆಲಸ ಮಾಡುತ್ತೇನೆ ಎಂದು ಆಂಬ್ಯುಲೆನ್ಸ್ ನಲ್ಲಿ ಬಂದು ಪ್ರಚಾರ ಮಾಡುತ್ತಾರೆ ಎಂದಿದ್ದ ಡಿಕೆ ಸುರೇಶ್ ಮಾತಿಗೆ ತಿರುಗೇಟು ಕೊಟ್ಟರು ದೇವೇಗೌಡರು.

ಅಭ್ಯರ್ಥಿ ನಿಖಿಲ್ ಕುಮಾರಸ್ವಾಮಿ, ಪ್ರತಿಪಕ್ಷ ನಾಯಕ ಆರ್.ಅಶೋಕ್, ವಿಧಾನ ಪರಿಷತ್ ಸದಸ್ಯ ಟಿ.ಎ.ಶರವಣ ಸೇರಿದಂತೆ ಅನೇಕರು ನಾಯಕರು ಸಭೆಯಲ್ಲಿ ಹಾಜರಿದ್ದರು.

> ನನ್ನ ಆರೋಗ್ಯ ಚೆನ್ನಾಗಿದೆ. ನಾನು ಆಂಬುಲೆನ್ಸ್ ನಲ್ಲಿ ಬಂದಿಲ್ಲ, ವ್ಹೀಲ್ ಚೇರ್ ಮೇಲೆ ಬಂದಿಲ್ಲ. ನಾನು ನಿಮ್ಮೆಲ್ಲರ ಆಶೀರ್ವಾದದಿಂದ ಚೆನ್ನಾಗಿದ್ದೇನೆ. ಆರೋಗ್ಯವಾಗಿದ್ದೇನೆ. ಅದನ್ನು ತೋರಿಸಲು ಇಲ್ಲಿಗೆ ಬಂದಿದ್ದೇನೆ. ನೀವೇ ನನ್ನನ್ನು ನೋಡುತ್ತಿದ್ದೀರಿ, ಹೇಗೆ ಇದ್ದೇನೆ ಎಂದು ಗಮನಿಸುತ್ತಿದ್ದೀರಿ ಅಲ್ಲವೇ? ನನಗೆ ಮಂಡಿ ನೋವು, ನಿಂತುಕೊಂಡು ಮಾತಾಡೋಕೆ ಆಗಲ್ಲ. ನನಗೀಗ 92 ವರ್ಷ, ಎಸ್.ಎಂ.ಕೃಷ್ಣ ಮತ್ತು ನಾನು ಒಂದೇ ವಯಸ್ಸಿನವರು. ಆದರೆ ನಾವು ಈಗಲೂ ಕೆಲಸ ಮಾಡುತ್ತಿದ್ದೇವೆ. ದೇಹಕ್ಕೆ ವಯಸ್ಸಾಗುತ್ತದೆ, ಇಚ್ಛಾಶಕ್ತಿಗೆ ಅಲ್ಲ
> –ದೇವೇಗೌಡರು, ಮಾಜಿ ಪ್ರಧಾನಿಗಳು




**ನಮ್ಮ ಜನಕ್ಕೆ ನೀರು ಸಿಗುವವರೆಗೆ ನನ್ನ ಹೋರಾಟ**

ವಿರೋಧ ಪಕ್ಷದ ನಾಯಕರಿಗೆ ಯಾವ ರೀತಿ ಗೌರವ ಕೊಡಬೇಕು ಎಂಬುವುದು ಕಾಂಗ್ರೆಸ್‌ನವರಿಗೆ ಗೊತ್ತಿಲ್ಲ ಎಂದು ರಾಜ್ಯ ಸರ್ಕಾರದ ವಿರುದ್ಧ ದೇವೇಗೌಡರು ವಾಗ್ದಾಳಿ ನಡೆಸಿದರು. ಬೆಂಗಳೂರಿಗೆ ಕುಡಿಯುವ ನೀರಿಲ್ಲ. ಯಾವ ತಮಿಳುನಾಡು ನಮ್ಮ ನೀರನ್ನು ಲೂಟಿ ಮಾಡುತ್ತಿದೆಯೋ ಅದರಿಂದ ಮುಕ್ತಿ ಸಿಗಬೇಕು. ನಮ್ಮ ಜನಕ್ಕೆ ನೀರು ಸಿಗುವವರೆಗೆ ನನ್ನ ಹೋರಾಟ. ಈ ಬಗ್ಗೆ ಪ್ರಧಾನಿ ನರೇಂದ್ರ ಮೋದಿ ಅವರ ಬಳಿಯೂ ಹೇಳಿದ್ದಾಗಿ ದೇವೇಗೌಡರು ಪುನರುಚ್ಚರಿಸಿದರು. ನಮ್ಮ ರೈತರ ಸ್ಥಿತಿ ನೋಡಲ್ಲಿಕ್ಕಾಗಲ್ಲ. ಅವರಿಗೆ ನೀರಿನ ಅಗತ್ಯವಿದೆ. ನಾನೂ ರೈತನ ಮಗ. ನನಗೂ ಗೊತ್ತಿದೆ. ನಾನು ಜಿಲ್ಲೆಗೆ, ಕ್ಷೇತ್ರಕ್ಕೆ ಏನು ಕೊಡುಗೆ ನೀಡಿದ್ದೀನಿ ಎಂಬ ವಿಚಾರ ಈಗ ಚರ್ಚೆ ಬೇಡ. ಅದು ನಿಮಗೂ ಗೊತ್ತು ಎಂದು ಹೇಳಿದರು.

**• ಕಾಂಗ್ರೆಸ್ ನಾಯಕರು ನನ್ನ ಹೊರಗಿನವರು ಎನ್ನುತ್ತಿದ್ದಾರೆ. • ನಾನು ಈ ತಾಲ್ಲೂಕಿಗೆ ಶಾಶ್ವತ ನೀರಾವರಿ ಒದಗಿಸಲು ಇಗ್ಗಲೂರು ಬ್ಯಾರೇಜ್ ಕಟ್ಟಿಸಿದಾಗ ಹಾಗೆಂದು ಅನಿಸಲಿಲ್ಲವೇ**



**ಕೆಟ್ಟ ರಾಜಕಾರಣ ನಾನು ನೋಡಿಲ್ಲ**



1. ನಾನು ಆಂಬುಲೆನ್ಸ್ ನಲ್ಲಿ ಬಂದಿಲ್ಲ
2. ನಿಮ್ಮ ಆಶೀರ್ವಾದ ಇದ್ದರೆ ನೂರು ವರ್ಷ ಬದುಕುತ್ತೇನೆ
3. ನಿಮ್ಮ ಮುಂದೆ ಎದೆ ಚಾಚಿ ಮಾತನಾಡುತ್ತಿದ್ದೇನೆ
4. ಇಂತಹ ಕೆಟ್ಟ ರಾಜಕಾರಣ ಮತ್ತೆ ಈ ರಾಜ್ಯದಲ್ಲಿ ಇರಬಾರದು
5. ನನ್ನ ಮೊಮ್ಮಗ ಈ ಕ್ಷೇತ್ರವನ್ನು ಅಭಿವೃದ್ಧಿ ಮಾಡುತ್ತಾನೆ.

**ನಮ್ಮಪ್ಪ ಬರೆಸಿದ ಜಾತಕ ನಾನಿನ್ನೂ ಜೀವಂತ ಇರ್ತೀನಿ!**

ನಾನು 100 ವರ್ಷ ಬದುಕಿರುತ್ತಿನ್ನೋ ಇಲ್ವೋ ಆದರೆ ನಿಮ್ಮ ಆಶೀರ್ವಾದಿಂದ ಇನ್ನೂ ಬದುಕಿರುತ್ತೀನಿ ಅದು ಗ್ಯಾರಂಟಿ' ಎಂದು ಮಾಜಿ ಪ್ರಧಾನಿ ಹೆಚ್.ಡಿ.ದೇವೇಗೌಡ ಅವರು ಅಬ್ಬರಿಸಿದರು. ಚನ್ನಪಟ್ಟಣ ಕ್ಷೇತ್ರದ ವಿರುಪಾಕ್ಷಿಪುರ ಗ್ರಾಮದಲ್ಲಿ ಚುನಾವಣಾ ಪ್ರಚಾರ ಸಭೆಯಲ್ಲಿ ಇಂದು ಮಾತನಾಡಿ, ನನ್ನ ಮೊಮ್ಮಗ್ಗನಿಗೂ ನೀವು ಈ ಬಾರಿ ಆಶೀರ್ವದಿಸಿ ಗೆಲ್ಲಿಸಿ. ಅತ್ಯಂತ ಹೆಚ್ಚು ಮತಗಳಿಂದ ಆರಿಸಿತರಬೇಕು ಎಂದು ಕೈ ಮುಗಿದು ದೇವೇಗೌಡರು ನಿಖಿಲ್ ಕುಮಾರಸ್ವಾಮಿ ಪರ ಮತಯಾಚಿಸಿದರು. ನನ್ನ ಮಗ ಕುಮಾರಸ್ವಾಮಿ ಕೇಂದ್ರದಲ್ಲಿ ಮಂತ್ರಿಯಾಗಿದ್ದಾರೆ. ಮೊಮ್ಮಗ ನಿಖಿಲ್‌ಗೂ ಶಾಸಕನಾಗಿ ಸೇವೆ ಸಲ್ಲಿಸಲು ಅವಕಾಶ ನೀಡಿ ಎಂದರು. ಇನ್ನು 60 ವರ್ಷದ ರಾಜಕಾರಣದಲ್ಲಿ ಈ ರೀತಿಯ ಕೆಟ್ಟ ರಾಜಕಾರಣ ನಾನು ಕಂಡಿಲ್ಲ. ಇಂತಹ ಕೆಟ್ಟ ರಾಜಕಾರಣ ಈ ರಾಜ್ಯದಲ್ಲಿ ಇರಬಾರದು.

## ಸರ್ಕಾರದ ಧನದಾಹಕ್ಕೆ ಇನ್ನೆಷ್ಟು ಅಧಿಕಾರಿಗಳು ಬಲಿಯಾಗಬೇಕು.?

• ಉದಯವಾಹಿನಿ, ಬೆಂಗಳೂರು

ಸಿಎಂ ಸಿದ್ಧರಾಮಯ್ಯ ಅವರೇ ನಿಮ್ಮ ಸಚಿವರ ಪಿಎ ಹೆಸರು ಡೆತ್ ನೋಟ್ ನಲ್ಲಿ ಬರೆದಿಟ್ಟು ಬೆಳಗಾವಿಯ ತಹಶೀಲ್ದಾರ್ ಕಚೇರಿ ಎಸ್ ಡಿಎ ಆತ್ಮಹತ್ಯೆಗೆ ಶರಣಾಗಿದ್ದಾನೆ. ನಿಮ್ಮ ಸರ್ಕಾರದ ಧನದಾಹಕ್ಕೆ ಇನ್ನೆಷ್ಟು ಅಧಿಕಾರಿಗಳು ಬಲಿಯಾಗಬೇಕು ಎಂಬುದಾಗಿ ವಿಧಾನ ಪರಿಷತ್ ವಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ ಪ್ರಶ್ನಿಸಿದ್ದಾರೆ. ಇಂದು ತಮ್ಮ ಫೇಸ್ ಬುಕ್ ಮುಖಪುಟದಲ್ಲಿ ಪೋಸ್ಟ್ ಮಾಡಿರುವಂತ ಅವರು, ಸುಳ್ಳು ಗ್ಯಾರಂಟಿಗಳ ನೆಪದಲ್ಲಿ ರಾಜ್ಯವನ್ನು ಕೊಳ್ಳೆ ಹೊಡೆಯುತ್ತಾ ಭ್ರಷ್ಟಾಚಾರದಲ್ಲಿ ಮುಳುಗಿರುವ ಕಾಂಗ್ರೆಸ್ ಸರ್ಕಾರದ ಅಘೋಷಿತ ಸಾವು ಗ್ಯಾರೆಂಟಿ ಯೋಜನೆ ಎಂಬುದಾಗಿ ಗುಡುಗಿದ್ದಾರೆ. ಬೆಳಗಾವಿಯ ಎಫ್.ಡಿ.ಎ ರುದ್ರಣ್ಣ ಯಡವಣ್ಣನವರ ಅವರು ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಅವರ ಪಿಎ ಸೋಮು ಹಾಗೂ ತಹಶೀಲ್ದಾರ್ ಬಸವರಾಜ್ ನಾಗರಾಳ್ ಅವರೆ ತಮ್ಮ ಸಾವಿಗೆ ಕಾರಣ ಎಂದು ಡೆತ್ ನೋಟ್ ಬರೆದಿಟ್ಟು ತಹಶೀಲ್ದಾರ್ ಕಚೇರಿಯಲ್ಲಿ ಆತ್ಮಹತ್ಯೆಗೆ ಶರಣಾಗಿದ್ದಾರೆ ಎಂದು ಹೇಳಿದ್ದಾರೆ. ಮಾನ್ಯ ಸಿಎಂ ಸಿದ್ಧರಾಮಯ್ಯನವರೇ, ನಿಮ್ಮ ಸರ್ಕಾರದ ಧನದಾಹಕ್ಕೆ ಇನ್ನೆಷ್ಟು ಅಧಿಕಾರಿಗಳು ಬಲಿಯಾಗಬೇಕು ಎಂದರು.

## ಇಷ್ಟು ವರ್ಷದ ರಾಜಕೀಯ ಜೀವನದಲ್ಲಿ ಕಪ್ಪುಚುಕ್ಕೆ ಇಲ್ಲ

• ಉದಯವಾಹಿನಿ, ಹಾವೇರಿ

ನನ್ನ 40 ವರ್ಷದ ರಾಜಕೀಯ ಜೀವನದಲ್ಲಿ ಇದುವರೆಗೂ ನನ್ನ ಮೇಲೆ ಯಾವುದೇ ಕಪ್ಪು ಚುಕ್ಕೆ ಇಲ್ಲ. ಇದುವರೆಗೂ ನಾನು 15 ಬಾರಿ ಬಜೆಟ್ ಮಂಡನೆ ಮಾಡಿದ್ದೇನೆ. ಮುಂದೆ ಎಷ್ಟು ಬಾರಿ ಬಜೆಟ್ ಮಂಡಿಸುತ್ತಾರೋ ಇಲ್ಲವೋ ಗೊತ್ತಿಲ್ಲ. ಎಂದು ಕುರುಬ ಸಮುದಾಯ ಮುಖಂಡರ ಸಭೆಯಲ್ಲಿ ಸಿಎಂ ಸಿದ್ದರಾಮಯ್ಯ ಹೇಳಿಕೆ ನೀಡಿದರು. ಹಾವೇರಿ ಜಿಲ್ಲೆಯ ಶಿಗ್ಗಾವಿ ತಾಲ್ಲೂಕಿನ ಗಂಗೀಬಾವಿ ಬಳಿ ಕುರುಬ ಸಮುದಾಯದ ಸಭೆ ನಡೆಯುತ್ತಿದ್ದು ನನ್ನ ಮೇಲೆ ಯಾವುದೇ ಕಪ್ಪು ಚುಕ್ಕೆ ಇಲ್ಲ ನಾನು ಅಪ್ರಾಮಾಣೀಕನಾಗಿದ್ದರೆ ಕೋಟಿಗಟ್ಟಲೆ ಸಂಪಾದಿಸಬಹುದಿತ್ತು. ಆದರೆ ನಾನು ಆ ಕೆಲಸ ಮಾಡಿಲ್ಲ. ಇವತ್ತಿನವರೆಗೂ ನನಗೆ ಮೈಸೂರಿನಲ್ಲಿ ಒಂದು ಸ್ವಂತ ಮನೆ ಇಲ್ಲ ಎಂದು ಅವರು ತಿಳಿಸಿದರು. ಅಧಿಕಾರದಿಂದ ಇಳಿಸಬೇಕು ಅವಮಾನ ಮಾಡಬೇಕು ಎಂದು ಹುನ್ನಾರ ನಡೆಸಿದ್ದಾರೆ. ಇದಕ್ಕೆ ಬಿಜೆಪಿ ಸಂಸದ ಬಸವರಾಜ್ ಬೊಮ್ಮಾಯಿ ಕೂಡ ಕೈಜೋಡಿಸಿದ್ದಾರೆ. ಬಿಜೆಪಿ ನಾಯಕರಿಗೆ ಎಚ್ ಡಿ ಕುಮಾರಸ್ವಾಮಿ, ಬಿಎಸ್ ಯಡಿಯೂರಪ್ಪ, ಎಚ್ ಡಿ ದೇವೇಗೌಡರ ಮಕ್ಕಳು ಹಾಗೂ ಆರ್ ಅಶೋಕ್ ಎಲ್ಲಾರೂ ಕೈ ಜೋಡಿಸಿದ್ದು ಇದಕ್ಕೇ ನೀವು ಉತ್ತರ ಕೊಡಬೇಕು ಎಂದು ಗಂಗಿಬಾವಿಯಲ್ಲಿ ನಡೆದ ಕುರುಬ ಸಮಾಜದ ಸಭೆಯಲ್ಲಿ ಸಿಎಂ ಸಿದ್ದರಾಮಯ್ಯ ತಿಳಿಸಿದರು.

## ಮಂಥ್ಲಿ ಮನಿ ಹೆಸರಲ್ಲಿ ಮದ್ಯದ ಅಂಗಡಿಗಳಿಂದ ಹಣ ವಸೂಲಿ

• ಉದಯವಾಹಿನಿ, ಬೆಂಗಳೂರು

ಅಬಕಾರಿ ಇಲಾಖೆಯಲ್ಲಿ 500 ಕೋಟಿ ಲೂಟಿಯಾಗಿದೆ. ಕಾಂಗ್ರೆಸ್ ಸರ್ಕಾರದ ಲಂಚಾವತಾರದ ಮತ್ತೊಂದು ಕರಾಳ ಅಧ್ಯಾಯ ಬಹಿರಂಗಗೊಂಡಿದೆ ಎಂದು ವಿಪಕ್ಷ ನಾಯಕ ಆರ್.ಅಶೋಕ್ ಗಂಭೀರ ಆರೋಪ ಮಾಡಿದ್ದಾರೆ. ರಾಜ್ಯ ಮದ್ಯ ಮಾರಾಟಗಾರರ ಸಂಘ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ರಾಜ್ಯಪಾಲರಿಗೆ ಬರೆದಿರುವ ಪತ್ರದಲ್ಲಿ ಅಬಕಾರಿ ಸಚಿವರು 'ಮಂಥ್ಲಿ ಮನಿ' ಹೆಸರಿನಲ್ಲಿ ಮದ್ಯದ ಅಂಗಡಿಗಳಿಂದ ಪ್ರತಿ ತಿಂಗಳಿಗೆ 15 ಕೋಟಿ ರೂಪಾಯಿಯಂತೆ ವರ್ಷಕ್ಕೆ 180 ಕೋಟಿ ರೂ ಲಂಚ ಪಡೆಯುತ್ತಿದ್ದಾರೆ ಎಂದು ಆರೋಪಿಸಿ ಅಬಕಾರಿ ಸಚಿವರನ್ನು ಬದಲಾಯಿಸಲು ಕೋರಿದ್ದಾರೆ.

# ಸಿದ್ದರಾಮಯ್ಯ ರಾಜೀನಾಮೆಗೆ ಮುಹೂರ್ತ ನಿಗದಿ

• ಉದಯವಾಹಿನಿ, ಬೆಂಗಳೂರು

ಸಿದ್ದರಾಮಯ್ಯನವರ ರಾಜೀನಾಮೆಯ ಮುಹೂರ್ತ ನಿಗದಿಯಾಗಿದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಮತ್ತು ಶಾಸಕ ಬಿ.ವೈ.ವಿಜಯೇಂದ್ರ ಅವರು ಪ್ರಕಟಿಸಿದರು. ಮಾಧ್ಯಮ ಪ್ರತಿನಿಧಿಗಳೊಂದಿಗೆ ಇಂದು ಮಾತನಾಡಿದ ಅವರು ಪ್ರಶ್ನೆಗೆ ಉತ್ತರ ಕೊಟ್ಟರು. ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಸಿದ್ದರಾಮಯ್ಯ ಮತ್ತು ಡಿ.ಕೆ.ಶಿವಕುಮಾರ್ ಅವರು ಚರ್ಚೆ ಮಾಡಿ ಈಗಾಗಲೇ ಸಿದ್ದರಾಮಯ್ಯನವರ ರಾಜೀನಾಮೆಯ ಮುಹೂರ್ತ ನಿಗದಿ ಮಾಡಿದ್ದಾರೆ. ಆ ಮುಹೂರ್ತ ಯಾವುದೆಂದು ಸಿದ್ದರಾಮಯ್ಯನವರೇ ಬಾಯಿ ಬಿಡಬೇಕಿದೆ. ಸಿದ್ದರಾಮಯ್ಯನವರ ರಾಜೀನಾಮೆ ನಿಶ್ಚಿತವಿದೆ ಎಂದು ತಿಳಿಸಿದರು. ಸಿದ್ದರಾಮಯ್ಯನವರು ಪೂರ್ಣ ಅವಧಿ ಪೂರೈಸುವುದಿಲ್ಲ; ಅತಿ ಶೀಘ್ರವೇ ರಾಜೀನಾಮೆ ಕೊಡುತ್ತಾರೆ ಎಂದ ಅವರು, 5 ವರ್ಷ ಕಾಲ ಸಿಎಂ ಆಗಿರುವುದಾಗಿ ರಾಜ್ಯದ ಜನರಿಗೆ ಸಿದ್ದರಾಮಯ್ಯನವರು ಹೇಳಲಿ; ನೋಡೋಣ ಎಂದು ಸವಾಲು ಹಾಕಿದರು. ಮುಖ್ಯಮಂತ್ರಿಗಳು ಮತ್ತವರ ಕುಟುಂಬ ಆರೋಪಿ ಸ್ಥಾನದಲ್ಲಿ ನಿಂತಿದೆ. ಭ್ರಷ್ಟಾಚಾರದ ಸಂಬಂಧ ರಾಜ್ಯದ ಜನತೆಗೆ ಅವರು ಉತ್ತರ ಕೊಡಬೇಕಿದೆ ಎಂದು ಆಗ್ರಹಿಸಿದರು. ಮುಖ್ಯಮಂತ್ರಿ ಸಿದ್ದರಾಮಯ್ಯನವರಿಗೆ ಲೋಕಾಯುಕ್ತ ನೋಟಿಸ್ ಕೊಟ್ಟು ತನಿಖೆಗೆ ಬರಲು ತಿಳಿಸಿದ್ದಾರೆ. ರಾಜ್ಯದ ಮುಖ್ಯಮಂತ್ರಿಯಾಗಿ ತನಿಖೆ ಎದುರಿಸುತ್ತೀರಾ? ಆರೋಪಿಯಾಗಿ ಹೋಗುವಿರಾ? ಎಂಬುದನ್ನು ಜನತೆಗೆ ತಿಳಿಸಿ ಎಂದು ಒತ್ತಾಯಿಸಿದರು.

**ಬಸನಗೌಡ ಪಾಟೀಲ್ ಯತ್ನಾಳ್ ಹೇಳಿಕೆಗೆಲ್ಲಾ ಬೆಲೆಯಿಲ್ಲ**


ತಮ್ಮ ಬಗ್ಗೆ ಸದಾ ಕೆಂಡ ಕಾರುವ ಬಸನಗೌಡ ಪಾಟೀಲ್ ಯತ್ನಾಳ್, ರಮೇಶ್ ಜಾರಕಿಹೊಳಿ ವಿರುದ್ಧ ಬಿಜೆಪಿ ರಾಜ್ಯಾಧ್ಯಕ್ಷ ಬಿವೈ ವಿಜಯೇಂದ್ರ ವಾಗ್ದಾಳಿ ನಡೆಸಿದ್ದಾರೆ. ಯತ್ನಾಳ್, ಜಾರಕಿಹೊಳಿ ಮಾತಿಗೆಲ್ಲಾ ಕವಡೆ ಕಾಸಿನ ಕಿಮ್ಮತ್ತಿಲ್ಲ. ಉಪಚುನಾವಣೆ ಮೇಲೆ ಇವರ ಹೇಳಿಕೆಗಳೆಲ್ಲಾ ಪರಿಣಾಮ ಬೀರಲ್ಲ ಎಂದು ವಿಜಯೇಂದ್ರ ಹೇಳಿದ್ದಾರೆ. ವಿಜಯೇಂದ್ರ ರಾಜ್ಯಾಧ್ಯಕ್ಷರಾದ ಮೇಲೆ ಈ ಇಬ್ಬರೂ ನಾಯಕರೂ ಅವರ ವಿರುದ್ಧ ಬಹಿರಂಗ ಹೇಳಿಕೆಗಳನ್ನು ನೀಡುತ್ತಲೇ ಇದ್ದಾರೆ. ಇದೀಗ ವಿಜಯೇಂದ್ರ ಬಿಜೆಪಿ ರಾಜ್ಯಾಧ್ಯಕ್ಷರಾಗಿರುವವರೆಗೂ ಪ್ರಚಾರಕ್ಕೆ ಹೋಗುವುದಿಲ್ಲ ಎಂದು ರಮೇಶ್ ಜಾರಕಿಹೊಳಿ ಹೇಳಿದ್ದರು. ಇದಕ್ಕೆ ವಿಜಯೇಂದ್ರ ಪ್ರತಿಕ್ರಿಯಿಸಿದ್ದು ಇಂಥಹ ಹೇಳಿಕೆಗಳಿಗೆಲ್ಲಾ ತಲೆಯೇ ಕೆಡಿಸಿಕೊಳ್ಳಲ್ಲ ಎಂದಿದ್ದಾರೆ. ಇವರ ಆಟ ಬಹಳ ದಿನ ನಡೆಯಲ್ಲ. ಪ್ರಚಾರಕ್ಕಾಗಿ ಹೇಳಿಕೆ ನೀಡುತ್ತಿದ್ದಾರೆ. ಉಪಚುನಾವಣೆಯಲ್ಲಿ ನಮ್ಮ ಜೊತೆ ಕಾರ್ಯಕರ್ತರಿದ್ದಾರೆ ಎಂದಿದ್ದಾರೆ



## ಸಿಬಿಐ ತನಿಖೆ ಕೋರಿದ್ದ ಅರ್ಜಿ ವಿಚಾರಣೆ ಮುಂದೂಡಿದ ಹೈಕೋರ್ಟ್

• ಉದಯವಾಹಿನಿ, ಬೆಂಗಳೂರು

ಮುಡಾ ಹಗರಣಕ್ಕೆ ಸಂಬಂಧಿಸಿದಂತೆ ಸಿಬಿಐ ತನಿಖೆಗೆ ಕೋರಿ ದೂರುದಾರ ಸ್ನೇಹಮಯಿ ಕೃಷ್ಣ ಸಲ್ಲಿಸಿದ್ದ ಅರ್ಜಿ ವಿಚಾರಣೆಯನ್ನು ಹೈಕೋರ್ಟ್ ಕೈಗೆತ್ತಿಕೊಂಡಿದೆ. ಆದರೆ ವಿಚಾರಣೆಯನ್ನು ಎರಡು ವಾರಗಳ ಕಾಲ ಮುಂದೂಡಲಾಗಿದೆ. ಇಂದು ಹೈಕೋರ್ಟ್ ನಲ್ಲಿ ಸ್ನೇಹಮಯಿ ಕೃಷ್ಣ ಪರ ವಕೀಲ ಕೆ.ಜಿ.ರಾಘವನ್, ಮುಡಾ ಪ್ರಕರಣದಲ್ಲಿ ನಮಗೆ ಲೋಕಾಯುಕ್ತ ತನಿಖೆಯಲ್ಲಿ ನಂಬಿಕೆ ಇಲ್ಲ. ಹಾಗಾಗಿ ಪ್ರಕರಣದ ತನಿಖೆಯನ್ನು ಸಿಬಿಐಗೆ ವರ್ಗಾಯಿಸುವಂತೆ ಕೋರಲಾಗಿದೆ ಎಂದು ತಿಳಿಸಿದ್ದಾರೆ. ಈ ವೇಳೆ ಸರ್ಕಾರದ ಪರ ಅಭಿಯೋಜಕ ಜಗದೀಶ್, ಈಗಾಗಲೇ ಲೋಕಾಯುಕ್ತ ತನಿಖೆ ಆರಂಭವಾಗಿದೆ. ನಮಗೆ ವಾದಮಂಡನೆಗೆ 2 ವಾರಗಳ ಕಾಲ ಕಾಲಾವಕಾಶ ನೀಡಬೇಕು ಎಂದು ಮನವಿ ಮಾಡಿದರು. ಈ ಹಿನ್ನೆಲೆಯಲ್ಲಿ ಹೈಕೋರ್ಟ್ ಅರ್ಜಿ ವಿಚಾರಣೆಯನ್ನು ನವೆಂಬರ್ 26ಕ್ಕೆ ಮುಂದೂಡಿದೆ. ಅಲ್ಲದೇ ನವೆಂಬರ್ 25ರವರೆಗೆ ನಡೆದ ತನಿಖೆಯ ಸಂಪೂರ್ಣ ವಿವರ ಸಲ್ಲಿಸುವಂತೆ ಹೈಕೋರ್ಟ್ ಲೋಕಾಯುಕ್ತಕ್ಕೆ ಸೂಚನೆ ನೀಡಿದೆ. ಮುಡಾ ಕೇಸ್ ನಲ್ಲಿ ಲೋಕಾಯುಕ್ತ ತನಿಖೆಯೇ ಮುಂದುವರೆಯಲಿದೆಯೇ? ಅಥವಾ ಸಿಬಿಐಗೆ ವರ್ಗಾವಣೆಯಾಗಲಿದೆಯೇ? ಕಾದುನೋಡಬೇಕಿದೆ.




# ಕಡಿಮೆ ಬೆಲೆಯಲ್ಲಿ ಭಾರತ್ ಅಕ್ಕಿ-ಗೋಧಿ ಹಿಟ್ಟು ಮಾರಾಟಕ್ಕೆ ಗ್ರೀನ್ ಸಿಗ್ನಲ್

## ಸಬ್ಸಿಡಿ ಬೆಲೆಯಲ್ಲಿ ಅಗತ್ಯ ಆಹಾರ ಪದಾರ್ಥಗಳ ಒದಗಿಸುವ ಮಹತ್ವಾಕಾಂಕ್ಷೆಯ 'ಭಾರತ್ ಅಕ್ಕಿ ಮತ್ತು ಗೋದಿ ಹಿಟ್ಟು' ಚಿಲ್ಲರೆ ಮಾರಾಟದ ಎರಡನೇ ಹಂತಕ್ಕೆ ಚಾಲನೆ

• ಉದಯವಾಹಿನಿ, ಬೆಂಗಳೂರು

ಸಬ್ಸಿಡಿ ಬೆಲೆಯಲ್ಲಿ ದೇಶದ ಗ್ರಾಹಕರಿಗೆ ಅಗತ್ಯ ಆಹಾರ ಪದಾರ್ಥಗಳ ಒದಗಿಸುವುದನ್ನು ಖಾತ್ರಿಪಡಿಸುವ ನಿಟ್ಟಿನಲ್ಲಿ ಕೇಂದ್ರ ಸರ್ಕಾರದ ಮಹತ್ವಾಕಾಂಕ್ಷೆಯ 'ಭಾರತ್ ಅಕ್ಕಿ ಮತ್ತು ಗೋದಿ ಹಿಟ್ಟು' ಚಿಲ್ಲರೆ ಮಾರಾಟದ ಎರಡನೇ ಹಂತಕ್ಕೆ ಚಾಲನೆ ನೀಡಲಾಗಿದೆ.


ಕೇಂದ್ರ ಗ್ರಾಹಕ ವ್ಯವಹಾರಗಳು, ಆಹಾರ ಮತ್ತು ಸಾರ್ವಜನಿಕ ವಿತರಣೆ ಮತ್ತು ಹೊಸ ಮತ್ತು ನವೀಕರಿಸಬಹುದಾದ ಇಂಧನ ಸಚಿವ ಪ್ರಹ್ಲಾದ್ ಜೋಶಿ ಅವರು 'ಭಾರತ್ ಅಕ್ಕಿ' ಚಿಲ್ಲರೆ ಮಾರಾಟದ NCCF, NAFED ಮತ್ತು ಕೇಂದ್ರೀಯ ಭಂಡಾರ್‌ನ ಮೊಬೈಲ್ ವಾಹನಗಳಿಗೆ ಮಂಗಳವಾರ (ನವೆಂಬರ್ 5) ಹಸಿರು ನಿಶಾನೆ ತೋರಿಸಿದರು. ದೇಶದ ಜನರಿಗೆ ಭಾರತ್ ಅಟ್ಟಾ ಪ್ರತಿ ಕೆಜಿಗೆ 30 ರೂ. ಹಾಗೂ ಭಾರತ್ ರೈಸ್ ಪ್ರತಿ ಕೆ.ಜಿ.ಗೆ 34 ರೂಪಾಯಿಗೆ ಇಷ್ಟು ಕಡಿಮೆ ಬೆಲೆಗೆ ಸಿಗುತ್ತದೆ. ಈ ವೇಳೆ ಸುದ್ದಿಗಾರರ ಜೊತೆಗೆ ಮಾತನಾಡಿದ ಕೇಂದ್ರ ಸಚಿವ ಪ್ರಹ್ಲಾದ್ ಜೋಶಿ, ಸಬ್ಸಿಡಿ ಬೆಲೆಯಲ್ಲಿ ಗ್ರಾಹಕರಿಗೆ ಆಹಾರ ಪದಾರ್ಥಗಳ ಒದಗಿಸಲಾಗುತ್ತಿದೆ. ಭಾರತ್ ಬ್ರಾಂಡ್‌ನ ಅಡಿಯಲ್ಲಿ ಅಕ್ಕಿ, ಗೋಧಿ ಹಿಟ್ಟು ಮತ್ತು ಬೇಳೆ ಆಹಾರ ಪದಾರ್ಥಗಳ ಚಿಲ್ಲರೆ ಮಾರಾಟ ಮಾಡಲಾಗುತ್ತದೆ.

ಈ ಉಪಕ್ರಮವು ಪದಾರ್ಥಗಳ ಮೇಲೆ ಸ್ಥಿರ ಬೆಲೆ ಕಾಪಾಡಲು ಸಹಾಯವಾಗಿದೆ ಎಂದು ಅವರು ತಿಳಿಸಿದರು. ಚಿಲ್ಲರೆ ಮಾರಾಟದ ಹಂತ – II ರಲ್ಲಿ ಮೊದಲ ಹಂತದಲ್ಲಿ 3.69 LMT (ಲಕ್ಷ ಮಿಲಿಯನ್ ಟನ್) ಗೋಧಿ ಹಾಗೂ 2.91 LMT ಅಕ್ಕಿಯನ್ನು ಚಿಲ್ಲರೆ ಮಾರಾಟಕ್ಕೆ ಒದಗಿಸಲಾಗಿದೆ. ಈ ವಾಹನಗಳು ಗ್ರಾಹಕರಿಗೆ ಕಡಿಮೆ ಬೆಲೆಯಲ್ಲಿ ಆಹಾರ ಪದಾರ್ಥ ತಲುಪಿಸಲಿವೆ.

ಈ ಮೊದಲಿದ್ದ ಚಿಲ್ಲರೆ ಮಾರಾಟದ ಹಂತ – I ರಂದು ಅಂದಾಜು 15.20 LMT ಭಾರತ್ ಗೋಧಿ ಹಿಟ್ಟು ಮತ್ತು 14.58 LMT ಭಾರತ್ ಅಕ್ಕಿಯನ್ನು ಸಬ್ಸಿಡಿ ದರಲ್ಲಿ ನೀಡಲಾಗಿತ್ತು ಎಂದು ಅವರು ವಿವರಿಸಿದರು.

ನೆರೆಯ ಪಂಜಾಬ್ ರಾಜ್ಯದಲ್ಲಿ ಭತ್ತದ ಸಂಗ್ರಹಣೆ ಮಾಡಲಾಗಿದೆ. ಸದ್ಯಕ್ಕೆ ಪಂಜಾಬ್‌ನಲ್ಲಿ 184 ಐಒಖಿ ಭತ್ತ ಸಂಗ್ರಹಣೆಯ ಗುರಿ ಹೊಂದಿದ್ದೇವೆ. ರೈತರಿಂದ ಮಂಡಿಗಳಿಗೆ ತರುವ ಪ್ರತಿಯೊಂದು ಧಾನ್ಯವನ್ನು ಸಂಗ್ರಹಿಸಲು ಕೇಂದ್ರ ಸರ್ಕಾರ ಅಧಿಕಾರಿಗಳಿಗೆ ಸೂಚನೆ ನೀಡಿದೆ. ಇದೇ ನವೆಂಬರ್ 4ನೇ ರವರೆಗೆ ಪಂಜಾಬ್ ಮಾರುಕಟ್ಟೆ ಅಂಗಡಿಗಳಿಗೆ ಒಟ್ಟು 104.63 LMT ಭತ್ತ ಬಂದಿದೆ ಎಂದು ಅವರು ಲೆಕ್ಕ ಕೊಟ್ಟಿದ್ದಾರೆ.

**ರೈತರಿಗೆ ಆರ್ಥಿಕವಾಗಿ ಸಹಾಯ**




**ಅಕ್ಕಿ ಮತ್ತು ಹಿಟ್ಟು 5 ಕೆಜಿ ಮತ್ತು 10 ಕೆಜಿ ಚೀಲಗಳಲ್ಲಿ ಲಭ್ಯ**

ಗ್ರಾಹಕರು ಭಾರತ್ ಅಟ್ಟಾ ಮತ್ತು ಭಾರತ್ ರೈಸ್ ಅನ್ನು ನೀವು ಕೇಂದ್ರೀಯ ಭಂಡಾರ್, NAFED ಮತ್ತು NCCF ಮತ್ತು ಇ-ಕಾಮರ್ಸ್, ದೊಡ್ಡ ದೊಡ್ಡ ರಿಟೇಲರ್ ಅಂಗಡಿಗಳಲ್ಲಿ, ಹೊತ್ತು ಬರುವ ಮೊಬೈಲ್ ವಾಹನಗಳಲ್ಲಿ ಖರೀದಿಸಬಹುದಾಗಿದೆ. ಈ ಹಂತ IIರಲ್ಲಿ 'ಭಾರತ್' ಬ್ರಾಂಡ್‌ಗಳ ಅಕ್ಕಿ ಮತ್ತು ಹಿಟ್ಟು ನಿಮಗೆ 5 ಕೆಜಿ ಮತ್ತು 10 ಕೆಜಿ ಚೀಲಗಳಲ್ಲಿ ಲಭ್ಯವಾಗುವಂತೆ ಮಾಡಲಾಗಿದೆ. ಇದರಿಂದ ಮಧ್ಯಮವರ್ಗದವರಿಗೂ ಸಣ್ಣ ಪ್ರಮಾಣದಲ್ಲಿ ಖರೀದಿಸಲು ಅನುಕೂಲವಾಗುತ್ತದೆ. ಭಾರತ ಸರ್ಕಾರ ನಿರ್ಧರಿಸಿದಂತೆ ಗ್ರೇಡ್ 'ಎ' ಭತ್ತವನ್ನು ಎಂಎಸ್‌ಪಿ ರೂ. 2320ಗೆ ಖರೀದಿಸಲಾಗುತ್ತಿದೆ. ಪ್ರಸಕ್ತ 2024-25 ರಲ್ಲಿ ಈವರೆಗೆ ಕೇಂದ್ರ ಸರ್ಕಾರವು ಒಟ್ಟು ಭತ್ತವು 20557 ಕೋಟಿ ಮೌಲ್ಯದ ಭತ್ತ ಸಂಗ್ರಹಿಸಿದೆ. ಅದರಿಂದ 5.38 ಲಕ್ಷ ರೈತರಿಗೆ ಆರ್ಥಿಕವಾಗಿ ಸಹಾಯವಾಗಿದೆ ಎಂದು ಪ್ರಹ್ಲಾದ್ ಜೋಶಿಯವರು ತಿಳಿಸಿದರು.

**ಈ ದಿನದ ದರ** ಪೆಟ್ರೋಲ್: 103.44 ₹/L ಡೀಸೆಲ್ : 89.97 ₹/L ಬಂಗಾರ: ₹8,024/Gram24ct ₹7,355/Gram22ct ಬೆಳ್ಳಿ: ₹96.00/Gram



## ಸಿದ್ದಸೂಕ್ತಿ

**ಡಾ ಆರೂಢಭಾರತೀ ಸ್ವಾಮೀಜಿ**
**ಶ್ರೀ ಸಿದ್ಧಾರೂಢ ಮಿಷನ್ ಆಶ್ರಮ ರಾಮೋಹಳ್ಳಿ**

### ವಿದುಷಾ ಬ್ರಾಹ್ಮಣೇನೇದಂ ಅಧ್ಯೇತವ್ಯಂ ಪ್ರಯತ್ನತಃ

ಶಿಷ್ಯೇಭ್ಯಶ್ಚ ಪ್ರವಕ್ತವ್ಯಂ ಸಮ್ಯಗ್ನಾನ್ಯೇನ ಕೇನಚಿತ್. ಮನುಸ್ಮೃತಿಯ ಪ್ರಥಮಾಧ್ಯಾಯದ ಶ್ಲೋಕ. ಬ್ರಾಹ್ಮಣಾದಿಗಳ ಕರ್ತವ್ಯ ತಿಳುವಳಿಕೆಗಾಗಿ ಬ್ರಹ್ಮನ ಪುತ್ರನೂ ಮಹಾಮೇಧಾವಿಯೂ ಆದ ಸ್ವಾಯಂಭುವ ಮುನಿಯು ಈ ಧರ್ಮಶಾಸ್ತ್ರವನ್ನು ರಚಿಸಿದನು. ಇದನ್ನು ವಿದ್ವಾಂಸನಾದ ಬ್ರಾಹ್ಮಣನು ಬಾಕಿ ಎಲ್ಲ ಕೆಲಸಗಳನ್ನು ಬದಿಗಿರಿಸಿ ವಿಶೇಷ ಪ್ರಯತ್ನಪೂರ್ವಕವಾಗಿ ಅಧ್ಯಯನ ಮಾಡಲೇಬೇಕು. ಬ್ರಾಹ್ಮಣೇನ ನಿಷ್ಕಾರಣೋ ಧರ್ಮಃ ಷಡಙ್ಗೋ ವೇದೋಧ್ಯೇಯೋ ಜ್ಞೇಯಃ = ಬ್ರಾಹ್ಮಣನಾದವನು ಏಕೆ ಎನ್ನದೇ ಧರ್ಮಶಾಸ್ತ್ರವನ್ನು ಶಿಕ್ಷಾ ವ್ಯಾಕರಣ ಛಂದಸ್ಸು ನಿರುಕ್ತ ಜ್ಯೋತಿಷ್ಯ ಕಲ್ಪ ಎಂಬ ಆರು ವೇದಾಂಗಗಳ ಸಮೇತ ವೇದವನ್ನು ಅಧ್ಯಯನ ಮಾಡಬೇಕು, ವೇದಾರ್ಥವನ್ನೂ ತಿಳಿಯಬೇಕು ಎನ್ನುತ್ತದೆ ಆಗಮ. ಬೇರೆಯವರು ಓದಬಹುದು ಓದದಿರಬಹುದು, ಆದರೆ ಬ್ರಾಹ್ಮಣನು ಬಿಡುವಂತಿಲ್ಲ ಎಂದರ್ಥ . ಬ್ರಾಹ್ಮಣನಾದವನು ಸ್ವಯಂ ತಿಳಿದು ಶಿಷ್ಯರಿಗೆ ಸರಿಯಾಗಿ ಬೋಧಿಸಬೇಕು. ಬ್ರಾಹ್ಮಣನಲ್ಲದವನು ಬೋಧಿಸುವಂತಿಲ್ಲ. ತಿಳಿದವನು ಯಾವಾತನಾದರೂ ಬೋಧಿಸುವುದನ್ನು ಇಂದು ಎಲ್ಲೆಡೆ ಕಾಣುತ್ತೇವೆ. ಆದರಿಲ್ಲಿ ಬ್ರಾಹ್ಮಣನು ಮಾತ್ರ ಬೋಧಿಸಬೇಕು ಎಂದು ಹೇಳಿದ್ದು ಒಪ್ಪಲಾಗದು. ಇಲ್ಲಿಯೂ ಸಹ ಹುಟ್ಟಿನ ಜಾತಿಯಾಧಾರಿತ ಬ್ರಾಹ್ಮಣ ಶಬ್ದವೇ ಹೊರತು ಬ್ರಹ್ಮ ಪರಮಾತ್ಮನನ್ನು ತಿಳಿದವನು ಎಂಬರ್ಥದ್ದಲ್ಲ.

# ಕೇಸ್ ವಾಪಸ್‌ಗೆ ಕೋಟಿ ಕೋಟಿ ಆಫರ್!.. ಬೆನ್ಜ್ ಕಾರು ಮಾಲೀಕ ಯಾರು?

## ಸಂಧ್ಯಾ ಅವರು ತಮ್ಮ ಕೆಲಸ ಮುಗಿಸಿ ಮನೆಗೆ ಹೊರಟಿದ್ದ ವೇಳೆ ಕೆಂಗೇರಿ ಬಸ್ ನಿಲ್ದಾಣ ಬಳಿ ಈ ಅಪಘಾತ ನಡೆದಿದೆ

• ಉದಯವಾಹಿನಿ, ಬೆಂಗಳೂರು

ಬೆಂಗಳೂರಿನಲ್ಲಿ ಡ್ರಿಂಕ್ ಅಂಡ್ ಡ್ರೈವ್‌ಗೆ ಮತ್ತೊಂದು ಬಲಿಯಾಗಿದ್ದು, 30 ವರ್ಷದ ಸಂಧ್ಯಾ ಎಂಬ ಮಹಿಳೆ ದುರಂತ ಸಾವಿಗೀಡಾಗಿದ್ದಾರೆ. ಸಣ್ಣದೊಂದು ತಪ್ಪು ಮಾಡದ ಟೆಕ್ಕಿ ಸಂಧ್ಯಾ ಅವರ ಮೇಲೆ ಕುಡಿದು ಬೆನ್ಜ್ ಕಾರು ಓಡಿಸುತ್ತಿದ್ದವರು ಅಟ್ಟಹಾಸ ಮೆರೆದಿದ್ದು, ಕಾರು ಗುದ್ದಿದ ರಭಸಕ್ಕೆ ಸಂಧ್ಯಾ ಸ್ಥಳದಲ್ಲೇ ಸಾವನ್ನಪ್ಪಿದ್ದಾರೆ.

ಮೂಲಗಳ ಪ್ರಕಾರ ಭಾನುವಾರ ಸಂಜೆ 6.45ಕ್ಕೆ ಆರೋಪಿ ಧನುಷ್ ಹಾಗೂ ಗೆಳೆಯರು ಭರ್ಜರಿ ಪಾರ್ಟಿ ಮುಗಿಸಿ ರೋಡ್‌ನಲ್ಲಿ ವೇಗದಲ್ಲಿ ಡ್ರೈವಿಂಗ್ ಮಾಡುತ್ತಿದ್ದರು. ಕೆಂಗೇರಿ ಬಸ್ ನಿಲ್ದಾಣದ ಬಳಿ ಟೆಕ್ಕಿ ಸಂಧ್ಯಾ ಅವರು ರಸ್ತೆ ಕ್ರಾಸ್ ಮಾಡುತ್ತಿದ್ದರು. ಸ್ಪೀಡಾಗಿ ಬರ್ತಿದ್ದ ಕಾರು ಟೆಕ್ಕಿ ಸಂಧ್ಯಾಗೆ ಗುದ್ದಿದೆ. ಕಾರು ಗುದ್ದಿದ ರಭಸಕ್ಕೆ ಮೇಲೆ ಹಾರಿದ ಸಂಧ್ಯಾ ಅವರ ದೇಹವೇ ನುಜ್ಜುಗುಜ್ಜಾಗಿದೆ.

ಸಂಧ್ಯಾ ಅವರು ತಮ್ಮ ಕೆಲಸ ಮುಗಿಸಿ ಮನೆಗೆ ಹೊರಟಿದ್ದ ವೇಳೆ ಕೆಂಗೇರಿ ಬಸ್ ನಿಲ್ದಾಣ ಬಳಿ ಈ ಅಪಘಾತ ನಡೆದಿದೆ. ಅಪಘಾತದ ಬಳಿಕ ಸಂಧ್ಯಾ ಅವರಿಗೆ ತೀವ್ರ ರಕ್ತಸ್ರಾವವಾಗಿದೆ.



ಉದಯವಾಹಿನಿ ಚಿತ್ರ

**ಧನುಷ್ ವಿರುದ್ಧ ಪೊಲೀಸರು ಕೇಸ್ ದಾಖಲೆ**

ಕೂಡಲೇ ಸಂಧ್ಯಾ, ಸ್ನೇಹಿತರು, ಸ್ಥಳೀಯರು ಬಿಜಿಎಸ್ ಆಸ್ಪತ್ರೆಗೆ ಕರೆದೊಯ್ದರೂ ಚಿಕಿತ್ಸೆ ಫಲಕಾರಿಯಾಗದೆ ಸಾವನ್ನಪ್ಪಿದ್ದಾರೆ.

ಸಂಧ್ಯಾ ಒಬ್ಬರಿಗೇ ಅಲ್ಲ ಮುಂದೆ ಹೋಗುತ್ತಿದ್ದ ದ್ವಿಚಕ್ರ ವಾಹನಕ್ಕೂ ಬೆನ್ಜ್ ಕಾರು ಡಿಕ್ಕಿ ಹೊಡೆದಿದೆ. ದ್ವಿಚಕ್ರ ವಾಹನದಲ್ಲಿ ಹೋಗ್ತಿದ್ದ ಸೈಯ್ಯದ್ ಎಂಬ ವ್ಯಕ್ತಿಗೂ ಗಾಯಗಳಾಗಿದ್ದು, ಕುಡಿದ ಮತ್ತಲ್ಲಿ ಅತಿವೇಗ ವಾಗಿ ಚಾಲನೆ ಮಾಡಿದ್ದೇ ಈ ದುರಂತಕ್ಕೆ ಕಾರಣ ಎಂದು ಹೇಳಲಾಗಿದೆ. ಅಪಘಾತದ ನಂತರ ಆರೋಪಿ ಧನುಷ್ ಹಾಗೂ ಸ್ನೇಹಿತರು ಸ್ಥಳದಿಂದ ಓಡಿಹೋಗಲು ಯತ್ನಿಸಿದ್ದಾರೆ. ಪರಾರಿಯಾಗುತ್ತಿದ್ದ ಆರೋಪಿಗಳನ್ನು ಸ್ಥಳೀಯರು ಹಿಡಿದು ಪೊಲೀಸರಿಗೆ ಒಪ್ಪಿಸಿದ್ದಾರೆ. BNS 105 ಅಡಿಯಲ್ಲಿ ಆರೋಪಿ ಧನುಷ್ ವಿರುದ್ಧ ಪೊಲೀಸರು ಕೇಸ್ ದಾಖಲು ಮಾಡಿದ್ದಾರೆ. ಅಪಘಾತಕ್ಕೆ ಕಾರಣವಾದ ಬೆನ್ಜ್ ಕಾರನ್ನು ವಶಕ್ಕೆ ಪಡೆದಿದ್ದಾರೆ. ಸಂಧ್ಯಾ ಅವರ ದುರಂತ ಸಾವಿಗೆ ಸಂಬಂಧಿಸಿದಂತೆ ಅವರ ಸಹೋದರ ಪೊಲೀಸ್ ದೂರು ದಾಖಲಿಸಿದ್ದಾರೆ. ಇದೀಗ ಕೇಸ್ ವಾಪಸ್ ಪಡೆಯುವಂತೆ ಆರೋಪಿ ಧನುಷ್ ಸಂಬಂಧಿಕರು ಕೋಟಿ ಕೋಟಿ ಆಫರ್ ನೀಡುತ್ತಿದ್ದಾರೆ ಎಂದು ತಿಳಿದುಬಂದಿದೆ. ಅಂದಹಾಗೆ ಕಾರು ಚಲಾಯಿಸುತ್ತಿದ್ದ ಆರೋಪಿ ಧನುಷ್ ಕೋಟ್ಯಾಧಿಪತಿ ಪರಮಶಿವಯ್ಯ ಎಂಬುವವರ ಒಬ್ಬನೇ ಪುತ್ರ.

ಸಂಧ್ಯಾಗೆ ಗುದ್ದಿರುವ ಬೆಂಜ್ ಕಾರು ಐಗಿ ಟ್ರಾವೆಲ್ಸ್‌ಗೆ ಸೇರಿದ್ದು ಎನ್ನಲಾಗಿದೆ. ಟ್ರಾವೆಲ್ಸ್ ಮಾಲೀಕರಾಗಿರುವ ಪರಮಶಿವಯ್ಯ ಒಬ್ಬನೇ ಮಗನಿಗೆ ಐಷಾರಾಮಿ ಬೆಂಜ್ ಕಾರನ್ನು ಕೊಡಿಸಿದ್ದರು.

> **ಕಾರಿನಲ್ಲಿ ತೆರಳುತ್ತಿದ್ದ ವೇಳೆ ಆರೋಪಿ ಧನುಷ್ ಹಾಗೂ ಸ್ನೇಹಿತರು ಕುಡಿದ ಅಮಲಿನಲ್ಲಿದ್ದರು. ಆರೋಪಿ ಚಾಲಕನನ್ನು ಪೊಲೀಸರು ಮದ್ಯಪಾನ ಪರೀಕ್ಷೆಗೊಳಪಡಿಸಿದ್ದು ಈ ವೇಳೆ ಆರೋಪಿ ಚಾಲಕನ ಆಲ್ಕೋಮೀಟರ್ ಪರೀಕ್ಷೆಯು 177mg / 100ml ರಕ್ತದ ಆಲ್ಕೋಹಾಲ್ ಅಂಶವನ್ನು ಹೊಂದಿತ್ತು ಎಂದು ತೋರಿಸಿದೆ. ಇದು ಕಾನೂನುಬದ್ಧವಾಗಿ ಅನುಮತಿಸುವ 30 mg / 100ml ಗಿಂತ ಹೆಚ್ಚಿನದಾಗಿದೆ ಎಂದು ತಿಳಿದುಬಂದಿದೆ.**

> **ಇದೀಗ ಕಾರು ಮಾಲೀಕರ ಕಡೆಯವರು ಬಂದು ಎಫ್‌ಐಆರ್ ಮಾಡಬೇಡಿ. ದುಡ್ಡು ಕೊಡ್ತೀವಿ ಅಂತಾ ಹೇಳಿದ್ದರು. ನಮಗೆ ದುಡ್ಡು ಬೇಡ, ಸಂಧ್ಯಾ ಬೇಕು. ಈ ಘಟನೆ ಬಗ್ಗೆ ಎಲ್ಲಾ ತಿಳಿದುಕೊಂಡು ಪೊಲೀಸ್ ಠಾಣೆಗೆ ಹೋಗಿ ಎಫ್ ಐಆರ್ ಹಾಕಲು ಮುಂದಾಗಿದ್ದೆವು. ಆದರೆ ಅಲ್ಲಿ ಎಫ್‌ಐಆರ್ ಹಾಕೋದಕ್ಕೆ ಹಿಂದೇಟು ಹಾಕಿದ್ದು, ಬಳಿಕ ಎಫ್‌ಐಆರ್ ದಾಖಲು ಮಾಡಿಕೊಂಡ್ರು ಅಂತ ಸಂಧ್ಯಾ ಸಹೋದರ ಹೇಳಿದ್ದಾರೆ. ಅಲ್ಲದೆ ಆತ ಶೋಕಿಯಲ್ಲಿ ಕುಡಿದು ಕಾರು ಓಡಿಸಿ ನಮ್ಮ ಅಕ್ಕನ ಜೀವ ತೆಗೆದಿದ್ದಾನೆ. ಅವರಿಗೆ ಶಿಕ್ಷೆ ಆಗಲೇಬೇಕು ಅಂತ ಕಣ್ಣೀರು ಹಾಕಿದ್ದಾರೆ.**

## ದಾಸರ ಪದಗಳ ಗಾಯನ

• ಉದಯವಾಹಿನಿ, ಬೆಂಗಳೂರು



ಪವಮಾನಪುರದ ನಂಜನಗೂಡು ಶ್ರೀ ರಾಘವೇಂದ್ರ ಸ್ವಾಮಿಗಳ ಮಠದಲ್ಲಿ ಪರಮಪೂಜ್ಯ ಶ್ರೀ ಶ್ರೀ ಸುಬುಧೇಂದ್ರತೀರ್ಥ ಶ್ರೀಪಾದಂಗಳವರ ಆದೇಶ ದಂತೆ ಶ್ರೀಮಠದ ವಿಚಾರಣಾ ಕರ್ತರಾದ ಶ್ರೀ ಗಿರಿರಾಜಾಚಾರ್ಯರ ನೇತೃತ್ವದಲ್ಲಿ ನವೆಂಬರ್ 7, ಗುರುವಾರ ಸಂಜೆ 7-00ಕ್ಕೆ ಕು|| ನಿತ್ಯಶ್ರೀ ಶ್ರೀಧರ್ ಹಾಗೂ ಕು|| ಅನನ್ಯ ಚಿಂಚೋಳಿ ಮತ್ತು ಸಂಗಡಿಗರಿಂದ ದಾಸರ ಪದಗಳ ಗಾಯನ ಕಾರ್ಯಕ್ರಮ ಏರ್ಪಡಿಸಲಾಗಿದೆ ಎಂದು ಶ್ರೀ ಗೊಗ್ಗಿ ಕೃಷ್ಣಾಚಾರ್ ತಿಳಿಸಿದ್ದಾರೆ. ಸ್ಥಳ : ನಂಜನಗೂಡು ಶ್ರೀ ರಾಘವೇಂದ್ರ ಸ್ವಾಮಿಗಳ ಮಠ, ಒಂದನೇ ಮುಖ್ಯರಸ್ತೆ, ಪವಮಾನಪುರ, ಬೆಂಗಳೂರು-560062

## ಮೆಟ್ರೋ ಪ್ರಯಾಣಿಕರಿಗೆ ಬಿಗ್ ಶಾಕ್ ಟಿಕೆಟ್ ದರ ಶೇ.20 ರಷ್ಟು ಹೆಚ್ಚಳ ಸಾಧ್ಯತೆ!

• ಉದಯವಾಹಿನಿ, ಬೆಂಗಳೂರು

ಇತ್ತೀಚಿಗೆ ಬೆಂಗಳೂರಿನ ನಮ್ಮ ಮೆಟ್ರೋ ಪ್ರಯಾಣಿಕರಿಗೆ ಬಿಎಂಆರ್‌ಸಿಎಲ್ ಪ್ರಯಾಣದ ದರ ಹೆಚ್ಚಿಸುವ ಕುರಿತಂತೆ ಸಾರ್ವಜನಿಕರಿಂದ ಸಲಹೆ ಪಡೆಯಲು ಸಮಿತಿ ರಚಿಸಿತ್ತು. ಇದೀಗ ಬಿಎಂಆರ್‌ಸಿಎಲ್ ಮುಂದಿನ ವರ್ಷ ಜನವರಿ ತಿಂಗಳಿನಿಂದ ಮೆಟ್ರೋ ಪ್ರಯಾಣದ ಟಿಕೆಟ್ ದರದಲ್ಲಿ ಶೇ.20ರಷ್ಟು ಹೆಚ್ಚಳ ಮಾಡುವ ಸಾಧ್ಯತೆ ಇದೆ ಎನ್ನಲಾಗಿದೆ. ಹೌದು 'ದಿ ಫೇರ್ ಫಿಕ್ಸೇಷನ್ ಕಮಿಟಿ' (ಎಫ್‌ಎಫ್‌ಸಿ) ಎಂಬ ಸಮಿತಿ ರಚಿಸಲಾಗಿತ್ತು. ಇದೊಂದು ಸ್ವತಂತ್ರ ಕಮಿಟಿಯಾಗಿದೆ. ಪ್ರಯಾಣಿಕರ ಸಲಹೆ ಪಡೆದು ಟಿಕೆಟ್ ದರ ಏರಿಕೆಗೆ ಕಮಿಟಿ ಮುಂದಾಗಿದೆ. ಅಕ್ಟೋಬರ್ 21ರೊಳಗೆ ಪ್ರಯಾಣಿಕರು ತಮ್ಮ ಅಭಿಪ್ರಾಯ ತಿಳಿಸಲು ಕಾಲಾವಕಾಶ ನೀಡಲಾಗಿತ್ತು. ಬೆಳಕಿನ ದೀಪಾವಳಿ ಹಬ್ಬ ಮುಗಿಯುತ್ತಿದ್ದಂತೆ ಮೆಟ್ರೋ ಪ್ರಯಾಣಿಕರಿಗೆ ದರ ಏರಿಕೆಯ ಬಿಸಿ ತಟ್ಟಲಿದೆ. ದರ ಪರಿಷ್ಕರಣೆ ಸಂಬಂಧ ಈಗಾಗಲೇ ಸಾರ್ವಜನಿಕರಿಂದ ಸಲಹೆ ಸ್ವೀಕಾರ ಮಾಡಲಾಗಿದೆ.ಈಗಾಗಲೇ ಹಲವು ಬಾರಿ ಮೆಟ್ರೋ ದರ ಏರಿಕೆ ಬಗ್ಗೆ ಬಿಎಂಆರ್ಸಿಎಲ್ ಪ್ರಸ್ತಾಪ ಮಾಡಿತ್ತು. ಆದರೆ ಕಳೆದ ಹಲವು ವರ್ಷಗಳಿಂದ ದರ ಏರಿಕೆಯನ್ನು ಮಾಡಿರಲಿಲ್ಲ. ಸದ್ಯ 20% ಟಿಕೆಟ್ ದರ ಏರಿಕೆ ಸಾಧ್ಯತೆ ಇದೆ.

## ನವೆಂಬರ್ 20ರಂದು ರಾಜ್ಯಾದ್ಯಂತ ಮದ್ಯ ಮಾರಾಟ ಬಂದ್

• ಉದಯವಾಹಿನಿ, ಬೆಂಗಳೂರು

ರಾಜ್ಯದ ಅಬಕಾರಿ ಇಲಾಖೆಯ ಭ್ರಷ್ಟಾಚಾರದ ವಿರುದ್ಧ ಸನ್ನದ್ದು ಮಾಲೀಕರು ಸಿಡಿದೆದ್ದಿದ್ದಾರೆ. ತಮ್ಮ ವಿವಿಧ ಬೇಡಿಕೆ ಈಡೇರಿಸುವಂತೆ ಆಗ್ರಹಿಸಿ ನವೆಂಬರ್ .20ರಂದು ರಾಜ್ಯಾಧ್ಯಂತ ಮದ್ಯ ಮಾರಾಟ ಬಂದ್ ಮಾಡಿ ಪ್ರತಿಭಟನೆ ನಡೆಸಲು ನಿರ್ಧರಿಸಲಾಗಿದೆ. ಅಬಕಾರಿ ಇಲಾಖೆಗೆ ಮಂತ್ರಿ ಬೇಕಾಗಿಲ್ಲ ಎಂಬುದಾಗಿ ಒತ್ತಾಯಿಸಿ ನವೆಂಬರ್.20ರಂದು ರಾಜ್ಯಾಧ್ಯಂತ ಮದ್ಯ ಮಾರಾಟ ಬಂದ್ ಮಾಡಿ ಪ್ರತಿಭಟನೆಯನ್ನು ಮದ್ಯ ಮಾರಾಟಗಾರರು ನಡೆಸಲಿದ್ದಾರೆ. ಅಲ್ಲದೇ ಹಣಕಾಸು ಸಚಿವರಿಗೆ ಅಬಕಾರಿ ಇಲಾಖೆಯ ಹೊಣೆ ನೀಡುವಂತೆಯೂ ಒತ್ತಾಯಿಸಲಾಗುತ್ತಿದೆ. ವರ್ಗಾವಣೆ, ಪ್ರಮೋಷನ್‌ಗೆ ಕೋಟಿ ಕೋಟಿ ಲಂಚ ನೀಡಬೇಕು. ಹೀಗಾಗಿ ಸನ್ನದುದಾರರಿಂದ ಮನಸೋ ಇಚ್ಛೆ ಲಂಚವನ್ನು ಸ್ವೀಕರಿಸುತ್ತಿದ್ದಾರೆ.

## ಮುಡಾ ಹಗರಣ : ಆಕ್ಷೇಪಣೆ ಸಲ್ಲಿಸಲು ಸಿಎಂ ಪತ್ನಿ ಪಾರ್ವತಿಗೆ ಹೈಕೋರ್ಟ್ ನೋಟಿಸ್

• ಉದಯವಾಹಿನಿ, ಬೆಂಗಳೂರು

ಮುಡಾ ಹಗರಣಕ್ಕೆ ಸಂಬಂಧಪಟ್ಟಂತೆ ಇಂದು ಸಿಬಿಐ ತನಿಖೆ ಕೋರಿ ಸಲ್ಲಿಸಿದ್ದ ಅರ್ಜಿ ವಿಚಾರಣೆ ನಡೆಸಿದ ನ್ಯಾ.ಎಂ ನಾಗಪ್ರಸನ್ನ ಅವರಿದ್ದ ಏಕ ಸದಸ್ಯ ಪೀಠವು, ವಿಚಾರಣೆಯನ್ನು ನವೆಂಬರ್ 26ಕ್ಕೆ ಮುಂದೂಡಿ ಆದೇಶಿಸಿದರು. ಈ ವೇಳೆ ಸಿಎಂ ಸಿದ್ದರಾಮಯ್ಯ ಹಾಗೂ ಇತರೆ ಆರೋಪಗಳಿಗೆ ಆಕ್ಷೇಪಣೆಗಳು ಸಲ್ಲಿಸುದಿದ್ದರೆ ಸಲ್ಲಿಸಿ ಎಂದು ಹೈಕೋರ್ಟ್ ನೋಟಿಸ್ ನೀಡಿದೆ. ವಿಚಾರಣೆ ಬಳಿಕ ಸಿಎಂ ಸಿದ್ದರಾಮಯ್ಯ ಪತ್ನಿ ಪಾರ್ವತಿ,ಮಲ್ಲಿಕಾರ್ಜುನ ಸ್ವಾಮಿ, ದೇವರಾಜುಗೂ ಕೂಡ ಆಕ್ಷೇಪಣೆ ಸಲ್ಲಿಸಲು ಹೈಕೋರ್ಟ್ ನೋಟಿಸ್ ನೀಡಿದೆ. ಆಕ್ಷೇಪಣೆ ಸಲ್ಲಿಸುವದಿದ್ದರೆ ಸಲ್ಲಿಸಿ 10 ದಿನಗಳ ನಂತರ ಅರ್ಜಿಯ ವಿಚಾರಣೆ ಸೂಚನೆ ನೀಡಿದೆ. ಮುಡಾ ಕೇಸ್ನಲ್ಲಿ ಸಿಬಿಐ ತನಿಖೆಗೆ ಕೋರಿದ ಅರ್ಜಿಯ ವಿಚಾರಣೆ ಹೈ ಕೋರ್ಟ್‌ನಲ್ಲಿ ನಡೆಯಿತು. ನವೆಂಬರ್ 26ಕ್ಕೆ ಹೈಕೋರ್ಟ್ ಅರ್ಜಿ ವಿಚಾರಣೆ ಮುಂದೂಡಿತು. ರಾಜ್ಯ ಅಭಿಯೋಜಕ ಬಿ ಎನ್ ಜಗದೀಶ್ ಅವರು 2 ವಾರ ಕಾಲಾವಕಾಶ ಕೋರಿದ್ದರಿಂದ ವಿಚಾರಣೆಯನ್ನು ನವೆಂಬರ್ 26 ಕ್ಕೆ ಹೈಕೋರ್ಟ್ ಮುಂದೂಡಿದೆ. ಅಲ್ಲಿಯವರೆಗೆ ನಡೆಸಿದ ತನಿಖೆಯ ವಿವರ ಸಲ್ಲಿಸಲು ಲೋಕಾಯುಕ್ತ ಪೊಲೀಸರಿಗೆ ಹೈಕೋರ್ಟ್ ಸೂಚಿಸಿದೆ. ನವೆಂಬರ್ 25 ರವರೆಗೆ ನಡೆದಿರುವ ತನಿಖೆಯ ವಿವರ ಒದಗಿಸಲು ಸೂಚನೆ ನೀಡಿದೆ.

## ಮಾಜಿ ಅಧ್ಯಕ್ಷ ಬರಾಕ್ ಒಬಾಮಾ ಆಹ್ವಾನಕ್ಕೆ ಸರಕಾರ ತೀರ್ಮಾನ

• ಉದಯವಾಹಿನಿ, ಬೆಂಗಳೂರು

ಬೆಳಗಾವಿಯಲ್ಲಿ ನಡೆಯುವ ವಿಧಾನ ಮಂಡಲದ ಜಂಟಿ ಅಧಿವೇಶನ ಹಾಗೂ ಕಾಂಗ್ರೆಸ್ ಅಧಿವೇಶನದ ಶತಮಾನೋತ್ಸವಕ್ಕೆ ಅಮೆರಿಕದ ಮಾಜಿ ಅಧ್ಯಕ್ಷ ಬರಾಕ್ ಒಬಾಮಾ ಅವರನ್ನು ಆಹ್ವಾನಿಸಲು ರಾಜ್ಯ ಸರಕಾರ ತೀರ್ಮಾನಿಸಿದೆ.ಡಿ. 9ರಿಂದ ಬೆಳಗಾವಿ ಜಂಟಿ ಅಧಿವೇಶನ ಪ್ರಾರಂಭವಾಗುವ ಸಾಧ್ಯತೆ ಇದೆ. ಜತೆಗೆ ಶತಮಾನೋತ್ಸವ ಕಾರ್ಯಕ್ರಮದ ಉದ್ಘಾಟನೆಯನ್ನು ಒಬಾಮಾ ಅವರೇ ನೆರವೇರಿಸುವ ಸಾಧ್ಯತೆ ಇದೆ. ಭಾಗವಹಿಸುವ ಕುರಿತಂತೆ ಒಬಾಮಾ ಅವರಿಂದ ಯಾವುದೇ ಪ್ರತಿಕ್ರಿಯೆ ಬಂದಿಲ್ಲ ಎಂದು ಉನ್ನತ ಮೂಲಗಳು ತಿಳಿಸಿವೆ.

## ಸಿಎಂ ರಾಜೀನಾಮೆಗೆ ಖರ್ಗೆ, ಡಿಸಿಎಂ ಮೂಹೂರ್ತ ಫಿಕ್ಸ್

• ಉದಯವಾಹಿನಿ, ಬೆಂಗಳೂರು

ಮುಡಾ ಹಗರಣಕ್ಕೆ ಸಂಬಂಧಿಸಿದಂತೆ ನಾಳೆ ಮೈಸೂರು ಲೋಕಾಯುಕ್ತ ಕಚೇರಿಗೆ ಸಿಎಂ ಸಿದ್ದರಾಮಯ್ಯ ವಿಚಾರಣೆಗೆ ಹಾಜರಾಗಲಿದ್ದಾರೆ. ಈ ವಿಚಾರವಾಗಿ ಮುಖ್ಯಮಂತ್ರಿಯಾಗಿ ಅವರು ವಿಚಾರಣೆಗೆ ಹಾಜರಾಗುತ್ತಾರೋ ಅಥವಾ ಆರೋಪಿಯಾಗಿ ವಿಚಾರಣೆಗೆ ಹಾಜರಾಗುತ್ತಾರೊ ನೋಡೋಣ ಅಲ್ಲದೆ ಖರ್ಗೆ ಡಿಸಿಎಂ ಅಡಿಕೆ ಶಿವಕುಮಾರ್ ಸಿಎಂ ರಾಜ ನಮಗೆ ಮುಹೂರ್ತ ಫಿಕ್ಸ್ ಮಾಡಿದ್ದಾರೆ ಎಂದು ಸ್ಫೋಟಕ ಹೇಳಿಕೆ ನೀಡಿದರು.

ಬೆಂಗಳೂರಿನಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು ಕಾಂಗ್ರೆಸ್ ಪಕ್ಷದ ವರಿಷ್ಠರೇ ಈ ಕುರಿತು ನಿರ್ಧಾರ ಮಾಡಿದ್ದು, ಮುಹೂರ್ತ ಸಮಯ ಎಲ್ಲವನ್ನು ನಿಗದಿ ಮಾಡಿದ್ದಾರೆ.



ಉದಯವಾಹಿನಿ ಚಿತ್ರ

ಹಾಗಾಗಿ ಸಿಎಂ ಸಿದ್ದರಾಮಯ್ಯ ಅವರು ಶೀಘ್ರದಲ್ಲಿ ರಾಜೀನಾಮೆ ನೀಡುವುದು ಶತಸಿದ್ಧ. ಬೇಜವಾಬ್ದಾರಿ ಮಂತ್ರಿ ಜಮೀರ್ ಅಹ್ಮದ್ ಇಟ್ಕೊಂಡು ಮಠ ಮಾನ್ಯ ರೈತರ ಜಮೀನು ಹೊಡೆಯುವ ಯತ್ನ ನಡೆಯುತ್ತಿದೆ. ಇದಕ್ಕೆ ಸಿಎಂ ಸಿದ್ದರಾಮಯ್ಯರ ಕುಮ್ಮಕ್ಕು ಸಹ ಇದೆ ಎಂದರು. ಸಿಎಂ ಸಿದ್ದರಾಮಯ್ಯ ಕುಟುಂಬವೇ ಎಂದು ಆರೋಪಿ ಸ್ಥಾನದಲ್ಲಿ ಇದೆ.ಸಿಎಂ ಸಿದ್ದರಾಮಯ್ಯ ಯಾವಾಗಲೋ ರಾಜೀನಾಮೆ ಕೊಡಬೇಕಿತ್ತು. ಸಿದ್ದರಾಮಯ್ಯ ರಾಜೀನಾಮೆ ಕೊಡುವುದು ಸಿದ್ಧ. 5 ವರ್ಷ ಸಿಎಂ ಆಗಿರುತ್ತೇನೆ ಎಂದು ಹೇಳಲಿ ನೋಡೋಣ. ಸಿದ್ದರಾಮಯ್ಯ ರಾಜ್ಯದ ಜನತೆಗೆ ಹೇಳಲಿ ನೋಡೋಣ ಎಂದು ಸವಾಲು ಹಾಕಿದರು.

> **ಹಾಗೆ ಹೇಳಲು ಸಿದ್ದರಾಮಯ್ಯ ಅವರಿಗೆ ಸಾಧ್ಯವೇ ಇಲ್ಲ. ಮಲ್ಲಿಕಾರ್ಜುನ ಖರ್ಗೆ ಡಿಕೆ ಶಿವಕುಮಾರ್ ಎಲ್ಲರೂ ಚರ್ಚಿಸಿದ್ದಾರೆ. ಸಿಎಂ ರಾಜೀನಾಮೆ ಮುಹೂರ್ತ ಸಿದ್ಧ ಮಾಡಿದ್ದಾರೆ ಯಾವಾಗ ರಾಜೀನಾಮೆ ಅಂತ ಸಿಎಂ ಹೇಳಬೇಕು. ಸಿದ್ದರಾಮಯ್ಯ ರಾಜೀನಾಮೆ ಕೊಡುವುದು ಶತಸಿದ್ಧ ಬಿಜೆಪಿ ರಾಜ್ಯಾಧ್ಯಕ್ಷನಾಗಿ ಇದನ್ನ ನಾನು ಹೇಳುತ್ತಿದ್ದೇನೆ ಎಂದು ತಿಳಿಸಿದರು.**

## ಬಿಬಿಎಂಪಿ ವ್ಯಾಪ್ತಿಯ ಗುತ್ತಿಗೆದಾರರಿಗೆ ಗುಡ್ ನ್ಯೂಸ್

• ಉದಯವಾಹಿನಿ, ಬೆಂಗಳೂರು

ಬಿಬಿಎಂಪಿಯಲ್ಲಿ ಕಾಮಗಾರಿಯನ್ನು ನಿರ್ವಹಿಸಿರುವ ಗುತ್ತಿಗೆದಾರರಿಗೆ ಈಗಾಗಲೇ ಪಾವತಿ ಮಾಡಿರುವ ಬಿಲ್ಲುಗಳಲ್ಲಿ ತಡೆ ಹಿಡಿದಿರುವ ಶೇ.25ರಷ್ಟು ಬಾಕಿ ಮೊತ್ತವನ್ನು ಬಿಡುಗಡೆ ಮಾಡಲು ಆದೇಶಿಸಿದೆ. ಈ ಮೂಲಕ ಪಾವತಿಸಲು ಬಾಕಿಯಿರುವ ಕಾಮಗಾರಿ ಬಿಲ್ಲುಗಳನ್ನು ಶೇ.100ರಷ್ಟು ಪಾವತಿ ಮಾಡುವಂತೆ ಆದೇಶದಲ್ಲಿ ತಿಳಿಸಲಾಗಿದೆ.

ಈ ಕುರಿತಂತೆ ನಗರಾಭಿವೃದ್ಧಿ ಇಲಾಖೆಯ ಸರ್ಕಾರದ ಅಧೀನ ಕಾರ್ಯದರ್ಶಿ ಲಕ್ಷ್ಮೀ ಸಾಗರ್ ಎನ್.ಕೆ ಅವರು ನಡವಳಿಯನ್ನು ಹೊರಡಿಸಿದ್ದಾರೆ.

ಅದರಲ್ಲಿ ಬೃಹತ್ ಬೆಂಗಳೂರು ಮಹಾನಗರ ವ್ಯಾಪ್ತಿಯಲ್ಲಿ 2019-20 ರಿಂದ 2022-23 ರವರೆಗೆ ಪ್ರಮುಖವಾಗಿ ಘನತ್ಯಾಜ್ಯ ನಿರ್ವಹಣೆ ಕಾಮಗಾರಿಗಳು, ರಸ್ತೆ ಅಭಿವೃದ್ಧಿ, ಓಎಫ್‌ಸಿ ಕೇಬಲ್ ಅಳವಡಿಕೆ, ಬೃಹತ್ ನೀರುಗಾಲುವೆ ಕಾಮಗಾರಿಗಳು, ಕೇಂದ್ರ/ವಲಯ ನಗರ ಯೋಜನೆ ವಿಭಾಗಗಳಲ್ಲಿ ನಕ್ಷೆ ಮಂಜೂರಾತಿ । ಸ್ವಾಧೀನಾನುಭವ ಪತ್ರ ನೀಡುವಿಕೆ, ಕೆರೆಗಳ ಅಭಿವೃದ್ಧಿ ಕಾಮಗಾರಿಗಳು,



ಯೋಜನೆಯಡಿಯಲ್ಲಿನ ಕಾಮಗಾರಿಗಳು ಮತ್ತು ವಾರ್ಡ್ ಮಟ್ಟದ ಕಾಮಗಾರಿಗಳಲ್ಲಿ ನಡೆದಿದೆ ಎನ್ನಲಾದ ಅಕ್ರಮಗಳ ಕುರಿತು ವಿವರವಾದ ತನಿಖೆಯನ್ನು ನಡೆಸಲು 4 ವಿಶೇಷ ತನಿಖಾ ತಜ್ಞರ । ಪರಿಣಿತರ ನೇತೃತ್ವದಲ್ಲಿ 4 ಪ್ರತ್ಯೇಖ ತನಿಖಾ ಸಂಸ್ಥೆಗಳನ್ನು ರಚಿಸಿ ಆದೇಶಿಸಲಾಗಿತ್ತು ಎಂದಿದ್ದಾರೆ. ತನಿಖಾ ವರದಿಗಳು ಬರುವ ವರೆಗೂ ಕಾಮಗಾರಿಗಳ ಬಿಲ್ ಪಾವತಿಯಲ್ಲಿ ಶೇ..75% ರಷ್ಟನ್ನು ಪಾವತಿಸಿ ಶೇ.25 ರಷ್ಟನ್ನುತಡೆಹಿಡಿಯಲು ಆದೇಶಿಸಲಾಗಿರುತ್ತದೆ.

# ಸಚಿವ ಜಮೀರ್ ಅಹ್ಮದ್ ವಿರುದ್ಧ ಸಿಡಿದೆದ್ದ ಕಾಂಗ್ರೆಸ್ ಶಾಸಕರು

• ಉದಯವಾಹಿನಿ, ಬೆಂಗಳೂರು

ವಕ್ಫ್ ವಿವಾದ ವಿಚಾರವಾಗಿ ಇದೀಗ ರಾಜ್ಯಾದ್ಯಂತ ಬಿಜೆಪಿ ಪ್ರತಿಭಟನೆ ನಡೆಸುತ್ತಿದ್ದು, ಇದರ ಮಧ್ಯ ಸಚಿವ ಜಮೀರ್ ಅಹ್ಮದ್ ಖಾನ್ ವಿರುದ್ಧ ಕಾಂಗ್ರೆಸ್ ಪಕ್ಷದ ಹಲವು ಶಾಸಕರು, ಪದಾಧಿಕಾರಿಗಳು ಆಕ್ರೋಶಗೊಂಡಿದ್ದು AICC ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರಿಗೆ ಈ ಕುರಿತು ದೂರು ನೀಡಿದ್ದಾರೆ. ಕಾಂಗ್ರೆಸ್ ಶಾಸಕರು ಬರೆದಿರವುದು ಎನ್ನಲಾದ ಪತ್ರ ಪ್ರತಿಯೊಂದು ಸದ್ಯ ವಾಟ್ಸ್ ಆ್ಯಪ್ ಗ್ರೂಪ್‌ಗಳಲ್ಲಿ ಹರಿದಾಡುತ್ತಿದೆ.

ಹೌದು ವಕ್ಫ್ ವಿಚಾರದಿಂದ ಚುನಾವಣೆ ಹೊಸ್ತಿಲಲ್ಲಿ ನಾವೇ ರಾಜಕೀಯ ಮಾಡಲು ಅವಕಾಶ ಮಾಡಿಕೊಟ್ಟಂತಾಗಿದೆ ಕಾಂಗ್ರೆಸ್ ಶಾಸಕರು ಬೇಸರ ವ್ಯಕ್ತಪಡಿಸಿದ್ದಾರೆ. ಅಲ್ಲದೆ, ಈಗಿನ ಬೆಳವಣಿಗೆಗಳಿಗೆಲ್ಲ ಜಮೀರ್ ಅಹ್ಮದ್ ಸೂಚನೆಯೇ ಕಾರಣ ಎಂದು ಅಸಮಾಧಾನ ವ್ಯಕ್ತಪಡಿಸಿದ್ದಾರೆ. ಹಾಗಾಗಿ ಸಚಿವ ಜಮೀರ್ ಅಹ್ಮದ್ ಖಾನ್ ಅವರಿಗೆ ಅನಗತ್ಯ ಹೇಳಿಕೆ ನೀಡದಂತೆ ಪತ್ರ ಬರೆದಿದ್ದಾರೆ.

ಜಮೀರ್ ಅಹ್ಮದ್ ಪದೇ ಪದೇ ಸರ್ಕಾರಕ್ಕೆ, ಪಕ್ಷಕ್ಕೆ ಮುಜುಗರ ಉಂಟು ಮಾಡುತ್ತಿದ್ದಾರೆ. ಅನಗತ್ಯ ಹೇಳಿಕೆಗಳನ್ನು ನೀಡಿ ಪಕ್ಷಕ್ಕೆ, ಸರ್ಕಾರದ ವರ್ಚಸ್ಸಿಗೆ ತೀವ್ರ ಹಾನಿ ಮಾಡುತ್ತಿದ್ದಾರೆ. ಶಿಗ್ಗಾಂವಿ ಉಪಚುನಾವಣೆ ಅಭ್ಯರ್ಥಿ ವಿಷಯವಾಗಿಯೂ ಅನಗತ್ಯ ಗೊಂದಲ ಸೃಷ್ಟಿ ಮಾಡಿದ್ದರು. ನಮ್ಮಲ್ಲಿ ಸಾಕಷ್ಟು ಅಲ್ಪಸಂಖ್ಯಾತ ಶಾಸಕರಿದ್ದಾರೆ, ಆದರೆ ಜಮೀರ್ ಮಾತ್ರ ವಿಶೇಷವಾಗಿ ನಡೆದುಕೊಳ್ಳುತ್ತಿದ್ದಾರೆ.



ಉದಯವಾಹಿನಿ ಚಿತ್ರ

> **ತಾವು ಮಧ್ಯಪ್ರವೇಶಿಸಿ ಜಮೀರ್ ಹೇಳಿಕೆಗೆ ಕಡಿವಾಣ ಹಾಕಬೇಕು. ಇಲ್ಲವಾದರೆ ಮುಂದೆ ಪಕ್ಷ ಭಾರೀ ಬೆಲೆ ತೆರಬೇಕಾದ ಪರಿಸ್ಥಿತಿ ಬರಲಿದೆ ಎಂದು ಖರ್ಗೆಗೆ ಬರೆದಿರುವ ಪತ್ರದಲ್ಲಿ ಕಾಂಗ್ರೆಸ್ ಶಾಸಕರು ಉಲ್ಲೇಖಿಸಿದ್ದಾರೆ.ಸದ್ಯ ಉಪಚುನಾವಣೆಗೆ ಸಜ್ಜಾಗಿರುವ ಶಿಗ್ಗಾಂವಿ ಕ್ಷೇತ್ರದಲ್ಲಿ ಜಮೀರ್ ಅಹ್ಮದ್ ತಾನೇ ಮುಂದೆ ನಿಂತು ಓಡಾಡುತ್ತಿದ್ದಾರೆ. ಇದೇ ಸಂದರ್ಭದಲ್ಲಿ ಜಮೀರ್ ವಿರುದ್ಧ ಎಐಸಿಸಿ ಅಧ್ಯಕ್ಷರಿಗೆ ದೂರು ನೀಡಿದ ಕೈ ಶಾಸಕರು, ಜಮೀರ್ ಹೇಳಿಕೆಗೆ ಕಡಿವಾಣ ಹಾಕುವಂತೆ ಆಗ್ರಹಿಸಿದ್ದಾರೆ.**

## 7 ತಿಂಗಳ ಹಿಂದೆಯೇ ರೈತರು, ಮಂದಿರಗಳು, ಮಠಗಳ ಆಸ್ತಿ ಖಾತೆ ಬದಲಾಯಿಸಲು ಕಂದಾಯ ಇಲಾಖೆಗೆ ಪತ್ರ

• ಉದಯವಾಹಿನಿ, ಬೆಂಗಳೂರು

ಭ್ರಷ್ಟ ಕಾಂಗ್ರೆಸ್ ಸರ್ಕಾರ ಕಳೆದ 7 ತಿಂಗಳ ಹಿಂದೆಯೇ ರೈತರು, ಮಂದಿರಗಳು, ಮಠಗಳಿಗೆ ಸೇರಿದ 21,747 ಆಸ್ತಿಗಳನ್ನು ಕಬಳಿಕೆ ಮಾಡಿ ಖಾತೆ ಬದಲಾಯಿಸಲು ಕಂದಾಯ ಇಲಾಖೆಗೆ ಪತ್ರ ಬರೆದಿರುವುದು ಇದೀಗ ಬಹಿರಂಗವಾಗಿದೆ ಎಂದು ರಾಜ್ಯ ಬಿಜೆಪಿ ಆರೋಪಿಸಿದೆ.



**ರಾಜ್ಯಾದ್ಯಂತ ಬಿಜೆಪಿಯ ಪ್ರತಿಭಟನೆ**

ಕಂದಾಯ ಸಚಿವ ಕೃಷ್ಣ ಬೈರೇಗೌಡ ಹಾಗೂ ವಕ್ಫ್ ಖಾತೆ ಸಚಿವ ಜಮೀರ್ ಅಹ್ಮದ್ ಖಾನ್ ಅವರೊಂದಿಗೆ ಎರಡೂ ಇಲಾಖೆಗಳ ಅಧಿಕಾರಿಗಳು ಚರ್ಚಿಸಿಯೇ ತೀರ್ಮಾನ ಕೈಗೊಂಡಿದ್ದಾರೆ. IPC 420, 01 ಸಿದ್ದರಾಮಯ್ಯ ಅವರ ಅಣತಿ ಮೇಲೆಯೇ ವಕ್ಫ್ ಬೋರ್ಡ್ ಹಾಗೂ ಕಂದಾಯ ಇಲಾಖೆ ಸೇರಿಕೊಂಡು ಕರ್ನಾಟಕದ ಸಂಪತ್ತನ್ನು ದೋಚಿದ್ದಾರೆ. ಮಗುವನ್ನು ಚಿವುಟಿ ತೊಟ್ಟಿಲು ತೂಗುವ ಕಾಂಗ್ರೆಸ್, ಇದೀಗ ರೈತರಿಗೆ ಕೊಟ್ಟ ನೋಟಿಸ್ ವಾಪಸ್ ಪಡೆಯುವ ಊಸರವಳ್ಳಿ ನಾಟಕ ಆಡುತ್ತಿದೆ ಎಂದು ಕಿಡಿಕಾರಿದೆ. ಭ್ರಷ್ಟ ಕಾಂಗ್ರೆಸ್‌ನ ಕುಮ್ಮಕ್ಕಿನಿಂದ ಮೆರೆದಾಡುತ್ತಿರುವ ವಕ್ಫ್ ಬೋರ್ಡ್‌ನ ಹಗಲು ದರೋಡೆ ವಿರುದ್ಧ ಬಿಜೆಪಿಯು ಬೀದಿಗಿಳಿದು ಯಶಸ್ವಿಯಾಗಿ ಪ್ರತಿಭಟನೆ ನಡೆಸಿದೆ. ರಾಜ್ಯಾದ್ಯಂತ ಬಿಜೆಪಿಯ ಪ್ರತಿಭಟನೆಗೆ ರೈತರು, ಮಠಾಧೀಶರು, ಜನಸಾಮಾನ್ಯರು ಜತೆಗೂಡಿ ಬೆಂಬಲಿಸಿದ್ದಾರೆ.

ಭ್ರಷ್ಟ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ವಕ್ಫ್ ಖಾತೆ ಸಚಿವ ಜಮೀರ್ ಅಹ್ಮದ್ ಖಾನ್ ಅವರು ರಾಜೀನಾಮೆ ನೀಡುವವರೆಗೂ ಬಿಜೆಪಿಯ ಹೋರಾಟ ನಿಲ್ಲುವುದಿಲ್ಲ ಎಂದು ತಿಳಿಸಿದೆ.

## ಕರ್ನಾಟಕದಲ್ಲಿರುವ ಎಲ್ಲರೂ ಕನ್ನಡ ಕಲಿಯಬೇಕು

### ಕನ್ನಡಿಗರೊಂದಿಗೆ ಬೆರೆತು, ಅವರೊಂದಿಗೆ ಹೊಂದಿಕೊಂಡು ಹೋಗಬೇಕು

• ಉದಯವಾಹಿನಿ, ಬೆಂಗಳೂರು

ಕರ್ನಾಟಕದಲ್ಲಿರುವ ಪ್ರತಿಯೊಬ್ಬರೂ ಕನ್ನಡ ಕಲಿತು, ಕನ್ನಡಿಗರೊಂದಿಗೆ ಬೆರೆತು, ಅವರೊಂದಿಗೆ ಹೊಂದಿಕೊಂಡು ಹೋಗಬೇಕು ಎಂದು ಸಾಹಿತಿ ಡಾ.ಸಿಸಿರಾ ಅಭಿಪ್ರಾಯಿದ್ದಾರೆ. ಕಾವ್ಯ ಶ್ರೀ ಚಾರಿಟಬಲ್ ಟ್ರಸ್ಟ್ ಕನ್ನಡ ಸಾಹಿತ್ಯ ಪರಿಷತ್ತಿನಲ್ಲಿ ಹಮ್ಮಿಕೊಂಡಿದ್ದ ರಾಜ್ಯ ಮಟ್ಟದ ಕನ್ನಡ ಸಾಹಿತ್ಯ ಸಮ್ಮೇಳನದ ಅಧ್ಯಕ್ಷತೆ ವಹಿಸಿ ಮಾತನಾಡಿದರು .

ಉದ್ಯೋಗ ಮತ್ತಿತರ ಕಾರಣಕ್ಕಾಗಿ ವಿವಿಧೆಡೆಗಳಿಂದ ಕರ್ನಾಟಕದಲ್ಲಿ ಬಂದು ನೆಲೆಸಿರುವವರು ಮೊದಲು ಕನ್ನಡ ಕಲಿಯಬೇಕು. ಅದಾಗದಿದ್ದರೆ ಅವರು ಕರ್ನಾಟಕದಲ್ಲಿರಲು ಅರ್ಹರಲ್ಲ. ಜರ್ಮನಿಯಿಂದ ಬಂದು ಕನ್ನಡದ ಸಾಂಸ್ಕೃತಿಕ ಮಹತ್ವ ಅರಿತು, ಕನ್ನಡವನ್ನು ಕಲಿತು, ಕನ್ನಡ ನಿಘಂಟು ರಚಿಸಿದ ಜಾನ್ ಎ ಕಿಟ್ಟೆಲ್‌ರವರ ಸಂಶೋಧನೆ ಪರಭಾಷಿಕರಿಗೆ ಮಾತ್ರವಲ್ಲ ಕನ್ನಡಿಗರಿಗೂ ಆದರ್ಶ ಎಂದು ಸಿಸಿರಾ ವಿವರಿಸಿದ್ದಾರೆ.



ಉದಯವಾಹಿನಿ ಚಿತ್ರ

ಸಮಾರಂಭವನ್ನು ಹಿರಿಯ ಸಾಹಿತಿ ಸುಬ್ಬು ಹೊಲೆಯಾರ್ ಉದ್ಘಾಟಿಸಿದರು. ಸಮಾರಂಭದಲ್ಲಿ ಡಾ.ಆರೂಢ ಭಾರತೀ ಸ್ವಾಮೀಜಿ, ವಿಜಯಾ ಪದವಿ ಕಾಲೇಜಿನ ಪ್ರಾಧ್ಯಾಪಕ ಡಾ.ಆರ್.ವಾದಿರಾಜ್, ಧಾರವಾಡದ ಚೇತನ ಫೌಂಡೇಶನ್‌ನ ಅಧ್ಯಕ್ಷರಾದ ಚಂದ್ರಶೇಖರ ಮಾಡಲಗೇರಿ, ಕಥೆಗಾರ್ತಿ ಶಾಂತಿ ವಾಸು, ಸಂಸ್ಥೆಯ ಅಧ್ಯಕ್ಷ ಡಾ.ಜಿ.ಶಿವಣ್ಣ, ಕವಯಿತ್ರಿ ಆಶಾಶಿವು ಮತ್ತಿತರರು ಉಪಸ್ಥಿತರಿದ್ದರು.

# ಯಥೇಚ್ಛವಾಗಿ ಬಳಕೆಯಾಗುತ್ತಿದೆ ರಾಸಾಯನಿಕ!

## ಕಣ್ಣಿಗೆ ಖುಷಿ ಕಾಣುತ್ತದೆ, ಹೊಟ್ಟೆಗೆ ಆರೋಗ್ಯಕ್ಕೆ ಒಳ್ಳೆಯದು ಎಂದು ಹಣ ಕೊಟ್ಟು ಖರೀದಿಸಿ ಮನೆಗೆ ತಂದು ತಿನ್ನುತ್ತೇವೆ

• ಉದಯವಾಹಿನಿ, ಬೆಂಗಳೂರು

ಬಣ್ಣಬಣ್ಣದ ಆಕರ್ಷಕ ಹಣ್ಣುಗಳು, ಕಣ್ಣಿಗೆ ಖುಷಿ ಕಾಣುತ್ತದೆ, ಹೊಟ್ಟೆಗೆ ಆರೋಗ್ಯಕ್ಕೆ ಒಳ್ಳೆಯದು ಎಂದು ಹಣ ಕೊಟ್ಟು ಖರೀದಿಸಿ ಮನೆಗೆ ತಂದು ತಿನ್ನುತ್ತೇವೆ. ಬೆಂಗಳೂರಿನಂತಹ ನಗರದ ಮಾರುಕಟ್ಟೆಗಳಲ್ಲಿ ಆಕರ್ಷಕವಾದ ಹಣ್ಣುಗಳು ಜನರನ್ನು ಆಕರ್ಷಿಸುವುದು ಹೆಚ್ಚು. ಕಾಯಿಲೆ ಬಂದಾಗ ವೈದ್ಯರು ಚೆನ್ನಾಗಿ ಹಣ್ಣು-ತರಕಾರಿ ತಿನ್ನಿ ಎಂದು ಹೇಳುತ್ತಾರೆ ಎಂದು ದಿನಕ್ಕೊಂದು ಬಗೆಯ ಹಣ್ಣನ್ನು ಖರೀದಿಸಿ ತರುತ್ತೇವೆ.

ಆದರೆ ಇವುಗಳಲ್ಲಿ ಹಲವು ಹಣ್ಣುಗಳು ಸ್ವಾಭಾವಿಕವಾಗಿ ಹಣ್ಣಾಗಿರುವುದಿಲ್ಲ, ಕೃತಕವಾಗಿ ಹಣ್ಣು ಮಾಡಲಾಗುತ್ತದೆ ಎಂದು ಭಾರತೀಯ ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಪ್ರಾಧಿಕಾರದ ಅಧಿಕಾರಿಗಳು ಎಚ್ಚರಿಸಿದ್ದಾರೆ. ರಾಜ್ಯದಾದ್ಯಂತ ಎಫ್‌ಎಸ್‌ಎಸ್‌ಎಐ ಅನುಮತಿಸಿದ ಸಸ್ಯ ಬೆಳವಣಿಗೆ ನಿಯಂತ್ರಕವಾದ ಎಥೆಫೋನ್‌ನ್ನು ದುರುಪಯೋಗಪಡಿಸಿಕೊಳ್ಳುತ್ತಿದ್ದಾರೆ, ಇದನ್ನು ಪುಡಿ ರೂಪದಲ್ಲಿ ಬಳಸಿ ಕಾಯಿ ಹಣ್ಣಾಗಲು ಎಥಿಲೀನ್ ಅನಿಲ ದುರುಪಯೋಗಪಡಿಸಿಕೊಳ್ಳಲಾಗುತ್ತಿದೆ ಎಂಬ ಆಘಾತಕಾರಿ ಅಂಶ ಬೆಳಕಿಗೆ ಬಂದಿದೆ.

ನಗರಗಳಲ್ಲಿ ಅನೇಕ ವ್ಯಾಪಾರಿಗಳು, ಎಥೆಫೋನ್ ಪುಡಿ ರೂಪದಲ್ಲಿ ಬಳಸುವ ಬದಲು, ಈ ರಾಸಾಯನಿಕಗಳ ದ್ರಾವಣಗಳಲ್ಲಿ ಹಣ್ಣುಗಳನ್ನು ನೆನೆಸಿ, ಮೃದುವಾಗಿ, ಸುಂದರವಾಗಿ ಹಣ್ಣಾದಂತೆ ಪ್ರಕಾಶಮಾನವಾಗಿ ಕಾಣು ವಂತೆ ಮಾಡುತ್ತಿದ್ದಾರೆ.



ಉದಯವಾಹಿನಿ ಚಿತ್ರ

**ರಾಜ್ಯದಾದ್ಯಂತ ಎಫ್‌ಎಸ್‌ಎಸ್‌ಎಐ ಅನುಮತಿ**

ಈ ದುರುಪಯೋಗದಿಂದ ಹಣ್ಣುಗಳಲ್ಲಿ ಅಪಾಯಕಾರಿ ಅಂಶ ಸೇರಿ ಮನುಷ್ಯರ ಆರೋಗ್ಯಕ್ಕೆ ಹಾನಿಕಾರವಾಗಿದೆ. ಕಳೆದ ವರ್ಷ ಕ್ಯಾಲ್ಸಿಯಂ ಕಾರ್ಬೈಡ್‌ನ ನಿಷೇಧವನ್ನು ಅನುಸರಿಸಿ ಎಥೆಫೋನ್‌ಗೆ ಅನುಮೋದನೆ ನೀಡಲಾಯಿತು.

ಈ ಬಗ್ಗೆ ಪ್ರತಿನಿಧಿ ಜೊತೆ ಮಾತನಾಡಿದ ತೋಟಗಾರಿಕಾ ಇಲಾಖೆಯ ಮೂಲಗಳು ಎಥೆಫೋನ್‌ನ ದುರುಪಯೋಗ ಇತ್ತೀಚೆಗೆ ಹೆಚ್ಚಾಗಿದೆ. ರಾಜ್ಯದಲ್ಲಿ ಅದನ್ನು ಪರಿಣಾಮಕಾರಿಯಾಗಿ ಮೇಲ್ವಿಚಾರಣೆ ಮಾಡಲು ತಂತ್ರಜ್ಞಾನ ಮತ್ತು ಸಂಪನ್ಮೂಲಗಳ ಕೊರತೆಯಿದೆ. ಈ ಹಣ್ಣುಗಳನ್ನು ಸರಿಯಾಗಿ ತೊಳೆಯದೆ ಅಥವಾ ಸ್ವಚ್ಛಗೊಳಿಸದೆ ಸೇವಿಸುವವರಿಗೆ ನಿಧಾನವಾಗಿ ಹಲವು ಕಾಯಿಲೆಗಳು ಬರುತ್ತಿವೆ ಎಂದರು.

ಕಿರಿಯ ಆಹಾರ ವಿಶ್ಲೇಷಕ ಚೇತನ್ ಟಿಪಿ, ಎಥೆಫಾನ್ ಎಥಿಲೀನ್ ಅನಿಲವನ್ನು ಬಿಡುಗಡೆ ಮಾಡಲು ಒಡೆಯುತ್ತದೆ, ಇದು ನೈಸರ್ಗಿಕ ಸಸ್ಯ ಹಾರ್ಮೋನ್ ಉತ್ಪನ್ನಗಳ ಪಕ್ವತೆಯನ್ನು ವೇಗಗೊಳಿಸಿ ಪೂರೈಕೆ ಸರಪಳಿಯನ್ನು ಹೆಚ್ಚಿಸಲು ಸಹಾಯ ಮಾಡುತ್ತದೆ ಎಂದು ಅವರು ಹೇಳುತ್ತಾರೆ, ಎಥೆಫಾನ್‌ನ ಅತಿಯಾದ ಬಳಕೆಯು ತೋಟಗಾರಿಕೆ ಕೃಷಿಯಲ್ಲಿ ಸಮಸ್ಯೆಯಾಗಿದೆ ಎಂದರು.

ಈ ರಾಸಾಯನಿಕದೊಂದಿಗೆ ಸಂಸ್ಕರಿಸಿದ ಉತ್ಪನ್ನಗಳ ದೀರ್ಘಾವಧಿಯ ಸೇವನೆಯು ಆರೋಗ್ಯ ಸಮಸ್ಯೆಗಳ ಅಪಾಯ ವನ್ನು ಹೆಚ್ಚಿಸಬಹುದು ಎಂದು ಅವರು ಹೇಳಿದರು.

ಆಸ್ಟರ್ ಸಿಎಂಐ ಆಸ್ಪತ್ರೆಯ ಸೇವೆಗಳು, ಕ್ಲಿನಿಕಲ್ ನ್ಯೂಟ್ರಿಷನ್ ಮತ್ತು ಡಯೆಟಿಕ್ಸ್ ಮುಖ್ಯಸ್ಥ ಎಡ್ವಿನಾ ರಾಜ್, ಮಾರುಕಟ್ಟೆಯಲ್ಲಿ ಖರೀದಿಸಿ ತಂದ ಹಣ್ಣುಗಳನ್ನು ನೀರಿನಲ್ಲಿ ಸಾಕಷ್ಟು ನೆನೆಸಿ ಚೆನ್ನಾಗಿ ತೊಳೆಯಬೇಕು ಎಂದು ಸಲಹೆ ನೀಡುತ್ತಾರೆ. ಹಣ್ಣಿನ ಸಿಪ್ಪೆಗಳು ಫೈಬರ್ ಪ್ರಯೋಜನಗಳನ್ನು ನೀಡುತ್ತವೆ, ಆದ್ದರಿಂದ ತರಕಾರಿಗಳು ಮತ್ತು ಹಣ್ಣುಗಳನ್ನು ಎಚ್ಚರಿಕೆಯಿಂದ ಪರಿಶೀಲಿಸಬೇಕು, ವಿಶೇಷವಾಗಿ ಒಂದು ವರ್ಷದೊಳಗಿನ ಶಿಶುಗಳು ಮತ್ತು ಗರ್ಭಿಣಿಯರಿಗೆ ನೀಡುವಾಗ ಚೆನ್ನಾಗಿ ಸ್ವಚ್ಛಗೊಳಿಸಿ ನೀಡಬೇಕು ಎನ್ನುತ್ತಾರೆ.

> **ಗ್ಲೆನೆಗಲ್ಸ್ ಬಿಜಿಎಸ್ ಆಸ್ಪತ್ರೆಯ ಕ್ಲಿನಿಕಲ್ ನ್ಯೂಟ್ರಿಷನ್ ಮತ್ತು ಡಯೆಟಿಕ್ಸ್ ಮುಖ್ಯಸ್ಥ ಡಾ ಕಾರ್ತಿಗೈ ಸೆಲ್ವಿ ಎ, ಎಥೆಫಾನ್ ಅವಶೇಷಗಳು ಅಂತಃಸ್ರಾವಕ ಕ್ರಿಯೆಗೆ ಅಡ್ಡಿಪಡಿಸಬಹುದು ಮತ್ತು ಹಾರ್ಮೋನುಗಳ ಅಸಮತೋಲನವನ್ನು ಉಂಟುಮಾಡಬಹುದು ಎಂದು ಸಂಶೋಧನೆ ತೋರಿಸುತ್ತದೆ ಎನ್ನುತ್ತಾರೆ,**

> **ಎಫ್‌ಎಸ್‌ಎಸ್‌ಎಐ ಪ್ರಕಾರ 10 ಕೆಜಿ ಹಣ್ಣಿಗೆ ಗರಿಷ್ಠ 0.5 ಗ್ರಾಂ ಎಥೆಫೋನ್ ಬಳಸಬಹುದು. ಆದರೆ ಕೆಲವು ರೈತರು ಮತ್ತು ವ್ಯಾಪಾರಿಗಳು ಹಣ್ಣನ್ನು ತ್ವರಿತವಾಗಿ ಮಾಗಿಸಲು ಶಿಫಾರಸು ಮಾಡಿದ ಸಾಂದ್ರತೆಯನ್ನು ಮೀರುತ್ತಾರೆ. ರಾಸಾಯನಿಕವು ಹಣ್ಣಿನೊಂದಿಗೆ ನೇರವಾಗಿ ಸಂಪರ್ಕಕ್ಕೆ ಬರಬಾರದು ಎಂಬ ಷರತ್ತಿನ ಮೇಲೆ ಮಾತ್ರ ಬಳಸಲು ಅನುಮತಿಸಲಾಗಿದೆ, ಆದ್ದರಿಂದ ಅದು ಸಿಪ್ಪೆಗಳ ಮೇಲೆ ರಾಸಾಯನಿಕ ಶೇಷವನ್ನು ಬಿಡುವುದಿಲ್ಲ, ಇದು ಆರೋಗ್ಯಕ್ಕೆ ಅತ್ಯಂತ ಹಾನಿಕಾರಕ ಎಂದರು.**

ಅಂತರಾಳದಿಂದ... EDITORIAL

# ಈ ಭೂಮಿ ಮನುಷ್ಯನಿಗೆ ಮಾತ್ರ ಸೇರಿಲ್ಲ

ವನ್ಯ ಜೀವಿಗಳ ಸಂರಕ್ಷಣೆಯ ಜೊತೆಗೆ ಕಾಡು ಪ್ರಾಣಿಗಳು ಮತ್ತು ಮನುಷ್ಯರ ನಡುವಿನ ಸಂಘರ್ಷಗಳ ವರದಿಗಳು ಆಗಾಗ ಬರುತ್ತಲೇ ಇವೆ. ಆದರೂ ಕರ್ನಾಟಕದಲ್ಲಿ ವನ್ಯ ಜೀವಿಗಳ ಸಂಖ್ಯೆ ಹೆಚ್ಚುತ್ತಿರುವುದು ಹೆಮ್ಮೆಯ ಸಂಗತಿಯಾಗಿದೆ. ಅದರಲ್ಲೂ ವಿಶೇಷವಾಗಿ ಆನೆ ಮತ್ತು ಹುಲಿಗಳ ಸಂಖ್ಯೆಯನ್ನು ಗಮನಿಸಿದರೆ ಕರ್ನಾಟಕ ಎರಡನೇ ಸ್ಥಾನದಲ್ಲಿ ಇದೆ. ಚಿರತೆಗಳ ಸಂಖ್ಯೆಯೂ ಹೆಚ್ಚುತ್ತಲೇ ಇದೆ. ಒಂದು ದೃಷ್ಟಿಯಿಂದ ಇದು ಹೆಮ್ಮೆ ಪಡಬೇಕಾದ ಸಂಗತಿಯಾದರೂ ಇದರ ಜೊತೆ ಜೊತೆಗೆ ಕೆಲವು ಆತಂಕದ ಸಂಗತಿಗಳು ವರದಿಯಾಗುತ್ತಲೇ ಇವೆ.

ಅರಣ್ಯ ಇಲಾಖೆಯ ದಾಖಲೆಗಳ ಪ್ರಕಾರ ವನ್ಯಜೀವಿಗಳೊಂದಿಗೆ ಮನುಷ್ಯನ ಸಂಘರ್ಷ ತೀವ್ರವಾಗುತ್ತಿದೆ. ಪದೇ ಪದೇ ಪ್ರಾಣಿಗಳ ಹಾವಳಿ ಜಾಸ್ತಿಯಾಗುವುದರ ಜೊತೆಗೆ ಹಾಸನ ಕೊಡಗು, ಚಾಮರಾಜನಗರ ಹಾಗೂ ರಾಮನಗರ ಜಿಲ್ಲೆಗಳಲ್ಲಿ ಕಾಡು ಪ್ರಾಣಿಗಳು ಹೊಲಗಳಿಗೆ ನುಗ್ಗಿ ಬೆಳೆಯನ್ನು ಹಾಳು ಮಾಡುತ್ತಿರುವುದು ನಿತ್ಯದ ಸಂಗತಿಯಾಗಿದೆ.


ಉದಯವಾಹಿನಿ ಚಿತ್ರ

> ಇಂತಹ ಸುದ್ದಿಗಳು, ಪ್ರಾಣಿಗಳ ಹಾವಳಿ' ಎಂಬ ತಲೆ ಬರಹದಡಿಯಲ್ಲಿ ಪ್ರಕಟವಾಗುತ್ತಿವೆ. ವಾಸ್ತವ ಸಂಗತಿಯೆಂದರೆ ಯಾರಿಂದ, ಎಲ್ಲಿ ಹಾವಳಿ ಎಂಬುದನ್ನು ವಸ್ತುನಿಷ್ಠವಾಗಿ ಅವಲೋಕಿಸಿದರೆ ಹಲವಾರು ಸಂಗತಿಗಳು ಕಣ್ಣಿಗೆ ಗೋಚರಿಸುತ್ತಿವೆ. ಮನುಷ್ಯ ಮತ್ತು ಪ್ರಾಣಿಗಳ ನಡುವಿನ ಸಂಘರ್ಷಕ್ಕೆ ಅನೇಕ ಕಾರಣಗಳಿದ್ದರೂ ಬಹು ಮುಖ್ಯವಾದುದು ವನ್ಯಜೀವಿಗಳು ಪಂಚರಿಸುವ ದಾರಿಯಲ್ಲಿ ಮತ್ತು ವಾಸ ಮಾಡುತ್ತಿರುವ ತಾಣಗಳಲ್ಲಿ ಮನುಷ್ಯರ ಅತಿಕ್ರಮಣ ಜಾಸ್ತಿಯಾಗುತ್ತಿರುವುದು ಎಲ್ಲಿ ಪ್ರಾಣಿಗಳ ವಾಸ ಸ್ಥಾನವಿದೆಯೋ ಅಂಥಲ್ಲಿ ರಸ್ತೆ ಕೃಷಿ, ರೆಸಾರ್ಟ್‌ಗಳಿಂದು ಮಾಡಿಕೊಂಡ ಪರಿಣಾಮವಾಗಿ ನೆಲೆ ಕಳೆದುಕೊಂಡ ಮೂಕ ಪ್ರಾಣಿಗಳು ನೆಲೆ ಮತ್ತು ನೀರನ್ನು ಅರಸಿ ಎಲ್ಲೆಲ್ಲೋ ಕಾಣಿಸಿಕೊಳ್ಳುತ್ತವೆ

ಅದರಲ್ಲೂ ವಿಶೇಷವಾಗಿ ಪಶ್ಚಿಮ ಘಟ್ಟಗಳ ಬಹುತೇಕ ಎಲ್ಲಾ ತಾಲ್ಲೂಕುಗಳಲ್ಲಿ ಕೋತಿ, ಕಾಡು ಹಂದಿ ಮೊದಲಾದ ಪ್ರಾಣಿಗಳು ಮತ್ತು ಮನುಷ್ಯರ ನಡುವಿನ ಸಂಘರ್ಷ ಸಾಮಾನ್ಯವಾಗಿದೆ. ಇತ್ತೀಚಿನ ದಿನಗಳಲ್ಲಿ ಬೆಂಗಳೂರು, ಚಿಕ್ಕ ಬಳ್ಳಾಪುರ, ಕೋಲಾರ ಜಿಲ್ಲೆಗಳಲ್ಲಿ ಕೂಡ ಪ್ರಾಣಿಗಳು ಜನವಸತಿ ಪ್ರದೇಶಗಳಲ್ಲಿ ಕಾಣಿಸಿಕೊಳ್ಳುತ್ತಿರುವುದು ಕಳವಳಕಾರಿಯಾಗಿದೆ. ಇಂತಹ ಸುದ್ದಿಗಳು ಮಾಧ್ಯಮಗಳಲ್ಲಿ ಪ್ರತಿನಿತ್ಯವೂ ವರದಿಯಾಗುತ್ತಲೇ ಇವೆ. ಸರಕಾರವೇನೋ ಅಲ್ಲಲ್ಲಿ ಪ್ರಾಣಿಗಳಿಗಾಗಿ ಸಂರಕ್ಷಿತ ವನ್ಯಧಾಮಗಳನ್ನು ಮಾಡುತ್ತಿದ್ದರೂ ಅಂಥಲ್ಲಿ ಕೂಡ ಲಂಟಾನ, ಯುಪಟೋರಿಯಂನಂತಹ ಕಳೆ ಸಸ್ಯಗಳು ಹೆಚ್ಚುತ್ತಿರುವುದರಿಂದ ಸಸ್ಯಾಹಾರಿ ಪ್ರಾಣಿಗಳು ಆಹಾರ ಮತ್ತು ನೀರನ್ನು ಹುಡುಕಿಕೊಂಡು ಅಲೆದಾಡುತ್ತವೆ. ಕಾಡು ಪ್ರಾಣಿಗಳು ತಮ್ಮ ಪ್ರದೇಶ ಬಿಟ್ಟು ಅಲೆದಾಡುತ್ತಿವೆ. ಪ್ರಾಣಿಗಳು ತಮ್ಮ ಗಡಿ ದಾಟಿ ಹೊರಗೆ ಬಾರದಂತೆ ಅನುಕೂಲಸ್ಥ ಗ್ರಾಮೀಣ ಪ್ರದೇಶದ ಕೃಷಿಕರು ತಮ್ಮ ಹೊಲಗಳಿಗೆ ವಿದ್ಯುತ್ ಬೇಲಿಯನ್ನು ಹಾಕಿದ ಪರಿಣಾಮವಾಗಿ ಅಮಾಯಕ ಪ್ರಾಣಿಗಳು ತಂತಿ ಬೇಲಿಗೆ ಬಲಿಯಾಗುತ್ತಿರುವುದು ಆತಂಕದ ಸಂಗತಿಯಾಗಿದೆ. ನೀರು ಮತ್ತು ಆಹಾರಕ್ಕಾಗಿ ಹುಡುಕಿಕೊಂಡು ಹೊರಟರೆ ಗ್ರ್ಯಾನೈಟ್ ಗಣಿಗಾರಿಕೆ, ವಿದ್ಯುತ್ ಬೇಲಿ ಮತ್ತು ರೆಸಾರ್ಟ್‌ಗಳು, ಹೋಂ ಸ್ಟೇಗಳು ಎದುರಾಗುತ್ತವೆ. ಹೀಗಾಗಿ ಪ್ರಾಣಿಗಳು ಹಾಗೂ ಮನುಷ್ಯರ ನಡುವಿನ ಸಂಘರ್ಷ ನಿತ್ಯದ ಸಂಗತಿಯಾಗಿದೆ. ಮಾರುಕಟ್ಟೆ ಸಂಸ್ಕೃತಿ ವ್ಯಾಪಿಸುತ್ತಿರುವ ಈ ದಿನಗಳಲ್ಲಿ ಪ್ರಾಣಿಗಳು ಮತ್ತು ಮನುಷ್ಯರ ನಡುವಿನ ಸಂಘರ್ಷ ಅನಿವಾರ್ಯವಾಗುತ್ತಿದೆ. ಇದಕ್ಕೆ ಕೇಂದ್ರ ಸರಕಾರದ ಅರಣ್ಯ ನೀತಿಯೂ ಕಾರಣವಾಗಿದೆ. ಹಾವೂ ಸಾಯಬಾರದು ಮತ್ತು ಕೋಲೂ ಮುರಿಯಬಾರದು ಎಂಬಂತೆ ಇರುವ ಅರಣ್ಯ ನೀತಿ ದೋಷಪೂರಿತವಾಗಿರುವುದೇ ಇದಕ್ಕೆ ಕಾರಣವಾಗಿದೆ.

ನಮ್ಮ ದೇಶದ ವನ್ಯ ಸಂರಕ್ಷಣಾ ನೀತಿ ಅವೈಜ್ಞಾನಿಕ ಮಾತ್ರವಲ್ಲದೆ ಜನವಿರೋಧಿಯಾಗಿದೆ. ಅಷ್ಟೇ ಅಲ್ಲ ಇದು ನಿಸರ್ಗ ವಿರೋಧಿಯಾಗಿದೆ. ಆದ್ದರಿಂದ ಕಾಲ ಬಾಹಿರವಾದ ಅರಣ್ಯ ನೀತಿಯನ್ನು ಕೂಡಲೇ ಬದಲಿಸಬೇಕಾಗಿದೆ ಎಂದು ಡಾ.ಮಾಧವ ಗಾಡ್ಗಿಳ್‌ರಂತಹ ಪರಿಣಿತರು ಒತ್ತಾಯಿಸುತ್ತಿದ್ದಾರೆ. ಹಾಗಾಗಿ ಕಾನೂನಿನಲ್ಲಿ ಇರುವ ಲೋಪ ದೋಷಗಳನ್ನು ಪುನರ್ ಪರಿಶೀಲಿಸಬೇಕಾಗಿದೆ.

ಕೃಷಿ ಚಟುವಟಿಕೆಗಳಿಗೆ ಅಡ್ಡಿಯಾಗಿರುವ ಮಂಗಗಳ ಹಾವಳಿಯನ್ನು ತಡೆಯಲು ಹಿಮಾಚಲ ಪ್ರದೇಶಗಳಲ್ಲಿ ಅವುಗಳ ಸಂತಾನ ನಿಯಂತ್ರಣಕ್ಕಾಗಿ ಸರಕಾರ ಕ್ರಮ ಕೈಗೊಂಡಂತೆ ಪಶ್ಚಿಮ ಘಟ್ಟಗಳ ಪ್ರದೇಶದಲ್ಲಿ ಕೃಷಿ ಚಟುವಟಿಕೆಗಳಿಗೆ ಮಾರಕವಾಗಿರುವ ಪ್ರಾಣಿಗಳ ಜನನ ನಿಯಂತ್ರಣ ಸಾಧ್ಯವೇ ಎಂಬ ಬಗ್ಗೆ ಸರಕಾರ ಪರಿಶೀಲನೆ ನಡೆಸಬೇಕಾಗಿದೆ. ಕರ್ನಾಟಕದಲ್ಲಿ ವನ್ಯ ಜೀವಿಗಳು ಮತ್ತು ಮನುಷ್ಕರ ನಡುವಿನ ಸಂಘರ್ಷ ಹೆಚ್ಚುತ್ತಿರುವ ಪ್ರದೇಶಗಳನ್ನು ಗುರುತಿಸಿ ಅಲ್ಲಿ ತರಬೇತಿ ಪಡೆದ ಸ್ಥಳೀಯರನ್ನು ಜನ ಜಾಗೃತಿ ಮತ್ತು ಭದ್ರತೆಗೆಂದು ನಿಯೋಜಿಸಬೇಕಾಗಿದೆ. ಈ ಜಗತ್ತು ಕೇವಲ ಮನುಷ್ಯ ಜೀವಿಗಳದ್ದಲ್ಲ. ಈ ಭೂಮಿ ಇರುವೆಯಿಂದ ಆನೆಗಳವರೆಗೆ ಎಲ್ಲಾ ಪ್ರಾಣಿಗಳು ಹಾಗೂ ಪಕ್ಷಿಗಳ ವಾಸಿಸುವ ತಾಣವಾಗಿದೆ. ಹಾಗಾಗಿ ಸಂಪತ್ತಿಗಾಗಿ ತಮ್ಮ ತಮ್ಮಲ್ಲಿ ಹೊಡೆದಾಡುವ ಮನುಷ್ಯರು ಇಳೆಯ ಮೇಲೆ ಸಕಲ ಜೀವಿಗಳ ಜೊತೆಗೆ ಬದುಕಬೇಕಾಗಿದೆ. ಪ್ರತೀ ಹನಿ ನೀರು, ಆಹಾರದಲ್ಲಿ ಪ್ರಾಣಿಗಳಿಗೂ ಹಕ್ಕಿದೆ ಎಂಬುದನ್ನು ಮರೆಯಬಾರದು ಪ್ರಾಣಿಗಳು ಮತ್ತು ಪಕ್ಷಿಗಳ ಜೊತೆಗೆ ಸಹಜವಾಗಿ ಬದುಕುವ ಅನಿವಾರ್ಯತೆಯನ್ನು ಮನುಷ್ಯರು ಅರ್ಥ ಮಾಡಿಕೊಳ್ಳಬೇಕಾಗಿದೆ. ಆದರೆ ಮನುಷ್ಯರಿಂದ ಮನುಷ್ಯರ ಶೋಷಣೆಗೆ ಕಾರಣವಾಗಿರುವ ಲಾಭಕೋರ ಬಂಡವಾಳಶಾಹಿಯನ್ನು ನಿಯಂತ್ರಿಸಿ ಸಕಲ ಜೀವಿಗಳು ಸೌಹಾರ್ದದಿಂದ ಬದುಕುವ ವ್ಯವಸ್ಥೆ ಸೂಕ್ಷ್ಮವಾಗಿದೆ. ನನ್ನ ಜೀವಿಗಳ ಪರ ಯೋಜನೆಗಳನ್ನು ಸರಕಾರ ರೂಪಿಸಿರುವುದು ವನ್ಯ ಜೀವಿಗಳ ಸಂರಕ್ಷಣೆಗಾಗಿಯೇ ಹೊರತು ದುಡ್ಡು .ದೋಡುವ, ಗಣಿಗಾರಿಕೆ, ರೆಸಾರ್ಟ್‌ಗಳು ಹಾಗೂ ಕಾರ್ಖಾನೆಗಳಿಗಾಗಿ ಅಲ್ಲ ಎಂಬುದನ್ನು ಅರಿತುಕೊಳ್ಳಬೇಕಾಗಿದೆ.

# ರಾಮಾಯಣ



## ಶ್ರೀ ರಾಮನು ಮಾರೀಚ ಸುಬಾಹುಗಳನ್ನು ನಿಗ್ರಹಿಸಿದ್ದು

• ಹಿಂದಿನ ಸಂಚಿಕೆಯಿಂದ 19ನೆಯ ಅಧ್ಯಾಯ


ಅದನ್ನು ಕೇಳಿ ಸಮಸ್ತ ಋಷಿಗಳೂ ಸುಪ್ರೀತರಾಗಿ ರಾಮಲಕ್ಷ್ಮಣರನ್ನು ಕುರಿತು ಎಲೈ ಅರಸುಮಕ್ಕಳಿರಾ, ಇಂದು ಮೊದಲಾಗಿ ಆರು ದಿವಸಗಳ ಪರ್ಯಂತ ವಿಶ್ವಾಮಿತ್ರಮುನಿಯು ಮೌನವ್ರತಧಾರಿಯಾದ್ದರಿಂದ ಮಾತನಾಡುವುದಿಲ್ಲ. ನೀವು ಈ ಆರು ದಿವಸಗಳೂ ಹಗಲಿರುಳೆನ್ನದೆ ನಿದ್ರೆಯನ್ನು ಬಿಟ್ಟು ಯಾಗವನ್ನು ರಕ್ಷಿಸಬೇಕು ಎಂದು ನುಡಿದರು. ಆ ಮುನಿಗಳ ವಾಕ್ಯವನ್ನು ಕೇಳಿ ರಾಮಲಕ್ಷ್ಮಣರು ಬಿಲ್ಲಿಗೆ ಹೆದೆಯನ್ನೇರಿಸಿಕೊಂಡು ಸಾವಧಾನದಿಂದ ಯಾಗರಕ್ಷಣೆಮಾಡಿಕೊಂಡಿದ್ದರು. ಆಗ ಶ್ರೀರಾಮನು ಲಕ್ಷ್ಮಣನನ್ನು ನೋಡಿ ಲಕ್ಷ್ಮಣ, ನಾವು ಮೊದಲು ಎಂದೂ ರಾಕ್ಷಸರೊಡನೆ ಯುದ್ಧ ಮಾಡಿದವರಲ್ಲ. ಇನ್ನು ಮುಂದೆ ರಾಕ್ಷಸರಿಗೂ ನಮಗೂ ಘೋರವಾದ ಯುದ್ಧವಾಗುವುದು, ಇದಕ್ಕೆ ಸಂದೇಹವಿಲ್ಲ. ಆದ್ದರಿಂದ ನೀನು ಸಾವಧಾನಚಿತ್ತನಾಗಿರು ಎಂದು ಹೇಳಿದನು. ರಾಮಲಕ್ಷ್ಮಣರು ಈ ಪ್ರಕಾರದಲ್ಲಿ ರಕ್ಷಣೆಮಾಡುತ್ತಿರಲು ಆ ಯಾಗಮಂಟಪದಲ್ಲಿ ಹೋಮ ವೇದಿಕೆಯು ಸ್ರುಕ್‌ಚಮಸಾದಿಗಳಿಂದಲೂ ಆಜ್ಯಸಮಿತ್ತುಗಳಿಂದಲೂ ದರ್ಭೆಗಳಿಂದಲೂ ಉಪಾಧ್ಯಾಯ ಪುರೋಹಿತರಿಂದಲೂ ಅಲಂಕರಿಸಲ್ಪಟ್ಟಿದ್ದಾಗಿರಲು ಆ ಹೋಮದಲ್ಲಿ ಯಜ್ಞ ಪುರುಷನು ಹವಿಸ್ಸುಗಳಿಂದ ಪ್ರಜ್ವಲಿಸುತ್ತಿದ್ದನು. ಆ ಪ್ರಕಾರದಲ್ಲಿ ಯಜ್ಞಕರ್ಮವು ಜರುಗುತ್ತಿರಲು ಅಂತರಿಕ್ಷಮಾರ್ಗದಲ್ಲಿ ಅತಿಭಯಂಕರವಾದ ಧ್ವನಿಯಾಯಿತು! ಕೂಡಲೆ ವರ್ಷಾಕಾಲದಲ್ಲಿ ಮೇಘಗಳು ಆಕಾಶವನ್ನು ಮುಚ್ಚುವ ರೀತಿಯಲ್ಲಿ ಮಾರೀಚ ಸುಬಾಹುಗಳೆಂಬ ರಾಕ್ಷಸರು ಗಗನಮಾರ್ಗವನ್ನು ಮಾಯೆಯಿಂದ ಮುಚ್ಚಿ ಆ ಯಾಗವನ್ನು ಕೆಡಿಸಬೇಕೆಂಬ ಬುದ್ಧಿಯಿಂದ ಆರ್ಭಟಿಸಿಕೊಂಡು ಬಂದು ಮಹಾಭಯಂಕರವಾದ ರಕ್ತಪ್ರವಾಹವನ್ನು ಕರೆದರು ಆಗ ಲಕ್ಷ್ಮಣಸಹಿತನಾಗಿ ಪುಂಡರೀಕಾಕ್ಷನಾದ ರಘುನಾಥನು ಪ್ರಜ್ವಲಿಸುತ್ತಿದ್ದ ಆ ಹೋಮವೇದಿಕೆಯಲ್ಲಿ ರಕ್ತ ಬೀಳುತ್ತಿರುವುದನ್ನು ಕಂಡು ಅತ್ಯಂತ ಕೋಪ ಯುಕ್ತನಾಗಿ ಅಂತರಿಕ್ಷಮಾರ್ಗದಲ್ಲಿದ್ದ ರಾಕ್ಷಸರನ್ನು ಕಂಡು ಲಕ್ಷ್ಮಣನನ್ನು ನೋಡಿ ಎಲೈ ಲಕ್ಷ್ಮಣ, ದುಷ್ಟರೂ ಕಾಮಚಾರಿಗಳೂ ಮಹಾಕ್ರೂರಕರ್ಮಿಗಳೂ ಮಾಂಸಭಕ್ಷಕರೂ ದೇವತೆಗಳಿಗೆ ಶತ್ರುಗಳೂ ಆಗಿರುವ ಈ ಯಜ್ಞಕ್ಕೆ ವಿಘ್ನವನ್ನು ಮಾಡುವ ರಾಕ್ಷಸರು ನಾನು ಪ್ರಯೋಗಿಸುವ ಮಾನವಾಸ್ತ್ರದಿಂದ, ಬಿರುಗಾಳಿಯಿಂದ ಮೇಘಗಳು ಚದರಿಹೋಗುವ ಹಾಗೆ ಕೆದರಿಹೋಗುತ್ತಾರೆ, ನೋಡು ಎಂದು ನುಡಿದನು. ಆ ರಾಕ್ಷಸರು ಸುವರ್ಣಮಯವಾದ ಬಿಲ್ಲನ್ನು ಧರಿಸಿಕೊಂಡು ಬಾಲಕನಾಗಿದ್ದ ರಘುನಾಥನನ್ನೂ ಹೆದೆಯೇರಿಸಿದ ಬಿಲ್ಲುಳ್ಳ ಲಕ್ಷ್ಮಣನನ್ನೂ ಅಂತರಿಕ್ಷಮಾರ್ಗದಿಂದ ನೋಡಿ, ಅವರು ತಮ್ಮನ್ನು ಎದುರಿಸಲಾರರೆಂದು ಬಗೆದು, ಲಕ್ಷ್ಯಮಾಡದೆ ಯಾಗಮಾಡುತ್ತಿದ್ದ ಬ್ರಾಹ್ಮಣರನ್ನು ಬೆದರಿಸಲು ಯತ್ನಿಸಿದರು ರಘುನಾಥನು ಮಾರೀಚ ಸುಬಾಹುಗಳೆಂಬ ರಾಕ್ಷಸರನ್ನು ಕಂಡು ನಗುತ್ತ ಲೀಲಾಮಾತ್ರದಿಂದ ಮಾನವಾಸ್ತ್ರವನ್ನು ಪ್ರಯೋಗಿಸಿದನು.

ಮುಂದುವರಿಯುವುದು...

# ಬೆಂಗಳೂರಿನ ರಸ್ತೆ 60 ದಿನ ಬಂದ್, ಪರ್ಯಾಯ ಮಾರ್ಗಗಳು

## ಕುಲದೀಪ್ ಕುಮಾರ್ ಆರ್. ಜೈನ್, ಉಪ ಪೊಲೀಸ್ ಆಯುಕ್ತರು, ಸಂಚಾರ ಪೂರ್ವ ವಿಭಾಗ ಬೆಂಗಳೂರು ನಗರ ಮಾಹಿತಿ

• ಉದಯವಾಹಿನಿ, ಬೆಂಗಳೂರು



ಉದಯವಾಹಿನಿ ಚಿತ್ರ

ಉದ್ಯಾನನಗರಿ ಬೆಂಗಳೂರಿನ ರಸ್ತೆಗಳಲ್ಲಿ ಆಗಾಗ ಸಂಚಾರ ಮಾರ್ಗ ಬದಲಾವಣೆ ಮಾಡಲಾಗುತ್ತದೆ. ಇದು ಕೆಲವು ತಾಸು ಅಥವ ದಿನಗಳಿಗೆ ಮಾತ್ರ ಸೀಮಿತವಾಗುತ್ತದೆ. ಆಗ ಪರ್ಯಾಯ ಮಾರ್ಗಗಳನ್ನು ಬಳಕೆ ಮಾಡಲು ವಾಹನ ಸವಾರರಿಗೆ ಸೂಚನೆ ನೀಡಲಾಗುತ್ತದೆ.

ಈಗ ನಗರದ ಸಂಚಾರಿ ಪೊಲೀಸರು ಪ್ರಕಟಣೆಯೊಂದನ್ನು ಹೊರಡಿಸಿದ್ದಾರೆ. ರಸ್ತೆಯೊಂದನ್ನು 60 ದಿನಗಳ ಕಾಲ ಬಂದ್ ಮಾಡಲಾಗುತ್ತಿದೆ ಎಂದು ಮಾಹಿತಿ ನೀಡಿದ್ದಾರೆ. ಈ ಕುರಿತು ಕುಲದೀಪ್ ಕುಮಾರ್ ಆರ್. ಜೈನ್, ಉಪ ಪೊಲೀಸ್ ಆಯುಕ್ತರು, ಸಂಚಾರ ಪೂರ್ವ ವಿಭಾಗ ಬೆಂಗಳೂರು ನಗರ ಮಾಹಿತಿ ನೀಡಿದ್ದಾರೆ. ರಸ್ತೆ ಬಂದ್ ಆಗುವ ಹಿನ್ನಲೆಯಲ್ಲಿ ವಾಹನ ಸವಾರರು ಪರ್ಯಾಯ ಮಾರ್ಗ ಬಳಕೆ ಮಾಡಬೇಕು ಎಂದು ಸೂಚಿಸಿದ್ದಾರೆ. ಸಾರ್ವಜನಿಕರು ಸಹಕಾರ ನೀಡಬೇಕು ಎಂದು ಕೋರಿದ್ದಾರೆ.

**ರಸ್ತೆಯೊಂದನ್ನು 60 ದಿನಗಳ ಕಾಲ ಬಂದ್**

2 : ಯಮಲೂರು ಕಡೆಯಿಂದ ಕಾಡುಬೀಸನಹಳ್ಳಿ ಮತ್ತು ದೇವರಬೀಸನಹಳ್ಳಿ ಕಡೆಗೆ ಸಂಚರಿಸುವವರು ಹಳೆ ವಿಮಾನ ನಿಲ್ದಾಣ ರಸ್ತೆ ಮಾರ್ಗವಾಗಿ ಯಮಲೂರು ಜಂಕ್ಷನ್-ಯಮಲೂರು ವಿಲೇಜ್ ಮಾರ್ಗವಾಗಿ ಯಮಲೂರು ಕೋಡಿಯಲ್ಲಿ ಎಡ ತಿರುವು ಪಡೆದು ಕರಿಯಮ್ಮನ ಅಗ್ರಹಾರ ಮೂಲಕ ಕಾಡುಬೀಸನಹಳ್ಳಿ ಮತ್ತು ದೇವರಬೀಸನಹಳ್ಳಿ ಕಡೆಗೆ ಸಂಚರಿಸಬಹುದಾಗಿರುತ್ತದೆ.

3 : ಯಮಲೂರು ಕಡೆಯಿಂದ ಹೊರವರ್ತುಲ ರಸ್ತೆ ಕಡೆಗೆ ಸಂಚರಿಸುವವರು ಹಳೆ ವಿಮಾನ ನಿಲ್ದಾಣ ರಸ್ತೆ- ಯಮಲೂರು ಜಂಕ್ಷನ್ - ಯಮಲೂರು ವಿಲೇಜ್ ಮೂಲಕ ಯಮಲೂರು ಕೋಡಿ ಬೆಳ್ಳಂದೂರು ಕೋಡಿ ಬಲ ತಿರುವು ಪಡೆದು ಬೆಳ್ಳಂದೂರು ವಿಲೇಜ್ ಮಾರ್ಗವಾಗಿ ಹೊರವರ್ತುಲ ರಸ್ತೆ ಕಡೆಗೆ ಸಂಚರಿಸಬಹುದಾಗಿರುತ್ತದೆ.

4: ದೇವರಬೀಸನಹಳ್ಳಿ ಮತ್ತು ಬೆಳ್ಳಂದೂರು ಕಡೆಯಿಂದ ನಗರದ ಕಡೆಗೆ ಸಂಚರಿಸುವವರು ಹೊರವರ್ತುಲ ರಸ್ತೆ ಕಾಡುಬೀಸನಹಳ್ಳಿ ಬ್ರಿಡ್ಜ್ ಮಾರತ್ತಹಳ್ಳಿ ಬ್ರಿಡ್ಜ್ ಮೇಲೆ ಎಡ ತಿರುವು ಪಡೆದು ಯಮಲೂರು ಜಂಕ್ಷನ್- ಹಳೆ ವಿಮಾನ ನಿಲ್ದಾಣ ರಸ್ತೆ ಮೂಲಕ ನಗರದ ಕಡೆಗೆ ಸಂಚರಿಸಬಹುದಾಗಿರುತ್ತದೆ.

> ಆದ್ದರಿಂದ ನವೆಂಬರ್ 5 ರಿಂದ 60 ದಿನಗಳ ಕಾಲ ಸಾರ್ವಜನಿಕರ ಮತ್ತು ವಾಹನ ಸವಾರರ ಹಿತದೃಷ್ಟಿಯಿಂದ ಈ ಕೆಳಕಂಡಂತೆ ಸಂಚಾರ ವ್ಯವಸ್ಥೆಯಲ್ಲಿ ಮಾರ್ಪಾಡು ಮಾಡಲಾಗಿರುತ್ತದೆ ಎಂದು ಹೇಳಿದ್ದಾರೆ. ವಾಹನ ಸಂಚಾರ ನಿರ್ಬಂಧಿಸಿರುವ ರಸ್ತೆಗಳು, ಪರ್ಯಾಯ ರಸ್ತೆಗಳ ವಿವರಗಳನ್ನು ನೀಡಲಾಗಿದೆ. ವಾಹನ ಸಂಚಾರವನ್ನು ದೇವರಬೀಸನಹಳ್ಳಿ ಸಕಾ ಆಸ್ಪತ್ರೆ ಮುಖ್ಯರಸ್ತೆ (ಮಿಂತ್ರಾ ಅಪಾರ್ಟ್‌ಮೆಂಟ್ ಮುಂಭಾಗದ ರಸ್ತೆಯಿಂದ ಬೆಳಂದೂರು ಕೋಡಿವರೆಗೆ) ನಿರ್ಬಂಧಿಸಲಾಗಿದೆ ಎಂದು ಪ್ರಕಟಣೆಯಲ್ಲಿ ಮಾಹಿತಿ ನೀಡಲಾಗಿದೆ.

5: ಕಾಡುಬೀಸನಹಳ್ಳಿ ಮತ್ತು ದೇವರಬೀಸನಹಳ್ಳಿ ಕಡೆಯಿಂದ ನಗರದ ಕಡೆಗೆ ಸಂಚರಿಸುವವರು ಕರಿಯಮ್ಮನ ಅಗ್ರಹಾರ - ಯಮಲೂರು ಕೋಡಿಯಲ್ಲಿ ಬಲ ತಿರುವು ಪಡೆದು ಯಮಲೂರು ವಿಲೇಜ್ ಮಾರ್ಗವಾಗಿ ಯಮಲೂರು ಜಂಕ್ಷನ್ - ಹಳೆ ವಿಮಾನ ನಿಲ್ದಾಣ ರಸ್ತೆ ಮಾರ್ಗವಾಗಿ ನಗರದ ಕಡೆಗೆ ಸಂಚರಿಸಬಹುದಾಗಿರುತ್ತದೆ.

5: ಹೊರವರ್ತುಲ ರಸ್ತೆ ಕಡೆಯಿಂದ ನಗರದ ಕಡೆಗೆ ಸಂಚರಿಸುವವರು ಬೆಳ್ಳಂದೂರು ವಿಲೇಜ್- ಬೆಳ್ಳಂದೂರು ಕೋಡಿ ಎಡ ತಿರುವು ಪಡೆದು ಯಮಲೂರು ಕೋಡಿ - ಯಮಲೂರು ವಿಲೇಜ್ ಮೂಲಕ ಯಮಲೂರು ಜಂಕ್ಷನ್ ಬಳಿ ಎಡ ತಿರುವು ಪಡೆದು ಹಳೆ ವಿಮಾನ ನಿಲ್ದಾಣ ರಸ್ತೆ ಮೂಲಕ ನಗರದ ಕಡೆಗೆ ಸಂಚರಿಸಬಹುದಾಗಿರುತ್ತದೆ.

### ಯಾವ ರಸ್ತೆ ಬಂದ್ ಆಗಲಿದೆ?

ಹೆಚ್‌ಎಎಲ್ ಏರ್‌ಪೋರ್ಟ್ ಸಂಚಾರ ಪೊಲೀಸ್ ಠಾಣಾ ವ್ಯಾಪ್ತಿಯ ದೇವರಬೀಸನಹಳ್ಳಿ ಸಕ್ರಾ ಆಸ್ಪತ್ರೆ ಮುಖ್ಯರಸ್ತೆ (ಮಿಂತ್ರಾ ಅಪಾರ್ಟ್‌ಮೆಂಟ್ ಮುಂಭಾಗದ ರಸ್ತೆಯಿಂದ ಬೆಳ್ಳಂದೂರು ಕೋಡಿವರೆಗೆ) ಬಿಬಿಎಂಪಿ ವತಿಯಿಂದ ವೈಟ್ ಟಾಪಿಂಗ್ ಕಾಮಗಾರಿ ಕೈಗೊಳ್ಳಲಾಗುತ್ತಿದೆ.ಯಮಲೂರು ಕಡೆಯಿಂದ ದೇವರಬೀಸನಹಳ್ಳಿ ಮತ್ತು ಬೆಳ್ಳಂದೂರು ಕಡೆಗೆ ಸಂಚರಿಸುವವರು ಹಳೆ ವಿಮಾನ ನಿಲ್ದಾಣ ರಸ್ತೆ-ಯಮಲೂರು ಜಂಕ್ಷನ್- ಮಾರತ್ತಹಳ್ಳಿ ಬ್ರಿಡ್ಜ್ -ಕಾಡುಬೀಸನಹಳ್ಳಿ ಬ್ರಿಡ್ಜ್- ಹೊರವರ್ತುಲ ರಸ್ತೆ ಮಾರ್ಗವಾಗಿ ದೇವರಬೀಸನಹಳ್ಳಿ ಮತ್ತು ಮತ್ತು ಬೆಳ್ಳಂದೂರು ಕಡೆಗೆ ಸಂಚರಿಸಬಹುದಾಗಿರುತ್ತದೆ.

## ಸಾಮಾಜಿಕ ಕಳಕಳಿ



ಹೆಚ್.ಎಸ್.ಪ್ರತಿಮಾ ಹಾಸನ್
ಸಾಹಿತಿ,ಶಿಕ್ಷಕಿ,ಸಾಮಾಜಿಕ ಚಿಂತಕಿ.ಹಾಸನ


ಉದಯವಾಹಿನಿ ಚಿತ್ರ

### ದಿನಕ್ಕೊಂದು ಮುಕ್ತಕ -16

ಬಲಿಯಾಗಿ ಸಂಸಾರದಲಿ ನಡೆಸೆ ಕರ್ತವ್ಯ
ತಲೆಗೊಂದು ಮಾತುಗಳು ಬರಲು ನಿನಗೆ
ಬೆಲೆಗಾಗಿ ಕಾಯದಿರು ಜನರ ಮೆಚ್ಚುಗೆಗಾಗಿ
ಫಲವಿರದು ನಿನಗಿನಿತು ಲಕ್ಷ್ಮಿದೇವಿ....

ಭಾವಾರ್ಥ : ಬಲಿಯಾಗದಲೇ ಪ್ರತಿಯೊಬ್ಬರು ಸಂಸಾರದಲ್ಲಿ ಯಾರು ಏನು ಹೇಳುತ್ತಾರೆ ಅದಕ್ಕೆ ಗೌರವವನ್ನು ನೀಡಿ. ಎಲ್ಲವನ್ನು ಕೇಳಿಕೊಂಡು ನಡೆಯಬಾರದು. ಒಳಿತಾದರೆ ಅದನ್ನು ಒಪ್ಪಿಕೊಂಡು ಮಾಡಬೇಕು. ಒಳಿತಿಲ್ಲದಿದ್ದರೆ ಅದನ್ನು ಬಿಟ್ಟು ಬಿಡಬೇಕು. ನಾವು ಮಾಡುವ ಕೆಲಸ ಹೊಗಳುವಂತೆ ಇರಬೇಕೆ ಹೊರತು ಬೈಯುವ ರೀತಿ ಇರಬಾರದು. ನಾವು ಇತರರ ಮಾತಿಗೆ ಬೆಲೆಯನ್ನು ಎಷ್ಟು ಕೊಡುತ್ತೇವೋ ಅಷ್ಟೇ ನಮ್ಮನ್ನು ಗೊಂಬೆಯ ರೀತಿ ಆಟ ಆಡಿಸುತ್ತಾರೆ. ತಲೆಗೆ ಒಬ್ಬೊಬ್ಬರಂತೆ ಮಾತುಗಳನ್ನು ಹೇಳುತ್ತಾ ಹೋಗುತ್ತಾರೆ. ಅವರ ಮಾತನ್ನು ಕೇಳಿದರೆ ಬೆಲೆಯನ್ನು ನೀಡುತ್ತಾರೆಂದು ಕಾಯುತ್ತ ನಿಂತರೆ ಜೀವನವು ಇತರರ ಮಾತಿನಂತೆ ನಡೆಯುತ್ತಲೇ ಹೋಗುತ್ತದೆ. ಎಂದಿಗೂ ಅದರ ಫಲವು ನಮಗೆ ಸಿಗದು. ಇದನ್ನು ಅರಿತು ನಮ್ಮ ಇಚ್ಛೆಯ ರೀತಿಯಲ್ಲಿ ಜೀವನವನ್ನು ಮಾಡಬೇಕು.

# ಲೇಖಕ ವಿಶ್ವಾಸ್. ಡಿ. ಗೌಡರಿಗೆ ರಾಜ್ಯೋತ್ಸವ ಸನ್ಮಾನ

• ಉದಯವಾಹಿನಿ, ಬೆಂಗಳೂರು


ಉದಯವಾಹಿನಿ ಚಿತ್ರ

ಸಕಲೇಶಪುರದ ಸುಭಾಷ್ ಕ್ರೀಡಾಂಗಣದಲ್ಲಿ ನಡೆದ ರಾಷ್ಟ್ರೀಯ ಹಬ್ಬಗಳ ಆಚರಣೆ ಸಮಿತಿ ಮತ್ತು ತಾಲ್ಲೂಕು ಆಡಳಿತ ವತಿಯಿಂದ ಆಯೋಜಿಸಲಾಗಿದ್ದ 69ನೇ ಕನ್ನಡ ರಾಜ್ಯೋತ್ಸವದ ವರ್ಣ ರಂಜಿತ ಸಮಾರಂಭದಲ್ಲಿ ಲೇಖಕ ವಿಶ್ವಾಸ್.ಡಿ. ಗೌಡರಿಗೆ ಜನಪ್ರಿಯ ಶಾಸಕ ಸಿಮೆಂಟ್ ಮಂಜು ರವರು ರಾಜ್ಯೋತ್ಸವ ಪ್ರಶಸ್ತಿ ನೀಡಿ ಗೌರವಿಸಿದರು .

ಸಕಲೇಶಪುರ ತಾಲ್ಲೂಕಿನ, ಹಾಸನ ಜಿಲ್ಲೆಯ ಬಹುಮುಖ ಪ್ರತಿಭೆಯಾದ ಸಾಹಿತಿ, ಲೇಖಕರು, ಉದ್ದಿಮೆದಾರರು, ಸಮಾಜ ಸೇವಕರು, ಕರ್ನಾಟಕ ರಾಜ್ಯ ಬರಹಗಾರರ ಸಂಘದ ಅಧ್ಯಕ್ಷರು (ಸಕಲೇಶಪುರ ತಾಲ್ಲೂಕು) ಸಾಹಿತ್ಯ ಸಿರಿ , ಸ್ವರ್ಣ ಸಿರಿ , ಕರ್ನಾಟಕ ಮುಕುಟಮಣಿ ಮುಂತಾದ ರಾಜ್ಯಮಟ್ಟದ ಅನೇಕ ಪ್ರಶಸ್ತಿಗಳನ್ನು ಪಡೆದು ಗುರುತಿಸಿಕೊಂಡಿರುವರು ರಾಜ್ಯದ ವಿವಿಧ ವೇದಿಗಳಲ್ಲಿ ವಿಶ್ವಾಸ್ .ಡಿ.ಗೌಡರವರು ಸಾಹಿತ್ಯ ಕ್ಷೇತ್ರದ ಛಾಪು ಮೂಡಿಸುತ್ತಿರುವುದು ಹೆಮ್ಮೆಯ ಸಂಗತಿ. ತಮ್ಮ ಬರಹದ ಮೂಲಕ ಹಾಗೂ ಕವನಗಳ ಮೂಲಕ ಮತ್ತು ಅನೇಕ ಸ್ಪರ್ಧಾತ್ಮಕ ವೇದಿಕೆಗಳಲ್ಲಿ ತಮ್ಮದೇ ಆದ ಪ್ರತಿಭೆಯನ್ನು ಪ್ರದರ್ಶಿಸುತ್ತಿದ್ದಾರೆ.

**ರಾಷ್ಟ್ರೀಯ ಹಬ್ಬಗಳ ಆಚರಣೆ**

ವೇದಿಕೆಯಲ್ಲಿ ತಾಲ್ಲೂಕು ಉಪವಿಭಾಗ ಅಧಿಕಾರಿ ಡಾ. ಶ್ರುತಿ ,ಪುರಸಭೆ ಅಧ್ಯಕ್ಷರಾದ ಜ್ಯೋತಿ ಜಗದೀಶ್, ಉಪಾಧ್ಯಕ್ಷರಾದ ಜರಿನ, ತಾಲ್ಲೂಕು ಕಸಾಪ ಅಧ್ಯಕ್ಷರಾದ ಶಾರದ ಗುರುಮೂರ್ತಿ, ತಾಲ್ಲೂಕು ಕಾರ್ಯ ನಿರ್ವಾಣಧಿಕಾರಿ ಗಂಗಾಧರ್, ಕ್ಷೇತ್ರ ಶಿಕ್ಷಣಾಧಿಕಾರಿ ಪುಷ್ಪ, ನಟರಾಜ್, ಪುರ ಸಭೆ ಸದಸ್ಯರಾದ ಮೋಹನ್, ವನಜಾಕ್ಷಿ, ಅನ್ನಪೂರ್ಣೇಶ್ವರಿ, ಇಬ್ರಾಹಿಂ ಸೇರಿದಂತೆ ಇತರರು ಇದ್ದರು.

# ನಗರ ಸ್ಥಳೀಯ ಸಂಸ್ಥೆಗಳ ಉಪ ಚುನಾವಣೆಗೆ ವೇಳಾಪಟ್ಟಿ ಪ್ರಕಟ

• ಉದಯವಾಹಿನಿ, ಬೆಂಗಳೂರು

ವಿವಿಧ ಕಾರಣಗಳಿಂದ ತೆರವಾಗಿರುವ ನಗರ ಸ್ಥಳೀಯ ಸದಸ್ಯರ ಸ್ಥಾನಗಳಿಗೆ ಬೆಂಗಳೂರು ನಗರ ಜಿಲ್ಲಾ ವ್ಯಾಪ್ತಿಯಲ್ಲಿರುವ ಹೆಬ್ಬಗೋಡಿ ನಗರ ಸಭೆ ವಾರ್ಡ್ ಸಂಖ್ಯೆ -27, ಆನೇಕಲ್ ಪುರಸಭೆ ವಾರ್ಡ್ ಸಂಖ್ಯೆ -22 ಮತ್ತು ಚಂದಾಪುರ ಪುರಸಭೆ ವಾರ್ಡ್ ಸಂಖ್ಯೆ -21ರಲ್ಲಿ ಉಪ ಚುನಾವಣೆ ನಡೆಯಲಿದ್ದು, ಚುನಾವಣೆ ವೇಳಾಪಟ್ಟಿಯನ್ನು ಪ್ರಕಟಿಸಲಾಗಿದೆ ಎಂದು ಬೆಂಗಳೂರು ನಗರ ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಚುನಾವಣಾಧಿಕಾರಿಗಳಾದ ಜಗದೀಶ.ಜಿ ಅವರು ತಿಳಿಸಿದ್ದಾರೆ.

ಆನೇಕಲ್ ತಾಲ್ಲೂಕು ವ್ಯಾಪ್ತಿಯಲ್ಲಿರುವ ಹೆಬ್ಬಗೋಡಿ ನಗರ ಸಭೆ ವಾರ್ಡ್ ಸಂಖ್ಯೆ -27 ರಲ್ಲಿ ಸಾಮಾನ್ಯ (ಮಹಿಳೆ) ಮೀಸಲಾತಿ, ಆನೇಕಲ್ ಪುರಸಭೆ ವಾರ್ಡ್ ಸಂಖ್ಯೆ -22ರಲ್ಲಿ ಸಾಮಾನ್ಯ ಹಾಗೂ ಚಂದಾಪುರ ಪುರಸಭೆ ವಾರ್ಡ್ ಸಂಖ್ಯೆ -21ರಲ್ಲಿ ಸಾಮಾನ್ಯ (ಮಹಿಳೆ) ರವರಿಗೆ ಮೀಸಲಾತಿ ನಿಗದಿಪಡಿಸಲಾಗಿದೆ.

ನವೆಂಬರ್ 04 ರಂದು ಜಿಲ್ಲಾಧಿಕಾರಿಗಳು ಚುನಾವಣಾ ಅಧಿಸೂಚನೆ ಹೊರಡಿಸಿದ್ದು, ಅಭ್ಯರ್ಥಿಗಳು ನಾಮಪತ್ರಗಳನ್ನು ನವೆಂಬರ್ 11 (ಸೋಮವಾರ) ರೊಳಗೆ ಸಲ್ಲಿಸಬಹುದು. ನವೆಂಬರ್ 12 ರಂದು (ಮಂಗಳವಾರ) ನಾಮಪತ್ರಗಳನ್ನು


ಉದಯವಾಹಿನಿ ಚಿತ್ರ

ಪರಿಶೀಲಿಸಲಾಗುವುದು. ಉಮೇದುವಾರಿಕೆಗಳನ್ನು ಹಿಂತೆಗೆದುಕೊಳ್ಳಲು ನವೆಂಬರ್ 14 (ಗುರುವಾರ) ಕೊನೆಯ ದಿನವಾಗಿರುತ್ತದೆ.

> ಮತದಾನ ಅವಶ್ಯವಿದ್ದರೆ ನವೆಂಬರ್ 23 ರಂದು (ಶನಿವಾರ) (ಬೆಳಿಗ್ಗೆ 7 ಗಂಟೆಯಿಂದ ಸಂಜೆ 5 ಗಂಟೆಯವರಿಗೆ) ಮತದಾನ ನಡೆಯಲಿದ್ದು. ಮರು ಮತದಾನ ಅವಶ್ಯವಿದ್ದರೆ ನವೆಂಬರ್ 25 ರಂದು (ಸೋಮವಾರ) (ಬೆಳಿಗ್ಗೆ 7 ಗಂಟೆಯಿಂದ ಸಂಜೆ 5 ಗಂಟೆಯವರಿಗೆ) ಮತದಾನ ನಡೆಸಬಹುದು. ನವೆಂಬರ್ 26 ರಂದು (ಮಂಗಳವಾರ) ಬೆಳಗ್ಗೆ 8 ಗಂಟೆಯಿಂದ ತಾಲ್ಲೂಕು ಕೇಂದ್ರಗಳಲ್ಲಿ ಮತಗಳ ಎಣಿಕೆ ನಡೆಯಲಿದೆ ಎಂದಿದ್ದಾರೆ.


# ಮಿಷನ್ ಶಕ್ತಿ ಯೋಜನೆಯಡಿ ವಿವಿಧ ಹುದ್ದೆಗಳ ನೇಮಕಾತಿಗೆ ಅರ್ಜಿ

• ಉದಯವಾಹಿನಿ, ಬೆಂಗಳೂರು

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ವತಿಯಿಂದ ಮಿಷನ್ ಶಕ್ತಿ ಯೋಜನೆಯಡಿಯಲ್ಲಿ ಹಣಕಾಸು ಸಾಕ್ಷರತೆ ಮತ್ತು ಅಕೌಂಟೆಟ್ ನಲ್ಲಿ ತಜ್ಞರು, ಪ್ರಧಾನಮಂತ್ರಿ ಮಾತೃವಂದನಾ ಯೋಜನೆಯ ಸಹಾಯಕ ಜಿಲ್ಲಾ ಸಂಯೋಜನಕರ ಹುದ್ದೆಗಳಿಗೆ ಹೊರಗುತ್ತಿಗೆ ಆಧಾರದ ಮೇಲೆ ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

**ವಿದ್ಯಾರ್ಹತೆ:** ಹಣಕಾಸು ಸಾಕ್ಷರತೆ ಮತ್ತು ಅಕೌಂಟೆಟ್‌ನಲ್ಲಿ ತಜ್ಞರ ಹುದ್ದೆಗೆ ಅರ್ಥಶಾಸ್ತ್ರ, ಬ್ಯಾಂಕಿಂಗ್ , ಇತರೆ ವಿಭಾಗಗಳಲ್ಲಿ ಪದವೀಧರರು, ಸ್ನಾತಕೋತ್ತರ ಪದವಿ ಹೊಂದಿದವರಿಗೆ ಅದ್ಯತೆ. ಸರ್ಕಾರಿ / ಸ್ವಯಂ ಸೇವಾ ಸಂಸ್ಥೆಗಳಲ್ಲಿ ಕನಿಷ್ಠ 03 ವರ್ಷಗಳ ಅನುಭವ ಹೊಂದಿರಬೇಕು. ಕಂಪ್ಯೂಟರ್ ಬಳಕೆಯಲ್ಲಿ, ಕನ್ನಡ / ಇಂಗ್ಲೀಷ್ ಬೆರಳಚ್ಚು, ಗೂಗಲ್ ಶೀಟ್ ಎಂ.ಎಸ್. ಆಫೀಸ್ ಹಾಗೂ ಪಿ.ಪಿ.ಟಿ ಯಲ್ಲಿ ಪ್ರಾವೀಣ್ಯತೆ ಹೊಂದಿರಬೇಕು.

ಪ್ರಧಾನಮಂತ್ರಿ ಮಾತೃವಂದನಾ ಯೋಜನೆಯ ಸಹಾಯಕ ಜಿಲ್ಲಾ ಸಂಯೋಜನಕರ ಹುದ್ದೆಗೆ ಕಂಪ್ಯೂಟರ್/ಐಟಿ ಇತ್ಯಾದಿಗಳಲ್ಲಿ ಕೆಲಸ ಮಾಡುವ ಜ್ಞಾನದೊಂದಿಗೆ ಪದವಿ ಹೊಂದಿರಬೇಕು. ಸರ್ಕಾರಿ / ಸ್ವಯಂ ಸೇವಾ ಸಂಸ್ಥೆಗಳಲ್ಲಿ ಕನಿಷ್ಠ 03 ವರ್ಷಗಳ ಅನುಭವ ಹೊಂದಿರಬೇಕು. ಕಂಪ್ಯೂಟರ್ ಬಳಕೆಯಲ್ಲಿ, ಕನ್ನಡ / ಇಂಗ್ಲೀಷ್ ಬೆರಳಚ್ಚು, ಗೂಗಲ್ ಶೀಟ್ ಎಂ.ಎಸ್. ಆಫೀಸ್ ಹಾಗೂ ಪಿ.ಪಿ.ಟಿ ಯಲ್ಲಿ ಪ್ರಾವೀಣ್ಯತೆ ಹೊಂದಿರಬೇಕು.




ಆಸಕ್ತ ಅಭ್ಯರ್ಥಿಗಳು ಉಪ ನಿರ್ದೇಶಕರವರ ಕಛೇರಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ,ಬೆಂಗಳೂರು ನಗರ ಜಿಲ್ಲೆ, ಸುಧಾರಣಾ ಸಂಸ್ಥೆಗಳ ಸಂಕೀರ್ಣ, ಡಾ.ಎಂ.ಹೆಚ್. ಮರಿಗೌಡ ರಸ್ತೆ, ಬೆಂಗಳೂರು -560029 ಇಲ್ಲಿಗೆ ತಮ್ಮ ವ್ಯಕ್ತಿಗತ ವಿವರ ವನ್ನು ಎಲ್ಲಾ ದಾಖಲೆಗಳೊಂದಿಗೆ ನವೆಂಬರ್ 23 ರೊಳಗೆ ಸಲ್ಲಿಸಬಹುದು.

> ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ: 080-26578688 ಗೆ ಸಂಪರ್ಕಿಸಬಹುದು ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವಿಜಯಪುರ ಕುಡಿಯುವ ನೀರಿನ ಯೋಜನೆಗೆ ಸರ್ಕಾರ ಒಪ್ಪಿಗೆ



ಉದಯವಾಹಿನಿ ಚಿತ್ರ

• ಉದಯವಾಹಿನಿ, ಬೆಂಗಳೂರು

ಉತ್ತರ ಕರ್ನಾಟಕದ ವಿವಿಧ ಪಟ್ಟಣಗಳಿಗೆ 135 ಎಲ್‌ಪಿಸಿಡಿ ಕುಡಿಯು ನೀರು ಪೂರೈಕೆಯ ಬೃಹತ್ ಯೋಜನೆಗೆ ರಾಜ್ಯ ಸರ್ಕಾರ ಮಂಗಳವಾರ ಒಪ್ಪಿಗೆ ನೀಡಿದೆ. ಬಹುಕೋಟಿ ವೆಚ್ಚದಲ್ಲಿ ಕಿಲೋ ಮೀಟರ್‌ಗಟ್ಟಲೇ ಪೈಪ್ ಲೈನ್ ಅಳವಡಿಕೆಗೆ ಹಾಗೂ ಯೋಜನೆ ತ್ವರಿತ ಅನುಷ್ಠಾನಕ್ಕೆ ಒಪ್ಪಿಗೆ ನೀಡಿದೆ ಎಂದು ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವ ಎಂ.ಬಿ. ಪಾಟೀಲ್ ಮಾಹಿತಿ ನೀಡಿದರು.

> ಈ ಯೋಜನೆಗೆ ಕುರಿತು ಪ್ಲಾನ್ ಮಾಡಿದ ಆರಂಭದಲ್ಲಿ ರೂ.32 ಕೋಟಿ ವೆಚ್ಚಕ್ಕೆ ಅಂದಾಜು ಮಾಡಲಾಗಿತ್ತು. ಕಾಮಗಾರಿ ವಿಳಂಬವಾದ ಕಾರಣ ಅಂದಾಜು ವೆಚ್ಚ ಹೆಚ್ಚಾಗಿ ರೂ.52 ಕೋಟಿಗೆ ಹೆಚ್ಚಳವಾಗಿದೆ. ಸದ್ಯ ಪರಿಷ್ಕೃತ ಅಂದಾಜು ವೆಚ್ಚಕ್ಕೂ ಹಣಕಾಸು ಇಲಾಖೆ ಒಪ್ಪಿಗೆ ನೀಡಿದೆ. ಶೀಘ್ರವೇ ಅಧಿಕಾರಿಗಳ ಮೇಲ್ವಿಚಾರಣೆಯಲ್ಲಿ ಕಾಮಗಾರಿ ಆರಂಭಿಸಲಾಗುತ್ತದೆ ಎಂದು ತಿಳಿಸಿದರು.

ವಿಧಾನಸೌಧದ ತಮ್ಮ ಕಚೇರಿಯಲ್ಲಿ ಮಂಗಳವಾರ ನಡೆದ ವಿಜಯಪುರ ನಗರ ಸೇರಿದಂತೆ ಜಿಲ್ಲೆಯ ವಿವಿಧ ತಾಲ್ಲೂಕು ಕೇಂದ್ರಗಳಲ್ಲಿನ ಕುಡಿಯುವ ನೀರು ಸರಬರಾಜು ಯೋಜನೆಗಳ ಪ್ರಗತಿ ಪರಿಶೀಲನಾ ಸಭೆ ನಡೆಸಿದರು. ಬಳಿಕ ಸುದ್ದಿಗಾರರಿಗೆ ಯೋಜನೆಗಳು, ಜಿಲ್ಲೆಯ ವ್ಯಾಪ್ತಿಯಲ್ಲಿ ಸರ್ಕಾರ ಕೈಗೊಂಡ ಪ್ಲಾನ್ ಬಗ್ಗೆ ತಿಳಿಸಿದರು. ಅಲಮಟ್ಟಿ ಹಿನ್ನೀರಿನಿಂದ ಕುಡಿಯುವ ನೀರನ್ನು ವಿಜಯಪುರ ನಗರಕ್ಕೆ ಪೂರೈಸುವ ಸುಮಾರು 10.8 ಕಿ.ಮೀ ಉದ್ದದ ಕೊಳವೆ ಮಾರ್ಗ ಶಿಥಿಲವಾಗಿದೆ. ಅದರ ದುರಸ್ತಿ ಅಗತ್ಯವಾಗಿದ್ದನ್ನು ಮನಗಂಡಿದ್ದೇನೆ. ಅದರ ಬದಲಾವಣೆಗೆ ರೂ.52 ಕೋಟಿ ವೆಚ್ಚದಲ್ಲಿ ಯೋಜನೆ ರೂಪಿಸಲಾಗಿದೆ. ಹೊಸ ಎಂ.ಎಸ್. ಪೈಪುಗಳನ್ನು ಅಳವಡಿಸಲಾಗುವುದು ಎಂದು ಅವರು ಮಾಹಿತಿ ನೀಡಿದರು. ಸದ್ಯ ವಿಜಯಪುರಕ್ಕೆ 43 ಕಿಲೋ ಮೀಟರ್ ದೂರದ ಕೊಲ್ಹಾರದಿಂದ ಕುಡಿಯುವ ನೀರು ಪೂರೈಕೆ ಮಾಡಲಾಗುತ್ತಿದೆ. ಈ ನೀರು ಪೂರೈಕೆ ಮಾರ್ಗದಲ್ಲಿ ಸುಮಾರು 10.8 ಕಿ.ಮೀ ಉದ್ದದ ಪಿ.ಎಸ್.ಸಿ ಕೊಳವೆ ಮಾರ್ಗವು ದುರಸ್ತಿ ಎದುರು ನೋಡುತ್ತಿದೆ. ಪರಿಣಾಮವಾಗಿ ಕುಡಿಯುವ ನೀರು ಸೋರಿಕೆಯಾಗಿ ಪೋಲಾಗುತ್ತಿದೆ. ಇದನ್ನು ಬದಲಿಸಲು ಹಲವು ವರ್ಷಗಳಿಂದ ಪ್ರಯತ್ನಿಸುತ್ತಿದ್ದರೂ ವಿವಿಧ ಕಾರಣಗಳಿಂದಾಗಿ ಸಾಧ್ಯವಾಗಿರಲಿಲ್ಲ.ಇದೀ ಸರ್ಕಾರ ಯೋಜನೆ ತ್ವರಿತ ಜಾರಿಗೆ ಒಪ್ಪಿಗೆ ನೀಡಿದೆ. ಅಗತ್ಯ ಅನುದಾನ ಒದಗಿಸಲು ರಾಜ್ಯ ಹಣಕಾಸು ಇಲಾಖೆಸ ಗ್ರೀನ್ ಸಿಗ್ನಲ್ ಕೊಟ್ಟಿದೆ ಎಂದು ಅವರು ವಿವರಿಸಿದರು.

# ಪ್ಲಾಸ್ಟಿಕ್ ಮಾರಾಟ ಮಾಡುವ ಗೋಡನ್, ಮಳಿಗೆಗಳಿಗೆ ಅನಿರೀಕ್ಷಿತ ಭೇಟಿ ನೀಡಿ 5500 ಕೆ.ಜಿ ಪ್ಲಾಸ್ಟಿಕ್ ಜಪ್ತಿ

• ಉದಯವಾಹಿನಿ, ಬೆಂಗಳೂರು

ನಗರದ ಬೊಮ್ಮನಹಳ್ಳಿ, ದಾಸರಹಳ್ಳಿ ಹಾಗೂ ಪಶ್ಚಿಮ ವಲಯ ವ್ಯಾಪ್ತಿಯಲ್ಲಿಂದು ಗೋಡನ್ ಹಾಗೂ ಮಳಿಗೆಗಳ ಮೇಲೆ ದಾಳಿ ನಡೆಸಿದ ವೇಳೆ 5500 ಕೆ.ಜಿ(5.5 ಮೆ.ಟ) ಒಮ್ಮೆ ಬಳಸುವ ಪ್ಲಾಸ್ಟಿಕ್ ಅನ್ನು ಪಾಲಿಕೆ ಜಪ್ತಿ ಮಾಡಿ 45,000 ದಂಡ ವಿಧಿಸಲಾಗಿದೆ. ಪಾಲಿಕೆ ವ್ಯಾಪ್ತಿಯಲ್ಲಿ ಬೆಂಗಳೂರು ಘನತ್ಯಾಜ್ಯ ನಿರ್ವಹಣಾ ನಿಯಮಿತದಿಂದ ಪ್ಲಾಸ್ಟಿಕ್ ಬಳಕೆ ಮಾಡುವ ಗೋಡನ್ ಹಾಗೂ ಅಂಗಡಿ-ಮುಂಗಟ್ಟುಗಳ ಮೇಲೆ ಆಗಿಂದ್ದಾಗ್ಗೆ ಅನಿರೀಕ್ಷಿತ ಭೇಟಿ ನೀಡಿ ದಾಳಿ ನಡೆಸಲಾಗುತ್ತಿದೆ. ಅದರಂತೆ ಇಂದು 3 ವಲಯಗಳಲ್ಲಿ ಪರಿಶೀಲನೆ ನಡೆಸಲಾಗಿದೆ.

**ದಾಸರಹಳ್ಳಿ ವಲಯ:** ದಾಸರಹಳ್ಳಿ ವಲಯ ರಾಜ್ ಗೋಪಾಲ್‌ನಗರ ವ್ಯಾಪ್ತಿಯಲ್ಲಿ ಪ್ಲಾಸ್ಟಿಕ್ ತಯಾರಿಕಾ ಗೋಡನ್ ಗೆ ಬಿ.ಎಸ್.ಡಬ್ಲ್ಯೂ.ಎಂ.ಎಲ್ ನ ಪ್ರಧಾನ ವ್ಯವಸ್ಥಾಪಕರಾದ ಬಸವರಾಜ್ ಕಬಾಡೆ ರವರ ನೇತೃತ್ವದಲ್ಲಿ ಇಂದು ಅನಿರೀಕ್ಷಿತ ಭೇಟಿ ನೀಡಿ ಪರಿಶೀಲನೆ ನಡೆಸಲಾಯಿತು. ಈ ವೇಳೆ ಒಮ್ಮೆ ಬಳಸುವ ಗಿಫ್ಟ್ ಪ್ಯಾಕಿಂಗ್


ಉದಯವಾಹಿನಿ ಚಿತ್ರ

ರಾಪರ್, ಹ್ಯಾಂಡ್ ಕವರ್, ಪ್ಲಾಸ್ಟಿಕ್ ಗ್ಲಾಸ್, ಸಿಲ್ವರ್ ಲೇಪಿತ ಪ್ಲೇಟ್, ಸಿಲ್ವರ್ ಕವರ್ ಮತ್ತು ಪ್ಲಾಸ್ಟಿಕ್ ರೋಲ್ ಸೇರಿದಂತೆ ಇನ್ನಿತರೆ 600 ಕೆ.ಜಿ ಪ್ಲಾಸ್ಟಿಕ್ ಅನ್ನು ವಶಪಡಿಸಿಕೊಂಡು 5000 ರೂ. ದಂಡ ವಿಧಿಸಲಾಯಿತು. ಅಲ್ಲದೇ ಮತ್ತೆ ಒಮ್ಮೆ ಬಳಸುವ ಪ್ಲಾಸ್ಟಿಕ್ ಬಳಕೆ ಮಾಡದಂತೆ ಕಟ್ಟೆಚ್ಚರಿಕೆ ನೀಡಲಾಗಿದೆ.

ಈ ವೇಳೆ ಉಪ ಪ್ರಧಾನ ವ್ಯವಸ್ಥಾಪಕರು ಹಾಗೂ ಸಹಾಯಕ ಪ್ರಧಾನ ವ್ಯವಸ್ಥಾಪಕರಾದ ಭೀಮೇಶ್, ಚೀಫ್ ಮಾರ್ಷಲ್, ಮಾರ್ಷಲ್‌ಗಳು ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

### ಬೊಮ್ಮನಹಳ್ಳಿ ವಲಯ

ಬೊಮ್ಮನಹಳ್ಳಿ ವಲಯ ಬೆಂಗಳೂರು ದಕ್ಷಿಣ ಸಿಂಗಸಂದ್ರ ವ್ಯಾಪ್ತಿಯಲ್ಲಿ ಇಂದು ಗೋಡನ್ ಗೆ ಅನಿರೀಕ್ಷಿತ ಭೇಟಿ ನೀಡಿ ಪರಿಶೀಲನೆ ನಡೆಸಿದ ವೇಳೆ 4,500 ಕೆ.ಜಿ ಒಮ್ಮೆ ಬಳಸುವ ಪ್ಲಾಸ್ಟಿಕ್ ಅನ್ನು ಪಾಲಿಕೆ ವಶಕ್ಕೆ ಪಡೆದು, ಗೋಡನ್ ಮಾಲೀಕರಿಗೆ 25000 ರೂ. ದಂಡ ವಿಧಿಸಲಾಗಿದೆ. ಮತ್ತೆ ಒಮ್ಮೆ ಬಳಸುವ ಪ್ಲಾಸ್ಟಿಕ್ ಬಳಕೆ ಮಾಡದಂತೆ ಕಟ್ಟೆಚ್ಚರಿಕೆ ನೀಡಲಾಗಿದೆ.

ಪಶ್ಚಿಮ ವಲಯ: ಪಶ್ಚಿಮ ವಲಯ ಕೆ.ಆರ್ ಮಾರುಕಟ್ಟೆ ವ್ಯಾಪ್ತಿಯಲ್ಲಿ ಇಂದು ಮಾರ್ಷಲ್ ಮೇಲ್ವಿಚಾರಕರು ಮತ್ತು ತಂಡದಿಂದ ಪ್ಲಾಸ್ಟಿಕ್ ವಶಪಡಿಸಿಕೊಳ್ಳುವ ಕಾರ್ಯಾಚರಣೆಯನ್ನು ನಡೆಸಿ 3 ಅಂಗಡಿಗಳಿಗೆ 15000 ರೂ. ದಂಡ ವಿಧಿಸಿ 300 ಕೆಜಿಯ ಪ್ಲಾಸ್ಟಿಕ್ ಅನ್ನು ವಶಪಡಿಸಿಕೊಳ್ಳಲಾಗಿದೆ.

# ಗ್ರಾಮಸ್ಥರಿಂದ ಪ್ರಾಥಮಿಕ ಶಾಲೆಯ ಮುಖ್ಯಗುರುಗಳಿಗೆ ತರಾಟೆ

## ಶಾಲೆ ಬಂದ್ ಮಾಡಿ ಪೋಷಕರಿಂದ ಪ್ರತಿಭಟನೆ, ಮುಖ್ಯಗುರು ಮೇಲೆ ಆರೋಪಗಳ ಸುರಿಮಳೆ..!

• ಉದಯವಾಹಿನಿ, ಕೆಂಭಾವಿ

ಸಮೀಪದ ಕರಡಕಲ್ ಗ್ರಾಮದ ನಮ್ಮೂರ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಪೋಷಕರಿಂದ ದೀಡಿರ ಪ್ರತಿಭಟನೆ ನಡೆಸಿದ ಘಟನೆ ಜರುಗಿದೆ ಶಾಲಾ ಮುಖ್ಯಗುರು ಮನೋಹರ ಪತ್ತಾರ ಅವರ ವಿರುದ್ಧವಾಗಿ ಪೋಷಕರು ಗರಂ ಆದ ಪ್ರಸಂಗ ನಡೆದು ಕೊನೆಗೆ ಪ್ರತಿಭಟನೆಗೆ ತಿರುಗಿ ಶಾಲೆಯ ಕೋಣೆಗಳನ್ನು ಬಂದ್ ಮಾಡುವ ಮೂಲಕ ಮಕ್ಕಳನ್ನು ಹೊರಗೆ ಕಳುಹಿಸಿ ಮುಖ್ಯಗುರುಗಳು ಶಾಲೆಯಿಂದ ವರ್ಗಾವಣೆ ಮಾಡಬೇಕೆಂದು ಪಟ್ಟು ಹಿಡಿದು ಪ್ರತಿಭಟನೆ ಮಾಡಿದ್ದಾರೆ.

ಇದರಿಂದ ವಿಷಯ ತಿಳಿದು ಸ್ಥಳಕ್ಕೆ ತಾಲ್ಲೂಕಾ ಶಿಕ್ಷಣಾಧಿಕಾರಿಗಳು, ಕೊಡೆಕಲ್ ಇಸಿಒ ಸೇರಿದಂತೆ ಅಧಿಕಾರಿಗಳು ಬೇಟಿ ನೀಡಿದರು ನಂತರ ಗ್ರಾಮಸ್ಥರ ಸಮಸ್ಯೆ ಆಲಿಸುವ ಕೆಲಸ ಮಾಡಿ ಸಮಾದಾನಗೊಳಿಸಲು ಮುಂದಾದ್ರೂ ಆದ್ರೆ ಅಧಿಕಾರಿಗಳ ಮಾತಿಗೆ ಒಪ್ಪದೆ ಮುಖ್ಯಗುರುಗಳು ಮಾಡುವ ಕೆಲಸವನ್ನು ತರಾಟೆ ತೆಗೆದುಕೊಂಡರು, ತಕ್ಷಣ ಅಮಾನತು ಮಾಡಬೇಕೆಂದು ಒತ್ತಾಯಿಸಿದರು ಕಳೆದ 27 ವರ್ಷದಿಂದ ಸೇವೆ ಸಲ್ಲಿಸುತ್ತಿದ್ದಾರೆ ಆದ್ರೆ ಇತ್ತಿಚ್ಚಿಗೆ ಮುಖ್ಯಗುರುಗಳು ಆದ ನಂತರ ಅವರ ವರ್ತನೆ ಬೇಸರ ತಂದಿದೆ ಅದಕ್ಕೆ ಬೇಡ ಸರ್ ಎಂದು ಶಿಕ್ಷಣಾಧಿಕಾರಿಗಳ ಮುಂದೆ ತಮ್ಮ ಅಳಲು ತೋಡಿಕೊಂಡರು ಇದರಿಂದ ಅಧಿಕಾರಿಗಳು ಗ್ರಾಮಸ್ಥರು ಮಾಡಿದ ಆರೋಪಗಳನ್ನು ಪಟ್ಟಿ ಮಾಡುವ ಮೂಲಕ ಶಿಕ್ಷಣ ಇಲಾಖೆಯ ಹಿರಿಯ ಅಧಿಕಾರಿಗಳ ಗಮನಕ್ಕೆ ತರುತ್ತೇನೆ ಎಂದು ಹೇಳಿದರು. ನಂತರ ಗ್ರಾಮಸ್ಥರು ಪ್ರತಿಭಟನೆ ಕೈಬಿಟ್ಟರು ಇದರಿಂದ ವಿದ್ಯಾರ್ಥಿಗಳ ಒಂದು ದಿನದ ಶಾಲೆ ಪ್ರತಿಭಟನೆಯಲ್ಲಿ ಮುಳುಗಿತ್ತು.

ಇದೇ ಸಂದರ್ಭದಲ್ಲಿ ಶಿಕ್ಷಣ ಇಲಾಖೆಯ ಶರಣಬಸವ, ಶಿವಪುತ್ರಪ್ಪ, ಸಿದ್ದರಾಮ ಕನ್ನೆಳ್ಳಿ ಹಾಗೂ ಗ್ರಾಮಸ್ಥರಾದ ಹಣಮಯ್ಯ ಗುತ್ತೆದಾರ, ಮಂಜುನಾಥ ಬಡಿಗೇರ, ಸದಾನಂದ ಕಟ್ಟಿಮನಿ, ಬಸವರಾಜ ಹಡಪದ, ಬೀಮಣ್ಣ ಬೇಟೆಗಾರ, ಸಿದ್ದು ಗುಡಿಮನಿ, ದೇವರಾಜ , ಮಾನಸಪ್ಪ, ಬಸವಣ್ಣೆಪ್ಪ ಮಾಳ್ಳಿಕರ, ಲಕ್ಷ್ಮಣ ಬಸರಿಗಿಡ, ಮರೆಪ್ಪ ಕಟ್ಟಿಮನಿ ಇದ್ದರು.






ಉದಯವಾಹಿನಿ ಚಿತ್ರ

**ಕರಡಕಲ್ ಗ್ರಾಮಸ್ಥರಿಂದ ಮುಖ್ಯಗುರುಗಳಿಗೆ ತರಾಟೆ**

**ಮಕ್ಕಳಿಗೆ ಉತ್ತಮ ಶಿಕ್ಷಣ ಕೊಡಬೇಕಾದ ಮುಖ್ಯಗುರುಗಳು ಶಾಲೆಗೂ ನನಗೂ ಸಂಬಂದವಿಲ್ಲ ಅಂತಾರೆ ,ಶಾಲೆಯಲ್ಲಿ ರಾಷ್ಟ್ರ ನಾಯಕರಿಗೆ ಅಗೌರವ ನೀಡಿದ್ದೀರಿ ಮಕ್ಕಳಿಲ್ಲದೆ ಹಾಜರಾತಿ ಹೆಚ್ಚು ಮಾಡುತ್ತೀರಿ ನಾವು ನಿಮ್ಮ ಕೈಯಲ್ಲಿ ಶಾಲೆ ಕಲಿತ್ತಿದ್ದೇವೆ ಆದ್ರೆ, ನಿಮ್ಮ ಸದ್ಯದ ವರ್ತನೆ ಸರಿಯಿಲ್ಲ ನೀವು ನಮ್ಮ ಶಾಲೆಗೆ ಬೇಡವೇ ಬೇಡ ಎಂದು ಅಧಿಕಾರಿಗಳ ಮುಂದೆ ಮುಖ್ಯಗುರು ಮನೋಹರ ಪತ್ತಾರ ವಿರುದ್ಧ ಅಸಮಾಧಾನ ಹೊರಹಾಕಿದರು.**

**ಶಾಲೆಯಲ್ಲಿರುವ ಸಮಸ್ಯೆಗಳ ಪಟ್ಟಿ ಮಾಡಲಾಗಿದೆ ಮತ್ತು ಇದಕ್ಕೆ ಸೂಕ್ತ ಕ್ರಮಕ್ಕಾಗಿ ಮೇಲಾಧಿಕಾರಿಗಳ ಗಮನಕ್ಕೆ ತರುತ್ತೇವೆ ಪೋಷಕರು ಕೂಡ ಶಾಲೆಯಲ್ಲಿ ಮಕ್ಕಳಿಗೆ ಉತ್ತಮ ಶಿಕ್ಷಣ ಕೊಡಲು ಸಹಕಾರ ಕೊಡಬೇಕು ಶಾಲೆಯ ವಾತವಾರಣ ಹಾಳು ಮಾಡಬಾರದು**

**-ಯಲ್ಲಪ್ಪ ಕಾಡ್ಲೂರ**
**ಕ್ಷೇತ್ರ ಶಿಕ್ಷಣಾಧಿಕಾರಿಗಳು ಸುರಪುರ.**

**ನಮ್ಮ ಕರಡಕಲ್ ಶಾಲೆಯಲ್ಲಿ ಮಕ್ಕಳಿಗೆ ಉತ್ತಮ ಶಿಕ್ಷಣ ಸೀಗುತ್ತಿಲ್ಲ ಮುಖ್ಯಗುರುಗಳ ವರ್ತನೆಯಿಂದ ಶಾಲೆ ವಾತವಾರಣ ಕೆಟ್ಟಿದೆ ಅದಕ್ಕೆ ವರ್ಗಾವಣೆ ಮಾಡಬೇಕು ಖಾಯಂ ಶಿಕ್ಷಕರನ್ನು ನಿಯೋಜಿಸಿ ಮಕ್ಕಳ ವಿದ್ಯಾಬ್ಯಾಸದ ಕಡೆ ಶಿಕ್ಷಣ ಇಲಾಖೆ ಗಮನವಹಿಸಿಬೇಕು**

**-ಮಂಜುನಾಥ**
**ಪೋಷಕರು ಕರಡಕಲ್**

# ಗ್ರಾ. ಪಂ. ಇಒ ಚಂದ್ರಶೇಖರ ಭೇಟಿ ಕಾಮಗಾರಿಗಳ ಪರಿಶೀಲನೆ

• ಉದಯವಾಹಿನಿ, ಸಿಂಧನೂರು



ಉದಯವಾಹಿನಿ ಚಿತ್ರ

ಮುಂದಿನ ಪರೀಕ್ಷೆಗೆ ಶಾಲಾ ಮಕ್ಕಳೊಂದಿಗೆ ಚೆನ್ನಾಗಿ ವಿದ್ಯಾಬ್ಯಾಸ ಮಾಡಿ ಉತ್ತಮ ರೀತಿಯ ಅಂಕಗಳನ್ನು ಪಡೆಯಬೇಕು ಎಂದು ತಿಳಿಸಿದರು.

ತಾಲ್ಲೂಕಿನ ಚನ್ನಳ್ಳಿ ಗ್ರಾಮ ಪಂಚಾಯಿತಿಗೆ ತಾಲ್ಲೂಕು ಪಂಚಾಯತಿಯ ಕಾರ್ಯನಿರ್ವಾಹಕ ಅಧಿಕಾರಿ ಚಂದ್ರಶೇಖರ ಅವರು ಮಂಗಳವಾರ ಚನ್ನಳ್ಳಿ, ಸಿಂದ್ರಾಪುರ ಗ್ರಾಮ ಪಂಚಾಯತಿಗಳಿಗೆ ಭೇಟಿ ನೀಡಿದರು. ನಂತರ ಚನ್ನಳ್ಳಿ ಗ್ರಾಮ ಪಂಚಾಯತಿ ಕಾರ್ಯಾಲಯ, ಸರಕಾರಿ ಹಿರಿಯ ಪ್ರಾಥಮಿಕ ಶಾಲೆಗೆ ಹೋಗಿ ಹೈಟೆಕ್ ಶೌಚಾಲಯ, ಕಾಂಪೌಂಡ್ ಮೆಟ್ಟಿಂಗ್ ರಸ್ತೆಸಿಸಿ. ರಸ್ತೆ ಕಾಮಗಾರಿಗಳನ್ನು ಪರಿಶೀಲನೆ ಮಾಡಿ ನಂತರ ಯಾವುದೇ ಕಾಮಗಾರಿಗಳು ಕಳಪೆ ಯಾಗದೆ ಗುಣಮಟ್ಟದ ಕಾಮಗಾರಿಗಳು ಕೆಲಸ ಆಗಬೇಕು ಎಂದು ಹೇಳಿದರು. ಶಾಲಾ ಮಕ್ಕಳೊಂದಿಗೆ ಎಸ್ಎಸ್ಎಲ್ಸಿ ಮುಂದಿನ ಪರೀಕ್ಷೆಗೆ ಶಾಲಾ ಮಕ್ಕಳೊಂದಿಗೆ ಚೆನ್ನಾಗಿ ವಿದ್ಯಾಭ್ಯಾಸ ಮಾಡಿ. ಉತ್ತಮ ರೀತಿಯ ಅಂಕಗಳನ್ನು ಪಡೆಯಬೇಕೆಂದು ಸಲಹೆ ನೀಡಿದರು.

ಬಿಸಿ ಊಟದ ಕೊಠಡಿಗೆ ಹೋಗಿ ಸ್ವಚ್ಛತೆ ಹಾಗೂ ಮಾಡಿರುವ ಅಡಿಗೆಯ ಗುಣ ಮಟ್ಟವನ್ನು ಪರೀಕ್ಷಿಸಿದರು.

ಈ ಸಂದರ್ಭದಲ್ಲಿ ಪಿಡಿಒ, ಅಂದಾನಪ್ಪ. ಶಾಲಾ ಶಿಕ್ಷಕ ಮಂಜುನಾಥ, ತಾಂತ್ರಿಕ ಸಂಯೋಜಕರು ಮಹಿಬೂಬ್, ಎಂಐಎಸ್ ಸಂಯೋಜಕರು ವೀರೇಶ್ ಗ್ರಾ.ಪಂ. ಸಿಬ್ಬಂದಿ ಇದ್ದರು.

# ಈ ಬಾರಿ ಕೋಟೇಶ್ವರಕ್ಕಿಂತ ಮೊದಲು ಉಪ್ಪುಂದ ರಥೋತ್ಸವ

• ಉದಯವಾಹಿನಿ, ಉಪ್ಪುಂದ

ಉಪ್ಪುಂದ ಶ್ರೀ ದುರ್ಗಾಪರಮೇಶ್ವರೀ ದೇವಸ್ಥಾನದ ವಾರ್ಷಿಕ ಉತ್ಸವ ನ. 11ರಿಂದ ಆರಂಭಗೊಳ್ಳಲಿದ್ದು, ನ. 16ರಂದು ಮನ್ಮಹಾರಥೋತ್ಸವ ನೆರವೇರಲಿದೆ.

ಈ ವರ್ಷಂಪ್ರತಿ ವೃಶ್ಚಿಕ ಮಾಸದ ಕೃಷ್ಣ ಪಕ್ಷದ ಪಾಡ್ಯ ಈ ಮನ್ಮಹಾ ರಥೋತ್ಸವವು ನಡೆಯಲಿದ್ದು, ಈ ಬಾರಿ ನ. 16ರಂದು ಕೃಷ್ಣ ಪಕ್ಷದ ವೃಶ್ಚಿಕ ಸಂಕ್ರಾಂತಿ ಬಂದಿರುವುದರಿಂದ ಅದೇ ದಿನ ಮನ್ಮಹಾ ರಥೋತ್ಸವವು ನಡೆಸುವುದು ಸೂಕ್ತ ಕ್ರಮ ಎಂದು ಆ ದಿನ ಆಚರಿಸಲು ನಿಶ್ಚಯಿಸಲಾಗಿದೆ.

ಸಾಮಾನ್ಯವಾಗಿ ಕೋಟೇಶ್ವರದ ಕೋಟಿಲಿಂಗೇಶ್ವರ ದೇವಳದ ರಥೋತ್ಸವದ ಮರುದಿನ ಇಲ್ಲಿನ ರಥೋತ್ಸವ ನಡೆಯುತ್ತದೆ ಎಂಬ ಪ್ರತೀತಿಯಿದೆ, ಆದರೆ ಸುಮಾರು 35 ವರ್ಷದ ಬಳಿಕ ಈ ಬಾರಿ ಉಪ್ಪುಂದ ಶ್ರೀ ದುರ್ಗಾಪರಮೇಶ್ವರೀ ದೇಗುಲದ ಮನ್ಮಹಾ ರಥೋತ್ಸವವು, ಕೋಟೇಶ್ವರದ ರಥೋತ್ಸವಕ್ಕಿಂತ ಮೊದಲು ನಡೆಯುತ್ತಿದೆ ಎಂದು ಹೇಳಲಾಗಿದೆ.

# ಪ್ರಚಾರಕ್ಕೆ ಮಕ್ಕಳ ಬಳಕೆ; ಕಣ್ಮುಚ್ಚಿ ಕುಳಿತ ಅಧಿಕಾರಿಗಳು

• ಉದಯವಾಹಿನಿ, ಹಾವೇರಿ



ಉದಯವಾಹಿನಿ ಚಿತ್ರ

ಶಿಗ್ಗಾವಿ ವಿಧಾನಸಭಾ ಕ್ಷೇತ್ರದ ಉಪಚುನಾವಣೆಯಲ್ಲಿ ಅಭ್ಯರ್ಥಿಗಳ ಪ್ರಚಾರಕ್ಕಾಗಿ ಮಕ್ಕಳನ್ನು ಬಳಕೆ ಮಾಡಿಕೊಳ್ಳಲಾಗುತ್ತಿದ್ದು, ತಪ್ಪಿತಸ್ಥರ ವಿರುದ್ಧ ಕ್ರಮ ಜರುಗಿಸಬೇಕಾದ ಅಧಿಕಾರಿಗಳು ಕಣ್ಮುಚ್ಚಿ ಕುಳಿತಿರುವುದು ಜನರ ಆಕ್ರೋಶಕ್ಕೆ ಕಾರಣವಾಗಿದೆ.

ಕ್ಷೇತ್ರದಲ್ಲಿ ಕಾಂಗ್ರೆಸ್, ಬಿಜೆಪಿ ಹಾಗೂ ಇತರೆ ಅಭ್ಯರ್ಥಿಗಳು ಬಿರುಸಿನ ಪ್ರಚಾರ ನಡೆಸುತ್ತಿದ್ದಾರೆ.

ಪ್ರಚಾರ ನಡೆಸುವ ಸ್ಥಳಗಳಲ್ಲಿ ಪಾದಯಾತ್ರೆ ಹಾಗೂ ರ್ಯಾಲಿ ಹಮ್ಮಿಕೊಳ್ಳುತ್ತಿದ್ದಾರೆ. ಈ ಸಂದರ್ಭದಲ್ಲಿ ಪಕ್ಷದ ಧ್ವಜಗಳನ್ನು ಹಿಡಿದುಕೊಳ್ಳಲು, ಕರಪತ್ರಗಳನ್ನು ಹಂಚಲು ಮಕ್ಕಳನ್ನು ಬಳಕೆ ಮಾಡಿಕೊಳ್ಳಲಾಗುತ್ತಿದೆ. ಶಿಗ್ಗಾವಿ ಹಾಗೂ ಸವಣೂರು ತಾಲ್ಲೂಕಿನ ಬಹುತೇಕ ಹಳ್ಳಿಗಳಲ್ಲಿ ಅಭ್ಯರ್ಥಿಗಳು ನಿತ್ಯವೂ ಪ್ರಚಾರ ಮಾಡುತ್ತಿದ್ದಾರೆ. ತೆರೆದ ವಾಹನಗಳಲ್ಲಿ ಸುತ್ತಾಡಿ ಭಾಷಣ ಮಾಡಿ ಮತಯಾಚಿಸುತ್ತಿದ್ದಾರೆ. ಇಂಥ ಅಭ್ಯರ್ಥಿಗಳ ಜೊತೆಯಲ್ಲಿ ಮಕ್ಕಳು ಹೆಚ್ಚಿನ ಸಂಖ್ಯೆಯಲ್ಲಿ ಕಂಡು ಬರುತ್ತಿದ್ದಾರೆ. ವಿಡಿಯೋ ಹಾಗೂ ಫೋಟೊ ಪುರಾವೆಗಳಿದ್ದರೂ ವಿಚಕ್ಷಣಾ ದಳದ (ಎಫ್ಎಸ್‌ಟಿ) ತಂಡದ ಅಧಿಕಾರಿಗಳು ಮೌನವಾಗಿದ್ದಾರೆ' ಎಂದು ಜನರು ಆಕ್ರೋಶ ವ್ಯಕ್ತಪಡಿಸುತ್ತಿದ್ದಾರೆ.

**ಅಭ್ಯರ್ಥಿಗಳ ಚಿಹ್ನೆಯ ಟೋಪಿ ಧರಿಸುವ ಮಕ್ಕಳು, ಕೊರಳಲ್ಲಿ ಪಕ್ಷದ ಶಾಲು ಹೊತ್ತುಕೊಂಡು ಮೆರವಣಿಗೆಯಲ್ಲಿ ಭಾಗವಹಿಸುತ್ತಿದ್ದಾರೆ. ಅವರ ಕಡೆಯಿಂದ ಅಭ್ಯರ್ಥಿಗಳ ಪರವಾಗಿ ಜೈಕಾರ ಹಾಕಿಸಲಾಗುತ್ತಿದೆ. ಈ ಎಲ್ಲಾ ದೃಶ್ಯಗಳು ವಿಡಿಯೊದಲ್ಲಿ ಸೆರೆಯಾಗುತ್ತಿವೆ. ಸಾಮಾಜಿಕ ಮಾಧ್ಯಮಗಳಲ್ಲಿಯೂ ವಿಡಿಯೊ–ಫೋಟೊಗಳು ಹರಿದಾಡುತ್ತಿವೆ.**

# ಬಹುಮನಿ ಕೋಟೆಗೂ ವಕ್ಫ್ ಮೊಹರು

• ಉದಯವಾಹಿನಿ, ಬೀದರ್



ಉದಯವಾಹಿನಿ ಚಿತ್ರ

ರೈತರ ಜಮೀನುಗಳ ಬೆನ್ನಲ್ಲೇ ಈಗ ಕೇಂದ್ರ ಪುರಾತತ್ವ ಇಲಾಖೆಗೆ ಸೇರಿದ ಬೀದರ್‌ನ ಬಹುಮನಿ ಕೋಟೆಯ ಸೋಲಾಹ ಕಂಬ್ ಸ್ಮಾರಕ ಕೂಡ ವಕ್ಫ್ ಆಸ್ತಿಯಾಗಿ ಪರಿವರ್ತನೆ ಆಗಿರುವುದು ಬೆಳಕಿಗೆ ಬಂದಿದೆ.

ಏಷ್ಯಾದ ಅತಿ ದೊಡ್ಡ ಕೋಟೆ ಎಂಬ ಹೆಗ್ಗಳಿಕೆಯ ಬಹುಮನಿ ಕೋಟೆಯನ್ನು ವಕ್ಫ್ ಆಸ್ತಿ ಎಂದು ವರ್ಗಾಯಿಸಿಕೊಳ್ಳಲಾಗಿದೆ.

ಅಷ್ಟೇ ಅಲ್ಲ ಇಲ್ಲಿನ ಕೆಲವು ಗುಂಬಜ್‌ಗಳ ಮೇಲೂ ವಕ್ಫ್ ತನ್ನ ಹಕ್ಕು ಸಾಧಿಸಿದೆ. ಬಹುಮನಿ ಅರಸರು 1427ರಲ್ಲಿ ನಿರ್ಮಿಸಿರುವ ಬೀದರ ಕೋಟೆಯನ್ನು 1951ರ ನ. 29ರಂದು ಸಂರಕ್ಷಿತ ಆಸ್ತಿ ಎಂದು ಗೆಜೆಟ್ ಆಫ್ ಇಂಡಿಯಾದಲ್ಲಿ ಪ್ರಕಟಿಸಲಾಗಿದೆ. ಆದರೆ ಈಗ ಕೋಟೆಯ ಆಸ್ತಿ 2005ರಲ್ಲಿಯೇ ವಕ್ಫ್‌ಗೆ ಸೇರಿದೆ ಎಂದು ಅಧಿಸೂಚನೆ ಹೊರಬಿದ್ದಿದೆ. ಈ ಬಗ್ಗೆ ಸಂಬಂಧಪಟ್ಟ ಇಲಾಖೆಯಿಂದ ಮಾಹಿತಿ ತಿಳಿದುಕೊಳ್ಳುತ್ತೇನೆ ಎಂದು ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ ತಿಳಿಸಿದ್ದಾರೆ. ಸ್ಮಾರಕವನ್ನು ವಕ್ಫ್ ಆಸ್ತಿ ಎಂದು ವಕ್ಫ್ ಇಲಾಖೆ ಅಧಿಸೂಚನೆ ಹೊರಡಿಸಿದೆ. ಆದರೆ ಆಸ್ತಿಯ ಬಗ್ಗೆ ಯಾವುದೇ ದಾಖಲಾತಿ ಇಲ್ಲ ಎಂದು ಬೀದರ್ ಪುರಾತತ್ವ ಇಲಾಖೆಯ ಸಹಾಯಕ ಸರ್ವೇಕ್ಷಣಾಧಿಕಾರಿ ಅನಿರುದ್ಧ ದೇಸಾಯಿ ತಿಳಿಸಿದ್ದಾರೆ.

# ನಿರ್ಜನ ಪ್ರದೇಶದಲ್ಲಿ ಎಸೆದ ನವಜಾತ ಶಿಶುವನ್ನು ಬದುಕಿಸಲು ಪೊಲೀಸರ ಪರದಾಟ

• ಉದಯವಾಹಿನಿ, ವಾಡಿ



ಉದಯವಾಹಿನಿ ಚಿತ್ರ

**ನಾಯಿ ಹಂದಿಗಳ ಪಾಲಾಗುತ್ತಿದ್ದ ಶಿಶು**

ಕೈ ಚೀಲದಲ್ಲಿ ಹಾಕಿ ಮುಳ್ಳುಕಂಠಿಗಳ ನಡುವೆ ಎಸೆದು ಹೋದ ನವಜಾತ ಶಿಶುವನ್ನು ಬದುಕಿಸಲು ಪೊಲೀಸರು, ಆಶಾ ಹಾಗೂ ಅಂಗನವಾಡಿ ಕಾರ್ಯಕರ್ತೆಯರು ಸರ್ಕಾರಿ ಆಸ್ಪತ್ರೆಯಲ್ಲಿ ಪರದಾಡಿದ ಪ್ರಸಂಗ ಮಂಗಳವಾರ ಚಿತ್ತಾಪುರ ತಾಲ್ಲೂಕಿನ ವಾಡಿ ಪಟ್ಟಣದಲ್ಲಿ ನಡೆದಿದೆ. ಹೆತ್ತ ಕೆಲವೇ ಕ್ಷಣದಲ್ಲಿ ತನ್ನ ಹಸುಗೂಸನ್ನು ನಾಯಿ ಹಂದಿಗಳಿರುವ ತಾಣದಲ್ಲಿ ಎಸೆದು ಹೋದ ಹೆತ್ತಮ್ಮಳೊಬ್ಬಳ ಮೃಗೀಯ ಮನಸ್ಥಿತಿ ಅನಾವರಣಗೊಂಡಿದ್ದು, ಜನಾಕ್ರೋಶಕ್ಕೆ ಗುರಿಯಾಗಿದೆ. ಪಟ್ಟಣದ ರೆಸ್ಟ್ ಕ್ಯಾಂಪ್ ತಾಂಡಾದ ಜನ ವಸತಿ ಪ್ರದೇಶದ ಬಹಿರ್ದೆಸೆ ತಾಣದಲ್ಲಿ ಕೇಸರಿಬಾಯಿ ಎಂಬುವವರಿಗೆ ಹೆಣ್ಣು ಶಿಶು ಕಣ್ಣಿಗೆ ಬಿದ್ದಿದೆ. ತಕ್ಷಣ ಬಡಾವಣೆಯ ಆಶಾ ಕಾರ್ಯಕರ್ತೆ ಹಾಗೂ ಸಮೀಪದ ಪೊಲೀಸ್ ಠಾಣೆಗೆ ದೂರು ನೀಡಿ ಮಗುವನ್ನು ಆಸ್ಪತ್ರೆಗೆ ಸಾಗಿಸುವಲ್ಲಿ ಸಹಾಯ ಮಾಡಿದ್ದಾರೆ.

ನಾಯಿ, ಹಂದಿಗಳ ಪಾಲಾಗುತ್ತಿದ್ದ ಶಿಶುವನ್ನು ರಕ್ಷಿಸಿ ಸರ್ಕಾರಿ ಆಸ್ಪತ್ರೆಗೆ ತಂದರೆ ಅಲ್ಲಿ ವೈದ್ಯರು ಹಾಗೂ ನರ್ಸ್‌ಗಳು ಇಲ್ಲದಿರುವುದು ಪೊಲೀಸರ ಪರದಾಟಕ್ಕೆ ಕಾರಣವಾಯಿತು.

ನಂತರ ತಾಲ್ಲೂಕ ಆರೋಗ್ಯ ಅಧಿಕಾರಿಯನ್ನು ಸಂಪರ್ಕಿಸಿದ ಪೊಲೀಸರು ಮಗುವಿನ ರಕ್ಷಣೆಗೆ ಮನವಿ ಮಾಡಿದರು.ಬಳಿಕ ಬಂದ ವೈದ್ಯರು ಶಿಶುವಿನ ಆರೋಗ್ಯ ತಪಾಸಣೆ ನಡೆಸಿ ಚಿಕಿತ್ಸೆ ನೀಡಿದ್ದಾರೆ. ಪತ್ತೆಯಾದ ನವಜಾತ ಶಿಶುವನ್ನು ಕಲಬುರ್ಗಿ ಅಮೂಲ್ಯ ಶಿಶುವಿಹಾರಕ್ಕೆ ಕಳಿಸಿ ಕೊಡಲಾಗಿದ್ದು, ಮಗುವನ್ನು ದತ್ತು ಪಡೆಯಲು ಅನೇಕರು ಮುಂದೆ ಬಂದಿದ್ದಾರೆ. ಈ ಕುರಿತು ವಾಡಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಮಣ್ಣಿನ ಒಳ ರಸ್ತೆಗಳಿಗೆ ಬೇಕು ಬೀದಿದೀಪ



ಉದಯವಾಹಿನಿ ಚಿತ್ರ

• ಉದಯವಾಹಿನಿ, ಕೆಪಿಟಿ

ವ್ಯಾಸನಗರ ಪ್ರದೇಶದಲ್ಲಿ ಬೀದಿ ದೀಪಗಳನ್ನು ಅಳವಡಿಸದ ಕಾರಣ ರಾತ್ರಿ ವೇಳೆ ಸಂಚಾರಕ್ಕೆ ಸಮಸ್ಯೆ ಯಾಗುತ್ತಿದೆ ಎಂದು ಸ್ಥಳೀಯರು ಆರೋಪಿಸಿದ್ದರು. ಇದೀಗ ರಸ್ತೆ ಬದಿಯ ಸುಮಾರು 10ರಷ್ಟು ವಿದ್ಯುತ್ ಕಂಬಗಳಿಗೆ ಬೀದಿ ದೀಪಗಳನ್ನು ಅಳವಡಿಸಲಾಗಿದೆ. ಆ ಮೂಲಕ ಜನರ ಸಮಸ್ಯೆ ತಕ್ಕಮಟ್ಟಿಗೆ ಪರಿಹಾರವಾಗಿದೆ.

ಆದರೆ ಒಳ ಪ್ರದೇಶದ ಮಣ್ಣಿನ ರಸ್ತೆ ಇರುವಲ್ಲಿ ಇನ್ನಷ್ಟೇ ಬೀದಿ ದೀಪಗಳನ್ನು ಅಳವಡಿಸಬೇಕಾಗಿದೆ. ಶೀಘ್ರ ಇಲ್ಲಿನ ಕಂಬಗಳಲ್ಲಿಯೂ ದೀಪಗಳನ್ನು ಹಾಕಿ ರಾತ್ರಿ ಸಂಚಾರಕ್ಕೆ ವ್ಯವಸ್ಥೆ ಮಾಡಬೇಕು ಎಂದು ಸ್ಥಳೀಯರು ಆಗ್ರಹಿಸಿದ್ದಾರೆ. ಬೆಳಕಿಲ್ಲದೆ ರಾತ್ರಿ ವೇಳೆ ನಡೆದು ಕೊಂಡು ಹೋಗುವವರಿಗೆ ಸಮಸ್ಯೆಯಾಗುತ್ತಿದೆ. ಕೆಲವು ಕಡೆಗಳಲ್ಲಿ ಅನೈತಿಕ ಚಟುವಟಿಕೆಗಳೂ ನಡೆಯುತ್ತಿದೆ. ಬೆಳಕು ಇಲ್ಲದಿರುವುದು ಅಂತಹವರಿಗೆ ಲಾಭವಾಗಿ ಪರಿಣಮಿಸಿದೆ. ಆದ್ದರಿಂದ ಬಾಕಿ ಇರುವಲ್ಲಿಯೂ ಶೀಘ್ರ ಬೀದಿ ದೀಪದ ವ್ಯವಸ್ಥೆ ಮಾಡಬೇಕು ಎಂದು ಸ್ಥಳೀಯರು ಆಗ್ರಹಿಸಿದ್ದಾರೆ.

# ಶಾಸಕ ಬಸನಗೌಡ ಪಾಟೀಲ ಯತ್ನಾಳ ಅಹೋರಾತ್ರಿ ಧರಣಿ

• ಉದಯವಾಹಿನಿ, ವಿಜಯಪುರ



ಉದಯವಾಹಿನಿ ಚಿತ್ರ

ವಕ್ಫ್ ಅವಾಂತರದ ವಿರುದ್ಧ ಸಿಡಿದೆದ್ದಿರುವ ಬಿಜೆಪಿ ವಿಜಯಪುರದಲ್ಲಿ ಕಿಸಾನ್ ಸಂಘದ ನೇತೃತ್ವದಲ್ಲಿ ಅಹೋರಾತ್ರಿ ಧರಣಿ ಆರಂಭಿಸಿದೆ. ವಿಜಯಪುರ ಮತ್ತು ಬಾಗಲಕೋಟೆ ಜಿಲ್ಲೆಯ ಸುಮಾರು 35 ಸ್ವಾಮೀಜಿಗಳು ಸಾಥ್ ನೀಡಿದ್ದು ಪ್ರತಿಭಟನೆ ಮತ್ತಷ್ಟು ಕಾವೇರಿದೆ.

ನಗರದ ಸಿದ್ಧೇಶ್ವರ ದೇವಸ್ಥಾನದ ಆವರಣದಲ್ಲಿ ನಡೆದ ಪ್ರತಿಭಟನೆಯ ವೇದಿಕೆಯಲ್ಲಿ ಕನೇರಿ ಮಠದ ಅದೃಶ್ಯ ಕಾಡಸಿದ್ದೇಶ್ವರ ಸ್ವಾಮೀಜಿ, ಕೂಡಲಸಂಗಮದ ಪಂಚಮಸಾಲಿ ಸಮಾಜದ ಬಸವಜಯ ಮೃತ್ಯುಂಜಯ ಸ್ವಾಮೀಜಿ, ಜ್ಞಾನ ಯೋಗಾಶ್ರಮದ ಬಸವಲಿಂಗ ಸ್ವಾಮೀಜಿ, ಪಂಚಮಸಾಲಿ ಜಗದ್ಗುರು ಡಾ. ಮಹಾದೇವ ಶಿವಾಚಾರ್ಯರು, ಯರನಾಳ ವಿರಕ್ತಮಠದ ಗುರು ಸಂಗನಬಸವ ಶಿವಾಚಾರ್ಯರು, ಬುರಾಣಪುರದ ಯೋಗೇಶ್ವರಿ ಮಾತಾಜಿ ಸೇರಿದಂತೆ ಹಲವು ಸ್ವಾಮೀಜಿಗಳು ಇದ್ದರು. ವೇದಿಕೆ ಕೆಳಗೆ ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ, ಸಂಸದರಾದ ರಮೇಶ ಜಿಗಜಿಣಗಿ, ವಿಶ್ವೇಶ್ವರ ಹೆಗಡೆ ಕಾಗೇರಿ, ಶಾಸಕ ಬಸನಗೌಡ ಪಾಟೀಲ ಯತ್ನಾಳ ಸೇರಿದಂತೆ ಮುಖಂಡರು ಕುಳಿತಿದ್ದರು. ಕನೇರಿ ಶ್ರೀ, ಜಯಮೃತ್ಯುಂಜಯ ಶ್ರೀಗಳು ವಕ್ಫ್ ವಿರುದ್ಧ ಗುಡುಗಿ, ರೈತರ ಹೋರಾಟಕ್ಕೆ ಸಂಪೂರ್ಣ ಬೆಂಬಲ ನೀಡುವುದಾಗಿ ಘೋಷಿಸಿದ್ದಾರೆ.

ವಕ್ಫ್ ಕುರಿತ ಎಲ್ಲಾ ಗೆಜೆಟ್‌ಗಳನ್ನು ರದ್ದು ಮಾಡಬೇಕು. ಸಚಿವ ಜಮೀರ್ ಅಹ್ಮದ್ ರಾಜೀನಾಮೆ ಪಡೆಯಬೇಕು. ವಕ್ಫ್ ಕಾಯ್ದೆ ಸಂಪೂರ್ಣ ತೊಲಗಬೇಕು ಎಂದು ಆಗ್ರಹಿಸಿದರು. ಯತ್ನಾಳ ಅಹೋ ರಾತ್ರಿ ಧರಣಿ ಮುಂದುವರಿಸಿದ್ದಾರೆ.

# ಬಿಟ್ಟು ಹೋಗಿದ್ದ 1.20 ಲಕ್ಷ ರೂ. ಹಿಂದಿರುಗಿಸಿ ಮಾನವೀಯತೆ ಮೆರೆದ ಶಾಸಕ

• ಉದಯವಾಹಿನಿ, ದಾವಣಗೆರೆ



ಉದಯವಾಹಿನಿ ಚಿತ್ರ

ಮಗನ ಕಾಲೇಜು ಶುಲ್ಕ ಕಟ್ಟಲು ಬಂದು ಜ್ಯೂಸ್ ಅಂಗಡಿಯಲ್ಲಿ ಬಿಟ್ಟು ಹೋಗಿದ್ದ 1.20 ಲಕ್ಷ ರೂಪಾಯಿಗಳನ್ನು ಮಾಯಕೊಂಡ ಶಾಸಕ ಕೆ.ಎಸ್.ಬಸವಂತಪ್ಪ ಹಿಂದಿರುಗಿಸಿ ಮಾನವೀಯತೆ ಮೆರೆದಿದ್ದಾರೆ. ಹಾವೇರಿ ಜಿಲ್ಲೆಯ ರಾಣೆಬೇನ್ನೂರು ಮೂಲದ ಕಿರಾಣಿ ಅಂಗಡಿ ಮಾಲಿಕ ವೆಂಕಟೇಶ್ ಎಂಬುವವರು ಮಗನನ್ನು ದಾವಣಗೆರೆ ನಗರದ ಶಿರಮಗೊಂಡನಹಳ್ಳಿ ಬಳಿ ಇರುವ ಆನ್ ಮೋಲ್ ಕಾಲೇಜಿಗೆ ಸೇರಿಸಿದ್ದು, ಸೋಮವಾರ ಸಂಜೆ 7.30ರ ಸುಮಾರಿನಲ್ಲಿ 1.20 ಲಕ್ಷ ರೂ. ಕಾಲೇಜು ಶುಲ್ಕ ಕಟ್ಟಲು ಕಾರಿನಲ್ಲಿ ದಾವಣಗೆರೆಗೆ ಬಂದಿದ್ದಾರೆ. ರಾಂ ಅಂಡ್ ಕೋ ವೃತ್ತದಲ್ಲಿರುವ ರಸವಂತಿ ಜ್ಯೂಸ್ ಸೆಂಟರ್ ಗೆ ಜ್ಯೂಸ್ ಕುಡಿಯಲು ಕಾರಿನಲ್ಲಿಟ್ಟಿದ್ದ ಹಣ ಇರುವ ಬ್ಯಾಗ್ ತೆಗೆದುಕೊಂಡು ಹೋಗಿದ್ದಾರೆ. ಹಣದ ಬ್ಯಾಗ್ ಟೇಬಲ್ ಮೇಲೆ ಇಟ್ಟು ಜ್ಯೂಸ್ ಕುಡಿದಿದ್ದಾರೆ. ಬಳಿಕ ಹಣದ ಬ್ಯಾಗ್ ಟೇಬಲ್ ಮೇಲೆ ಬಿಟ್ಟು ಕಾಲೇಜಿಗೆ ಹೋಗಿದ್ದಾರೆ.

ಕಾಲೇಜು ಶುಲ್ಕ ಕಟ್ಟಲು ಕಾರಿನಲ್ಲಿ ಇಟ್ಟಿದ್ದೇನೆ ಎಂದು ಭಾವಿಸಿದ್ದ ವೆಂಕಟೇಶ್ ಅವರು ಹಣದ ಬ್ಯಾಗ್ ಹುಡುಕಾಡಿದ್ದಾರೆ. ಆದರೆ ಹಣದ ಬ್ಯಾಗ್ ಕಾರಿನಲ್ಲಿ ಇರಲಿಲ್ಲ. ಆಗ ಕಾಲೇಜಿಗೆ ಬರುವ ಮಾರ್ಗ ಮಧ್ಯೆ ಜ್ಯೂಸ್ ಸೆಂಟರ್‌ಗೆ ಹೋಗಿ ಜ್ಯೂಸ್ ಕುಡಿದು ಬಂದಿದ್ದನ್ನು ನೆನಪಿಸಿಕೊಂಡಿದ್ದಾರೆ.

ಅಷ್ಟರಲ್ಲಿ ಜ್ಯೂಸ್ ಕುಡಿಯಲು ಅದೇ ಸಮಯಕ್ಕೆ ಬಂದ ಶಾಸಕ ಕೆ.ಎಸ್.ಬಸವಂತಪ್ಪ, ಟೇಬಲ್ ಮೇಲೆ ಬಿಟ್ಟು ಹೋಗಿದ್ದ ಹಣದ ಬ್ಯಾಗನ್ನು ತೆಗೆದು ನೋಡಿದಾಗ ಬ್ಯಾಗ್‌ನಲ್ಲಿ ಹಣ ಇರುವುದು ಪತ್ತೆಯಾಗಿದೆ. ಯಾರೋ ಹಣ ಬಿಟ್ಟು ಹೋಗಿದ್ದಾರೆ ಎಂದು ಶಾಸಕ ಬಸವಂತಪ್ಪ, ಜ್ಯೂಸ್ ಸೆಂಟರ್ ಮಾಲಕ ಮತ್ತು ಜನರ ಎದುರು ಹಣವನ್ನು ಎಣಿಸಿದ್ದಾರೆ. ಅಗ ಬ್ಯಾಗ್ ನಲ್ಲಿ 1.20 ಲಕ್ಷ ರೂ. ಇತ್ತು. ಕೂಡಲೇ ಈ ಹಣ ಯಾರದೂ ಎಂದು ಗೊತ್ತಾಗುವವರೆಗೂ ನನ್ನ ಬಳಿ ಇರುತ್ತದೆ. ಅವರು ಬಂದ ಮೇಲೆ ಫೋನ್ ಮಾಡಿ ಎಂದು ಶಾಸಕರು ಜ್ಯೂಸ್ ಸೆಂಟರ್ ಮಾಲೀಕನಿಗೆ ಹೇಳಿ ಪದ್ದು ಕಾಫಿ ಬಾರ್ ಬಳಿ ಇದ್ದರು.

ಹಣ ಕಳೆದುಕೊಂಡಿದ್ದ ವೆಂಕಟೇಶ್ ಗೂಗಲ್ ನಲ್ಲಿ ಜ್ಯೂಸ್ ಸೆಂಟರ್ ದೂರವಾಣಿ ಸಂಖ್ಯೆ ಹುಡುಕಿ ಫೋನ್ ಮಾಡಿ ವಿಚಾರಿಸಿದ್ದಾರೆ. ಹಣದ ಬ್ಯಾಗ್ ಸಿಕ್ಕಿದೆ ಎಂದು ಜ್ಯೂಸ್ ಸೆಂಟರ್ ಮಾಲಿಕ ಮಾಹಿತಿ ನೀಡಿದ್ದಾರೆ. ನಂತರ ಹಣ ಕಳೆದುಕೊಂಡ ವ್ಯಕ್ತಿ ಬರುತ್ತಿದ್ದಾರೆ ಎಂದು ಜ್ಯೂಸ್ ಸೆಂಟರ್ ಮಾಲೀಕ ಶಾಸಕರಿಗೆ ತಿಳಿಸಿದ್ದಾರೆ. ಪದ್ದು ಕಾಫಿ ಬಾರ್ ಬಳಿಯಿದ್ದ ಶಾಸಕರು ಜ್ಯೂಸ್ ಸೆಂಟ ರ್‌ಗೆ ಬಂದಿದ್ದಾರೆ. ವೆಂಕಟೇಶ್ ಅಲ್ಲಿಗೆ ಬಂದಿದ್ದಾರೆ.


**ಬ್ಯಾಗಿನಲ್ಲಿ ಎಷ್ಟು ಹಣ ಇತ್ತು ಎಂದು ಕೇಳಿದಾಗ 1.30 ಲಕ್ಷ ರೂ. ಇತ್ತು ಎಂದು ಹೇಳಿದ್ದಾರೆ. ಆಗಾದರೆ ಈ ಹಣ ನಿನ್ನದಲ್ಲ. ಏಕೆಂದರೆ ಈ ಬ್ಯಾಗಿನಲ್ಲಿ 1.20 ಲಕ್ಷ ರೂ. ಇರುವುದನ್ನು ನಾನೇ ಸಾರ್ವಜನಿಕರ ಮುಂದೆ ಎಣಿಸಿದ್ದೇನೆ. ಹೀಗಾಗಿ ಇದು ನಿಮ್ಮದಲ್ಲ, ಬೇರೆ ಯಾರದೋ ಇರಬಹುದು ಎಂದು ಶಾಸಕರು ಹೇಳಿದ್ದಾರೆ. ಆಗ ಇಲ್ಲ ಸರ್ ಬಾಗಿನಲ್ಲಿ 1.20 ಲಕ್ಷ ರೂ. ಇತ್ತು. ನನ್ನ ಮಗ ಆನ್ ಮೋಲ್ ವಸತಿ ಕಾಲೇಜಿನಲ್ಲಿ ಓದುತ್ತಿದ್ದಾನೆ. ಕಾಲೇಜು ಶುಲ್ಕ ಕಟ್ಟಲು ತಂದಿದ್ದೆ ಎಂದು ಹೇಳಿದ್ದಾನೆ. ಸುಳ್ಳು ಏಕೆ ಹೇಳಿದೆ, ನಿನ್ನಂಗೆ ಇನ್ನೊಬ್ಬರು ಕಳೆದುಕೊಂಡಿರಬಹುದು. ಇನ್ನು ಹತ್ತು ಸಾವಿರ ನಾನು ತೆಗೆದುಕೊಂಡಿದ್ದೇನೆ ಎಂಬರ್ಥವಾಗುತ್ತದೆ ಎಂದು ಹಣ ಕಳೆದುಕೊಂಡ ಮಾಲಿಕನಿಗೆ ನೀತಿ ಪಾಠ ಮಾಡಿ ಹಣವನ್ನು ಹಿಂದಿರುಗಿಸಿ ಮಾನವೀಯತೆ ಮೆರೆದು ಸಾರ್ವಜನಿಕರ ಪ್ರಶಂಸೆಗೆ ಪಾತ್ರರಾಗಿದ್ದಾರೆ.**

**ಹಣ ಶಾಸಕರ ಕೈಗೆ ಸಿಕ್ಕು, ಹಣ ಕಳೆದುಕೊಂಡ ವ್ಯಕ್ತಿಗೆ ಹಿಂದಿರುಗಿಸಿದರು. ಅದೇ ಹಣ ಬೇರೆ ವ್ಯಕ್ತಿಗಳಿಗೆ ಸಿಕ್ಕಿದ್ದರೆ, ಮಗನ ಕಾಲೇಜು ಶುಲ್ಕ ಕಟ್ಟಲು ತಂದಿದ್ದ ಹಣ ಕಂಡವರ ಪಾಲಾಗುತ್ತಿತ್ತು ಎಂದು ಸ್ಥಳದಲ್ಲಿ ಇದ್ದ ಸಾರ್ವಜನಿಕರು ಮಾತನಾಡಿಕೊಳ್ಳುತ್ತಿರುವುದು ಕಂಡು ಬಂತು.**

# ಬೊಮ್ಮಾಯಿ ಅವರ ಮಗನಿಗೆ ಓಟು ಕೇಳಲು ಯಾವ ನೈತಿಕತೆ ಇದೆ?

## ಯಡಿಯೂರಪ್ಪ ಅವರನ್ನು ರಾಜಕೀಯವಾಗಿ ಮುಗಿಸಲು ಬಸವರಾಜ ಬೊಮ್ಮಾಯಿ ಪ್ಲಾನ್ ಮಾಡಿದ್ರು?: ಅಚ್ಚರಿ ಸಂಗತಿ ಬಹಿರಂಗ

• ಉದಯವಾಹಿನಿ, ಹಾವೇರಿ



ಉದಯವಾಹಿನಿ ಚಿತ್ರ

ಯಡಿಯೂರಪ್ಪ ಅವರನ್ನು ರಾಜಕೀಯವಾಗಿ ಮುಗಿಸಲು ಬಸವರಾಜ ಬೊಮ್ಮಾಯಿ ಪ್ಲಾನ್ ಮಾಡಿದ್ದರು. ಅದಕ್ಕೇ ಜೊತೆಯಲ್ಲಿದ್ದೇ ಯಡಿಯೂರಪ್ಪ ಅವರಿಗೆ ಟಾಂಗ್ ಕೊಟ್ಟರು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಅಚ್ಚರಿ ಸಂಗತಿಯನ್ನ ಬಹಿರಂಗ ಪಡಿಸಿದ್ದಾರೆ. ಶಿಗ್ಗಾಂವಿ ವಿಧಾನಸಭಾ ಕ್ಷೇತ್ರದ ಚಂದಾಪುರದಲ್ಲಿ ಕಾಂಗ್ರೆಸ್ ಅಭ್ಯರ್ಥಿ ಪರ ಗೆಲುವಿಗೆ ಪ್ರಚಾರದ ಭಾಷಣದಲ್ಲಿ ಮಾತನಾಡಿದ ಅವರು, ಮೋದಿ ಮಹಾನ್ ಸುಳ್ಳುಗಾರ ಎಂದು ಹೆಚ್.ಡಿ.ಕುಮಾರಸ್ವಾಮಿ ಹೇಳಿದ್ದರು. ಮೋದಿ ಮತ್ತೆ ಪ್ರಧಾನಿ ಆದರೆ ದೇಶ ಬಿಟ್ಟು ಹೋಗ್ತೀನಿ ಎಂದು ದೇವೇಗೌಡರು ಹೇಳಿದ್ದರು. ಈಗ ಇಬ್ಬರೂ ಬಾಯಿ ಬಾಯಿ ಆಗಿದ್ದಾರೆ ಎಂದರು.

ಕ್ಷೇತ್ರದ ಸರ್ವತೋಮುಖ ಅಭಿವೃದ್ಧಿಗೆ ಅಭ್ಯರ್ಥಿಯನ್ನು ಆರಿಸುವ ಮತ್ತೊಂದು ಅವಕಾಶ ಶಿಗ್ಗಾವಿ ಕ್ಷೇತ್ರದ ಜನತೆಗೆ ಸಿಕ್ಕಿದೆ. ಇಲ್ಲಿನ ಬಿಜೆಪಿ ಅಭ್ಯರ್ಥಿ ಅತ್ಯಂತ ಶ್ರೀಮಂತ ಕುಟುಂಬದಿಂದ ಬಂದವರು. ಅವರಿಗೆ ಹಳ್ಳಿ ಬದುಕು ಗೊತ್ತಿಲ್ಲ. ಬಡವರ ಬದುಕು ಗೊತ್ತಿಲ್ಲ. ಆದರೆ ಕಾಂಗ್ರೆಸ್ ಅಭ್ಯರ್ಥಿ ಅತ್ಯಂತ ಸಾಮಾನ್ಯ ಕುಟುಂಬದಿಂದ ಬಂದು ಬಡವರ ಕಷ್ಟ, ಸುಖ ಗೊತ್ತಿರುವವರು. ಇವರನ್ನು ಗೆಲ್ಲಿಸಿ ಕ್ಷೇತ್ರದ ಅಭಿವೃದ್ಧಿಗೆ ಸಹಕಾರಿ ಆಗುತ್ತದೆ ಎಂದು ಹೇಳಿದರು.

ನರೇಂದ್ರ ಮೋದಿ ಕುಟುಂಬ ರಾಜಕಾರಣದ ಬಗ್ಗೆ ಭರ್ಜರಿ ಭಾಷಣ ಮಾಡ್ತಾರೆ. ಆದರೆ ಇಲ್ಲಿ ಮಾಜಿ ಮುಖ್ಯಮಂತ್ರಿಯ ಮೊಮ್ಮಗ, ಮಾಜಿ ಮುಖ್ಯಮಂತ್ರಿಯ ಮಗನಿಗೆ ಟಿಕೆಟ್ ನೀಡಿದ್ದಾರೆ.

ಇದು ಕುಟುಂಬ ರಾಜಕಾರಣ ಅಲ್ಲವೇ ಮೋದಿ ಯವರೇ? ನಾನು ನಾಡಿನ ಜನತೆಯ ಪ್ರೀತಿ, ಆಗ್ರಹಗಳಿಗೆ ಬಗ್ಗುತ್ತೇನೆಯೇ ಹೊರತು, ಬಿಜೆಪಿ ಮತ್ತು ದೇವೇಗೌಡರ ಷಡ್ಯಂತ್ರಗಳಿಗೆ ಬಗ್ಗದೂ ಇಲ್ಲ. ಜಗ್ಗದೂ ಇಲ್ಲ. ಎಲ್ಲಿಯವರೆಗೂ ರಾಜ್ಯದ ಜನರ ಆಶೀರ್ವಾದ ಇರುತ್ತದೋ ಅಲ್ಲಿಯವರೆಗೂ ನಾನು ಬಿಜೆಪಿ ಕುತಂತ್ರಗಳಿಗೆ ಬಗ್ಗುವುದಿಲ್ಲ.

ನಮ್ಮ ಸರ್ಕಾರ ಐದು ಗ್ಯಾರಂಟಿಗಳ ಮೂಲಕ ಇಡೀ ರಾಜ್ಯದ ಮಹಿಳೆಯರಿಗೆ ಆರ್ಥಿಕ ಶಕ್ತಿ ನೀಡಿದ್ದೇವೆ. ಎಲ್ಲಾ ಜಾತಿಯ, ಎಲ್ಲಾ ಧರ್ಮದ ಬಡವರ ಖಾತೆಗಳಿಗೆ ನೇರವಾಗಿ 56 ಸಾವಿರ ಕೋಟಿ ರೂಪಾಯಿಯನ್ನು ಹಾಕಿದ್ದೇವೆ.

ಬಸವರಾಜ ಬೊಮ್ಮಾಯಿಯನ್ನು ಶಕುನಿ ಎಂದು ಈಗಷ್ಟೆ ಎಲ್ಲಾ ಹೇಳಿದರು. ಒಳ ಒಪ್ಪಂದ ಮಾಡಿಕೊಂಡು ರಾಜ ಕಾರಣ ಮಾಡುವ ಬೊಮ್ಮಾಯಿ ಅಂತವರು ರಾಜಕಾರಣದಲ್ಲಿ ಇರಬಾರದು. ಆದ್ದರಿಂದ ಪಠಾಣ್ ಅವರನ್ನು ಗೆಲ್ಲಿಸಿ ಕಳುಹಿಸಿ. ಅಜ್ಜಂಪೀರ್ ಖಾದ್ರಿ ಅವರಿಗೂ ಒಳ್ಳೆಯ ಅವಕಾಶ ಕಲ್ಪಿಸುತ್ತೇನೆ. ಸೂರ್ಯ ಚಂದ್ರ ಇರುವುದು ಎಷ್ಟು ಸತ್ಯವೋ, ಈ ಬಾರಿ ಶಿಗ್ಗಾಂವಿಯಲ್ಲಿ ಕಾಂಗ್ರೆಸ್ ಗೆಲ್ಲುವುದು ಅಷ್ಟೇ ಸತ್ಯ. ಇಲ್ಲಿ ಕಾಂಗ್ರೆಸ್ ಗೆದ್ದರೆ ನನಗೆ, ನನ್ನ ಸರ್ಕಾರಕ್ಕೆ ಹೆಚ್ಚಿನ ಶಕ್ತಿ ಬರುತ್ತದೆ ಎಂದರು.

**ನಾವು ಹಿಂದೆಯೂ ಅಷ್ಟೆ, ಈಗಲೂ ಅಷ್ಟೆ. ನುಡಿದಂತೆ ನಡೆದಿದ್ದೇವೆ. ಜನರಿಗೆ ಕೊಟ್ಟ ಭರವಸೆ ಈಡೇರಿಸಿದ್ದೇವೆ. ನುಡಿದಂತೆ ನಡೆದ ನೈತಿಕತೆ ಆಧಾರದಲ್ಲಿ ಮತ್ತೆ ಜನರ ಬಳಿಗೆ ಬಂದು ಮತ ಕೇಳುತ್ತಿದ್ದೇವೆ. ಬಸವರಾಜ ಬೊಮ್ಮಾಯಿ ಅವರು ಅವರ ಮಗನಿಗೆ ಓಟು ಕೇಳಲು ಯಾವ ನೈತಿಕತೆ ಇದೆ ಎಂದು ಪ್ರಶ್ನಿಸಿದರು. ಮಾತೆತ್ತಿದರೆ ದಮ್ಮು, ತಾಖತ್ತು ಎನ್ನುವ ಬೊಮ್ಮಾಯಿ ಅವರು ಮುಖ್ಯಮಂತ್ರಿಯಾಗಿ ರಾಜ್ಯಕ್ಕಾಗಲಿ, ಕ್ಷೇತ್ರಕ್ಕಾಗಲಿ ಏನು ಕೊಟ್ಟಿದ್ದಾರೆ ಹೇಳಿ**

**-ಸಿದ್ದರಾಮಯ್ಯ, ಸಿಎಂ**

### ನನ್ನನ್ನು ಕೆಳಗಿಳಿಸಲು ಯತ್ನ

**40 ವರ್ಷಗಳಿಂದ ನಾನು ಮಂತ್ರಿಯಾಗಿದ್ದೀನಿ. ಮುಖ್ಯಮಂತ್ರಿಯಾಗಿದ್ದೀನಿ. ಸಣ್ಣ ಕಪ್ಪು ಚುಕ್ಕೆ ಕೂಡ ನನ್ನ ಮೇಲಿಲ್ಲ. ಆದರೂ ನನ್ನ ಪತ್ನಿ ಮೇಲೆ ಸುಳ್ಳು ಆರೋಪ ಮಾಡಿ ನನ್ನನ್ನು ತೇಜೋವಧೆ ಮಾಡುತ್ತಿದ್ದಾರೆ. ಕೇವಲ 14 ಸೈಟುಗಳಿಗಾಗಿ ನಾನು ತಪ್ಪು ಮಾಡ್ತೀನಾ? ದುಡ್ಡು ಮಾಡಬೇಕು ಎಂದಿದ್ದರೆ ಬೇಕಾದಷ್ಟು ಮಾಡಬಹುದಿತ್ತು. ಆದರೆ ನನ್ನ ತಪ್ಪುಗಳು ಏನೇನೂ ಇಲ್ಲದ ಕಾರಣದಿಂದ ಸುಳ್ಳು ಆರೋಪ ಹೊರಿಸಿ ಷಡ್ಯಂತ್ರ ಹೆಣೆದು ನನ್ನನ್ನು ಕೆಳಗಿಳಿಸಲು ಯತ್ನಿಸುತ್ತಿದ್ದಾರೆ. ಇದಕ್ಕೆ ನಾಡಿನ ಜನತೆ ಅವಕಾಶ ಕೊಡುವುದಿಲ್ಲ ಎನ್ನುವ ಗ್ಯಾರಂಟಿ ನನಗಿದೆ.**

ಉದಯವಾಹಿನಿ

ಪ್ರಾದೇಶಿಕ

ಬುಧವಾರ 06 ನವೆಂಬರ್ 2024



## ಮಿನಿ ನ್ಯೂಸ್

# ರಾಜ್ಯ ಸರ್ಕಾರಿ ನೌಕರರ ಸಂಘದ ಚುನಾವಣೆಗೆ ನಾಮನಿರ್ದೇಶನ ಪ್ರಕ್ರಿಯೆ ಆರಂಭ



ಉದಯವಾಹಿನಿ ಚಿತ್ರ

• ಉದಯವಾಹಿನಿ, ಚಿತ್ರದುರ್ಗ

ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ ಜಿಲ್ಲಾ ಮತ್ತು ತಾಲ್ಲೂಕು ಶಾಖೆ, ಚಿತ್ರದುರ್ಗ 2024-29 ಅವಧಿಯ ನಿರ್ದೇಶಕರ ಚುನಾವಣೆಗೆ ಸೋಮವಾರ ಚುನಾವಣೆ ಸ್ಪರ್ಧಾಳುಗಳು ತಮ್ಮ ನಾಮ ನಿರ್ದೇಶನ ಮಾಡಿದರು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಮತಕ್ಷೇತ್ರದಿಂದ ನಿರ್ದೇಶಕರ ಆಯ್ಕೆಗಾಗಿ ಬೆಳಗಟ್ಟ ಪ್ರಾಥಮಿಕ ಆರೋಗ್ಯ ಕೇಂದ್ರದ. ಆರೋಗ್ಯ ನಿರೀಕ್ಷಣಾಧಿಕಾರಿ ಮಹೇಶ್ ಡಿ. ದಿನಾಂಕ 04-11-2024 ರ ಸೋಮವಾರದಂದು ತಮ್ಮ ಅಪಾರ ಬೆಂಬಲಿಗರೊಂದಿಗೆ ನಾಮನಿರ್ದೇಶನ ಮಾಡಿದರು.

ಈ ಸಂದರ್ಭದಲ್ಲಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಅಧಿಕಾರಿಗಳು, ನೌಕರರು ಹಾಗೂ ಸಿಬ್ಬಂದಿ ವರ್ಗದವರು, ಸ್ನೇಹಿತರು, ಹಿತೈಷಿಗಳು ಭಾಗವಹಿಸಿದ್ದರು.

# ಹಸೆಮಣೆ ಏರಬೇಕಿದ್ದ ಕಾನ್ಸ್‌ಟೇಬಲ್ ಬರ್ಬರ ಕೊಲೆ

• ಉದಯವಾಹಿನಿ, ಹಾಸನ

ಜಿಲ್ಲೆಯಲ್ಲಿ ಜನರು ಬೆಚ್ಚಿ ಬೀಳುವಂತೆ ಹಸೆಮಣೆ ಏರಬೇಕಿದ್ದಂತ ಕೆಎಸ್ಐಎಸ್ಎಫ್ ಕಾನ್ಸ್‌ಟೇಬಲ್ ಒಬ್ಬರನ್ನು ಬರ್ಬರವಾಗಿ ಮಾರಕಾಸ್ತ್ರಗಳಿಂದ ಕೊಚ್ಚಿ ಕೊಲೆ ಮಾಡಿರುವಂತ ಘಟನೆ ನಡೆದಿದೆ.

ಹಾಸನ ತಾಲ್ಲೂಕಿನ ದುದ್ದ ಗ್ರಾಮದಲ್ಲಿ ಈ ಘಟನೆ ನಡೆದಿದೆ. ಹಾಸನ ಜಿಲ್ಲೆಯ ಅರಸೀಕೆರೆ ತಾಲ್ಲೂಕಿನ ಬಾಗೇಶಪುರದ ವಿ.ಹರೀಶ್ ಅವರು ಬೆಂಗಳೂರಿನ ಕರ್ನಾಟಕ ರಾಜ್ಯ ಕೈಗಾರಿಕಾ ಭದ್ರತಾ ಪಡೆಯಲ್ಲಿ ಕಾನ್ಸ್‌ಟೇಬಲ್ ಆಗಿ ಕರ್ತವ್ಯ ನಿರ್ವಹಿಸುತ್ತಿದ್ದರು.ಅವರಿಗೆ ನವೆಂಬರ್ .11ರಂದು ಮದುವೆ ಕೂಡ ನಿಗದಿಯಾಗಿತ್ತು. ಮದುವೆ ಆಮಂತ್ರಣ ಪತ್ರವನ್ನು ಹಂಚಿಕೆ ಮಾಡಿ ಮನೆಗೆ ಹಿಂದಿರುಗುತ್ತಿದ್ದಾಗ ದುಷ್ಕರ್ಮಿಗಳು ಮಾರಕಾಸ್ತ್ರಗಳಿಂದ ಕೊಚ್ಚಿ ಬರ್ಬರವಾಗಿ ಕೊಲೆ ಮಾಡಿದ್ದಾರೆ. ಈ ಮೂಲಕ ಹಸೆಮಣೆ ಏರಬೇಕಿದ್ದಂತ ಕೆಎಸ್ಐ ಎಸ್ಎಫ್ ಕಾನ್ಸ್‌ಟೇಬಲ್ ವಿ.ಹರೀಶ್ ಬರ್ಬರವಾಗಿ ಕೊಲೆ ಮಾಡಲಾಗಿದೆ.

# ಬೆಳಗಾವಿ ತಹಶೀಲ್ದಾರ್ ಕಚೇರಿಯಲ್ಲೇ ಎಸ್‌ಡಿಎ ಆತ್ಮಹತ್ಯೆ

• ಉದಯವಾಹಿನಿ, ಬೆಳಗಾವಿ

ಜಿಲ್ಲೆಯ ತಹಶೀಲ್ದಾರ್ ಕಚೇರಿಯಲ್ಲೇ ದ್ವಿತೀಯ ದರ್ಜೆ ಸಹಾಯಕ ಸಿಬ್ಬಂದಿಯೊಬ್ಬರು ನೇಣುಬಿಗಿದುಕೊಂಡು ಆತ್ಮಹತ್ಯೆಗೆ ಶರಣಾಗಿರುವಂತ ಘಟನೆ ನಡೆದಿದೆ.ಬೆಳಗಾವಿ ತಹಶೀಲ್ದಾರ್ ಕಚೇರಿಯಿಂದ ಸವದತ್ತಿ ತಹಶೀಲ್ದಾರ್ ಕಚೇರಿಗೆ ರುದ್ರಣ್ಣ ಯಡವಣ್ಣನವರ ಎಂಬುವರನ್ನು ಸವದತ್ತಿ ತಹಶೀಲ್ದಾರ್ ಕಚೇರಿಗೆ ನಿನ್ನೆಯಷ್ಟೇ ವರ್ಗಾವಣೆ ಮಾಡಲಾಗಿತ್ತು. ಸವದತ್ತಿ ತಹಶೀಲ್ದಾರ್ ಕಚೆರಿಗೆ ಎಸ್ ಡಿಎ ರುದ್ರಣ್ಣ ಯಡವಣ್ಣನವರನ್ನು ವರ್ಗಾವಣೆ ಮಾಡಿದ್ದಕ್ಕೆ ಮನನೊಂದು ಬೆಳಗಾವಿಯ ತಹಶೀಲ್ದಾರ್ ಕಚೇರಿಯಲ್ಲೇ ಆತ್ಮಹತ್ಯೆಗೆ ಶರಣಾಗಿದ್ದಾರೆ.

# ನರಿ-ನಾಯಿ, ತೋಳ ಮಿಶ್ರ ತಳಿ ಪತ್ತೆ

• ಉದಯವಾಹಿನಿ, ಗದಗ

ಹೆಚ್ಚುತ್ತಿರುವ ಅರಣ್ಯ ನಾಶ, ನಗರೀಕರಣದ ಪರಿಣಾಮ ಜಿಲ್ಲೆಯ ಗಜೇಂದ್ರ, ಗಡ, ನರಗುಂದ ಸೇರಿ ಪಕ್ಕದ ಕೊಪ್ಪಳ ಭಾಗದಲ್ಲಿ ತೋಳ-ನಾಯಿ, ನರಿ-ನಾಯಿ ರೂಪಾಂತರಿ ಮಿಶ್ರ ತಳಿಗಳು ಮೊಟ್ಟ ಮೊದಲ ಬಾರಿ ಪತ್ತೆಯಾಗಿವೆ. ಕೊಪ್ಪಳ ಹಾಗೂ ಗದಗ ಜಿಲ್ಲೆಯ ಗಡಿಭಾಗದಲ್ಲಿ ತೋಳ ಹಾಗೂ ನರಿಗಳ ಸಂಖ್ಯೆ ಹೆಚ್ಚಿವೆ. ಆಹಾರ ಅರಸಿ ಬರುವ ಕುರಿಗಾಹಿಗಳ ಕುರಿಗಳ ಹಿಂಡಿನ ಮೇಲೆ ದಾಳಿ ಮಾಡುವುದು, ಗ್ರಾಮೀಣ ಹಾಗೂ ನಗರ ಪ್ರದೇಶಗಳಿಗೆ ಧಾವಿಸುತ್ತಿರುವ ತೋಳ ಹಾಗೂ ನರಿಗಳು, ಅಲ್ಲಿರುವ ನಾಯಿಗಳ ಸಂಪರ್ಕಕ್ಕೆ ಬಂದು ಸಂತಾನೋತ್ಪತ್ತಿಯಲ್ಲಿ ತೊಡಗಿಕೊಳ್ಳುತ್ತಿರುವುದರಿಂದ ತೋಳ-ನಾಯಿ, ನರಿ-ನಾಯಿ ಮಿಶ್ರ ತಳಿಗಳ ಜನನಕ್ಕೆ ಕಾರಣವಾಗುತ್ತಿದೆ. ತೋಳ-ನಾಯಿ, ನರಿ-ನಾಯಿ ಹೈಬ್ರಿಡ್ ತಳಿಗಳು ಹೆಚ್ಚಾಗಿ ಬೀದಿ ನಾಯಿಗಳ ಸ್ವರೂಪದಲ್ಲಿ ಜನನಿಬಿಡ ಪ್ರದೇಶಗಳಲ್ಲಿ ಕಾಣಸಿಗುತ್ತಿವೆ. ಇದು ತೋಳ ಮತ್ತು ನರಿಯ ಮೂಲ ತಳಿಗಳ ಸಂತತಿ ಮರೆಯಾಗುವ ಅಪಾಯದಂಚಿನಲ್ಲಿವೆ ಎನ್ನುತ್ತಿದ್ದಾರೆ ವನ್ಯಜೀವಿ ಸಂರಕ್ಷಕರು.

**ಖಾತ್ರಿಪಡಿಸಿದ ವನ್ಯಜೀವಿ ತಜ್ಞರು:** ಬಾಂಬೆ ನ್ಯಾಚುರಲ್ ಹಿಸ್ಟರಿ ಸೊಸೈಟಿಯ ಸಂಶೋಧಕರಾದ ಪಂಕಜ್ ಬಿಷ್ಣೋಯ್, ನೀಲಕಾಂತ್ ಬೋರಾ, ಕಾರ್ತಿಕ್ ಎನ್.ಜಂಡ್, ಸುಜಿತ್ ಎಸ್.ನರ್ವಾಡೆ ಅವರನ್ನೊಳಗೊಂಡ ತಂಡ 2023, ಅ.12ರಂದು ಜಿಲ್ಲೆಯ ಗಜೇಂದ್ರಗಡ ತಾಲ್ಲೂಕಿನ ಸಮೀಪ ಶಂಕಿತ ತೋಳ-ನಾಯಿ ಮಿಶ್ರತಳಿ ಇರುವುದನ್ನು ಚಿತ್ರ ಸಹಿತ ಖಾತ್ರಿಪಡಿಸಿದೆ. ಬೀದಿನಾಯಿಗಳು ಹುಲ್ಲುಗಾವಲಿನ ಪರಭಕ್ಷಕ ಭಾರತೀಯ ಬೂದು ತೋಳದೊಂದಿಗೆ ಹಾಗೂ ನರಿಯೊಂದಿಗೆ ಸಂತಾನೋತ್ಪತ್ತಿ ಮಾಡಿದಾಗ ಮಿಶ್ರ ತಳಿ ತೋಳ-ನಾಯಿ, ನರಿ-ನಾಯಿ ಉತ್ಪತ್ತಿಯಾಗುತ್ತವೆ.

## ದಿನ ಭವಿಷ್ಯ

| | | |
|---|---|---|
| ರಾಹುಕಾಲ | ಮಧ್ಯಾಹ್ನ | 12:00 ರಿಂದ 01:30 |
| ಗುಳಿಕ ಕಾಲ | ಬೆಳಿಗ್ಗೆ | 10:30 ರಿಂದ 12:00 |
| ಯಮಗಂಡ ಕಾಲ | ಬೆಳಿಗ್ಗೆ | 07:30 ರಿಂದ 09:00 |

**ಮೇಷ** ಒಬ್ಬ ಸಂತನ ಆಶೀರ್ವಾದದಿಂದ ಮನಶ್ಶಾಂತಿ. ನೀವು ವಿವಾಹಿತರಾಗಿದ್ದರೆ ನಿಮ್ಮ ಮಕ್ಕಳ ಬಗ್ಗೆ ವಿಶೇಷ ಕಾಳಜಿ ವಹಿಸಿ ಏಕೆಂದರೆ ನೀವು ಅದನ್ನು ಮಾಡದಿದ್ದರೆ ಅವರ ಆರೋಗ್ಯವು ಹದಗೆಡಬಹುದು.

**ವೃಷಭ** ನೀವು ಧೀರ್ಘಕಾಲೀನ ಅನಾರೋಗ್ಯದಿಂದ ಬಳಲಬಹುದು. ಹಣಕಾಸಿನ ಭಾಗವು ಉತ್ತಮವಾಗಿರುತ್ತದೆ ಆದರೆ ಇದರೊಂದಿಗೆ ನೀವು ನಿಮ್ಮ ಹಣವನ್ನು ವ್ಯರ್ಥವಾಗಿ ಖರ್ಚು ಮಾಡದಂತೆ ನೋಡಿಕೊಳ್ಳಬೇಕು.

**ಮಿಥುನ** ನಿಮಗೆ ಆಕರ್ಷಕವಾಗಿ ತೋರುವ ಯಾವುದೇ ಹೂಡಿಕೆಯ ಯೋಜನೆಯ ಬಗ್ಗೆ ಹೆಚ್ಚು ಕಂಡುಹಿಡಿಯಲು ಮೇಲ್ಮೈಗಿಂತ ಕೆಳಗೆ ಆಳವಾಗಿ ಕೆದಕಿ. ಯಾವುದೇ ಪ್ರಮಾಣ ಮಾಡುವ ಮೊದಲು ತಜ್ಞರನ್ನು ಸಂಪರ್ಕಿಸಿ.

**ಕರ್ಕಾಟಕ** ಸೃಜನಶೀಲ ಕೆಲಸ ನಿಮ್ಮನ್ನು ಶಾಂತವಾಗಿರಿಸುತ್ತವೆ. ರಾತ್ರಿಯ ವೇಳೆಯಲ್ಲಿ ನೀವು ಹಣದ ಪ್ರಯೋಜನವನ್ನು ಪಡೆಯುವ ಪೂರ್ತಿ ಸಾಧ್ಯತೆ ಇದೆ. ನಿಮ್ಮ ಮೂಲಕ ಕೊಟ್ಟಿರುವ ಹಣ ಇಂದು ನಿಮಗೆ ಮರಳಿ ಸಿಗಬಹುದು.

**ಸಿಂಹ** ಸಂತೋಷದಿಂದ ತುಂಬಿದ ಒಳ್ಳೆಯ ದಿನ. ಇಂದು ಮನೆಯಿಂದ ಹೊರಗೆ ಹಿರಿಯರ ಆಶೀರ್ವಾದವನ್ನು ತೆಗೆದುಕೊಂಡು ಹೋಗಿ, ಇದರಿಂದ ನೀವು ಹಣದ ಲಾಭವನ್ನು ಪಡೆಯಬಹುದು.

**ಕನ್ಯಾ** ಇಂದು ನೀವು ಎಲ್ಲಾ ಜನರಿಂದ ದೂರವಾಗಿ ಏಕಾಂತದಲ್ಲಿ ಸಮಯವನ್ನು ಕಳೆಯಲು ಇಷ್ಟಪಡುವಿರಿ. ನಿಮ್ಮ ವೈವಾಹಿಕ ಜೀವನ ಇಂದು ಮೋಜು, ಸಂತೋಷ, ಮತ್ತು ಆನಂದದ ಬಗೆಗಾಗಿರುತ್ತದೆ.

**ತುಲಾ** ನೀವು ಬಹಳ ವಿಚಿತ್ರವಾದ ಪರಿಸ್ಥಿತಿಯಲ್ಲಿ ಸಿಲುಕಿದರೂ ಅದನ್ನು ಎದುರಿಸಲು ನಿಮ್ಮ ಇಚ್ಛಾಶಕ್ತಿ ಸಹಾಯ ಮಾಡಬಹುದು. ಒಂದು ಅತ್ಯಂತ ಭಾವನಾತ್ಮಕ ನಿರ್ಧಾರ ಕೈಗೊಳ್ಳುವಾಗ ನೀವು ಸ್ತಿಮಿತ ಕಳೆದುಕೊಳ್ಳಬಾರದು.

**ವೃಶ್ಚಿಕ** ಕ್ರೀಡೆಗಳು ಸಾರ್ವಕಾಲಿಕ ಯೌವನದ ರಹಸ್ಯವಾಗಿದ್ದರಿಂದ ಯಾವುದಾದರೂ ಆಟಗಳಲ್ಲಿ ನಿಮ್ಮನ್ನು ತೊಡಗಿಸಿಕೊಳ್ಳಿ. ನಿಮ್ಮ ಜೀವನದ ಕಳಪೆ ಆರೋಗ್ಯದಿಂದಾಗಿ, ನಿಮ್ಮ ಹಣವನ್ನು ಇಂದು ಖರ್ಚು ಮಾಡಬಹುದು.

**ಧನಸ್ಸು** ಇಂದು ನೀವು ಹಚ್ಚು ಪ್ರಯತ್ನ ಮಾಡಬೇಕಾಗಿ ಬಂದರೂ ಕೂಡ ಮಕ್ಕಳ ಸಂಗದಲ್ಲಿ ನಿಮ್ಮ ಬಿಡುವಿನ ಸಮಯ ಕಳೆಯಲು ಪ್ರಯತ್ನಿಸಬೇಕು. ಇಂದು ನೀವು ನಿಮ್ಮ ಅತ್ಯುತ್ತಮ ನಡವಳಿಕೆಯನ್ನು ಹೊಂದಿರಬೇಕು.

**ಮಕರ** ನಿಮ್ಮ ಆರೋಗ್ಯ ಮತ್ತು ಒಟ್ಟಾರೆ ವ್ಯಕ್ತಿತ್ವವನ್ನು ಸುಧಾರಿಸಲು ಪ್ರಯತ್ನಿಸಿ. ಹೆಚ್ಚುವರಿ ಹಣವನ್ನು ರಿಯಲ್ ಎಸ್ಟೇಟ್‌ನಲ್ಲಿ ಹೂಡಿಕೆ ಮಾಡಬೇಕು. ಮಕ್ಕಳು ಹೆಚ್ಚು ಗಮನ ಬಯಸಿದರೂ ಕಾಳಜಿಯಿಂದ ವರ್ತಿಸುತ್ತಾರೆ.

**ಕುಂಭ** ನೀವು ಒಂದು ದೀರ್ಘ ಪ್ರಯಾಣಕ್ಕೆ ಹೋಗಲು ಯೋಜನೆ ಹಾಕುತ್ತಿದ್ದ ಹಾಗೆ ನಿಮ್ಮ ಆರೋಗ್ಯ ಮತ್ತು ಇಂಧನ ಸಂರಕ್ಷಣೆಯ ಹವ್ಯಾಸ ನಿಮಗೆ ಅಪಾರವಾದ ಉಪಯೋಗವುಂಟುಮಾಡುತ್ತದೆ.

**ಮೀನ** ಈ ರಾಶಿಚಕ್ರದ ಜನರು ಇಂದು ನಿಮ್ಮ ಬಿಡುವಿನ ವೇಳೆಯಲ್ಲಿ ಆಧ್ಯಾತ್ಮಿಕ ಪುಸ್ತಕಗಳ ಅಧ್ಯಯನ ಮಾಡಬೇಕು. ಇದನ್ನು ಮಾಡಿ ನೀವು ನಿಮ್ಮ ಅನೇಕ ಸಮಸ್ಯೆಗಳನ್ನು ಪರಿಹರಿಸಬಹುದು.

## ಅಂಬೇಡ್ಕರ್ ಸಂವಿಧಾನದಲ್ಲಿ ವಕ್ಫ್ ಇರಲಿಲ್ಲ: ಶೋಭಾ ಕರಂದ್ಲಾಜೆ

### ● ಮುಸ್ಲಿಂ ತುಷ್ಟೀಕರಣದ ಭಾಗವಾಗಿ ನೆಹರು ಅವರು ವಕ್ಫ್ ಕಾಯ್ದೆ ಜಾರಿಗೆ ತಂದು ಅದಕ್ಕೆ ಹೆಚ್ಚಿನ ಅಧಿಕಾರ ನೀಡಿದ್ದರು

• **ಉದಯವಾಹಿನಿ, ವಿಜಯಪುರ**

ಅಂಬೇಡ್ಕರ್ ಸಂವಿಧಾನದಲ್ಲಿ ವಕ್ಫ್ ಕಾಯ್ದೆ ಬಗ್ಗೆ ಉಲ್ಲೇಖವೇ ಇಲ್ಲ. ಆದರೆ 1954-55 ರಲ್ಲಿ ನೆಹರು ಸರ್ಕಾರ ವಕ್ಫ್ ಕಾಯ್ದೆಯನ್ನು ಸಂವಿಧಾನಕ್ಕೆ ಸೇರಿಸಿ, ಅದಕ್ಕೆ ಹೆಚ್ಚಿನ ಅಧಿಕಾರ ನೀಡಿದ್ದರು ಎಂದು ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ ಅವರು ಹೇಳಿದರು.

ವಕ್ಫ್ ಆಸ್ತಿ ವಿಚಾರವಾಗಿ ಬಿಜೆಪಿ ರಾಜ್ಯಾದ್ಯಂತ ಹಮ್ಮಿಕೊಂಡಿದ್ದ ಪ್ರತಿಭಟನೆಯನ್ನು ಉದ್ದೇಶಿಸಿ ಮಾತನಾಡಿದ ಅವರು, ವಕ್ಫ್ ಮಂಡಳಿಯು ಅಸಾಂವಿಧಾನಿಕ ಸಂಸ್ಥೆಯಾಗಿದ್ದು, ಕಾಂಗ್ರೆಸ್‌ನ ಮುಸ್ಲಿಂ ತುಷ್ಟೀಕರಣದ ಭಾಗವಾಗಿ ಮಾಜಿ ಪ್ರಧಾನಿ ಜವಾಹರಲಾಲ್ ನೆಹರು ಅವರಿಗೆ ವಕ್ಫ್ ಕಾಯ್ದೆ ಜಾರಿಗೆ ತಂದು ಅದಕ್ಕೆ ಹೆಚ್ಚಿನ ಅಧಿಕಾರ ನೀಡಿದ್ದರು ಎಂದು ಹೇಳಿದರು. ಯಾವುದೇ ಜಮೀನು ವಕ್ಫ್ ನದ್ದಾಗುವುದಕ್ಕೆ ಸಾಧ್ಯವಿಲ್ಲ. ಇಲ್ಲಿನ ಮಠಗಳಿಗೆ ಚಾಲುಕ್ಯರು, ಹೊಯ್ಸಳರು, ಕಿತ್ತೂರು ರಾಣಿ ಚೆನ್ನಮ್ಮ ಜಮೀನು ಕೊಟ್ಟದ್ದು. ಆದರೆ, ಇಂತಹವನ್ನೂ ಜಮೀರ್ ಖಾನ್ ವಕ್ಫ್ ಮಾಡಿ ನೋಟಿಸ್ ಕೊಡಿಸಿದ್ದಾರೆ. ಒಂದು ರೀತಿಯಲ್ಲಿ ಮುಸ್ಲಿಮರ ಷರಿಯತ್ ಕಾನೂನನ್ನು ರಾಜ್ಯದಲ್ಲಿ ತರುವುದಕ್ಕೆ ಸಿದ್ದರಾಮಯ್ಯ ಹಾಗೂ ಜಮೀರ್ ಹೊರಟಿದ್ದಾರೆ.

ನಾವು ಭಾರತದ ಸಂವಿಧಾನದ ಪ್ರಕಾರ ನಡೆಯುವವರು. ಲೋಕಸಭೆಯಲ್ಲಿ ಸಂವಿಧಾನ ಪ್ರತಿ ಹಿಡಿದುಕೊಂಡು ಪ್ರಮಾಣ ವಚನ ಸ್ವೀಕಾರ ಮಾಡುತ್ತೀರಿ. ಇಲ್ಲಿ ಬಂದು ಷರಿಯತ್ ಕಾನೂನು ತರುತ್ತೀರಿ. ಕರ್ನಾಟಕದಲ್ಲಿ ಇದು ನಡೆಯಲ್ಲ.

ರಾಜ್ಯದಲ್ಲಿ ಹಲವಾರು ದೇವಸ್ಥಾನಗಳು ವಕ್ಫ್ ಎಂದಾಗಿವೆ. ಇದರ ಹಿಂದೆ ಯಾವ ರೀತಿಯ ಷಡ್ಯಂತ್ರ ಇದೆಯೆಂದು ಅರ್ಥವಾಗುತ್ತದೆ.

ಇದೇ ವೇಳೆ ಉಡುಪಿಯ ಕೃಷ್ಣ ಮಠದ ಮುಂಭಾಗದಿಂದ ಶಿವಳ್ಳಿ ಎಂಬ ಗ್ರಾಮದವರೆಗೆ ಸುಲ್ತಾನಪುರ ಎಂದು ದಿಶಾಂಕ ಆ್ಯಪ್‌ನಲ್ಲಿ ತೋರಿಸುತ್ತಿರುವ ವಿಚಾರ ಕುರಿತು ಮಾತನಾಡಿ, ಇದರಿಂದ ಆತಂಕದ ವಾತಾವರಣ ಮನೆ ಮಾಡಿದೆ ಎಂದರು.

ಇದಕ್ಕೂ ಮುನ್ನ ನಡೆದ ಪ್ರತಿಭಟನೆಯಲ್ಲಿ ವಿವಿಧ ಮಠಾಧೀಶರು ಪಾಲ್ಗೊಂಡಿದ್ದರು. ಕನೇರಿ ಮಠದ ಕಾಡಸಿದ್ದೇಶ್ವರ ಸ್ವಾಮಿ ಮಾತನಾಡಿ, ಕಾಂಗ್ರೆಸ್ ಸರ್ಕಾರ ವಕ್ಫ್ ಬೋರ್ಡ್ ಹೆಸರಿನಲ್ಲಿ ಮುಸ್ಲಿಮರಿಗೆ ಸಹಾಯ ಮಾಡಲು ಪ್ರತ್ಯೇಕ ಕಾನೂನು ಮಾಡಿದೆ ಎಂದು ಕಿಡಿಕಾರಿದರು. ಈ ಸಂದರ್ಭದಲ್ಲಿ ಸಂಸದರಾದ ವಿಶ್ವೇಶ್ವರ ಹೆಗಡೆ ಕಾಗೇರಿ, ರಮೇಶ ಜಿಗಜಿಣಗಿ, ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಸೇರಿದಂತೆ ಹಲವು ಬಿಜೆಪಿ ಮುಖಂಡರು ಉಪಸ್ಥಿತರಿದ್ದರು.

**ವಕ್ಫ್ ಮಂಡಳಿ ಅಸಾಂವಿಧಾನಿಕ ಸಂಸ್ಥೆ**



**ವಿಜಯಪುರದಲ್ಲಿ ಐತಿಹಾಸಿಕ ಸ್ಮಾರಕಗಳು ವಕ್ಫ್ ಅಡಿಯಲ್ಲಿವೆ. ಇದು ಬದಲಾವಣೆ ಆಗಬೇಕು. ವಿಜಯಪುರದ ಡಿಸಿ, ಎಸ್ಪಿ ಕಚೇರಿ, ಜಿಲ್ಲಾಸ್ಪತ್ರೆ ಹಾಗೂ ಇತರೇ ದೇವಸ್ಥಾನಗಳು ಕೂಡ ವಕ್ಫ್ ಭೂಮಿ ಎಂದಾಗಿವೆ. ದಾನದ ಮೂಲಕ ವಕ್ಫ್‌ಗೆ ಬರಬೇಕು, ಆದರೆ, ಇವೆಲ್ಲಾ ಹೇಗೆ ವಕ್ಫ್ ಎಂದಾದವು. 1974 ರ ಗೆಜೆಟ್ ನೊಟಿಫಿಕೇಷನ್ ಸಂಪೂರ್ಣ ರದ್ದಾಗಬೇಕು. ಇದು ರದ್ದಾಗೋವರೆಗೂ ಹೋರಾಟ ಮಾಡುತ್ತೇವೆ**

**-ಶೋಭಾ ಕರಂದ್ಲಾಜೆ, ಕೇಂದ್ರ ಸಚಿವೆ**

**ಕಾನೂನು ಬಾಹಿರ ವಕ್ಫ್ ಅದಾಲತ್**

**ಸಿದ್ದರಾಮಯ್ಯ ನೇತೃತ್ವದಲ್ಲಿ ಜಮೀರ್ ರಾಜ್ಯದ ಎಲ್ಲಾ ಭೂಮಿಯನ್ನು ವಕ್ಫ್ ಅಡಿಯಲ್ಲಿ ತರಲು ಹೊರಟಿದ್ದಾರೆ. ಕಾನೂನು ಬಾಹಿರವಾಗಿ ವಕ್ಫ್ ಅದಾಲತ್ ಮಾಡುತ್ತಿದ್ದಾರೆ. ಇವರು ಯಾವ ಕಾನೂನು ಅಡಿ ವಕ್ಫ್ ಅದಾಲತ್ ಮಾಡುತ್ತಿದ್ದಾರೆ ಎಂದು ತಿಳಿಸಬೇಕಿದೆ. ರೈತರಿಗೆ ನೀಡಿದ್ದ ನೋಟಿಸ್ ರದ್ದು ಮಾಡಬೇಕು, ಪಹಣಿಯಲ್ಲಿ ನಮೂದಾಗಿರುವ ವಕ್ಫ್ ಬೋರ್ಡ್ ಹೆಸರು ತೆಗೆಯಬೇಕು ಎಂದು ಆಗ್ರಹಿಸಿದರು,**


## ತಾಲ್ಲೂಕಿನಾದ್ಯಂತ ಬಂಜಾರ ಸಮಾಜದಿಂದ ಸಡಗರದ ದೀಪಾವಳಿ ಆಚರಣೆ

• **ಉದಯವಾಹಿನಿ, ವಡಗೇರಾ**

ತಾಲ್ಲೂಕಿನಾದ್ಯಂತ ಬಂಜಾರ ಜನಾಂಗದವರು ದೀಪಾವಳಿ ಹಬ್ಬವನ್ನು ಅತಿ ವಿಜೃಂಭಣೆ ಹಾಗೂ ವಿಶಿಷ್ಟತೆಯಿಂದ ಆಚರಿಸಿ ಮನುಕುಲ ಹಾಗೂ ಸಕಲ ಜೀವರಾಶಿಗಳಿಗೂ ಆರೋಗ್ಯ, ಐಶ್ವರ್ಯ ಮಳೆ ಬೆಳೆ ಚೆನ್ನಾಗಿ ಆಗಲೆಂದು ಭಕ್ತಿಯಿಂದ ವಿವಿಧ ದೇವರುಗಳ ಪೂಜೆಗಳನ್ನು ಮಾಡುತ್ತಾರೆ.

ದೀಪಾವಳಿ ಅಮಾವಾಸೆಯಂದು ಎಲ್ಲರೂ ತಮ್ಮ ಮನೆಗಳಲ್ಲಿ ದೀಪ ಬೆಳಗಿಸುವ ಮೂಲಕ ಲಕ್ಷ್ಮೀದೇವಿಯ ಭಾವಚಿತ್ರಕ್ಕೆ ಪೂಜಿ ಸಲ್ಲಿಸುತ್ತಾರೆ ಒಂದು ಮನೆಯಿಂದ ಮತ್ತೊಂದು ಮನೆಗೆ ದೀಪವನ್ನು ಹಚ್ಚುತ್ತ ತಮ್ಮ ಬಂಧು ಬಳಗದ ಹಿರಿಯರ ಆರೋಗ್ಯವನ್ನು ವಿಚಾರಿಸಿ ಅವರ ಆಶೀರ್ವಾದ ಪಡೆದುಕೊಂಡು ಸಿಹಿ ಹಂಚಿ ಸಂಭ್ರಮಿಸುತ್ತಾರೆ.

ವಿವಿಧ ಬಗೆಯ ಬಟ್ಟೆ ವೇಶಭೂಷಣ ತೊಟ್ಟು ವಿವಿಧ ನೃತ್ಯಗಳನ್ನು ಮಾಡುವುದರ ಜೊತೆಗೆ ತಮ್ಮ ಪಾರಂಪಾರಿಕ ಸಂಸ್ಕೃತಿಯನ್ನು ಉಳಿಸಿ ಬೆಳೆಸುವ ಕಾರ್ಯ ಬಂಜಾರ ಸಮಾಜವು ಮುಂದುವರಿಸಿಕೊಂಡು ಬರುತ್ತದೆ.



ಉದಯವಾಹಿನಿ ಚಿತ್ರ

**ಪಾರಂಪಾರಿಕ ಸಂಸ್ಕೃತಿಯನ್ನು ಉಳಿಸಿ ಬೆಳೆಸುವ ಕಾರ್ಯ**

ಈ ಹಬ್ಬವು ಬಂಜಾರ ಸಮಾಜದ ಪ್ರಮುಖ ಹಬ್ಬವಾಗಿದ್ದು ಈ ಹಬ್ಬದ ವಿಶೇಷವೇನೆಂದರೆ ದೀಪಾವಳಿ ಹಬ್ಬದ ದಿನ ಬೆಳಿಗ್ಗೆ ಕನ್ಯಾ ಬಾಲಕಿಯರು ಕಾಡಿಗೆ ತೆರಳಿ ವಿವಿಧ ಹಣ್ಣು ಮತ್ತು ಹೂಗಳನ್ನು ಹರಿದು ಬುಟ್ಟಿಯಲ್ಲಿ ಇಟ್ಟುಕೊಂಡು ತಂದು ಸೇವಾಲನ ದೇವಸ್ಥಾನದ ತೆರಳಿ ಪೂಜೆ ಸಲ್ಲಿಸಿ ನಂತರ ಮನೆಗೆ ತಂದು ಗೋವಿನ ಸಗಣೆಯಲ್ಲಿ ಮೂರ್ತಿಗಳನ್ನು ಮಾಡಿ ಅವುಗಳಿಗೆ ಹೂವು ಹಣ್ಣು ಅರ್ಪಿಸಿ ಪೂಜೆ ಮಾಡಿ ಸಕಲ ಜೀವರಾಶಿಗಳಿಗೂ ದೇವರು ಒಳಿತು ಮಾಡಲಿ ಎಂದು ಬೇಡಿಕೊಳ್ಳುತ್ತಾರೆ.

ನಂತರ ಕಿರಿಯರು ಮತ್ತು ಹಿರಿಯರು ಸೇರಿ ರಾತ್ರಿ ಇಡೀ ಹಲಗೆ ತಮಟೆ ಡಿಜೆ ಇನ್ನಿತರ ವಾದ್ಯಗಳೊಂದಿಗೆ ಲಂಬಾಣಿ ನೃತ್ಯ ಮಾಡಿ ಸಂಭ್ರಮಿಸುತ್ತಾರೆ.

ಈ ಹಬ್ಬವು ನಮ್ಮ ಸಮಾಜದ ಅತ್ಯಂತ ದೊಡ್ಡ ಹಬ್ಬವಾಗಿದೆ ಹಿರಿಯರು ಕಿರಿಯರು ಎಂಬ ಭೇದಭಾವವಿಲ್ಲದೆ ಎಲ್ಲರೂ ಒಂದೆಡೆ ಸೇರಿ ಸಹೋದರತ್ವದಿಂದ ಅತ್ಯಂತ ಸಡಗರ ಸಂಭ್ರಮದಿಂದ ದೀಪಾವಳಿ ಹಬ್ಬವನ್ನು ಸುಮಾರು ಒಂದು ವಾರ ಆಚರಿಸುತ್ತೇವೆ ಎಂದು ವಡಗೇರಾ ತಾಲ್ಲೂಕಿನ ಕಂಠಿ ತಾಂಡದ ನಿವಾಸಿ ಶಿಕ್ಷಕ ಚೇನ್ನಪ್ಪ ಪವಾರ್ ತಿಳಿಸಿದರು.

## ನ.9ರಿಂದ ಪ್ರವಾಸಿ ತಾಣಗಳಿಗೆ ನಿರ್ಬಂಧ

• **ಉದಯವಾಹಿನಿ, ಚಿಕ್ಕಮಗಳೂರು**

ದತ್ತಮಾಲಾ ಅಭಿಯಾನವನ್ನು ನಡೆಸುತ್ತಿರುವ ಹಿನ್ನಲೆಯಲ್ಲಿ ನವೆಂಬರ್ 9ರಿದ 11ರವರೆಗೆ ಚಿಕ್ಕಮಗಳೂರಿನ ಪ್ರಸಿದ್ಧ ಪ್ರವಾಸಿ ತಾಣಗಳಾದಂತ ಮುಳ್ಳಯ್ಯನಗಿರಿ, ಮಾಣಿಕ್ಯಧಾರಾ, ಸೀತಾಳಯ್ಯನಗಿರಿ, ಗಾಳಿಕೆರೆ ಸೇರಿದಂತೆ ಚಂದ್ರದ್ರೋಣ ಪರ್ವತ ಶ್ರೇಣಿಯ ಪ್ರವಾಸಿ ತಾಣಗಳಿಗೆ ಪ್ರವಾಸಿಗರ ಪ್ರವೇಶಕ್ಕೆ ನಿರ್ಬಂಧ ವಿಧಿಸಿ ಜಿಲ್ಲಾಡಳಿತ ಆದೇಶಿಸಿದೆ.

ಈ ಸಂಬಂಧ ಚಿಕ್ಕಮಗಳೂರು ಜಿಲ್ಲಾಧಿಕಾರಿಗಳು ಆದೇಶ ಹೊರಡಿಸಿದ್ದು, ದತ್ತ ಮಾಲಾಧಾರಿಗಳು 7 ದಿನಗಳ ಕಾಲ ವ್ರತ ಮಾಡಿ, ನವೆಂಬರ್1ರಂದು ದತ್ತ ಪೀಠಕ್ಕೆ ಆಗಮಿಸುತ್ತಾರೆ. ಈ ಕಾರಣದಿಂದ ಯಾವುದೇ ಅಹಿತಕರ ಘಟನೆ ನಡೆಯದಂತೆ ಮುನ್ನೆಚ್ಚರಿಕೆ ಕ್ರಮವಾಗಿ ನವೆಂಬರ್.9ರ ಬೆಳಿಗ್ಗೆ 6ರಿಂದ ನವೆಂಬರ್.11ರ ಬೆಳಿಗ್ಗೆ 6 ಗಂಟೆಯವರೆಗೆ ಪ್ರವಾಸಿಗರಿಗೆ ನಿರ್ಬಂಧ ವಿಧಿಸಲಾಗಿದೆ.



ಉದಯವಾಹಿನಿ ಚಿತ್ರ

ನವೆಂಬರ್.10ರಂದು ದತ್ತಪೀಠದಲ್ಲಿ ದತ್ತಮಾಲಾಧಾರಿಗಳಿಂದ ವಿಶೇಷ ಪೂಜೆ, ಹೋಮ ಹವನದಂತ ಕೈಂಕರ್ಯಗಳು ನಡೆಸಲಾಗುತ್ತಿದೆ.

ಈ ಕಾರಣದಿಂದ ಮುಂಜಾಗ್ರತಾ ಕ್ರಮವಾಗಿ ಮುಳ್ಳಯ್ಯನಗಿರಿ, ಸೀತಾಳಯ್ಯನಗಿರಿ, ಮಾಣಿಕ್ಯಧಾರಾ ಹಾಗೂ ಗಾಳಿಕೆರೆ ಸೇರಿದಂತೆ ಸುತ್ತಮುತ್ತಲಿನ ಪ್ರದೇಶಗಳಿಗೆ ಪ್ರವಾಸಿಗರ ಭೇಟಿಯನ್ನು ನಿಷೇಧಿಸಿ ಆದೇಶಿಸಲಾಗಿದೆ.

## ಭಗವದ್ಗೀತಾ ಅಭಿಯಾನ ಕರ್ನಾಟಕ-2024

• **ಉದಯವಾಹಿನಿ, ಮುದ್ದೇಬಿಹಾಳ**

ಧರ್ಮಗ್ರಂಥಗಳ ಜ್ಞಾನ ಪೀಳಿಗೆಯಿಂದ ಪೀಳಿಗೆಗೆ ನಿರಂತರವಾಗಿ ಸಾಗಿಸುವಲ್ಲಿ ಅಭಿಯಾನ ನಿರಂತರತೆಯನ್ನು ಕಾಯ್ದುಕೊಳ್ಳಬೇಕಾಗಿದೆ ಎಂದು ತಂಗಡಗಿ ಸಿದ್ದಾರೂಢ ಮಠದ ಮಾಧವಾನಂದ ಭಾರತೀ ಸ್ವಾಮೀಜಿಯವರು ನುಡಿದರು. ಪಟ್ಟಣದ ಹೊರವಲಯದಲ್ಲಿರುವ ಪವಾಡ ಬಸವೇಶ್ವರ ಆಶ್ರಮದಲ್ಲಿ ಸರ್ವಜ್ಞೇಂದ್ರ ಸರಸ್ವತೀ ಪ್ರತಿಷ್ಠಾನ ಶ್ರೀಮಜ್ಜಗದ್ಗುರು ಶಂಕರಾಚಾರ್ಯ ಸೋಂದಾ ಸ್ವರ್ಣವಲ್ಲೀ ಸಂಸ್ಥಾನ ಶಿರಸಿ, ತಾಲ್ಲೂಕಾ ಅಭಿಯಾನ ಸಮಿತಿ ಹಾಗೂ ಚೇತನ ಹಿರಿಯ ಪ್ರಾಥಮಿಕ ಶಾಲೆ ಇವರ ಸಹಯೋಗದಲ್ಲಿ ಭಗವದ್ಗೀತಾ ಅಭಿಯಾನ ಕರ್ನಾಟಕ-2024 ಉದ್ಘಾಟನಾ ಸಮಾರಂಭದಲ್ಲಿ ದಿವ್ಯ ಸಾನಿಧ್ಯವಹಿಸಿ ಮಾತನಾಡಿದರು ಮಕ್ಕಳಿಗೆ ಸಂಸ್ಕಾರ ಮನೆಯಿಂದ ಸಿಗಬೇಕು. ತಂದೆ ತಾಯಿ ಹಾಗೂ ಮನೆಯ ಸದಸ್ಯರ ವರ್ತನೆಯು ಸಂಸ್ಕಾರಭರಿತವಾಗಿರುವುದು ತೀರಾ ಅವಶ್ಯಕವಾಗಿದೆ ಎಂದರು .



ಉದಯವಾಹಿನಿ ಚಿತ್ರ

ಪುರಾಣಿಕ ಮಾದೇವ ಶಾಸ್ತ್ರೀಯವರು ಮಾತನಾಡಿ ಭವದ್ಗೀತೆಯನ್ನು ಅರ್ಥೈಸಿಕೊಂಡು ದೃಢವಿಶ್ವಾಸದಿಂದ ನಡೆದಲ್ಲಿ ಜೀವನದಲ್ಲಿ ಬರುವ ಎಲ್ಲಾ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳ ಬಹುದಾಗಿದೆ ಎಂದರು.

ಪವಾಡ ಬಸವೇಶ್ವರ ಆಶ್ರಮದ ಚನ್ನಮಲ್ಲಪ್ಪ ಶರಣರು ದೀಪ ಬೆಳಗಿಸಿ ಅಭಿಯಾನವನ್ನು ಉದ್ಘಾಟಿಸಿದರು. ಕಾರ್ಯಕ್ರಮ ಆರಂಭಕ್ಕೂ ಮುನ್ನ ಗುರುಮಾತೆ ರಂಜಿತಾ ಮತ್ತು ಜ್ಞಾನ ಭಾರತಿ ವಿದ್ಯಾ ಮಂದಿರ ಶಾಲೆ ಗೀತಗಾಯನ ತಂಡದವರು ಸಾಮೂಹಿಕವಾಗಿ ಭಗವದ್ಗೀತೆಯ 9 ನೇ ಅಧ್ಯಾಯವನ್ನು ಪಠಣಮಾಡಿದರು.

## ಬೆಳಗಾವಿಯಲ್ಲಿ ಎಸ್‌ಡಿಎ ನೌಕರ ಆತ್ಮಹತ್ಯೆ ಕೇಸ್‌ಗೆ ಟ್ವಿಸ್ಟ್ ಡೆತ್ ನೋಟ್‌ನಲ್ಲಿ ಲಕ್ಷ್ಮೀ ಹೆಬ್ಬಾಳ್ಕರ್ ಆಪ್ತನ ಹೆಸರು ಉಲ್ಲೇಖ

• **ಉದಯವಾಹಿನಿ, ಬೆಳಗಾವಿ**

ಬೆಳಗಾವಿಯ ತಹಶೀಲ್ದಾರ್ ಕಚೇರಿಯಲ್ಲಿ ಎಸ್‌ಡಿಎ ನೌಕರ ರುದ್ರಣ್ಣ ಯಡವಣ್ಣನವರ ಎನ್ನುವವರು ಮೇಲಾಧಿಕಾರಿಗಳ ಕಿರುಕುಳದಿಂದ ಬೇಸತ್ತು ಫ್ಯಾನಿಗೆ ನೇಣು ಬಿಗಿದುಕೊಂಡು ಆತ್ಮಹತ್ಯೆಗೆ ಶರಣಾಗಿದ್ದಾರೆ. ಅವರು ಆತ್ಮಹತ್ಯೆಗೆ ಮುನ್ನ ಬರೆದ ಡೆತ್ ನೋಟ್‌ನಲ್ಲಿ ಸಚಿವ ಲಕ್ಷ್ಮಿ ಹೆಬ್ಬಾಳ್ಕರ್ ಆಪ್ತನ ಹೆಸರು ಉಲ್ಲೇಖಿಸಿದ್ದಾರೆ.



ಹೌದು, ಬೆಳಗಾವಿ ತಹಶಿಲ್ದಾರ್ ಕಚೇರಿಯಲ್ಲಿ ಎಫ್‌ಡಿಸಿ ಆತ್ಮಹತ್ಯೆಗೆ ಶರಣಾಗಿದ್ದಾರೆ. ಬೆಳಗಾವಿ ರಿಸಾಲ್ದಾರ್ ಗಲ್ಲಿಯಲ್ಲಿರುವ ತಹಶೀಲ್ದಾರ್ ಆಫೀಸ್‌ನಲ್ಲಿ ಘಟನೆ ನಡೆದಿದೆ.

ತಹಶೀಲ್ದಾರ್ ಕಚೇರಿಯ ಪ್ರಥಮ ದರ್ಜೆ ಸಹಾಯಕ ರುದ್ರಣ್ಣ ಯಡವಣ್ಣನವರ ಆತ್ಮಹತ್ಯೆಗೆ ಶರಣಾದ ಸರ್ಕಾರಿ ನೌಕರನಾಗಿದ್ದಾರೆ. ತಹಶೀಲ್ದಾರ್ ಬಸವರಾಜ ನಾಗರಾಳ ಕಚೇರಿಯಲ್ಲಿಯೇ ನೇಣು ಬಿಗಿದುಕೊಂಡಿದ್ದಾರೆ. ಖಡೇಬಜಾರ್ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಘಟನೆ ಸಂಭವಿಸಿದೆ. ಆತ್ಮಹತ್ಯೆಗೂ ಮುನ್ನ ವಾಟ್ಸಪ್ ಗ್ರೂಪ್‌ಲ್ಲಿ ಸಂದೇಶ ರವಾನಿಸಿದ್ದ ರುದ್ರಣ್ಣ. ಬೆಳಗಾವಿ ತಹಶೀಲ್ದಾರ್ ಕಚೇರಿ ಸಿಬ್ಬಂದಿಯ ವಾಟ್ಸಪ್ ಗ್ರೂಪಲ್ಲಿ ಸಂದೇಶ ರವಾನೆ. ನಾನು ಆತ್ಮಹತ್ಯೆಗೆ ಶರಣಾಗುವುದಾಗಿ ಗ್ರೂಪ್‌ನಲ್ಲಿ ಮೆಸೆಜ್ ಮಾಡಿದ್ದರು. ನನ್ನ ಸಾವಿಗೆ ತಹಶೀಲ್ದಾರ್ ಬಸವರಾಜ್ ನಾಗರಾಳ ಹಾಗೂ ಸಚಿವರ ಆಪ್ತ ಸಹಾಯಕ ಸೋಮು ಅವರೇ ಕಾರಣ. ಇನ್ನು ಡೆತ್ ನೋಟ್‌ನಲ್ಲಿ ಬರೆದಿಟ್ಟ ಸೋಮು ದೊಡದವಾದ ಅವರು ಸಚಿವೆ ಲಕ್ಷ್ಮಿ ಹೆಬ್ಬಾಳ್ಕರ್ ಆಪ್ತ ಕಾರ್ಯದರ್ಶಿ ಆಗಿದ್ದಾರೆ.

**ಮೆಸೇಜ್ ಮೂಲಕ ಮನವಿ**

**ನಮ್ಮ ತಹಶೀಲ್ದಾರ್ ಕಚೇರಿಯಲ್ಲಿ ತುಂಬಾ ಅನ್ಯಾಯ ನಡೆಯುತ್ತಿದೆ. ಎಲ್ಲರೂ ಒಟ್ಟಾಗಿ ಹೋರಾಡಿ ಎಂದು ಮೆಸೇಜ್ ಮೂಲಕ ಮನವಿ ಮಾಡಿದ್ದು, ನಂತರ ಆತ್ಮಹತ್ಯೆಗೆ ಶರಣಾಗಿದ್ದಾರೆ. ಇನ್ನು ನಿನ್ನೆ ಅವರಿಗೆ ಸೌದತ್ತಿಗೆ ವರ್ಗಾವಣೆಯಾಗಿತ್ತು ವರ್ಗಾವಣೆ ಕುರಿತಾಗಿ ಕೂಡ ಅವರು ಆತ್ಮಹತ್ಯೆ ಮಾಡಿಕೊಂಡಿದ್ದಾರೆ ಎಂದು ಪೊಲೀಸರು ತಿಳಿಸಿದ್ದಾರೆ.**

## ಜಿಲ್ಲೆಯ ಈ ಪ್ರದೇಶಗಳಲ್ಲಿ ವಿದ್ಯುತ್ ವ್ಯತ್ಯಯ

• **ಉದಯವಾಹಿನಿ, ಶಿವಮೊಗ್ಗ**

ನವೆಂಬರ್.7ರಂದು ವಿದ್ಯುತ್ ನಿರ್ವಹಣಾ ಕಾಮಗಾರಿಯ ಹಿನ್ನಲೆಯಲ್ಲಿ ಕೆಲ ಪ್ರದೇಶಗಳಲ್ಲಿ ವಿದ್ಯುತ್ ವ್ಯತ್ಯಯ ಉಂಟಾಗಲಿದೆ ಎಂಬುದಾಗಿ ಮೆಸ್ಕಾಂ ತಿಳಿಸಿದೆ.

ಈ ಕುರಿತು ಮೆಸ್ಕಾಂ ಪತ್ರಿಕಾ ಪ್ರಕಟಣೆಯಲ್ಲಿ ಮಾಹಿತಿ ಹಂಚಿಕೊಂಡಿದ್ದು, ನಗರದ ಗಾಂಧಿಬಜಾರ್, ಬರಮಪ್ಪನಗರ, ಎಂ.ಕೆ.ಕೆ. ರಸ್ತೆಗಳಲ್ಲಿ ಕಂಬಗಳನ್ನು ಬದಲಿಸುವ ಕಾಮಗಾರಿಯನ್ನು ಹಮ್ಮಿಕೊಂಡಿರುವುದರಿಂದ ಗಾಂಧೀಬಜಾರ್, ಸೊಪ್ಪಿನ ಮಾರ್ಕೆಟ್, ಕೆ.ಆರ್.ಪುರಂ, ಭರಮಪ್ಪನಗರ, ಎಂ.ಕೆ.ಕೆ.ರಸ್ತೆ, ಬಿ.ಹೆಚ್.ರಸ್ತೆ, ನಾಗಪ್ಪಕೇರಿ, ತಿರುಪಳಯ್ಯನಕೇರಿ, ಸಾವರ್ಕರ್ ನಗರ ಕರೆಂಟ್ ಇರೋದಿಲ್ಲ. ಅಶೋಕ ರಸ್ತೆ, ಕೋಟೆರಸ್ತೆ, ಎಸ್.ಪಿ.ಎಂ.ರಸ್ತೆ, ರಾಮಣ್ಣಶ್ರೇಷ್ಠಿ ಪಾರ್ಕ್, ಮಹಾ ರಾಜ ರಸ್ತೆ, ಲಷ್ಕರ್ ಮೊಹಲ್ಲಾ, ಓ.ಬಿ.ಎಲ್.ರಸ್ತೆ ಮತ್ತು ಸುತ್ತಮುತ್ತ ಪ್ರದೇಶಗಳಲ್ಲಿ ದಿ:07.11.2024 ರಂದು 09.00 ಘಂಟೆಯಿಂದ ಸಂಜೆ 6.00 ಘಂಟೆಯವರೆಗೆ ವಿದ್ಯುತ್ ವ್ಯತ್ಯಯವಾಗಲಿದ್ದು, ಸಾರ್ವಜನಿಕರು ಸಹಕರಿಸುವಂತೆ ಮೆಸ್ಕಾಂ ಪ್ರಕಟಣೆ ತಿಳಿಸಿದೆ.

## ರೌಡಿ ಶೀಟರ್‌ನನ್ನೇ ಅತಿಥಿ ಶಿಕ್ಷಕನಾಗಿ ನೇಮಕ

• **ಉದಯವಾಹಿನಿ, ಯಾದಗಿರಿ**

ಜಿಲ್ಲೆಯಲ್ಲಿ ಶಾಲಾ ಶಿಕ್ಷಣ ಇಲಾಖೆಯಿಂದ ಮಹಾಯಡವಟ್ಟು ಮಾಡಲಾಗಿದೆ. ರೌಡಿ ಶೀಟರ್ ಪಟ್ಟಿಯಲ್ಲಿದ್ದಂತವನನ್ನೇ ಸರ್ಕಾರಿ ಶಾಲೆಗೆ ಅತಿಥಿ ಶಿಕ್ಷಕನನ್ನಾಗಿ ನೇಮಕ ಮಾಡಲಾಗಿದೆ. ಇಂತಹ ರೌಡಿ ಶೀಟರ್ ಉಪಟಳಕ್ಕೆ ಬೇಸತ್ತು ಆ ಶಾಲೆಯಿಂದ ಅನೇಕ ಶಿಕ್ಷಕರು ಬೇರೆಡೆಗೆ ವರ್ಗಾವಣೆ ಮಾಡಿಕೊಂಡು ಹೋಗಿರೋದಾಗಿ ಹೇಳಲಾಗುತ್ತಿದೆ. ಯಾದಗರಿ ಜಿಲ್ಲೆಯ ಶಹಾಪುರ ತಾಲ್ಲೂಕು ರಸ್ತಾಪುರದಲ್ಲಿನ ಸರ್ಕಾರಿ ಶಾಲೆಗೆ ರೌಡಿ ಶೀಟರ್ ಭಾಗಪ್ಪ ಎಂಬುವರನ್ನೇ ಅತಿಥಿ ಶಿಕ್ಷಕರನ್ನಾಗಿ ನೇಮಿಸಲಾಗಿದೆ. ಕಳೆದ ಐದು ವರ್ಷಗಳಿಂದ ಹಿಂದಿ ಭಾಷಾ ಅತಿಥಿ ಶಿಕ್ಷಕನಾಗಿ ರೌಡಿ ಶೀಟರ್ ಭಾಗಪ್ಪ ಕೆಲಸ ಮಾಡುತ್ತಿದ್ದಾರೆ. 2017ರಲ್ಲಿ ಭಾಗಪ್ಪ ಅವರ ವಿರುದ್ಧ ರೌಡಿ ಶೀಟರ್ ಓಪನ್ ಮಾಡಲಾಗಿತ್ತು. ಈ ವಿಷಯ ಗೊತ್ತಿದ್ದರೂ, ಶಾಲಾ ಶಿಕ್ಷಣ ಇಲಾಖೆ ಮಾತ್ರ ಹಿಂದಿ ಭಾಷಾ ಅತಿಥಿ ಶಿಕ್ಷಕರನ್ನಾಗಿ ಭಾಗಪ್ಪ ಅವರನ್ನು ನೇಮಕ ಮಾಡಿ ಮಹಾ ಎಡವಟ್ಟು ಮಾಡಿದೆ. ಕುಡಿದು ಬಂದು ಶಿಕ್ಷಕರಿಗೆ, ವಿದ್ಯಾರ್ಥಿಗಳ ಜೊತೆಗೆ ರೌಡಿ ಶೀಟರ್ ಭಾಗಪ್ಪ ಅಸಭ್ಯ ವರ್ತನೆ ಕೂಡ ತೋರುತ್ತಿದ್ದಾರಂತೆ ಅಂತೆ. ಇದೇ ಕಾರಣಕ್ಕಾಗಿ ಅವರನ್ನು ಅತಿಥಿ ಶಿಕ್ಷಕರ ಹುದ್ದೆಯಿಂದ ವಜಾಗೊಳಿಸುವಂತೆ ಯಾದಗಿರಿ ಡಿಸಿಗೂ ದೂರು ನೀಡಲಾಗಿದೆ.

## ತುಕಾರಾಂ ಆಡಳಿತದಲ್ಲಿ ಸಂಡೂರು ಅಭಿವೃದ್ಧಿಯಾಗಿದೆ: ಡಿಕೆ ಶಿವಕುಮಾರ್

• **ಉದಯವಾಹಿನಿ, ಬಳ್ಳಾರಿ**

ಸಂಸದ ತುಕಾರಾಂ ಬಂದ ಮೇಲೆ ಸಂಡೂರು ಅಭಿವೃದ್ಧಿಯಾಗಿದೆ. ಗ್ಯಾರಂಟಿ ಯೋಜನೆಗಳು ಜನರಿಗೆ ತಲುಪಿವೆ. ಇದು ಚುನಾವಣೆಯಲ್ಲಿ ಕಾಂಗ್ರೆಸ್‌ಗೆ ಸಾಕಷ್ಟು ಪೂರಕವಾಗಲಿದೆ. ಬಿಜೆಪಿ ಬಗ್ಗೆ ಸಂಡೂರು ಜನ ಯಾಮಾರಬಾರದು ಎಂದು ಪ್ರಚಾರ ಬಳಿಕ ಡಿಸಿಎಂ ಡಿ.ಕೆ.ಶಿವಕುಮಾರ್ ಹೇಳಿದರು. ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ನಾವು ಸಂಡೂರನ್ನು ಬೀಜಿಂಗ್ ಮಾಡಲ್ಲ ಸಂಡೂರು ಅಭಿವೃದ್ಧಿ ಮಾತ್ರ ಮಾಡುತ್ತೇವೆ.



ಉದಯವಾಹಿನಿ ಚಿತ್ರ

ಮೊನ್ನೆ ಸಂಡೂರಿನ ಬರುವ ಆದಾಯದಿಂದ ಸಂಡೂರನ್ನು ಬೀಜಿಂಗ್ ಮಾಡಬಹುದು ಎಂದಿದ್ದರು. ಅಧಿಕಾರ ಇದ್ದಾಗ ಜನಾರ್ದನ ರೆಡ್ಡಿ ಅಭಿವೃದ್ಧಿ ಯಾಕೆ ಮಾಡಿಲ್ಲ ಎಂದು ಜನಾರ್ದನ ರೆಡ್ಡಿ ಗೆ ಟಾಂಗ್ ನೀಡಿದರು.ವಕ್ಫ್ ವಿಚಾರದಲ್ಲಿ ಬಿಜೆಪಿ ರಾಜಕೀಯ ಮಾಡುತ್ತಿದೆ. ಈಗಾಗಲೇ ಸಿಎಂ ಹೇಳಿದ್ದಾರೆ. ಯಾವ ರೈತರ ಭೂಮಿ ಕಸಿದುಕೊಳ್ಳಲ್ಲ ಎಂದರು. ಬೆಳಗಾವಿಯಲ್ಲಿ ಎಫ್‌ಡಿಸಿ ಅಧಿಕಾರಿ ಆತ್ಮಹತ್ಯೆ ವಿಚಾರಕ್ಕೆ ಪ್ರತಿಕ್ರಿಯೆ ನೀಡಿ, ಇದರ ಮಾಹಿತಿ ಇಲ್ಲ ಎಂದರು. ಅಬಕಾರಿ ಇಲಾಖೆಯ ವರ್ಗಾವಣೆ ದಂಧೆ ವಿಚಾರ ಗೊತ್ತಿಲ್ಲ ತಿಳಿದುಕೊಂಡು ಮಾತನಾಡುವೆ ಎಂದರು.

## ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಸಿಬ್ಬಂದಿ ಕೊರತೆ: ರೋಗಿಗಳ ಪರದಾಟ

• **ಉದಯವಾಹಿನಿ ಮುಧೋಳ**

ತಾಲ್ಲೂಕಿನ ಶಿರೋಳ ಗ್ರಾಮದ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿನ ಸಿಬ್ಬಂದಿ ಕೊರತೆ ಯಿಂದಾಗಿ ಗ್ರಾಮದ ರೋಗಿಗಳು ಗುಣಮಟ್ಟದ ಚಿಕಿತ್ಸೆಗಾಗಿ ನಗರ ಪ್ರದೇಶವನ್ನು ಅವಲಂಭಿಸುವಂತಾಗಿದೆ. ತಾಲ್ಲೂಕಿನಲ್ಲಿಯೇ ದೊಡ್ಡ ಗ್ರಾಮವೆನಿಸಿಕೊಂಡುರುವ ಶಿರೋದಲ್ಲಿನ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಹಲವಾರು ವರ್ಷಗಳಿಂದ ಸಿಬ್ಬಂದಿ ಕೊರತೆ ಸಮಸ್ಯೆ ಕಾಡುತ್ತಿದೆ.

ಬಡವರು, ನಿರ್ಗತಿಕರು ಸಣ್ಣಪುಟ್ಟ ಆರೋಗ್ಯ ಸಮಸ್ಯೆಗೂ ಕೂಡಾನಗರ ಅಥವಾ ಖಾಸಗಿ ಆಸ್ಪತ್ರೆಯತ್ತ ಮುಖಮಾಡುವಂತಾಗಿದೆ.

**15 ಹುದ್ದೆಗಳಲ್ಲಿ 10 ಖಾಲಿ :** ಸದ್ಯ ಶಿರೋಳ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಒಟ್ಟು 15ಹುದ್ದೆಗಳಿವೆ. ಅವುಗಳಲ್ಲಿ ಮುಖ್ಯ ವೈದ್ಯಾಧಿಕಾರಿ, ಸ್ಟಾಫ್ ನರ್ಸ್, ಎಫ್ಡಿಸಿ ಹಾಗೂ ಗ್ರುಪ್ ಡಿ ಹುದ್ದೆ ಸೇರಿ ಕೇವಲ ಐದು ಜನ ಸಿಬ್ಬಂದಿ ಕಾರ್ಯನಿರ್ವಹಿಸುತ್ತಾರೆ. ಇನ್ನುಳಿದಂತೆ 3 ಸಮುದಾಯ ಆರೋಗ್ಯಾಧಿಕಾರಿ, 2ಹೆಲ್ತ್ ಇನ್ಸಪೆಕ್ಟರ್, 1ಎಲ್ ಎಚ್ ವಿ ಸಿನೀಯರ್, 2 ಸಮುದಾಯ ಆರೋಗ್ಯ ಅಧಿಕಾರಿ, 1 ಲ್ಯಾಬ್ ಟೆಕ್ನಿಶಿಯನ್, 1 ಫಾರ್ಮಸಿ ಆಫೀಸರ್ ಹುದ್ದೆಗಳು ಖಾಲಿ ಇವೆ.





ಉದಯವಾಹಿನಿ ಚಿತ್ರ

ಇರುವ ಐದು ಜನ ಸಿಬ್ಬಂದಿ ನಿರಂತರವಾಗಿ ಸೇವೆಯಲ್ಲಿ ತೊಡಗಿದರೂ ಸಾರ್ವಜನಿಕರನ್ನು ಸಂಭಾಳಿಸುವುದು ಕಷ್ಟಕರವಾಗಿದೆ. ಆಸ್ಪತ್ರೆಗೆ ಹೆಚ್ಚಿನ ಸಿಬ್ಬಂದಿ ಒದಗಿಸಿ ಎಂದು ಗ್ರಾಮಸ್ಥರು ಮೌಖಿಕವಾಗಿ ಮನವಿ ಮಾಡಿಕೊಂಡರು ಜನಪ್ರತಿನಿಧಿಗಳು ಹಾಗೂ ಹಿರಿಯ ಅಧಿಕಾರಿಗಳು ಜಾಣಮೌನ ವಹಿಸಿರುವುದು ಸಾರ್ವಜನಿಕರ ಅಸಮಾಧಾನಕ್ಕೆ ಕಾರಣವಾಗಿದೆ.

**ಪೂರ್ಣಪ್ರಮಾಣದ ಆರೋಗ್ಯ ಕೇಂದ್ರವಾಗಲಿ**

**ಶಿರೋಳ ಪ್ರಾಥಮಿಕ ಆರೋಗ್ಯ ಕೇಂದ್ರ ಈ ಮೊದಲು ಉತ್ತೂರು ಪ್ರಾಥಮಿಕ ಆರೋಗ್ಯ ಕೇಂದ್ರದ ಉಪಕೇಂದ್ರವಾಗಿ ಕಾರ್ಯ ನಿರ್ವಹಿಸುತ್ತಿತ್ತು. ಕೆಲ ವರ್ಷಗಳ ಹಿಂದೆ ಅದರಿಂದ ಬೇರ್ಪಡಿಸಿ ಸ್ವತಂತ್ರ ಪ್ರಾಥಮಿಕ ಆರೋಗ್ಯ ಕೇಂದ್ರವನ್ನಾಗಿಸಲಾಗಿದೆ. ಆದರೆ ಇದೂವರೆಗೆ ಒಂದು ಪ್ರಾಥಮಿಕ ಆರೋಗ್ಯ ಕೇಂದ್ರಕ್ಕೆಬೇಕಾದ ಅಗತ್ಯ ಸೌಲಭ್ಯ ದೊರಕಿಸಿಕೊಡುವಲ್ಲಿ ಎಲ್ಲಾ ಜನಪ್ರತಿನಿಧಿಗಳು ನಿರ್ಲಕ್ಷ್ಯ ತೋರಿದ್ದಾರೆ. ನಾಮಕಾವಸ್ತೆ ಪ್ರಾಥಮಿಕ ಆರೋಗ್ಯ ಕೇಂದ್ರವೆನಿಸಿರುವ ಶಿರೋಳ ಆಸ್ಪತ್ರೆಗೆ ಶಾಶ್ವತವಾಗಿ ಕಾಯಕಲ್ಪ ದೊರಕಿಸಿಕೊಡಬೇಕಿದೆ.**

## 3 ದಿನದಿಂದ ಕೆಪಿಸಿ ಭದ್ರತಾ ಸಿಬ್ಬಂದಿ ನಾಪತ್ತೆ ಮಾಣಿ ಡ್ಯಾಂ ಬಳಿ ಬೈಕ್ ಪತ್ತೆ

• **ಉದಯವಾಹಿನಿ, ಹೊಸನಗರ**

ತಾಲ್ಲೂಕಿನ ನಗರ ಹೋಬಳಿಯ ಯಡೂರು ಗ್ರಾಮದ ಗೌಟಾಣಿವಾಸಿ, ಕೆಪಿಸಿ ಗುತ್ತಿಗೆ ಭದ್ರತಾ ಸಿಬ್ಬಂದಿ ಭರತ್ (48) ಕಳೆದ ಮೂರು ದಿನದಿಂದ ನಾಪತ್ತೆಯಾದ ಘಟನೆ ನಡೆದಿದೆ.

ರಾತ್ರಿ ಸುಮಾರು 9 ಗಂಟೆಗೆ ಮನೆಯಿಂದ ಹೊರಟ ಭರತ್ ವಾಪಾಸ್ ಮನೆಗೆ ಬಂದಿಲ್ಲ. ಮಾಣಿ ಡ್ಯಾಂ ಸಮೀಪ ಭರತ್ ಬೈಕ್ ಕಂಡುಬಂದಿದ್ದು ಜಲಾಶಯ ವ್ಯಾಪ್ತಿಯಲ್ಲಿ ಶೋಧ ಕಾರ್ಯ ನಡೆಸಲಾಗುತ್ತಿದೆ.

ತೀರ್ಥಹಳ್ಳಿ ಅಗ್ನಿ ಶಾಮಕ ದಳ, ಮುಳುಗು ತಜ್ಞ ಈಶ್ವರ ಮಲ್ಪೆ ತಂಡ ಕೂಡ ಶೋಧಕಾರ್ಯ ನಡೆಸುತ್ತಿದ್ದಾರೆ. ಜಲಾಶಯದ ಬುಡ ದಲ್ಲಿ 70 ಅಡಿಗೂ ಹೆಚ್ಚು ಆಳವಿದ್ದು ಶೋಧ ಕಾರ್ಯ ಸವಾಲಾಗಿದೆ.



ಉದಯವಾಹಿನಿ ಚಿತ್ರ

ಭರತ್ ಕೆಪಿಸಿಯ ವಾರಾಹಿ ಮಾಣಿ ಡ್ಯಾಂನಲ್ಲಿ ಹತ್ತು ವರ್ಷಗಳಿಂದ ಸೇವೆ ಸಲ್ಲಿಸುತ್ತಿದ್ದ. ಭರತ್‌ಗೆ 9 ವರ್ಷದ ಗಂಡು ಮಗು ಇದ್ದು, ಪತ್ನಿ ಪೂರ್ಣೇಶ್ವರಿ ಬೆಂಗಳೂರಿನ ಕಿಮ್ಸ್ ಆಸ್ಪತ್ರೆಯಲ್ಲಿ ಸ್ಟಾಫ್ ನರ್ಸ್ ಆಗಿದ್ದಾರೆ. ನಗರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು ಪತ್ತೆಕಾರ್ಯ ಮುಂದುವರೆದಿದೆ.

## ಓದಿದ್ದು 0.. ಮಾಡಿದ್ದು ಇಡೀ ರಾಜ್ಯವೇ ಕೊಂಡಾಡುವಂತಹ ಅದ್ಭುತ ಸಾಧನೆ

### ಗ್ರಾಮೀಣ ಮಹಿಳೆಯೊಬ್ಬರು ವಿದ್ಯಾಭ್ಯಾಸ ಮಾಡದೆ ಕರ್ನಾಟಕ ಜಾನಪದ ಅಕಾಡೆಮಿ ಪ್ರಶಸ್ತಿ ಪಡೆದು ಎಲ್ಲರಿಗೂ ಮಾದರಿ

• **ಉದಯವಾಹಿನಿ, ಜಗಳೂರು**


ಈಗಿನ ಕಾಲದಲ್ಲಿ ಎರೆಡ್ಮೂರು ಪದವಿ ಪಡೆದರೂ ಬಹುತೇಕ ಮಂದಿಗೆ ಜಾನಪದ ಕಲೆ ಬಗ್ಗೆ ಅಷ್ಟಾಗಿ ಗೊತ್ತಿರುವುದಿಲ್ಲ. ಆದರೆ, ಇಲ್ಲೊಬ್ಬ ಗ್ರಾಮೀಣ ಮಹಿಳೆಯೊಬ್ಬರು ಯಾವುದೇ ವಿದ್ಯಾಭ್ಯಾಸ ಮಾಡಿಲ್ಲ, ಸಂಗೀತ ಶಾಲೆಗೂ ಹೋಗಿಲ್ಲ. ಆದರೂ ಜಾನಪದ ಗೀತೆಗಳನ್ನು ಮೈಗೂಡಿಸಿಕೊಂಡು ಈ ಮೂಲಕ ಇದೀಗ ಕರ್ನಾಟಕ ಜಾನಪದ ಅಕಾಡೆಮಿ ಪ್ರಶಸ್ತಿ ಪಡೆದು ಎಲ್ಲಾರಿಗೂ ಮಾದರಿಯಾಗಿದ್ದಾರೆ.

ಜಗಳೂರು ತಾಲ್ಲೂಕು ಬಯಲು ಸೀಮೆಯಾಗಿದ್ದು, ಇಲ್ಲಿ ವಿವಿಧ ಬುಡಕಟ್ಟು ಜನಾಂಗದವರನ್ನು ಕಾಣಬಹುದಾಗಿದೆ. ಅದರಲ್ಲೂ ಬಂಜಾರ ಬುಡಕಟ್ಟು ಹಾಗೂ ಕಾಡುಗೊಲ್ಲ ಬುಡಕಟ್ಟು ಆಚರಣೆಗಳ ಪ್ರಧಾನ ನೆಲೆಯಾಗಿದೆ. ಇದೀಗ ಇದೇ ತಾಲ್ಲೂಕಿನ ತೋರಣಗಟ್ಟೆ ಗ್ರಾಮದ ಕಾಟಮ್ಮ ಎಂಬ ಮಹಿಳೆ ಜಾನಪದ ಅಕಾಡೆಮಿ ಪ್ರಶಸ್ತಿ ಪಡೆದು ಗ್ರಾಮದ ಹೆಸರನ್ನು ಉನ್ನತ ಮಟ್ಟಕ್ಕೆ ಕೊಂಡೊಯ್ದಿದ್ದಾರೆ.

ಜಾನಪದ ಕಲೆಯನ್ನು ಮೈಗೂಡಿಸಿಕೊಳ್ಳಬೇಕೆಂದರೆ ಸುಲಭದ ಮಾತಲ್ಲ, ಅದಕ್ಕೆ ಸಾಕಷ್ಟು ಶ್ರಮ, ತರಬೇತಿ ಬೇಕಾಗುತ್ತದೆ. ಆದರೆ, ಕಾಟಮ್ಮ ಮಾತ್ರ ಯಾವುದೇ ತರಬೇತಿ ಇಲ್ಲದೆ, ತನ್ನ ತಾಯಿ ಹಾಡುತ್ತಿದ್ದ ಸೋಬಾನೆ ಪದಗಳನ್ನು ಕೇಳುತ್ತಾ ಅವುಗಳನ್ನು ಹಾಗೆಯೇ ಕಲಿತು ಮೈಗೂಡಿಸಿಕೊಂಡು ಬಂದವರಾಗಿದ್ದಾರೆ. ಈಗಲೂ ಸಹ ಜಗಳೂರು ತಾಲ್ಲೂಕು ಸೇರಿದಂತೆ ವಿವಿಧ ತಾಲ್ಲೂಕುಗಳ ಗ್ರಾಮಗಳಲ್ಲಿ ಯಾವುದೇ ಜಾತ್ರೆ, ಮದುವೆ ಕಾರ್ಯಕ್ರಮ ಸೇರಿದಂತೆ ಹಲವು ಕಾರ್ಯಕ್ರಮಗಳಲ್ಲಿ ಭಾಗವಹಿಸಿ ಸ್ವಲ್ಪನೂ ತಪ್ಪದೇ ಕಿವಿಗೆ ಇಂಪು ನೀಡುವಂತೆ ಪದಗಳನ್ನು ಹಾಡುತ್ತಿದ್ದಾರೆ.

**ನಮ್ಮ ಅಮ್ಮ ಗೌರಮ್ಮ ದೊಡ್ಡ ಹಾಡುಗಾರ್ತಿಯಾಗಿದ್ದರು. ಬಾಲ್ಯದಲ್ಲೇ ನನ್ನನ್ನು ಜಾತ್ರೆ, ಪರವು ಮುಂತಾದ ಸಮಾರಂಭಗಳಿಗೆ ಜೊತೆಗೆ ಕರೆದುಕೊಂಡು ಹೋಗುತ್ತಿದ್ದರು. ಇಡೀ ರಾತ್ರಿ ಸಾವಿರಾರು ಹಾಡುಗಳನ್ನು ನೀರು ಕುಡುದಷ್ಟೇ ಸುಲಭವಾಗಿ ಹಾಡುತ್ತಿದ್ದರು. ಅಮ್ಮನಿಂದ ನನಗೆ ಈ ಕಲೆ ಬಂದಿದೆ. ಮೆಲ್ಲಜ್ಜ ಸೇರಿದಂತೆ ಅನೇಕ ಸಂತರ ಲೆಕ್ಕವಿಲ್ಲದಷ್ಟು ಹಾಡುಗಳನ್ನು ಇಂದಿಗೂ ಇಷ್ಟಪಟ್ಟು ಹಾಡುತ್ತಾ ಬಂದಿದ್ದೇನೆ**

**-ಕಾಟಮ್ಮ, ಸಾಧಕಿ**



ಉದಯವಾಹಿನಿ ಚಿತ್ರ

**ಕಾಟಮ್ಮನವರ ಅದ್ಭುತ ಕಲೆಗಳಿವು:** ಅಷ್ಟೇ ಅಲ್ಲದೆ, ಕಾಟಮ್ಮ ಅವರು ಬುಡಕಟ್ಟು ಜನಾಂಗಕ್ಕೆ ಸಂಬಂಧಿಸಿದಂತಹ ಇನ್ನೂ ಮುಂತಾದ ಕಲೆಗಳನ್ನು ಮೈಗೂಡಿಸಿಕೊಂಡಿದ್ದಾರೆ.

ಗ್ರಾಮೀಣ ಪ್ರದೇಶದಲ್ಲಿ ನಡೆಯುವ ಮದುವೆ, ದೇವರ ಉತ್ಸವ, ಪರುವು, ಜಾತ್ರೆಗಳಲ್ಲಿ ಜನಪದ ಹಾಡು, ಹಸೆಯ ಮೂಲಕ ಗಮನ ಸೆಳೆಯುತ್ತಿದ್ದಾರೆ.

ಎಲೆಮರೆ ಕಾಯಿಯಂತಿರುವ ಹಳ್ಳಿಗಾಡಿನ ಹಲವು ಪ್ರತಿಭೆಗಳು ಇಂದಿಗೂ ಗ್ರಾಮೀಣ ಪ್ರದೇಶದಲ್ಲಿ ತಮ್ಮ ಪೂರ್ವಜರಿಂದ ಬಳುವಳಿಯಾಗಿ ಬಂದಿರುವ ಹಾಡುಗಾರಿಕೆ ಸೇರಿದಂತೆ ಜನಪದ ಕಲೆಯನ್ನು ಉಳಿಸಿ, ಬೆಳೆಸುವ ಕಾಯಕದಲ್ಲಿ ನಿರತರಾಗಿದ್ದಾರೆ. ಈ ಮೂಲಕ ತಮ್ಮ ಗ್ರಾಮ ಅಷ್ಟೇ ಅಲ್ಲದೇ, ಈ ಮೂಲಕ ಇಡೀ ನಾಡಿನ ಘನತೆಯನ್ನು ಎತ್ತಿಹಿಡಿಯುವಂತಹ ಕೆಲಸವನ್ನು ಮಾಡುತ್ತಿದ್ದಾರೆ.

**ಸರಳವಾಗಿ ಹಾಡುತ್ತಾರೆ**

**ಸಹೋದರಿ ಶಾಂತಾ ವೀರಮ್ಮ, ಬಂಧುಗಳಾದ ಬಾಲಮ್ಮ, ಬಡಮ್ಮ ಅವರ ತಂಡ ಕಟ್ಟಿಕೊಂಡು ಮಧ್ಯ ಕರ್ನಾಟಕದ ಪ್ರಸಿದ್ಧ ಜಾನಪದ ಸಾಂಸ್ಕೃತಿಕ ವೀರರಾದ ಕಾಟಣ್ಣ, ದೊಡ್ಡಣ್ಣ, ಬಡಣ್ಣ, ಚಿಕ್ಕಣ್ಣ ಕಾವ್ಯಗಳನ್ನು ಹಬ್ಬ-ಹರಿದಿನಗಳ ಸಂದರ್ಭದಲ್ಲಿ ಎಷ್ಟೇ ದಿನಗಳಾದರೂ ಮರೆಯದೇ ಸರಳವಾಗಿ ಹಾಡುತ್ತಾರೆ. ವಿಶೇಷ ಅಂದ್ರೆ, ಈ ಭಾಗದಲ್ಲಿ ಮಳೆ ಮಲ್ಲಜ್ಜ ಎಂದೇ ಆರಾಧನೆಗೆ ಒಳಗಾಗಿರುವ ಅವಧೂತ ಪರಂಪರೆಯ ಮೆಲ್ಲಜ್ಜನ ಬಗ್ಗೆ ಕಾಟಮ್ಮ ಹಾಡುವ ಪದಗಳು ಹಾಗೆಯೇ ಅಚ್ಚ ಹಸಿರಿನಂತೆ ಉಳಿದಿವೆ.**

**ಎಲೆಮರೆ ಕಾಯಿಯಂತಿರುವ ಹಳ್ಳಿಗಾಡಿನ ಹಲವು ಪ್ರತಿಭೆಗಳು**

ಇಂತಹ ಅದ್ಭುತ ಪ್ರತಿಭೆಯಾಗಿರುವ ತಾಲ್ಲೂಕಿನ ತೋರಣಗಟ್ಟೆ ಗ್ರಾಮದ ಕಾಟಮ್ಮ ಅವರಿಗೆ ಪ್ರಸಕ್ತ ಸಾಲಿನ ಸಾಲಿನ ಕರ್ನಾಟಕ ಜಾನಪದ ಆಕಾಡೆಮಿಯ ಪ್ರಶಸ್ತಿ ಒಲಿದುಬಂದಿದೆ.

ಈಗಿನ ಕಾಲದಲ್ಲಿ 10 ರೂಪಾಯಿ ಸಹಾಯ ಮಾಡಿ 1,000 ಪ್ರಚಾರ ಗಿಟ್ಟಿಸಿಕೊಳ್ಳುವವರನ್ನು ನಾವು ಪ್ರತಿನಿತ್ಯ ಕಾಣುತ್ತಲೇ ಇರುತ್ತೇವೆ. ಇಂತಹವರ ನಡುವೆಯೂ ಯಾವುದೇ ಪ್ರಚಾರದ ಹಂಗಿಲ್ಲದೆ, 4 ದಶಕಗಳಿಂದ ಸೋಬಾನೆ ಪದ, ತತ್ವಪದ ಮತ್ತು ದೇವರ ಪದಗಳ ಮೂಲಕ ಜನಪದ ಇತಿಹಾಸವನ್ನು ಕಾಪಾಡಿಕೊಂಡು ಬಂದ ಕೀರ್ತಿ ಕಾಟಮ್ಮ ಅವರಿಗೆ ಸಲ್ಲುತ್ತದೆ.

# 16000 ಮದರಸಾಗಳಿಗೆ ರಿಲೀಫ್; 17 ಲಕ್ಷ ವಿದ್ಯಾರ್ಥಿಗಳಿಗೆ ಅನುಕೂಲ

## ಉತ್ತರ ಪ್ರದೇಶ ಸರ್ಕಾರ 2004ರಲ್ಲಿ ರೂಪಿಸಿದ್ದ ಮದರಸಾ ಕಾನೂನು ಸರಿ ಇದೆ ಎಂದ ಸುಪ್ರೀಂ ಕೋರ್ಟ್

**ಸುಪ್ರೀಂ ಕೋರ್ಟ್ ಮಹತ್ವದ ತೀರ್ಪು**

**ಹೊಸದಿಲ್ಲಿ:** ಉತ್ತರ ಪ್ರದೇಶ ಸರ್ಕಾರ 2004ರಲ್ಲಿ ರೂಪಿಸಿದ್ದ ಮದರಸಾ ಕಾಯ್ದೆಯ ಸಿಂಧುತ್ವವನ್ನು ಸುಪ್ರೀಂ ಕೋರ್ಟ್ ಮಂಗಳವಾರ ಎತ್ತಿಹಿಡಿದಿದೆ. ಈ ಮೂಲಕ ಕಾಯ್ದೆಯು ಅಸಾಂವಿಧಾನಿಕ ಎಂಬ ಅಲಹಾಬಾದ್ ಹೈಕೋರ್ಟ್ ಆದೇಶವನ್ನು ತಳ್ಳಿಹಾಕಿದೆ. ಮದರಸಾ ಕಾನೂನು ಅಸಾಂವಿಧಾನಿಕ ಎಂದು ಘೋಷಿಸಿ ಮಾರ್ಚ್ 22 ರ ಅಲಹಾಬಾದ್ ಹೈಕೋರ್ಟ್ ಆದೇಶ ನೀಡಿತ್ತು. ಈ ಆದೇಶ ಪ್ರಶ್ನಿಸಿ ಅಜುಂ ಖಾದ್ರಿ ಸೇರಿದಂತೆ ಎಂಟು ಮಂದಿ ಅರ್ಜಿದಾರರು ಸುಪ್ರೀಂ ಕೋರ್ಟ್ ಮೆಟ್ಟಿಲೇರಿದ್ದರು. ಕೋರ್ಟ್ ಆದೇಶದಿಂದ ಮದರಸಾದಲ್ಲಿರುವ 17 ಲಕ್ಷ ಮಕ್ಕಳ ಭವಿಷ್ಯ ಅತಂತ್ರ ಸ್ಥಿತಿ ಯಲ್ಲಿದೆ ಎಂದು ಅರ್ಜಿದಾರರು ವಾದಿಸಿದ್ದರು. ಈ ಬಗ್ಗೆ ಸಿಜೆಐ ಡಿ.ವೈ.ಚಂದ್ರಚೂಡ್, ನ್ಯಾ.ಜೆ.ಬಿ.ಪರ್ದಿವಾಲಾ, ನ್ಯಾ.ಮನೋಜ್ ಮಿಶ್ರಾ ಅವರನ್ನೊಳಗೊಂಡ ತ್ರಿಸದಸ್ಯ ಪೀಠವು ತೀರ್ಪು ನೀಡಿದೆ.

**ಧಾರ್ಮಿಕ ತರಬೇತಿಯಿಂದ ಅಸಾಂವಿಧಾನಿಕ ವಾಗಲ್ಲ:** ಮದರಸಾಗಳ ಕಾರ್ಯನಿರ್ವಹಣೆಗೆ ಸಂಬಂಧಿಸಿದಂತೆ ಉತ್ತರ ಪ್ರದೇಶದ ಮದರಸಾ ಕಾಯ್ದೆ 2004 ಅನ್ನು ಸುಪ್ರೀಂ ಕೋರ್ಟ್ ಎತ್ತಿ ಹಿಡಿದಿದೆ. ಮಾತ್ರ ವಲ್ಲದೇ ಅಲಹಾಬಾದ್ ಹೈ ಕೋರ್ಟ್ ತೀರ್ಪು ಅಸಾಂವಿಧಾನಿಕವಾಗಿದ್ದು ಮತ್ತು ಜಾತ್ಯತೀತತೆಯ ತತ್ವವನ್ನು ಉಲ್ಲಂಘಿಸುತ್ತದೆ ಎಂದು ಹೇಳಿದೆ. ಮದರಸಾಗಳಿಗೆ ಸಂಬಂಧಿಸಿದ ಕಾನೂನು ಕೆಲ ಧಾರ್ಮಿಕ ತರಬೇತಿ ಒಳಗೊಂಡಿರುವ ಮಾತ್ರಕ್ಕೆ ಅದು ಅಸಾಂವಿಧಾನಿಕ ವಾಗುವುದಿಲ್ಲ. ಉತ್ತರ ಪ್ರದೇಶದಲ್ಲಿ ಅಲ್ಪಸಂಖ್ಯಾತರ ಹಕ್ಕುಗಳನ್ನು ರಕ್ಷಿಸುವುದಾಗಿದ್ದು, ವಿದ್ಯಾರ್ಥಿಗಳು ಪಾಸ್ ಆಗಿ, ಉತ್ತಮ ಜೀವನ ಪಡೆಯುವಂತೆ ನೋಡಿಕೊಳ್ಳುವುದು ರಾಜ್ಯ ಸರ್ಕಾರದ ಕರ್ತವ್ಯ ಆಗಿದೆ ಎಂದು ನ್ಯಾಯಪೀಠ ಹೇಳಿದೆ.



**16 ಸಾವಿರ ಮದರಸಾಗಳಿಗೆ ರಿಲೀಫ್:** ನ್ಯಾಯಾಲಯದ ಈ ತೀರ್ಪಿನಿಂದ ಉತ್ತರ ಪ್ರದೇಶದ ಸುಮಾರು 16,000 ಮದರಸಾಗಳಿಗೆ ಬಿಗ್ ರಿಲೀಫ್ ಸಿಕ್ಕಂತಾಗಿದೆ. ಇನ್ನು ಮುಂದೆ ಯಾವುದೇ ತೊಂದರೆಯಿಲ್ಲದೆ ಅವುಗಳು ಕಾರ್ಯಾಚರಣೆ ನಡೆಸಬಹುದು. ಮದರಸಾಗಳಲ್ಲಿ ಶಿಕ್ಷಣದ ಗುಣಮಟ್ಟವನ್ನು ರಾಜ್ಯ ಸರ್ಕಾರ ನಿಯಂತ್ರಿಸಬಹುದು. ಶಿಕ್ಷಣದ ಗುಣಮಟ್ಟಕ್ಕೆ ಸಂಬಂಧಿಸಿದ ಸರ್ಕಾರದ ನಿಯಮಗಳು ಮದರಸಾಗಳ ಆಡಳಿತದಲ್ಲಿ ಹಸ್ತಕ್ಷೇಪ ಮಾಡುವಂತಿಲ್ಲ ಎಂದು ಕೋರ್ಟ್ ಹೇಳಿದೆ. ಜತೆಗೆ ಶಿಕ್ಷಣದ ಗುಣಮಟ್ಟವನ್ನು ಕಾಪಾಡಿಕೊಳ್ಳಲು ಮದರಸಾಗಳಿಗೆ ಸೂಚಿಸಿದ್ದಾರೆ.

**ಸಿಎಂಗೆ ಭಾರೀ ಹಿನ್ನಡೆ**

**ಮದರಸಾಗಳಲ್ಲಿ ಧಾರ್ಮಿಕ ಕಾರ್ಯಾಚರಣೆ ವಿರೋಧಿಸಿ ಅವುಗಳ ವಿರುದ್ಧ ಕ್ರಮಕೈಗೊಳ್ಳಬೇಕು ಎನ್ನುವ ಉತ್ತರ ಪ್ರದೇಶ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್ ಸರ್ಕಾರಕ್ಕೆ ಸುಪ್ರೀಂ ಕೋರ್ಟ್ ತೀವ್ರ ಮುಖಭಂಗ ಉಂಟು ಮಾಡಿದೆ. ಇನ್ನು ಮುಂದೆ ಮದರಸಾಗಳಿಗೆ ಅಗತ್ಯ ಸಹಕಾರ ನೀಡಿ ಪದವಿ ಪಡೆದು ಬರುವುದು ವಿದ್ಯಾರ್ಥಿಗಳ ಭವಿಷ್ಯಕ್ಕೆ ಅಗತ್ಯ ನೆರವನ್ನು ಉತ್ತರ ಪ್ರದೇಶ ಸರ್ಕಾರವೇ ಮಾಡಬೇಕಿದೆ.**

**ಉತ್ತರ ಪ್ರದೇಶ ಮದರಸಾ ಕಾಯ್ದೆ 2004 ಅನ್ನು ಸುಪ್ರೀಂ ಕೋರ್ಟ್ ಸಿಂಧುತ್ವ ಮಾಡಿದೆ. ಈ ಮೂಲಕ ಅಲಹಾಬಾದ್ ಹೈಕೋರ್ಟ್ ಆದೇಶವನ್ನು ರದ್ದು ಮಾಡಿದೆ. ಜತೆಗೆ ಸರ್ಕಾರವು ಅಗತ್ಯ ಸಹಕಾರ ನೀಡುವಂತೆ ಸೂಚಿಸಿದೆ. ಈ ತೀರ್ಪಿನಿಂದ 16 ಸಾವಿರ ಮದರಸಾಗಳಿಗೆ, ಅಲ್ಲಿ ಓದುತ್ತಿರುವ 17 ಲಕ್ಷ ಮಕ್ಕಳ ಭವಿಷ್ಯಕ್ಕೆ ನೆರವಾಗಲಿದೆ ಎಂದು ಅರ್ಜಿದಾರರು ಹೇಳಿದ್ದಾರೆ.**

# ಖಾಲಿಸ್ತಾನಿ ಬೆಂಬಲಿಗರ ಪ್ರತಿಭಟನೆಯಲ್ಲಿ ಭಾಗಿಯಾಗಿದ್ದ ಪೊಲೀಸ್ ಅಧಿಕಾರಿ ಅಮಾನತು



**ಒಟ್ಟಾವ:** ಕೆನಡಾದ ಬ್ರ್ಯಾಂಪ್ಟನ್‌ನಲ್ಲಿರುವ ಹಿಂದೂ ಸಭಾ ದೇವಾಲಯದ ಬಳಿ ಖಾಲಿಸ್ತಾನಿ ಬೆಂಬಲಿಗರ ನಡೆಸಿದ ಪ್ರತಿಭಟನೆಯಲ್ಲಿ ಭಾಗಿಯಾಗಿದ್ದ ಪೊಲೀಸ್ ಅಧಿಕಾರಿ ಹರಿಂದರ್ ಸೋಹಿ ಅವರನ್ನು ಅಮಾನತುಗೊಳಿಸಲಾಗಿದೆ ಎಂದು ಮಾಧ್ಯಮಗಳು ವರದಿ ಮಾಡಿವೆ. ಖಾಲಿಸ್ತಾನ ಧ್ವಜಗಳನ್ನು ಹಿಡಿದಿದ್ದ ಪ್ರತಿಭಟನಕಾರರು ಭಾನುವಾರ ಹಿಂದೂ ದೇವಾಲಯದ ಆವರಣದೊಳಗೆ ನುಗ್ಗಿ, ಅಲ್ಲಿನ ಜನರೊಂದಿಗೆ ಘರ್ಷಣೆ ನಡೆಸಿದ್ದರು. ಜತೆಗೆ ಭಾರತೀಯ ರಾಯಭಾರಿ ಕಚೇರಿ ಆಯೋಜಿಸಿದ್ದ ಕೌನ್ಸಲರ್ ಕಾರ್ಯಕ್ರಮಕ್ಕೂ ಅಡ್ಡಿಪಡಿಸಿದ್ದರು.


ಖಾಲಿಸ್ತಾನ ಪರ ಬ್ಯಾನರ್‌ಗಳನ್ನು ಹಿಡಿದಿದ್ದ ಪ್ರತಿಭಟನಕಾರರು ಕೃತ್ಯದಲ್ಲಿ ಭಾಗಿಯಾಗಿದ್ದಾರೆ. ಸಾಮಾಜಿಕ ಮಾಧ್ಯಮಗಳಲ್ಲಿ ಹರಿದಾಡುತ್ತಿರುವ ವಿಡಿಯೊಗಳಲ್ಲಿ ಇದನ್ನು ಕಾಣಬಹುದಾಗಿದೆ ಎಂದು ಪೀಲ್ ಪ್ರದೇಶದ ಪೊಲೀಸರು ತಿಳಿಸಿದ್ದಾರೆ. ದಾಳಿ ಕುರಿತ ವರದಿಯನ್ನು ಕೆನಡಾದ ಬ್ರಾಡ್‌ಕಾಸ್ಟಿಂಗ್ ಕಾರ್ಪೊರೇಷನ್ ಮಾಡಿದೆ. ಹಿಂದೂ ಸಭಾ ಮಂದಿರ ದೇಗುಲದ ಆವರಣದಲ್ಲಿ ಜನರು ಕೈ ಕೈ ಮಿಲಾಯಿಸಿ, ಹೊಡೆದಾಡಿಕೊಂಡಿರುವ ದೃಶ್ಯ ವಿಡಿಯೊದಲ್ಲಿದೆ ಎಂದು ವರದಿಯಲ್ಲಿ ಹೇಳಲಾಗಿದೆ. ಪ್ರತಿಭಟನೆಯಲ್ಲಿ ಭಾಗಿಯಾದ ಆರೋಪದ ಮೇಲೆ ಪೊಲೀಸ್ ಅಧಿಕಾರಿಯನ್ನು ಅಮಾನತುಗೊಳಿಸಲಾಗಿದೆ.

ಸುದ್ದಿ ಸಂಸ್ಥೆಯೊಂದು ವರದಿ ಮಾಡಿದೆ. ಘಟನೆಯನ್ನು ಭಾರತದ ಹೈಕಮಿಷನ್ ಮತ್ತು ಭಾರತ ಸರ್ಕಾರ ತೀವ್ರವಾಗಿ ಖಂಡಿಸಿವೆ. ಅಲ್ಲದೆ ಪ್ರಧಾನಿ ನರೇಂದ್ರ ಮೋದಿ, ವಿಎಚ್‌ಪಿ, ಬಿಜೆಪಿ, ಕಾಂಗ್ರೆಸ್ ನಾಯಕರೂ ಖಂಡಿಸಿದ್ದಾರೆ.

# ಖಾಲಿಸ್ತಾನಿ ಬೆಂಬಲಿಗರ ಕೃತ್ಯದ ಬಗ್ಗೆ ಜೈಶಂಕರ್ ಕಳವಳ

**ಹಿಂದೂ ದೇಗುಲ ಬಳಿ ಘರ್ಷಣೆ**

**ನವದೆಹಲಿ:** ಖಾಲಿಸ್ತಾನ ಬೆಂಬಲಿಗರು ಕೆನಡಾದಲ್ಲಿ ಹಿಂದೂ ದೇವಾಲಯಗಳನ್ನು ಧ್ವಂಸಗೊಳಿಸಿರುವುದು ತೀವ್ರ ಕಳವಳಕಾರಿ ಬೆಳವಣಿಗೆ ಎಂದು ಭಾರತದ ವಿದೇಶಾಂಗ ಸಚಿವ ಎಸ್. ಜೈಶಂಕರ್ ಹೇಳಿದ್ದಾರೆ. ಆಸ್ಟ್ರೇಲಿಯಾದ ರಾಜಧಾನಿ ಕ್ಯಾನ್‌ಬೆರಾದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಭಾರತೀಯ ರಾಜತಾಂತ್ರಿಕರ ಮೇಲೆ ಕೆನಡಾ ನಿಗಾ ಇರಿಸಿರುವುದನ್ನು ಒಪ್ಪಲಾಗದು ಎಂದು ತಿಳಿಸಿದ್ದಾರೆ. ಇದೇ ವೇಳೆ ಮಾತನಾಡಿರುವ ಆಸ್ಟ್ರೇಲಿಯಾದ ವಿದೇಶಾಂಗ ಸಚಿವ ಪೆನ್ನಿ ವಾಂಗ್, ಕಳೆದ ತಿಂಗಳು ಕ್ಯಾನ್‌ಬೆರಾದಲ್ಲಿ ಎರಡು ಹಿಂದೂ ದೇವಾಲಯಗಳನ್ನು ಧ್ವಂಸ ಗೊಳಿಸಲಾತ್ತು. ಇದು ಭಾರತೀಯ ಸಮುದಾಯದವರಿಗೆ ಅಸಮಾಧಾನ ತಂದಿದೆ ಎಂದು ಹೇಳಿದ್ದಾರೆ. ಸಿಖ್ ಪ್ರತ್ಯೇಕತಾವಾದಿಗಳನ್ನು ಗುರಿಯಾಗಿಸುವ ಕುರಿತು ಕೆನಡಾದ ಆರೋಪಗಳ ಬಗ್ಗೆ ಆಸ್ಟ್ರೇಲಿಯಾ ತನ್ನ ಅಭಿಪ್ರಾಯಗಳನ್ನು ವ್ಯಕ್ತಪಡಿಸಿದೆ. ಕ್ಯಾನ್‌ಬೆರಾ ಕೆನಡಾದ ನ್ಯಾಯಾಂಗ ಪ್ರಕ್ರಿಯೆಯನ್ನು ಗೌರವಿಸುತ್ತದೆ ಎಂದು ವಾಂಗ್ ತಿಳಿಸಿದ್ದಾರೆ. ಆಸ್ಟ್ರೇಲಿಯಾದ್ಯಂತ ಎಲ್ಲಾ ಸಮುದಾಯದ ಜನರು ಸುರಕ್ಷಿತವಾಗಿರಲು, ಪರಸ್ಪರ ಗೌರವಿಸುವ ಹಕ್ಕನ್ನು ಹೊಂದಿದ್ದಾರೆ. ಜತೆಗೆ, ಜನರು ಶಾಂತಿಯುತವಾಗಿ ಪ್ರತಿಭಟಿಸುವುದು ಮತ್ತು ತಮ್ಮ ಅಭಿಪ್ರಾಯಗಳನ್ನು ವ್ಯಕ್ತಪಡಿಸುವ ಹಕ್ಕನ್ನು ಹೊಂದಿದ್ದಾರೆ' ಎಂದು ವಾಂಗ್ ಹೇಳಿದ್ದಾರೆ. ಖಾಲಿಸ್ತಾನ ಧ್ವಜಗಳನ್ನು ಹಿಡಿದಿದ್ದ ಪ್ರತಿಭಟನಕಾರರು ಕೆನಡಾದ ಬ್ರಾಂಪ್ಟನ್ ನಲ್ಲಿರುವ ಹಿಂದೂಸಭಾ ದೇವಾಲಯದ ಆವರಣದೊಳಗೆ ಭಾನುವಾರ ನುಗ್ಗಿ, ಅಲ್ಲಿನ ಜನರೊಂದಿಗೆ ಘರ್ಷಣೆ ನಡೆಸಿರುವ ಘಟನೆ ನಡೆದಿತ್ತು.



**ಖಾಲಿಸ್ತಾನ ಪರ ಬ್ಯಾನರ್‌ಗಳನ್ನು ಹಿಡಿದಿದ್ದ ಪ್ರತಿಭಟನಕಾರರು ಕೃತ್ಯದಲ್ಲಿ ಭಾಗಿಯಾಗಿದ್ದಾರೆ. ಸಾಮಾಜಿಕ ಮಾಧ್ಯಮಗಳಲ್ಲಿ ಹರಿದಾಡುತ್ತಿರುವ ವಿಡಿಯೊಗಳಲ್ಲಿ ಇದನ್ನು ಕಾಣಬಹುದಾಗಿದೆ ಎಂದು ಪೀಲ್ ಪ್ರದೇಶದ ಪೊಲೀಸರು ತಿಳಿಸಿದ್ದಾರೆ. ಹಿಂದೂಸಭಾ ಮಂದಿರ ದೇಗುಲದ ಆವರಣದಲ್ಲಿ ಜನರು ಕೈ ಕೈ ಮಿಲಾಯಿಸಿ, ಹೊಡೆದಾಡಿಕೊಂಡಿರುವ ದೃಶ್ಯ ವಿಡಿಯೊದಲ್ಲಿದೆ ಎಂದು ಮಾಧ್ಯಮಗಳು ವರದಿ ಮಾಡಿದ್ದವು.**

ಇದನ್ನು ಭಾರತದ ಹೈಕಮಿಷನ್ ಮತ್ತು ಭಾರತ ಸರ್ಕಾರ ತೀವ್ರವಾಗಿ ಖಂಡಿಸಿವೆ. ಅಲ್ಲದೆ ಪ್ರಧಾನಿ ನರೇಂದ್ರ ಮೋದಿ, ವಿಎಚ್‌ಪಿ, ಬಿಜೆಪಿ, ಕಾಂಗ್ರೆಸ್ ನಾಯಕರೂ ಖಂಡಿಸಿದ್ದಾರೆ.

# ಮೊದಲ ಫಲಿತಾಂಶ ಪ್ರಕಟ; ಕಮಲಾ, ಟ್ರಂಪ್‌ಗೆ ಬಿತ್ತು ತಲಾ 3 ಮತ



**ಮಧ್ಯರಾತ್ರಿ ಚುನಾವಣೆ ಯಾಕೆ?**

**ವಾಷಿಂಗ್ಟನ್:** ಇಡೀ ಜಗತ್ತೇ ಕುತೂಹಲದಿಂದ ನೋಡುತ್ತಿರುವ ಅಮೆರಿಕಅಧ್ಯಕ್ಷೀಯ ಚುನಾವಣೆಯಲ್ಲಿ ಮತದಾನ ಬಿರುಸಿನಿಂದ ಸಾಗಿದೆ. ಮತದಾನ ಶುರು ವಾದ ಕೆಲವೇ ಗಂಟೆಗಳಲ್ಲಿ ಸಣ್ಣ ಸಣ್ಣ ಕೌಂಟಿಗಳಲ್ಲಿ ಮತದಾನ ಪೂರ್ಣಗೊಂಡಿದ್ದು ಫಲಿತಾಂಶವೂ ಹೊರಬಿದ್ದಿದೆ.

ನ್ಯೂ ಹ್ಯಾಂಪ್‌ಶೈರ್‌ನ ಡಿಕ್ಸ್‌ವಿಲ್ಲೆ ನಾಚ್‌ನಲ್ಲಿ ಮೊದಲ ಫಲಿತಾಂಶ ಬಂದಿದೆ. ಅಲ್ಲಿನ ಒಟ್ಟು ಆರು ಮತ ಗಳಲ್ಲಿ ತಲಾ ಮೂರು ಮತಗಳು ಟ್ರಂಪ್, ಹ್ಯಾರಿಸ್‌ಗೆ ಬಿದ್ದಿವೆ. 2020ರಲ್ಲಿ ಇಲ್ಲಿನ ಬೈಡನ್ ಪರ 5 ಮಂದಿ ಮತ ಹಾಕಿದ್ದರೆ ಟ್ರಂಪ್ 0 ಮತ ಪಡೆದಿದ್ದರು. ಕೆಲ ಸಮೀಕ್ಷೆಗಳು ಟ್ರಂಪ್ ಗೆಲ್ಲುತ್ತಾರೆ ಎಂದರೆ ಕೆಲ ಸಮೀಕ್ಷೆಗಳು ಕಮಲಾ ಗೆಲ್ಲಬಹುದು ಎಂದು ಹೇಳಿವೆ.

ಇಬ್ಬರ ಮಧ್ಯೆ ನೇರಾನೇರ ಪೈಪೋಟಿ ಇದ್ದು ಸೋಲಿನ ಅಂತರ ಬಹಳ ಕಡಿಮೆ ಇರಬಹುದು ಎಂದು ಸಮೀಕ್ಷೆಗಳು ಹೇಳಿವೆ.

ಭಾರತೀಯ ಕಾಲಮಾನ ಬುಧವಾರ ಸಂಜೆ ಮುಂದಿನ ಅಮೆರಿದ ಅಧ್ಯಕ್ಷರು ಯಾರಾಗ್ತಾರೆ ಎಂಬ ಬಗ್ಗೆ ಸ್ಪಷ್ಟ ಚಿತ್ರಣ ಸಿಗುವ ಸಾಧ್ಯತೆ ಇದೆ.

ಈ ಭಾಗದಲ್ಲಿ ಹಿಂದೆ ರೈಲ್ವೇ ಕೆಲಸಗಾರರು ಹೆಚ್ಚಿನ ಸಂಖ್ಯೆಯಲ್ಲಿದ್ದರು.

ಬೆಳಗ್ಗೆ ಚುನಾವಣೆ ನಡೆದರೆ ಕೆಲಸಕ್ಕೆ ಸಮಸ್ಯೆ ಆಗುತ್ತೆ ಎಂಬ ಕಾರಣಕ್ಕೆ ರಾತ್ರಿ ಮತದಾನ ಮಾಡುವ ಸಂಪ್ರದಾಯ ಆರಂಭಿಸಿದ್ದರು. ಈ ಸಂಪ್ರದಾಯ ಈಗಲೂ ಮುಂದುವರಿಯುತ್ತಿದೆ.

**ಮಧ್ಯರಾತ್ರಿ ಮತದಾನ**

**ನ್ಯೂ ಹ್ಯಾಂಪ್‌ಶೈರ್‌ನ ಡಿಕ್ಸ್‌ವಿಲ್ಲೆ ನಾಚ್‌ನಲ್ಲಿ ಮಧ್ಯರಾತ್ರಿಯೇ ಚುನಾವಣೆ ನಡೆದಿದೆ. ಬೇರೆ ಕಡೆಗಳಲ್ಲಿ ಬೆಳಗ್ಗೆ ಚುನಾವಣೆ ನಡೆದರೆ ಇಲ್ಲಿ ಮಧ್ಯರಾತ್ರಿ ಚುನಾವಣೆ ನಡೆಯುವುದು ವಿಶೇಷ. 1960 ರ ನಂತರ ಇಲ್ಲಿ ಮಧ್ಯರಾತ್ರಿ ಚುನಾವಣೆ ನಡೆಯುತ್ತಿದೆ.**

# ಶಾಲೆಯಲ್ಲಿ ಕಬ್ಬಿಣದ ಗೇಟ್ ಬಿದ್ದು 6ರ ಬಾಲಕ ಸಾವು

**ಹೈದರಾಬಾದ್:** ಶಾಲೆಯಲ್ಲಿ ಕಬ್ಬಿಣದ ಗೇಟ್ ಬಿದ್ದು ತಲೆಗೆ ಪೆಟ್ಟಾದ ಕಾರಣ 6 ವರ್ಷದ ಬಾಲಕ ಸಾವನ್ನಪ್ಪಿರುವ ಘಟನೆ ಹೈದರಾಬಾದ್‌ನ ಹಯಾತ್ ನಗರದ ಎಂಪಿಪಿ ಶಾಲೆಯಲ್ಲಿ ನಡೆದಿದೆ. ಮೃತ ಬಾಲಕನನ್ನು 1ನೇ ತರಗತಿಯ ಅಜಯ್ ಎಂದು ಗುರುತಿಸಲಾಗಿದೆ. ಸೋಮವಾರ ಸಂಜೆ 4 ಗಂಟೆಯ ಸುಮಾರಿಗೆ ಶಾಲೆಯ ಕಬ್ಬಿಣದ ಗೇಟ್ ಬಳಿ ಆಟವಾಡುತ್ತಿದ್ದಾಗ ಘಟನೆ ನಡೆದಿದೆ.

ಪೊಲೀಸರ ಮಾಹಿತಿಯ ಪ್ರಕಾರ, ಶಾಲೆಯಲ್ಲಿ ಕೆಲವು ಮಕ್ಕಳು ಗೇಟ್ ಮೇಲೆ ಏರಿ ಅದನ್ನು ಅತ್ತಿಂದಿತ್ತ ತಿರುಗಿಸುತ್ತಾ ಆಟವಾಡುತ್ತಿದ್ದರು. ಈ ವೇಳೆ ಅಜಯ್ ಕೂಡ ಆಟ ವಾಡುತ್ತಿದ್ದನು. ಗೇಟ್‌ನ ಜಾಯಿಂಟ್‌ಗಳು ಮುರಿದು ಅಲ್ಲಿಯೇ ಆಡುತ್ತಿದ್ದ ಅಜಯ್ ಮೇಲೆ ಬಿದ್ದಿದೆ. ಇದರಿಂದಾಗಿ ಆತನ ತಲೆಗೆ ಗಂಭೀರ ಗಾಯಗಳಾಗಿದ್ದವು. ಇದರಿಂದಾಗಿ ಬಾಲಕ ಸಾವನ್ನಪ್ಪಿದ್ದಾನೆ ಎಂದು ತಿಳಿಸಿದ್ದಾರೆ.

ಇದಕ್ಕೆ ಸಂಬಂಧಿಸಿದಂತೆ ಸದ್ಯ ಪೊಲೀಸರು ತನಿಖೆ ನಡೆಸುತ್ತಿದ್ದಾರೆ. ಆದರೆ ಈ ಘಟನೆ ಮೊದಲನೇಯದಲ್ಲ.



ಇದಕ್ಕೂ ಮುನ್ನ ಇದೇ ಜು.31 ರಂದು ಗಿರಿಜಾ ಗಣೇಶ್ ಶಿಂಧೆ ಎಂಬ ಮೂರೂವರೆ ವರ್ಷದ ಬಾಲಕಿಯ ಮೇಲೆ ಕಬ್ಬಿಣದ ಗೇಟ್ ಬಿದ್ದು ಸಾವನ್ನಪ್ಪಿದ್ದಳು. ಈ ಭೀಕರ ಅಪಘಾತವು ಸಮೀಪದ ಮನೆಯೊಂದರ ಸಿಸಿಟಿವಿ ಕ್ಯಾಮೆರಾದಲ್ಲಿ ಸೆರೆಯಾಗಿದ್ದು, ದೃಶ್ಯಗಳು ಸಾಮಾಜಿಕ ಜಾಲತಾಣಗಳಲ್ಲಿ ವ್ಯಾಪಕವಾಗಿ ಹರಡಿತ್ತು. ಸಿಸಿಟಿವಿ ದೃಶ್ಯದಲ್ಲಿ ಗೇಟ್ ಬಳಿ ಆಟವಾಡುತ್ತಿದ್ದ ಮಕ್ಕಳು ಗೇಟ್‌ನ್ನು ಮುಚ್ಚಲು ಪ್ರಯತ್ನಿಸುತ್ತಿದ್ದರು. ಈ ವೇಳೆ ಅಲ್ಲಿಯೇ ನಡೆದುಕೊಂಡ ಹೋಗುತ್ತಿದ್ದ ಗಿರಿಜಾ ಮೇಲೆ ಗೇಟ್ ಏಕಾಏಕಿ ಕುಸಿದು ಬಿದ್ದಿತ್ತು. ಇದರಿಂದಾಗಿ ಬಾಲಕಿ ಸಾವನ್ನಪ್ಪಿದ್ದಳು.

# ಹಿಂದೂಗಳ ಮೇಲೆ ಖಲಿಸ್ತಾನಿ ಪ್ರತ್ಯೇಕವಾದಿಗಳಿಂದ ಹಲ್ಲೆ ಖಂಡಿಸಿ ಪ್ರತಿಭಟನೆ

**ಬ್ರಾಂಪ್ಟನ್:** ಬ್ರಾಂಪ್ಟನ್‌ನಲ್ಲಿರುವ ಹಿಂದೂಸಭಾ ಮಂದಿರದ ಹೊರ ಭಾಗದಲ್ಲಿ ಖಲಿಸ್ತಾನಿ ಪರ ಬೆಂಬಲಿಗರಿಂದ ಹಿಂದೂಗಳ ಮೇಲೆ ನಡೆದ ದಾಳಿಯನ್ನು ಖಂಡಿಸಿ ಪ್ರತಿಭಟನೆ ನಡೆಸಲಾಯಿತು. ಹಿಂದೂಗಳ ಒಕ್ಕೂಟ ಆಯೋಜಿಸಿದ್ದ ಪ್ರತಿಭಟನೆಯಲ್ಲಿ ಸಾವಿರಾರು ಕೆನಡಾದ ಹಿಂದೂಗಳು ಒಗ್ಗಟ್ಟಿನಿಂದ ಮೆರವಣಿಗೆ ನಡೆಸಿದರು.

ಪ್ರತಿಭಟನಾಕಾರರು ಕೆನಡಾ ಮತ್ತು ಭಾರತದ ಧ್ವಜಗಳನ್ನು ಹಿಡಿದು ಮೆರವಣಿಗೆ ನಡೆಸಿದರು. ಮೆರವಣಿಗೆ ಉದ್ದಕ್ಕೂ 'ಜೈ ಶ್ರೀ ರಾಮ್' ಎಂದು




ಘೋಷಣೆ ಕೂಗಿದರು. ಇದೇ ವೇಳೆ ಖಲಿಸ್ತಾನ್ ವಿರುದ್ಧ ಘೋಷಣೆಗಳನ್ನು ಕೂಗಿದರು. ಸುಮಾರು 20 ವರ್ಷಗಳಿಂದ ಕೆನಡಾದಲ್ಲಿ ಹಿಂದೂಗಳು ಸತತವಾಗಿ ತಾರತಮ್ಯಕ್ಕೆ ಒಳಗಾಗುತ್ತಿದ್ದಾರೆ ಎಂದು ಕೆಲವು ಪ್ರತಿಭಟನಾಕಾರರು ಆರೋಪಿಸಿದರು.

ಹಿಂದೂ ಸಭಾ ದೇವಾಲಯದ ಆವರಣದಲ್ಲಿ ಭಕ್ತರ ಮೇಲೆ ಖಲಿಸ್ತಾನಿ ಪ್ರತ್ಯೇಕತಾವಾದಿಗಳು ದಾಳಿ ಮಾಡಿದ್ದಾರೆ. ಈ ದೇವಾಲಯವು ಟೊರೊಂಟೊದಿಂದ ಸುಮಾರು 50 ಕಿ.ಮೀ ದೂರದಲ್ಲಿದೆ. ದಾಳಿಯ ವೀಡಿಯೋ ಸಾಮಾಜಿಕ ಮಾಧ್ಯಮಗಳಲ್ಲಿ ಹರಿದಾಡುತ್ತಿದ್ದು, ಖಲಿಸ್ತಾನಿ ಧ್ವಜ ಹಿಡಿದಿರುವುದು, ಭಕ್ತರನ್ನು ನಿಂದಿಸುತ್ತಾ ಹಲ್ಲೆ ನಡೆಸುತ್ತಿರುವುದು ವೀಡಿಯೋದಲ್ಲಿದೆ. ಹಿಂದೂ ದೇವಾಲಯದಲ್ಲಿ ಹಿಂದೂಗಳ ಮೇಲಿನ ದಾಳಿಯನ್ನು ಪ್ರಧಾನಿ ನರೇಂದ್ರ ಮೋದಿ ಸೋಮವಾರ ಖಂಡಿಸಿದ್ದರು. ಇದನ್ನು ಉದ್ದೇಶಪೂರ್ವಕ ಕೃತ್ಯ ಎಂದು ಕರೆದಿದ್ದು, ಭಾರತೀಯ ರಾಯಭಾರಿಗಳನ್ನು ಬೆದರಿಸುವ ಪ್ರಯತ್ನ ಎಂದು ಮೋದಿ ಟೀಕಿಸಿದ್ದರು.

**ಹಿಂದೂ ಕೆನಡಿಯನ್ನರು ಕೆನಡಾಕ್ಕೆ ತುಂಬಾ ನಿಷ್ಠರಾಗಿದ್ದಾರೆ. ಹಿಂದೂ ಕೆನಡಿಯನ್ನರ ವಿರುದ್ಧ ನಡೆಯುತ್ತಿರುವುದು ತಪ್ಪು. ಎಲ್ಲಾ ರಾಜಕಾರಣಿಗಳು ಪರಿಸ್ಥಿತಿ ಅರ್ಥ ಮಾಡಿಕೊಳ್ಳುವ ಸಮಯ ಬಂದಿದೆ. ನಮಗೆ ಭಾರತ ಬೇಕು, ಕೆನಡಾ ಸಂಬಂಧಗಳನ್ನು ಬಲಪಡಿಸಬೇಕು ಎಂದು ಆಗ್ರಹಿಸಿದರು.**

# ಎಕ್ಸ್‌ಪ್ರೆಸ್‌ನಲ್ಲಿ ದುಷ್ಕರ್ಮಿಗಳಿಂದ ಗುಂಡಿನ ದಾಳಿ



**ಪುರಿ:** ಒಡಿಶಾದ ಪುರಿ-ನವದೆಹಲಿ ನಂದನ್ ಕಾನನ್ ಎಕ್ಸ್ ಪ್ರೆಸ್ ನಲ್ಲಿ ಇಂದು ಅಪರಿಚಿತ ದುಷ್ಕರ್ಮಿಗಳು ಗುಂಡಿನ ದಾಳಿ ನಡೆಸಿ ಲೋಹದ ವಸ್ತುಗಳನ್ನು ಎಸೆದಿದ್ದಾರೆ. ಒಡಿಶಾದ ಭದ್ರಕ್ ರೈಲು ನಿಲ್ದಾಣದ ಮೂಲಕ ರೈಲು ಹಾದು ಹೋಗುತ್ತಿದ್ದಾಗ ಮಂಗಳವಾರ ಬೆಳಗ್ಗೆ 9ರಿಂದ 9.30ರ ನಡುವೆ ಈ ಘಟನೆ ನಡೆದಿದೆ. ಪ್ರಯಾಣಿಕರ ಸುರಕ್ಷತೆಯನ್ನು ಖಚಿತಪಡಿಸಿಕೊಳ್ಳಲು ರೈಲನ್ನು ಪುರಿಗೆ ಬೆಂಗಾವಲಾಗಿ ನೀಡಲಾಗಿದೆ. ಆರ್‌ಪಿಎಫ್, ಪೊಲೀಸರು ಸೇರಿದಂತೆ 4 ತಂಡಗಳು ತನಿಖೆಯಲ್ಲಿ ತೊಡಗಿವೆ ಎಂದು ಪೊಲೀಸರು ತಿಳಿಸಿದ್ದಾರೆ. ನಂದನ್ ಕಾನನ್ ಎಕ್ಸ್‌ಪ್ರೆಸ್‌ನಲ್ಲಿ ಗುಂಡಿನ ದಾಳಿ ನಡೆದಿದ್ದು, ರೈಲು ಸಿಬ್ಬಂದಿ ಮೆಮೊ ನೀಡಿದ ನಂತರ ರೈಲ್ವೆ ಪೊಲೀಸರು ತನಿಖೆ ಆರಂಭಿಸಿದ್ದಾರೆ. ವರದಿಯ ಪ್ರಕಾರ, ಯಾವುದೇ ಗಾಯಗಳು ವರದಿಯಾಗಿಲ್ಲ. 12816 ನಂದನ್ ಕಾನನ್ ಎಕ್ಸ್‌ಪ್ರೆಸ್‌ನಲ್ಲಿ ಬೆಳಿಗ್ಗೆ 9.30ರ ಸುಮಾರಿಗೆ ಭದ್ರಕ್ ಮತ್ತು ಬೌದ್‌ಪುರ್ ವಿಭಾಗಗಳ ನಡುವೆ ರೈಲು ಪ್ರಯಾಣಿಸುತ್ತಿದ್ದಾಗ ಎರಡು ಬುಲೆಟ್‌ಗಳು ಕೋಚ್‌ನ ಶೌಚಾಲಯದ ಕಿಟಕಿಯ ಹಲಗೆಗೆ ಬಡಿದಿವೆ. ಗುಂಡಿನ ದಾಳಿಗೆ ಕಾರಣವೇನು ಎಂಬುದನ್ನು ತಿಳಿಯಲು ಅಧಿಕಾರಿಗಳು ಪರಿಶೀಲನೆ ನಡೆಸುತ್ತಿದ್ದಾರೆ. ರೈಲಿನ ಸಿಬ್ಬಂದಿ ತಕ್ಷಣ ಚಾಲಕ ಮತ್ತು ಹಿರಿಯ ರೈಲ್ವೇ ಅಧಿಕಾರಿಗಳಿಗೆ ಎಚ್ಚರಿಕೆ ನೀಡಿದರು.

ರೈಲು ಭದ್ರಕ್ ನಿಲ್ದಾಣದ ದಕ್ಷಿಣ ಕ್ಯಾಬಿನ್‌ನಿಂದ ಹಿಂದೆ ಸರಿದ ನಂತರ ಟ್ರಾಫಿಕ್ ಗೇಟ್‌ನಲ್ಲಿ ಸಿಗ್ನಲ್ ಬದಲಾಯಿಸುವಾಗ ದೊಡ್ಡ ಶಬ್ದ ಮತ್ತು ಕೋಚ್‌ಗೆ ಏನಾದರೂ ಬಡಿದ ಶಬ್ದವನ್ನು ನಾನು ಮೊದಲು ಕೇಳಿದೆ. ಇದು ರೈಲಿನ ಮೇಲೆ ಕಲ್ಲು ತೂರಾಟದ ಕಾರಣ ಎಂದು ನಾನು ಭಾವಿಸಿದೆವು. ಆದರೆ, ನಾನು ಬಾಗಿಲಿನ ಹತ್ತಿರ ಬಂದಾಗ ಒಬ್ಬ ವ್ಯಕ್ತಿ ಪಿಸ್ತೂಲ್ ಹಿಡಿದಿರುವುದನ್ನು ನೋಡಿದೆ ಎಂದು ರೈಲಿನಲ್ಲಿದ್ದ ಸಿಬ್ಬಂದಿ ಹೇಳಿದ್ದಾರೆ.

# ಇಲಾನ್ ಮಸ್ಕ್ ಪ್ರಸ್ತಾವಕ್ಕೆ ಕೋರ್ಟ್ ಸಮ್ಮತಿ



**ಮತದಾರರಿಗೆ 10 ಲಕ್ಷ ಉಡುಗೊರೆ**

**ಪೆನ್ಸಿಲ್ವೇನಿಯಾ:** ಅಮೆರಿಕದ ಅಧ್ಯಕ್ಷೀಯ ಚುನಾವಣೆಗೆ ಮಂಗಳವಾರ ಮತದಾನ ನಡೆಯಲಿದ್ದು, ಡೆಮಾಕ್ರಟಿಕ್ ಪಕ್ಷದ ಕಮಲಾ ಹ್ಯಾರಿಸ್, ರಿಪಬ್ಲಿಕನ್ ಪಕ್ಷದ ಡೊನಾಲ್ಡ್ ಟ್ರಂಪ್ ನಡುವೆ ಜಿದ್ದಾಜಿದ್ದಿನ ಸ್ಪರ್ಧೆ ಏರ್ಪಟ್ಟಿದೆ. ಇದರ ಬೆನ್ನಲ್ಲೇ ಅಮೆರಿಕದ ಸಂವಿಧಾನವನ್ನು ಬೆಂಬಲಿಸುವ ಆನ್‌ಲೈನ್ ಅರ್ಜಿಗೆ ಸಹಿ ಹಾಕುವವರಿಗೆ ಪ್ರತಿದಿನ 10 ಲಕ್ಷ ಉಡುಗೊರೆ ನೀಡುವ ಬಿಲಿಯನೇರ್ ಉದ್ಯಮಿ ಇಲಾನ್ ಮಸ್ಕ್ ಅವರ ಪ್ರಸ್ತಾವಕ್ಕೆ ಪೆನ್ಸಿಲ್ವೇನಿಯಾ ನ್ಯಾಯಾಧೀಶರು ಸಮ್ಮತಿ ಸೂಚಿಸಿದ್ದಾರೆ. ಫಿಲಡೆಲ್ಫಿಯಾ ನ್ಯಾಯಾಲಯದಲ್ಲಿ ಸೋಮವಾರ ನಡೆದ ವಿಚಾರಣೆಯಲ್ಲಿ ನ್ಯಾಯಾಧೀಶ ಏಂಜೆಲೊ ಫೋಗ್ಲಿಯೆಟ್ಟಾ ಅವರು ಆದೇಶ ಪ್ರಕಟಿಸಿದ್ದಾರೆ. ಮಸ್ಕ್ ಅವರ ಮನವಿಗೆ ಸ್ಪಂದಿಸಿ ಅಮೆರಿಕದ ಸಂವಿಧಾನವನ್ನು ಬೆಂಬಲಿಸುವ ಆನ್‌ಲೈನ್ ಅರ್ಜಿಗೆ ಸಹಿ ಹಾಕಿದವರು, ಉಡುಗೊರೆಗೆ ಅರ್ಹತೆ ಪಡೆದವರ ಹೆಸರುಗಳನ್ನು ಅಧ್ಯಕ್ಷೀಯ ಚುನಾವಣೆ ನಡೆಯಲಿರುವ ನ.5ರಂದು ಘೋಷಿಸಲಾಗುವುದು ಎಂದು ತಿಳಿಸಲಾಗಿದೆ. ನಿರ್ಣಾಯಕ ರಾಜ್ಯಗಳು ಎಂದು ಕರೆಯಲಾಗುತ್ತಿರುವ ಏಳು ರಾಜ್ಯಗಳಾದ ಪೆನ್ಸಿಲ್ವೇನಿಯಾ, ಮಿಷಿಗನ್, ವಿಸ್ಕಾನ್ಸಿನ್, ನೆವಾಡ, ಅರಿಜೋನಾ, ಜಾರ್ಜಿಯಾ ಮತ್ತು ಉತ್ತರ ಕೆರೊಲಿನಾದ ಮತದಾರರಿಗೆ ಇಲಾನ್ ಮಸ್ಕ್ ಕೊಡುಗೆ ಸೀಮಿತವಾಗಿದೆ. ಅ. 19ರಂದು ಅಮೆರಿಕದ ಸಂವಿಧಾನವನ್ನು ಬೆಂಬಲಿಸುವ ಆನ್‌ಲೈನ್ ಅರ್ಜಿಗೆ ಸಹಿ ಹಾಕುವವರಿಗೆ ಪ್ರತಿದಿನ 10 ಲಕ್ಷ ನೀಡುವುದಾಗಿ ಮಸ್ಕ್ ಘೋಷಿಸಿದ್ದರು. ಈ ಬಾರಿಯ ಅಧ್ಯಕ್ಷೀಯ ಚುನಾವಣೆಯಲ್ಲಿ ಇಲಾನ್ ಮಸ್ಕ್ ಅವರು ರಿಪಬ್ಲಿಕನ್ ಪಕ್ಷದ ಅಭ್ಯರ್ಥಿ ಡೊನಾಲ್ಡ್ ಟ್ರಂಪ್ ಅವರನ್ನು ಬೆಂಬಲಿಸಿದ್ದು, ಪ್ರಚಾರ ಸಭೆಗಳಲ್ಲಿ ಭಾಗಿಯಾಗಿದ್ದರು. ಜತೆಗೆ, ಪೆನ್ಸಿಲ್ವೇನಿಯಾದಲ್ಲಿ ನಡೆದ ಟ್ರಂಪ್ ಸಭೆಯಲ್ಲಿ ಭಾಗವಹಿಸಿದವರಿಗೆ ತಲಾ 10 ಲಕ್ಷ ಮೊತ್ತದ ಚೆಕ್ ಅನ್ನು ವಿತರಿಸಿದ್ದರು ಎಂದು ವರದಿಯಾಗಿದೆ.

# ಆಂಧ್ರಪ್ರದೇಶದ ಗೃಹ ಸಚಿವೆ ವಿರುದ್ಧ ಕಿಡಿಕಾರಿದ ಪವನ್ ಕಲ್ಯಾಣ್

## ಅಧಿಕಾರಕ್ಕೆ ಬಂದ ಐದೇ ತಿಂಗಳಲ್ಲಿ ಚಂದ್ರಬಾಬು ನಾಯ್ಡು, ಪವನ್ ಕಲ್ಯಾಣ್ ನಡುವೆ ಬಿರುಕು?

**ಹೈದರಾಬಾದ್:** ಇದೇ ವರ್ಷದ ಮೇ- ಜೂನ್‌ನಲ್ಲಿ ನಡೆದಿದ್ದ ಆಂಧ್ರಪ್ರದೇಶ ವಿಧಾನಸಭಾ ಚುನಾವಣೆಯಲ್ಲಿ ಭರ್ಜರಿ ಜಯಗಳಿಸಿ ಅಧಿಕಾರಕ್ಕೇರಿದ್ದ ತೆಲುಗುದೇಶಂ ಪಾರ್ಟಿ (ಟಿಡಿಪಿ), ಜನಸೇನಾ ಪಾರ್ಟಿ (ಜೆಎಸ್ ಪಿ) ನಡುವೆ ಬಿರುಕು ಮೂಡಿದೆಯೇ? ಇಂಥದ್ದೊಂದು ಪ್ರಶ್ನೆ ಈಗ ಎಲ್ಲರನ್ನೂ ಕಾಡಲಾರಂಭಿಸಿದೆ.

ಅದಕ್ಕೆ ಕಾರಣ, ಮುಖ್ಯಮಂತ್ರಿಯಾಗಿರುವ, ಟಿಡಿಪಿ ನಾಯಕರಾಗಿರುವ ಚಂದ್ರಬಾಬು ನಾಯ್ಡು ಅವರ ಆಪ್ತ ಸಚಿವರೊಬ್ಬರನ್ನು ಜೆಎಸ್ ಪಿ ನಾಯಕ ಹಾಗೂ ಉಪ ಮುಖ್ಯಮಂತ್ರಿ ಪವನ್ ಕಲ್ಯಾಣ್ ಬಹಿರಂಗವಾಗಿಯೇ ತರಾಟೆಗೆ ತೆಗೆದುಕೊಂಡಿರುವುದು. ಹೀಗೆ ಪವನ್ ಕಲ್ಯಾಣ್ ಕೈಯ್ಯಲ್ಲಿ ಬಹಿರಂಗವಾಗಿ ಬೈಯ್ಯಿಸಿಕೊಂಡಿರುವುದು ಬೇರ ಯಾರೂ ಅಲ್ಲ. ಆಂಧ್ರಪ್ರದೇಶದ ಗೃಹ ಸಚಿವರಾದ ಅನಿತಾ.

ಇತ್ತೀಚೆಗೆ, ಆಂಧ್ರಪ್ರದೇಶದಲ್ಲಿ ಮಹಿಳೆಯರ ಮೇಲಿನ ದೌರ್ಜನ್ಯ ಪ್ರಕರಣಗಳು ಹೆಚ್ಚಾಗಿವೆ. ಅದರಿಂದ ಪವನ್ ಕಲ್ಯಾಣ್ ರೊಚ್ಚಿಗೆದ್ದಿದ್ದಾರೆ.



ಇಂಥ ಘಟನೆಗಳನ್ನು ತಡೆಯಲು ಯಾವುದಾದರೂ ಕ್ರಮ ಕೈಗೊಳ್ಳಬೇಕು. ಪದೇ ಪದೇ ಇಂಥ ಘಟನೆಗಳು ನಡೆಯುತ್ತಿದ್ದರೂ, ಕ್ರಮ ಕೈಗೊಳ್ಳುವುದಾಗಿ ಸಚಿವರು ಹೇಳುತ್ತಿದ್ದರೂ ಪರಿಸ್ಥಿತಿಯಲ್ಲಿ ಏನೂ ಬದಲಾವಣೆ ಆಗಿಲ್ಲ. ಏನಾದರೂ ಸ್ವಲ್ಪವಾದರೂ ಬದಲಾವಣೆಯನ್ನು ತನ್ನಿ. ಇಲ್ಲವಾದರೆ, ನಾನೇ ಗೃಹ ಸಚಿವನಾಗಿ ಬಂದು ಪರಿಸ್ಥಿತಿಯನ್ನು ಬದಲಾಯಿಸಬೇಕಿದೆ ಎಂದು ಗುಡುಗಿದ್ದಾರೆ.

**ಮೈತ್ರಿ ಮೇಲೆ ದುಷ್ಪರಿಣಾಮ?:** ಆದರೆ, ಈಗ ಪವನ್ ಕಲ್ಯಾಣ್ ಅವರ ಈ ಕಿಡಿನುಡಿಗಳು ಸಂಪುಟದ ಮೇಲೆ ದುಷ್ಪರಿಣಾಮ ಬೀರುವ ಸಾಧ್ಯತೆಗಳಿವೆ. ಪವನ್ ಕಲ್ಯಾಣ್ ಅವರೇನಾದರೂ ಗೃಹ ಸಚಿವಾಲಯವನ್ನು ಅನಿತಾ ಅವರಿಂದ ಕಸಿದುಕೊಂಡರೆ ಅದು ಮತ್ತೊಂದು ರೀತಿಯ ಸಮಸ್ಯೆಯನ್ನು ತಂದೊಡ್ಡಲಿದೆ ಎಂದು ಹೇಳಲಾಗುತ್ತಿದೆ. ಅದೂ ಸಹ ಪವನ್ ಅವರು, ನಾನು ಮನಸ್ಸು ಮಾಡಿದರೆ ಗೃಹ ಸಚಿವಾಲಯವನ್ನು ನಿಮ್ಮಿಂದ ಕಸಿದುಕೊಳ್ಳಬಲ್ಲೆ ಎಂದು ಹೇಳಿದ್ದಾರೆ. ಅದು ಬಹಿರಂಗವಾಗಿ ಮೈತ್ರಿ ಪಕ್ಷಕ್ಕೆ ಸಡ್ಡು ಹೊಡೆದಂತಾಗಿದೆ. ಇದು ಮುಂದೆ ಯಾವ ರೀತಿಯ ಪರಿಣಾಮ ಬೀರಲಿದೆ ಎಂಬುದನ್ನು ಕಾದು ನೋಡಬೇಕಿದೆ.

- **ಆಂಧ್ರಪ್ರದೇಶದಲ್ಲಿ ಟಿಡಿಪಿ - ಜನಸೇನಾ ಪಾರ್ಟಿ ಸರ್ಕಾರದಲ್ಲಿ ಬಿರುಕು ಉಂಟಾಗುವ ಸಾಧ್ಯತೆ.**
- **ಮಹಿಳೆಯರ ಮೇಲಿನ ದೌರ್ಜನ್ಯಗಳು ಹೆಚ್ಚಾಗುತ್ತಿರುವುದಕ್ಕೆ ಕಿಡಿ.**
- **ಪವನ್ ಕಲ್ಯಾಣ್ ಅವರ ಈ ಮಾತುಗಳು ಮುಂದಿನ ದಿನಗಳಲ್ಲಿ ಟಿಡಿಪಿ - ಜೆಎಸ್ ಪಿ ನಡುವೆ ಬಿರುಕು ಏರ್ಪಡುವ ಸಾಧ್ಯತೆಗಳಿವೆ.**

**ಆಂಧ್ರಪ್ರದೇಶದಲ್ಲಿ ಟಿಡಿಪಿ - ಜನಸೇನಾ ಪಾರ್ಟಿ ಸರ್ಕಾರವಿದೆ. ಅಲ್ಲಿ, ಉಪ ಮುಖ್ಯಮಂತ್ರಿಯಾಗಿರುವ ಪವನ್ ಕಲ್ಯಾಣ್ ಅವರು, ತಮ್ಮದೇ ಸರ್ಕಾರದ ಗೃಹ ಸಚಿವೆ ಅನಿತಾ ವಿರುದ್ಧ ಬಹಿರಂಗವಾಗಿ ಕಿಡಿಕಾರಿದ್ದಾರೆ. ಮಹಿಳೆಯರ ಮೇಲಿನ ದೌರ್ಜನ್ಯ ಪ್ರಕರಣಗಳು ಹೆಚ್ಚಾಗುತ್ತಿದ್ದರೂ ಯಾವುದೇ ಕ್ರಮ ಕೈಗೊಳ್ಳುತ್ತಿಲ್ಲ. ಪರಿಸ್ಥಿತಿ ಹೀಗೇ ಮುಂದುವರಿದರೆ ನಾನೇ ಗೃಹ ಇಲಾಖೆಯನ್ನು ವಹಿಸಿಕೊಳ್ಳಬೇಕಾಗುತ್ತೆ ಎಂದು ಗುಡುಗಿದ್ದಾರೆ. ಇದು ಮುಂದೆ ನಾಯ್ಡು - ಪವನ್ ನಡುವೆ ಬಿರುಕನ್ನು ತರಬಹುದೇ ಎಂದು ಹೇಳಬಹುದು.**

**ಅನಿತಾ ಟಿಡಿಪಿಯ ಪ್ರಭಾವಿ ನಾಯಕಿ**

**ಅಸಲಿಗೆ, ಪವನ್ ಕಲ್ಯಾಣ್ ಇರುವುದೇ ಹೀಗೆ. ನೇರ ಮಾತು, ದಿಟ್ಟ ನಡೆ - ನುಡಿ. ಇದು ಚಂದ್ರಬಾಬು ನಾಯ್ಡುಗೆ ಗೊತ್ತಿರಲಾರದ ವಿಷಯವೇನಲ್ಲ. ಆದರೆ, ಸಾಮಾನ್ಯವಾಗಿ ಗೃಹ ಖಾತೆಯಂಥ ತೂಕದ ಇಲಾಖೆಯನ್ನು ವಹಿಸುತ್ತಾರೆಂದರೆ ಒಂದೋ ಅವರು ಸಿಎಂ ಆಪ್ತರಾಗಿರಬೇಕು ಅಥವಾ ಸಂಪುಟದ ಹಿರಿಯ ಸದಸ್ಯರಾಗಿರಬೇಕು. ಆಂಧ್ರಪ್ರದೇಶದ ವಿಚಾರಕ್ಕೆ ಬರುವುದಾದರೆ ಅನಿತಾ ಅವರು ಆಂಧ್ರದ ರಾಜಕಾರಣದಲ್ಲಿ 'ಮಹಿಳಾ ಮಾಸ್ ಲೀಡರ್' ಎಂದೇ ಪರಿಗಣಿಸಲ್ಪಟ್ಟಿದ್ದಾರೆ. ಬಹುಶಃ ಅದೇ ಕಾರಣಕ್ಕಾಗಿಯೇ ಅವರನ್ನು ಗೃಹ ಸಚಿವರನ್ನಾಗಿಸಲಾಗಿದೆ.**



## ಮಿನಿ ನ್ಯೂಸ್

### ಅಮೆರಿಕ ಚುನಾವಣೆಗೆ ಕೆಲವೇ ಗಂಟೆಗಳಿಗೂ ಮುನ್ನ ಉ.ಕೊರಿಯಾದಿಂದ ಕ್ಷಿಪಣಿ ಪರೀಕ್ಷೆ

**ಸೋಲ್:** ಅಮೆರಿಕದಲ್ಲಿ ಐತಿಹಾಸಿಕ ಚುನಾವಣೆ ನಡೆಯುವುದಕ್ಕೂ ಕೆಲವೇ ಗಂಟೆಗಳಿಗೂ ಮುನ್ನ ಬಹು ಕಡಿಮೆ ಶ್ರೇಣಿಯ ಖಂಡಾಂತರ ಕ್ಷಿಪಣಿಗಳ ಪರೀಕ್ಷೆ ನಡೆಸಿರುವ ಉತ್ತರ ಕೊರಿಯಾ ಶಕ್ತಿ ಪ್ರದರ್ಶನ ನಡೆಸಿದೆ. ಅಮೆರಿಕದ ಅಧ್ಯಕ್ಷೀಯ ಚುನಾವಣೆಗೆ ಮಂಗಳವಾರ ಮತದಾನ ನಡೆಯಲಿದೆ. ಅಮೆರಿಕದಲ್ಲಿ ಮತದಾನ ಆರಂಭಕ್ಕೂ ಕೆಲವೇ ಗಂಟೆಗಳೂ ಮುನ್ನ ಉತ್ತರ ಕೊರಿಯಾ ಕ್ಷಿಪಣಿ ಪರೀಕ್ಷೆ ನಡೆಸಿರುವುದಾಗಿ ದಕ್ಷಿಣ ಕೊರಿಯಾದ ಮಿಲಿಟರಿ ತಿಳಿಸಿದೆ. ಕೊರಿಯಾ ಪೆನಿನ್ಸುಲಾದ ಪೂರ್ವ ಸಾಗರದಲ್ಲಿ ಕ್ಷಿಪಣಿಗಳು ಪತನಗೊಂಡಿವೆ ಎಂದು ತಿಳಿಸಿದೆ.

ಉತ್ತರ ಕೊರಿಯಾದ ಕ್ಷಿಪಣಿ ಪರೀಕ್ಷೆ ನಡೆಸಿರುವುದನ್ನು ಜಪಾನ್ ಸಹ ಖಚಿತಪಡಿಸಿಕೊಂಡಿದೆ. ಪ್ರಾಥಮಿಕ ಮಾಹಿತಿ ಪ್ರಕಾರ ಯಾವುದೇ ರೀತಿಯ ಹಾನಿ ಉಂಟಾಗಿಲ್ಲ ಎಂದು ತಿಳಿಸಿದೆ. ರಷ್ಯಾಕ್ಕೆ ಸೇನೆ ರವಾನಿಸಿದ ಬೆನ್ನಲ್ಲೇ ಉತ್ತರ ಕೊರಿಯಾ, ಅಮೆರಿಕವನ್ನು ತಲುಪುವಷ್ಟು ಸಮರ್ಥವಾಗಿರುವ ಐಸಿಬಿಎಂ ಖಂಡಾಂತರ ಕ್ಷಿಪಣಿಯ ಪರೀಕ್ಷೆ ನಡೆಸಿತ್ತು. ಇದಕ್ಕೆ ಪ್ರತಿಯಾಗಿ ಭಾನುವಾರದಂದು ದಕ್ಷಿಣ ಕೊರಿಯಾ, ಜಪಾನ್ ಮತ್ತು ಅಮೆರಿಕ ಭಾರಿ ಬಾಂಬರ್ ಒಳಗೊಂಡಂತೆ ಜಂಟಿ ಸಮರಾಭ್ಯಾಸವನ್ನು ನಡೆಸಿದ್ದವು.

### ಕಮಲಾ ಹ್ಯಾರಿಸ್ ಗೆಲುವಿಗೆ ಪೂಜೆ

**ತುಳಸೇಂದ್ರಪುರ:** ಅಮೆರಿಕ ಅಧ್ಯಕ್ಷೀಯ ಚುನಾವಣೆಯಲ್ಲಿ ಗೆಲುವು ಯಾರಿಗೆ ಒಲಿಯಲಿದೆ ಎಂಬ ಸಾವಿರ ಮಿಲಿಯನ್ ಪ್ರಶ್ನೆಗೆ ಉತ್ತರ ಫಲಿತಾಂಶದ ನಂತರ ತಿಳಿಯಲಿದೆ.ಚುನಾವಣೆಯಲ್ಲಿ ಹಾಲಿ ಉಪಾಧ್ಯಕ್ಷೆ, ಡೆಮಾಕ್ರಟಿಕ್ ಪಕ್ಷದ ಕಮಲಾ ಹ್ಯಾರಿಸ್, ಮಾಜಿ ಅಧ್ಯಕ್ಷ ರಿಪಬ್ಲಿಕನ್ ಪಕ್ಷದ ಡೊನಾಲ್ಡ್ ಟ್ರಂಪ್ ನಡುವೆ ತೀವ್ರ ಪೈಪೋಟಿ ಏರ್ಪಟ್ಟಿದೆ.

ಭಾರತದಲ್ಲಿ ಕಮಲಾ ಹ್ಯಾರಿಸ್ ಅವರ ಪೂರ್ವಜರು ವಾಸಿಸುತ್ತಿದ್ದ ತಮಿಳುನಾಡಿನ ತುಳಸೇಂದ್ರಪುರದಲ್ಲಿ ಕಮಲಾ ಹ್ಯಾರಿಸ್ ವಿಜಯಕ್ಕಾಗಿ ವಿಶೇಷ ಪೂಜೆ ಸಲ್ಲಿಸಲಾಗಿದೆ. ವಾಷಿಂಗ್ಟನ್ ನಿಂದ ಸುಮಾರು 13,000 ಕಿ.ಮೀ. ದೂರದ ಕಮಲಾ ಹ್ಯಾರಿಸ್ ಅವರ ಪೂರ್ವಜರ ಹಳ್ಳಿಯಲ್ಲೂ ಚುನಾವಣಾ ರಂಗು ಕಾಣಿಸಿದೆ. ಕಮಲಾ ಹ್ಯಾರಿಸ್ ಗೆಲುವಿಗಾಗಿ ಗ್ರಾಮದ ದೇವಸ್ಥಾನದಲ್ಲಿ ವಿಶೇಷ ಪೂಜೆ ಸಲ್ಲಿಸಲಾಗಿದೆ ಕಮಲಾ ಗೆದ್ದರೆ ತುಂಬಾ ಸಂತೋಷ ಎನ್ನುತ್ತಾರೆ ಗ್ರಾಮಸ್ಥರೊಬ್ಬರು. ಕಮಲಾ ಹ್ಯಾರಿಸ್ ಅವರು ಗ್ರಾಮದಲ್ಲಿ ಜಯಕ್ಕೆ ಹಾರೈಸಿ ಪೋಸ್ಟರ್ ಕೂಡ ಲಗತ್ತಿಸಲಾಗಿದೆ. ಹ್ಯಾರಿಸ್ ಯುಎಸ್ ಚುನಾವಣೆಯಲ್ಲಿ ಗೆದ್ದರೆ, ಅವರು ಯುನೈಟೆಡ್ ಸ್ಟೇಟ್ಸ್ ಅಧ್ಯಕ್ಷರಾಗುವ ಮೊದಲ ಮಹಿಳೆ, ಮೊದಲ ಕಪ್ಪು ಮಹಿಳೆ ಮತ್ತು ದಕ್ಷಿಣ ಏಷ್ಯಾ ಮೂಲದ ಮೊದಲ ವ್ಯಕ್ತಿಯಾಗುತ್ತಾರೆ.

### ಖಾಸಗಿ ಆಸ್ಪತ್ರೆ ನಿರ್ದೇಶಕನಿಂದ ನರ್ಸ್ ಮೇಲೆ ಅತ್ಯಾಚಾರ

**ಕಾನ್ಪುರ:** ಖಾಸಗಿ ಆಸ್ಪತ್ರೆಯೊಂದರ ನಿರ್ದೇಶಕ 22 ವರ್ಷದ ನರ್ಸ್ ಮೇಲೆ ಅತ್ಯಾಚಾರವೆಸಗಿರುವ ಘಟನೆ ಉತ್ತರ ಪ್ರದೇಶದ ಕಾನ್ಪುರದಲ್ಲಿ ನಡೆದಿದೆ. ಅತ್ಯಾಚಾರವೆಸಗುವ ಮುನ್ನ ನರ್ಸ್‌ಗೆ ಅಮಲು ಬೆರೆಸಿದ ತಂಪು ಪಾನೀಯವನ್ನು ನೀಡಲಾಗಿತ್ತು ಎಂದು ಶಂಕಿಸಲಾಗಿದೆ. ಎಫ್‌ಐಆರ್ ದಾಖಲಿಸಿಕೊಂಡು ಆರೋಪಿಯನ್ನು ಬಂಧಿಸಲಾಗಿದೆ.

ಕಲ್ಯಾಣಪುರದ ಸಹಾಯಕ ಪೊಲೀಸ್ ಕಮಿಷನರ್ (ಎಸಿಪಿ) ಅಭಿಷೇಕ್ ಪಾಂಡೆ ಮಾತನಾಡಿ, ಮಹಿಳೆ ಕಳೆದೆರಡು ತಿಂಗಳುಗಳಿಂದ ಕಲ್ಯಾಣಪುರದ ಖಾಸಗಿ ಆಸ್ಪತ್ರೆಯಲ್ಲಿ ನರ್ಸ್ ಆಗಿ ಕೆಲಸ ಮಾಡುತ್ತಿದ್ದಾರೆ. ಭಾನುವಾರ ಸಂಜೆ, ಆಸ್ಪತ್ರೆಯಲ್ಲಿ ನಿರ್ದೇಶಕ ಆಯೋಜಿಸಿದ್ದ ಪಾರ್ಟಿಯಲ್ಲಿ ನರ್ಸ್ ಪಾಲ್ಗೊಂಡಿದ್ದಳು. ಕೆಲಸದ ನೆಪದಲ್ಲಿ ಆಕೆಯನ್ನು ರಾತ್ರಿ ಸಮಯದಲ್ಲಿ ಆಸ್ಪತ್ರೆಯಲ್ಲಿ ಇರುವಂತೆ ನಿರ್ದೇಶಕ ಹೇಳಿದ್ದು, ಮಧ್ಯರಾತ್ರಿ ಆಕೆಯನ್ನು ಕೋಣೆಗೆ ಕರೆದು ಬಲವಂತವಾಗಿ ಒಳಗೆ ಎಳೆದುಕೊಂಡು ಹೋಗಿ ಬಾಗಿಲು ಹಾಕಿ ಕೃತ್ಯವೆಸಗಿದ್ದಾನೆ ಎಂದು ತಿಳಿಸಿದ್ದಾರೆ. ಈ ಘಟನೆಯನ್ನು ಯಾರಿಗಾದರೂ ತಿಳಿಸಿದರೆ ಕೊಲೆ ಮಾಡುವುದಾಗಿ ನರ್ಸ್‌ಗೆ ನಿರ್ದೇಶಕ ಬೆದರಿಕೆ ಹಾಕಿದ್ದಾನೆ ಎಂದು ಅಧಿಕಾರಿ ತಿಳಿಸಿದ್ದಾರೆ. ಆರೋಪಿಯ ಗುರುತನ್ನು ಪೊಲೀಸರು ಇನ್ನೂ ಬಹಿರಂಗಪಡಿಸಿಲ್ಲ. ಬಂಧನದ ನಂತರ ಆತನನ್ನು ನ್ಯಾಯಾಲಯಕ್ಕೆ ಹಾಜರುಪಡಿಸಲಾಗಿದೆ. ಸಂತ್ರಸ್ತೆಯ ವೈದ್ಯಕೀಯ ಪರೀಕ್ಷೆಯನ್ನು ನಡೆಸಲಾಗುವುದು ಮತ್ತು ಮ್ಯಾಜಿಸ್ಟ್ರೇಟ್ ಮುಂದೆ ಆಕೆಯ ಹೇಳಿಕೆಯನ್ನು ದಾಖಲಿಸಲು ನ್ಯಾಯಾಲಯದ ಮುಂದೆ ಹಾಜರುಪಡಿಸಲಾಗುವುದು ಎಂದು ಅಧಿಕಾರಿ ಹೇಳಿದರು.

### ಉದ್ಯೋಗದಲ್ಲಿ ಮಹಿಳೆಯರಿಗೆ 35% ಮೀಸಲಾತಿ: ಸರ್ಕಾರದ ನಿರ್ಧಾರ




**ಭೋಪಾಲ್:** ಮಧ್ಯಪ್ರದೇಶ ಕ್ಯಾಬಿನೆಟ್ ಸರ್ಕಾರಿ ಉದ್ಯೋಗಗಳಲ್ಲಿ ಮಹಿಳೆಯರಿಗೆ ಮೀಸಲಾತಿ ಪ್ರಮಾಣವನ್ನು 35% ಏರಿಸುವ ಪ್ರಸ್ತಾಪಕ್ಕೆ ಒಪ್ಪಿಗೆ ನೀಡಿದೆ. ಇಲ್ಲಿಯವರೆಗೂ ಸರ್ಕಾರಿ ಉದ್ಯೋಗಗಳಲ್ಲಿ ಮಹಿಳೆಯರಿಗೆ 33% ಮೀಸಲಾತಿಯನ್ನು ಕಲ್ಪಿಸಲಾಗುತ್ತಿತ್ತು. ಸರ್ಕಾರ ಈಗ ಕೋಟಾದಲ್ಲಿ ಹೆಚ್ಚುವರಿಯಾಗಿ 2% ನೀಡಿದೆ. ಕಾಯ್ದೆಯಾಗಿ ಜಾರಿ ಬಂದರೆ ಮಹಿಳಾ ಮೀಸಲಾತಿ ಪ್ರಮಾಣ 35% ಏರಿಕೆಯಾಗಲಿದೆ.

ಮುಖ್ಯಮಂತ್ರಿ ಮೋಹನ್ ಯಾದವ್ ಅವರ ಅಧ್ಯಕ್ಷತೆಯಲ್ಲಿ ನಡೆದ ರಾಜ್ಯ ಕ್ಯಾಬಿನೆಟ್ ಸಭೆಯಲ್ಲಿ ಈ ಪ್ರಸ್ತಾವನೆಯನ್ನು ಅನುಮೋದಿಸಲಾಗಿದೆ. ಮಧ್ಯಪ್ರದೇಶದಲ್ಲಿ ಸರ್ಕಾರಿ ಸೇವೆಗಳ ಎಲ್ಲಾ ನೇಮಕಾತಿಗಳಲ್ಲಿ ಮಹಿಳೆಯರಿಗೆ ಮೀಸಲಾತಿಯನ್ನು 33% ರಿಂದ 35% ಗೆ ಹೆಚ್ಚಿಸಲಾಗಿದೆ. ಇದು ಮಹಿಳಾ ಸಬಲೀಕರಣದತ್ತ ಮಹತ್ವದ ಹೆಜ್ಜೆಯಾಗಿದೆ ಎಂದು ಮಧ್ಯಪ್ರದೇಶದ ಡಿಸಿಎಂ ರಾಜೇಂದ್ರ ಶುಕ್ಲಾ ತಿಳಿಸಿದ್ದಾರೆ. ಮುಂದುವರೆದು ಮಾತನಾಡಿದ ಅವರು, ರಾಜ್ಯದಲ್ಲಿ 254 ಹೊಸ ರಸಗೊಬ್ಬರ ಮಾರಾಟ ಕೇಂದ್ರಗಳನ್ನು ತೆರೆಯಲು ಸಂಪುಟ ಅನುಮೋದನೆ ನೀಡಿದೆ. ಈ ನಿರ್ಧಾರ ಜಾರಿಯಿಂದ ರೈತರಿಗೆ ಗೊಬ್ಬರಕ್ಕಾಗಿ ಕಾಯುವುದರಿಂದ ಮುಕ್ತಿ ಸಿಗಲಿದೆ ಎಂದಿದ್ದಾರೆ. ವೈದ್ಯಕೀಯ ಕಾಲೇಜುಗಳಲ್ಲಿ ಸಹಾಯಕ ಪ್ರಾಧ್ಯಾಪಕರ ನೇಮಕಾತಿ ವಿಚಾರಕ್ಕೆ ಸಂಬಂಧಿಸಿದಂತೆ, ಅಭ್ಯರ್ಥಿಗಳ ವಯಸ್ಸನ್ನು 40 ವರ್ಷದಿಂದ 50 ವರ್ಷಕ್ಕೆ ಹೆಚ್ಚಿಸಲು ಸಚಿವ ಸಂಪುಟವು ಅನುಮತಿ ನೀಡಿದೆ ಎಂದು ತಿಳಿಸಿದ್ದಾರೆ.

# ಯಶ್ ಬೇಗ ಸಿನಿಮಾ ಮಾಡಿ

'ಟಾಕ್ಸಿಕ್' ನೋಡುವ ನಿರೀಕ್ಷೆ ವ್ಯಕ್ತಪಡಿಸಿದ ಶಾರುಖ್



ಕೆಜಿಎಫ್, ಕೆಜಿಎಫ್ 2 ಸಿನಿಮಾಗಳ ಯಶಸ್ಸಿನ ಬಳಿಕ ಯಶ್ ಪ್ಯಾನ್ ಇಂಡಿಯಾ ಸ್ಟಾರ್ ಆಗಿ ಬೇಡಿಕೆಯಿದೆ. ಅವರ ಮುಂಬರುವ ಸಿನಿಮಾಗಾಗಿ ಅಭಿಮಾನಿಗಳು ಕಾತರದಿಂದ ಎದುರು ನೋಡುತ್ತಿದ್ದಾರೆ. ಹೀಗಿರುವಾಗ ಪಠಾಣ್ ಸ್ಟಾರ್ ಶಾರುಖ್ ಖಾನ್ ಕೂಡ ಯಶ್‌ಗೆ ಬೇಗ ಸಿನಿಮಾ ಮಾಡಿ ಎಂದು ಬೇಡಿಕೆ ಇಟ್ಟಿದ್ದಾರೆ. ಯಶ್ ಕುರಿತು ಮಾತನಾಡಿರುವ ಶಾರುಖ್ ವಿಡಿಯೋ ಸೋಶಿಯಲ್ ಮೀಡಿಯಾದಲ್ಲಿ ವೈರಲ್ ಆಗಿದೆ. ಇದೇ ನವೆಂಬರ್ 2ರಂದು ಶಾರುಖ್ ಖಾನ್ ಹುಟ್ಟುಹಬ್ಬವನ್ನು ಅಭಿಮಾನಿಗಳ ಜೊತೆ ಆಚರಿಸಿದರು. ಅಭಿಮಾನಿಗಳೊಂದಿಗೆ ನಟ ಸಮಯ ಕಳೆದರು. ಈ ವೇಳೆ, ಯಶ್ ಕುರಿತು ಶಾರುಖ್ ಮಾತನಾಡಿರುವ ವಿಡಿಯೋ ಯಶ್ ಅಭಿಮಾನಿಗಳ ಗಮನ ಸೆಳೆದಿದೆ. ಯಶ್ ಬೇಗ ಬೇಗ ಸಿನಿಮಾ ಮಾಡಿ. ಬೆಂಗಳೂರಿನಿಂದ ಬರುವ ಆ ಸಿನಿಮಾಗಾಗಿ ನಾವು ಕಾಯುತ್ತಿದ್ದೇವೆ ಎಂದು ಶಾರುಖ್ ಖಾನ್ ಹೇಳಿದ್ದಾರೆ. ಈ ಮೂಲಕ ಯಶ್ ಸಿನಿಮಾಗಳ ಮೇಲೆ ಶಾರುಖ್ ಖಾನ್‌ಗೂ ನಿರೀಕ್ಷೆ ಇದೆ ಅನ್ನೋದು ಸ್ಪಷ್ಟವಾಗಿದೆ. ಶಾರುಖ್ ಅವರು ಯಶ್ ಮೇಲೆ ಇಟ್ಟಿರುವ ನಿರೀಕ್ಷೆ ನೋಡಿ ರಾಕಿ ಬಾಯ್ ಏನು ಹೇಳುತ್ತಾರೆ ಎಂದು ಫ್ಯಾನ್ಸ್ ಕ್ಯೂರಿಯಸ್ ಆಗಿದ್ದಾರೆ.



# ಬಿಟ್ಟಿ ಸಲಹೆ ಕೊಟ್ಟ ನೆಟ್ಟಿಗನಿಗೆ ಸಮಂತಾ ತಿರುಗೇಟು

ಸೌತ್ ಬ್ಯೂಟಿ ಸಮಂತಾ 'ಹನಿ ಬನಿ ಸಿಟಾಡೆಲ್' ವೆಬ್ ಸಿರೀಸ್ ಪ್ರಚಾರ ಕಾರ್ಯದಲ್ಲಿ ಬ್ಯುಸಿಯಾಗಿದ್ದಾರೆ. ಇದರ ನಡುವೆ ಸೋಶಿಯಲ್ ಮೀಡಿಯಾದಲ್ಲಿ ನಟಿಗೆ ದೇಹ ತೂಕ ಹೆಚ್ಚಿಸಿಕೊಳ್ಳಿ ಎಂದು ಹೇಳಿದ ನೆಟ್ಟಿಗನಿಗೆ ಸಮಂತಾ ತಕ್ಕ ಶಾಸ್ತಿ ಮಾಡಿದ್ದಾರೆ. ವರುಣ್ ಧವನ್ ಜೊತೆ ಬಾಲಿವುಡ್ ಪ್ರಾಜೆಕ್ಟ್ ಪ್ರಚಾರ ಕಾರ್ಯದಲ್ಲಿ ಸಮಂತಾ ತೊಡಗಿಸಿಕೊಂಡಿದ್ದಾರೆ. ಬಿಡುವಿನ ಸಮಯದಲ್ಲಿ ಅಭಿಮಾನಿಗಳ ಜೊತೆ ನಟಿ ಪ್ರಶ್ನಾವಳಿ ನಡೆಸಿದ್ದಾರೆ. ಆಗ ನೆಟ್ಟಿಗನೊಬ್ಬ ನಟಿಯ ದೇಹದ ತೂಕದ ಕುರಿತು ಮಾತನಾಡಿದ್ದಾರೆ. ನಿಮ್ಮ ದೇಹದ ತೂಕ ಹೆಚ್ಚಿಸಿಕೊಳ್ಳಿ ಎಂದು ಬಿಟ್ಟಿ ಸಲಹೆ ನೀಡಿದ್ದಾರೆ. ಅದಕ್ಕೆ ನಟಿ ಪ್ರತಿಕ್ರಿಯಿಸಿ, ನನ್ನ ದೇಹ ಸ್ಥಿತಿಗೆ ಅಗತ್ಯವಿರುವ ಕಟ್ಟುನಿಟ್ಟಾದ ಆಹಾರ ಕ್ರಮವನ್ನು ನಾನು ಫಾಲೋ ಮಾಡುತ್ತಿದ್ದೇನೆ. ಅದು ನನ್ನ ದೇಹದ ತೂಕ ಹೆಚ್ಚಿಸುವುದನ್ನು ತಡೆಯುತ್ತಿದೆ. ಜನರನ್ನು ಮೊದಲು ಜಡ್ಜ್ ಮಾಡೋದನ್ನು ನಿಲ್ಲಿಸಿ. ಬದುಕಿ, ಬದುಕಲು ಬಿಡಿ ಈಗ 2024ರ ಸಮಯ ಎಂದು ನೆಟ್ಟಿಗನಿಗೆ ಸಖತ್ ಆಗಿ ತಿರುಗೇಟು ನೀಡಿದ್ದಾರೆ.




# ಅಲ್ಲು ಜೊತೆ ಶ್ರೀಲೀಲಾ ಡ್ಯಾನ್ಸ್

ಬೆಂಗಳೂರಿನ ಬೆಡಗಿ ಶ್ರೀಲೀಲಾಗೆ ಟಾಲಿವುಡ್‌ನಲ್ಲಿ ಬೇಡಿಕೆಯ ನಟಿಯಾಗಿದ್ದಾರೆ. ಸಿನಿಮಾಗಳಲ್ಲಿ ಬ್ರೇಕ್ ಸಿಗದೇ ಇದ್ದರೂ ಅವರ ಮೇಲಿನ ಕ್ರೇಜ್ ಕಮ್ಮಿಯಾಗಿಲ್ಲ. ಆಯಕ್ಟಿಂಗ್‌ನಲ್ಲೂ ಸೈ, ಡ್ಯಾನ್ಸ್‌ಗೂ ಜೈ ಅನ್ನೋ ಶ್ರೀಲೀಲಾ ಇದೀಗ 'ಪುಷ್ಪ 2' ಸಿನಿಮಾದಲ್ಲಿ ಹೆಜ್ಜೆ ಹಾಕಲು ಚಿತ್ರತಂಡ ಸಂಪರ್ಕಿಸಿದೆ ಎನ್ನಲಾದ ಸುದ್ದಿಯೊಂದು ಹರಿದಾಡುತ್ತಿದೆ. ಅಲ್ಲು ಅರ್ಜುನ್ ಜೊತೆ ಶ್ರೀಲೀಲಾ ಡ್ಯಾನ್ಸ್ ಮಾಡಲಿದ್ದಾರೆ ಎನ್ನಲಾದ ಸುದ್ದಿ ಕೇಳಿಯೇ ಅಭಿಮಾನಿಗಳು ಥ್ರಿಲ್ ಆಗಿದ್ದಾರೆ.

ಇತ್ತೀಚೆಗೆ 'ಪುಷ್ಪ 2' ಸಿನಿಮಾದಲ್ಲಿ ಅಲ್ಲು ಅರ್ಜುನ್ ಜೊತೆ ತೃಪ್ತಿ ದಿಮ್ರಿ, ಶ್ರದ್ಧಾ ಕಪೂರ್ ಹೆಜ್ಜೆ ಹಾಕಲಿದ್ದಾರೆ ಎನ್ನಲಾಗಿತ್ತು. ಆದರೆ ಕನ್ನಡದ ನಟಿ ಶ್ರೀಲೀಲಾಗೆ 'ಪುಷ್ಪ 2' ಟೀಮ್ ಮಣೆ ಹಾಕಿದೆಯಂತೆ. ಶ್ರೀಲೀಲಾ ಡ್ಯಾನ್ಸ್‌ಗೆ ದೊಡ್ಡ ಮಟ್ಟದಲ್ಲಿ ಫ್ಯಾನ್ಸ್‌ಗೆ ಕ್ರೇಜ್ ಇದೆ. ಹಾಗಾಗಿ ಈ ನಟಿಯನ್ನೇ ಚಿತ್ರತಂಡ ಹೆಜ್ಜೆ ಹಾಕಲು ಕೇಳಿದೆ ಎನ್ನಲಾದ ಸುದ್ದಿಯೊಂದು ಹರಿದಾಡುತ್ತಿದೆ. ಇದೇ ನವೆಂಬರ್ 6 ಮತ್ತು 7ರಂದು 'ಪುಷ್ಪ 2' ಸಿನಿಮಾದ ಸ್ಪೆಷಲ್ ಹಾಡಿನ ಶೂಟಿಂಗ್ ಕೂಡ ನಡೆಯಲಿದೆ ಎನ್ನಲಾಗಿದೆ. ಡಿ.5ರಂದು ಅಲ್ಲು ಅರ್ಜುನ್, ರಶ್ಮಿಕಾ ನಟನೆಯ ಈ ಸಿನಿಮಾ ರಿಲೀಸ್‌ಗೆ ರೆಡಿಯಿದೆ. ಹಾಗಾಗಿ ಒಂದು ತಿಂಗಳ ಮುಂಚೆ ಐಟಂ ಸಾಂಗ್ ಶೂಟ್ ಮಾಡಲು ಚಿತ್ರತಂಡ ಪ್ಲ್ಯಾನ್ ಮಾಡಿದೆ.

# ಬಿಷ್ಣೋಯ್ ಹೆಸರಲ್ಲಿ ಸಲ್ಮಾನ್ ಖಾನ್‌ಗೆ ಬೆದರಿಕೆ



ಲಾರೆನ್ಸ್ ಬಿಷ್ಣೋಯ್ ಗ್ಯಾಂಗ್ ಹೆಸರಲ್ಲಿ ಬಾಲಿವುಡ್ ನಟ ಸಲ್ಮಾನ್ ಖಾನ್‌ಗೆ ಬೆದರಿಕೆ ಹಾಕಿದ್ದ ಆರೋಪಿಯನ್ನು ತುಮಕೂರಿನಲ್ಲಿ ಪೋಲೀಸರು ಬಂಧಿಸಿದ್ದಾರೆ. ಬಂಧಿತ ಆರೋಪಿಯನ್ನು ವಿಕ್ರಮ್ ಎಂದು ಗುರುತಿಸಲಾಗಿದೆ. ಆರೋಪಿಯ, ಸಲ್ಮಾನ್ ಖಾನ್ 5 ಕೋಟಿ ರೂ. ಹಣ ನೀಡಬೇಕು ಮತ್ತು ದೇವಾಲಯಕ್ಕೆ ಬಂದು ಕ್ಷಮೆ ಕೋರಬೇಕು ಎಂದು ಮುಂಬೈ ಪೊಲೀಸರಿಗೆ ಮೆಸೇಜ್ ಕಳುಹಿಸಿದ್ದ. ಜೀವಂತವಾಗಿರಲು ಬಯಸಿದರೆ ದೇವ ಸ್ಥಾನದಲ್ಲಿ ಕ್ಷಮೆಯಾಚಿಸಿ ಇಲ್ಲವೇ 5 ಕೋಟಿ ಹಣ ಕೊಡಿ ಎಂದು ಬಾಲಿವುಡ್ ನಟ ಸಲ್ಮಾನ್ ಖಾನ್‌ಗೆ ಮತ್ತೆ ಬಿಷ್ಣೋಯ್ ಗ್ಯಾಂಗ್ ಹೆಸರಿಂದ ಬೆದರಿಕೆ ಬಂದಿತ್ತು. ಆರೋಪಿ ಮುಂಬೈ ಪೊಲೀಸರಿಗೆ ವಾಟ್ಸಪ್ ಸಂದೇಶ ಕಳುಹಿಸಿದ್ದ. ಒಂದು ವಾರದಲ್ಲಿ ಸಲ್ಮಾನ್ ಖಾನ್‌ಗೆ ಬಂದ ಎರಡನೇ ಕೊಲೆ ಬೆದರಿಕೆ ಇದಾಗಿದೆ. ಕಳೆದ ವಾರ, ಅ.30 ರಂದು ಮುಂಬೈ ಸಂಚಾರ ನಿಯಂತ್ರಣವು ಸಲ್ಮಾನ್ ಖಾನ್ ವಿರುದ್ಧ ಇದೇ ರೀತಿಯ ಬೆದರಿಕೆಯನ್ನು ಸ್ವೀಕರಿಸಿತ್ತು. 2 ಕೋಟಿಗೆ ಬೇಡಿಕೆಯಿಡಲಾಗಿತ್ತು. ಈ ಸಂಬಂಧ ಬಾಂದ್ರಾ ಪೂರ್ವದ ನಿವಾಸಿ ಅಜಮ್ ಮೊಹಮ್ಮದ್ ಮುಸ್ತಫಾ ಎಂಬಾತನನ್ನು ತಕ್ಷಣವೇ ಬಂಧಿಸಲಾಗಿತ್ತು.

# ಮರು ಮದುವೆಯಾದ ಸನ್ನಿ ಲಿಯೋನ್



ಬಾಲಿವುಡ್ ನಟಿ ಸನ್ನಿ ಲಿಯೋನ್ ಅವರು ಮರು ಮದುವೆಯಾಗಿದ್ದಾರೆ. ಪತಿ ಡೇನಿಯಲ್ ಜೊತೆಗೆ ಸನ್ನಿ ಮತ್ತೊಮ್ಮೆ ಮದುವೆಯಾಗಿದ್ದಾರೆ. ಮಾಲ್ಡೀವ್ಸ್ ಕಡಲ ತೀರದಲ್ಲಿ ತೆಗೆದ ಸುಂದರ ಫೋಟೋಗಳು ಸೋಶಿಯಲ್ ಮೀಡಿಯಾದಲ್ಲಿ ಸದ್ದು ಮಾಡುತ್ತಿವೆ. ಮಾಲ್ಡೀವ್ಸ್ ಕಡಲ ತೀರದಲ್ಲಿ ಮೂವರು ಮಕ್ಕಳ ಮುಂದೆ ಪತಿ ಡೇನಿಯಲ್ ಜೊತೆ ಮರು ಮದುವೆಯಾಗಿರುವ ಫೋಟೋವನ್ನು ನಟಿ ಹಂಚಿಕೊಂಡಿದ್ದಾರೆ. ಪತಿಯೊಂದಿಗಿನ ರೊಮ್ಯಾಂಟಿಕ್ ಫೋಟೋ ಹಂಚಿಕೊಂಡಿದ್ದಾರೆ.

ಅಂದಹಾಗೆ, 2011ರಲ್ಲಿ ಡೇನಿಯಲ್ ಜೊತೆ ಸನ್ನಿ ಲಿಯೋನ್ ಮದುವೆಯಾಗಿದ್ದರು. ಈ ಜೋಡಿ ಮದುವೆಯಾಗಿ 13 ವರ್ಷಗಳು ಕಳೆದಿವೆ. 2017ರಲ್ಲಿ ಹೆಣ್ಣು ಮಗುವನ್ನು ದತ್ತು ಪಡೆದುಕೊಂಡಿದ್ದರು. ಆ ನಂತರ ಬಾಡಿಗೆ ತಾಯ್ತನದ ಮೂಲಕ ಅವಳಿ ಜವಳಿ ಗಂಡು ಮಕ್ಕಳಿಗೆ ಸನ್ನಿ ದಂಪತಿ ಪೋಷಕರಾದರು.

ಸುದ್ದಿ ಅದೆಷ್ಟು ನಿಜ



# ಈತ ಭಾರತ ಟೆಸ್ಟ್ ತಂಡದ ನಾಯಕ ಆಗಬೇಕು

ನ್ಯೂಜಿಲೆಂಡ್ ವಿರುದ್ಧದ ಟೆಸ್ಟ್ ಸರಣಿಯಲ್ಲಿ ಭಾರತ ತಂಡದ ನಿರಾಶಾದಾಯಕ ಪ್ರದರ್ಶನದ ನಂತರ, ಹಿರಿಯ ಆಟಗಾರರ ಪ್ರದರ್ಶನದ ಮೇಲೆ ಪ್ರಶ್ನೆಗಳು ಎದ್ದಿವೆ. ರೋಹಿತ್ ಶರ್ಮಾ ಅವರ ನಾಯಕತ್ವದ ಮೇಲೂ ಸಂದೇಹಗಳು ವ್ಯಕ್ತವಾಗಿವೆ. ಈ ಹಿನ್ನೆಲೆಯಲ್ಲಿ, ಮಾಜಿ ಕ್ರಿಕೆಟಿಗ ಮೊಹಮ್ಮದ್ ಕೈಫ್ ಅವರು ರಿಷಬ್ ಪಂತ್ ಅವರನ್ನು ಭಾರತದ ಮುಂದಿನ ಟೆಸ್ಟ್ ನಾಯಕನಾಗಿ ಸೂಚಿಸಿದ್ದಾರೆ. ಪಂತ್ ಅವರ ಆಕ್ರಮಣಕಾರಿ ಆಟ ಮತ್ತು ನಾಯಕತ್ವದ ಗುಣಗಳನ್ನು ಕೈಫ್ ಮೆಚ್ಚಿಕೊಂಡಿದ್ದಾರೆ. ನ್ಯೂಜಿಲೆಂಡ್ ವಿರುದ್ಧದ ಟೆಸ್ಟ್ ಸರಣಿಯಲ್ಲಿ ಟೀಂ ಇಂಡಿಯಾ ನಿರಾಶಾದಾಯಕ ಪ್ರದರ್ಶನ ನೀಡಿದ ನಂತರ ಹಿರಿಯ ಆಟಗಾರರ ಪ್ರದರ್ಶನದ ಮೇಲೆ ಪ್ರಶ್ನೆಗಳು ಎದ್ದಿವೆ. ಭಾರತ ಈ ತಿಂಗಳ ಕೊನೆಯಲ್ಲಿ ಆಸ್ಟ್ರೇಲಿಯಾ ಪ್ರವಾಸ ಮಾಡಲಿದ್ದು, ಕಾಂಗರೂಗಳ ವಿರುದ್ಧ 5 ಪಂದ್ಯಗಳ ಟೆಸ್ಟ್ ಸರಣಿಯನ್ನು ಆಡಬೇಕಿದೆ. ಈ ಸರಣಿಯಲ್ಲೂ ತಂಡದ ಹಿರಿಯ ಆಟಗಾರರು ಉತ್ತಮ ಪ್ರದರ್ಶನ ನೀಡದಿದ್ದರೆ, ಅವರ ವಿರುದ್ಧ ಬಿಸಿಸಿಐ ಕಠಿಣ ಕ್ರಮ ಕೈಗೊಳ್ಳಬಹುದು. ಹೀಗಿರುವಾಗ ಭಾರತ ತಂಡದ ನಾಯಕ ರೋಹಿತ್ ಶರ್ಮಾ ಅವರ ಮೇಲೂ ಕತ್ತಿ ತೂಗುತ್ತಿದೆ. ಒಂದು ವೇಳೆ ರೋಹಿತ್ ಶರ್ಮಾ ತಂಡದಿಂದ ಹೊರಬಿದ್ದರೆ, ಟೀಂ ಇಂಡಿಯಾ ಟೆಸ್ಟ್ ತಂಡದ ನಾಯಕ ಯಾರು ಎಂಬುದು ದೊಡ್ಡ ಪ್ರಶ್ನೆಯಾಗಿದೆ. ಈ ನಡುವೆ ಟೀಂ ಇಂಡಿಯಾದ ಮಾಜಿ ಕ್ರಿಕೆಟಿಗ ಮೊಹಮ್ಮದ್ ಕೈಫ್ ಟೆಸ್ಟ್ ತಂಡಕ್ಕೆ ಸೂಕ್ತ ನಾಯಕನ ಹೆಸರನ್ನು ಸೂಚಿಸಿದ್ದಾರೆ. ರೋಹಿತ್ ಶರ್ಮಾ ನಂತರ ಯಾರು ಭಾರತ ಟೆಸ್ಟ್ ತಂಡದ ನಾಯಕನಾಗಬೇಕು ಎಂಬುದಕ್ಕೆ ಉತ್ತರಿಸಿರುವ ಟೀಂ ಇಂಡಿಯಾದ ಮಾಜಿ ಕ್ರಿಕೆಟಿಗ ಮೊಹಮ್ಮದ್ ಕೈಫ್, ರಿಷಬ್ ಪಂತ್ ಅವರ ಹೆಸರನ್ನು ತೆಗೆದುಕೊಂಡಿದ್ದಾರೆ. ಪ್ರಸ್ತುತ ತಂಡದಲ್ಲಿ ನಾಯಕತ್ವದ ರೇಸ್‌ನಲ್ಲಿರುವ ಏಕೈಕ ಆಟಗಾರ ಪಂತ್ ಎಂದು ಕೈಫ್ ಅಭಿಪ್ರಾಯಪಟ್ಟಿದ್ದಾರೆ. ಈ ಬಗ್ಗೆ ಇನ್‌ಸ್ಟಾಗ್ರಾಮ್ ಲೈವ್‌ನಲ್ಲಿ ಮಾತನಾಡಿದ ಕೈಫ್, 'ಪ್ರಸ್ತುತ ತಂಡದಿಂದ, ರಿಷಬ್ ಪಂತ್ ಮಾತ್ರ ಟೆಸ್ಟ್ ನಾಯಕನಾಗುವ ರೇಸ್‌ನಲ್ಲಿದ್ದಾರೆ. ಅವರು ಅದಕ್ಕೆ ಅರ್ಹರು, ಅವರು ಆಡಿದಾಗಲೆಲ್ಲಾ ಭಾರತ ತಂಡವನ್ನು ಗೆಲುವಿನತ್ತ ಮುನ್ನಡೆಸಿದ್ದಾರೆ.




# ಐಪಿಎಲ್ ಇತಿಹಾಸದಲ್ಲಿ ಅಧಿಕ ಬಾರಿ ರಿಟೈನ್ ಆದ ಆಟಗಾರ

ಐಪಿಎಲ್ 2025 ರ ಹರಾಜು ಮುನ್ನ, ಅನೇಕ ಫ್ರಾಂಚೈಸಿಗಳು ತಮ್ಮ ಪ್ರಮುಖ ಆಟಗಾರರನ್ನು ಉಳಿಸಿಕೊಂಡಿವೆ. ಅದರಲ್ಲಿ ಅಧಿಕ ಬಾರಿ ರಿಟೈನ್ ಆದ ಆಟಗಾರರ ಪೈಕಿ ವಿರಾಟ್ ಕೊಹ್ಲಿ 17 ಬಾರಿ, ಎಂ.ಎಸ್. ಧೋನಿ 15 ಬಾರಿ, ರೋಹಿತ್ ಶರ್ಮಾ 14 ಬಾರಿ ಮತ್ತು ಸುನಿಲ್ ನರೈನ್ 13 ಬಾರಿ ರಿಟೈನ್ ಆಗಿದ್ದಾರೆ. ಇತ್ತೀಚೆಗೆ, ಎಲ್ಲಾ ಫ್ರಾಂಚೈಸಿಗಳು ಐಪಿಎಲ್ 2025 ರ ಸಂಬಂಧಿತ ಧಾರಣ ಪಟ್ಟಿಯನ್ನು ಪ್ರಕಟಿಸಿದ್ದವು. ಅದರಲ್ಲಿ ಅನೇಕ ಸ್ಟಾರ್ ಆಟಗಾರರನ್ನು ತಂಡದಿಂದ ಬಿಡುಗಡೆ ಮಾಡಿವೆ. ಆದಾಗ್ಯೂ, ಕೆಲವು ಹಿರಿಯ ಆಟಗಾರರು ತಂಡದಲ್ಲೇ ಉಳಿಯುವಲ್ಲಿ ಯಶಸ್ವಿಯಾಗಿದ್ದಾರೆ. ಅವರಲ್ಲಿ ಅಧಿಕ ಬಾರಿ ರಿಟೈನ್ ಆದ ಆಟಗಾರರ ಪಟ್ಟಿ ಇಲ್ಲಿದೆ. ವಿರಾಟ್ ಕೊಹ್ಲಿ ತಮ್ಮ ಐಪಿಎಲ್ ವೃತ್ತಿಜೀವನವನ್ನು ಆರಂಭಿಸಿದಾಗಿನಿಂದಲೂ ಒಂದೇ ತಂಡದ ಪರ ಆಡುತ್ತಿದ್ದಾರೆ. ಅಲ್ಲದೆ ಕೊಹ್ಲಿ ಇದುವರೆಗೆ ಒಮ್ಮೆಯೂ ಹರಾಜಿಗೆ ಬಂದಿಲ್ಲ. ಅಂದರೆ ವಿರಾಟ್ ಕೊಹ್ಲಿಯನ್ನು ಇದುವರೆಗೆ ಬರೋಬ್ಬರಿ 17 ಬಾರಿ ಆರ್‌ಸಿಬಿ ಫ್ರಾಂಚೈಸಿ ರಿಟೈನ್ ಮಾಡಿಕೊಂಡಿದೆ. ಮುಂಬರುವ ಐಪಿಎಲ್‌ನಲ್ಲೂ ಕೊಹ್ಲಿ ಆರ್‌ಸಿಬಿ ಪರ ಆಡಲಿದ್ದು, ಇದಕ್ಕಾಗಿ ಕೊಹ್ಲಿಗೆ 21 ಕೋಟಿ ರೂ. ನೀಡಲಾಗಿದೆ. ವಿರಾಟ್ ಕೊಹ್ಲಿಯನ್ನು ಹೊರತುಪಡಿಸಿ ಚೆನ್ನೈ ಸೂಪರ್ ಕಿಂಗ್ಸ್ ತಂಡದ ಮಾಜಿ ನಾಯಕ ಎಂಎಸ್ ಧೋನಿ ಈ ಪಟ್ಟಿಯಲ್ಲಿ ಎರಡನೇ ಸ್ಥಾನದಲ್ಲಿದ್ದಾರೆ. ಧೋನಿ ತಮ್ಮ ಐಪಿಎಲ್ ವೃತ್ತಿಜೀವನದ ಆರಂಭದಿಂದಲೂ ಚೆನ್ನೈ ತಂಡದಲ್ಲಿದ್ದಾರೆ. ಎರಡು ವರ್ಷ ಮಾತ್ರ ಸಿಎಸ್‌ಕೆ ತಂಡವನ್ನು ಬ್ಯಾನ್ ಮಾಡಿದ್ದ ಕಾರಣ ಅವರು ಪುಣೆ ವಾರಿಯರ್ಸ್ ತಂಡದ ಪರ ಆಡಿದ್ದನ್ನು ಬಿಟ್ಟರೆ, ಧೋನಿ ಕೂಡ 15 ಬಾರಿ ಸಿಎಸ್‌ಕೆ ತಂಡಕ್ಕೆ ರಿಟೈನ್ ಆಗಿದ್ದಾರೆ. ಮೂರನೇ ಸ್ಥಾನದಲ್ಲಿರುವ ಮುಂಬೈ ಇಂಡಿಯನ್ಸ್ ತಂಡದ ಮಾಜಿ ನಾಯಕ ರೋಹಿತ್ ಶರ್ಮಾ ಅವರನ್ನು 14 ಬಾರಿ ರಿಟೈನ್ ಮಾಡಿಕೊಳ್ಳಲಾಗಿದೆ.

ಇದೀಗ ಐಪಿಎಲ್ 2025ರ ಹರಾಜಿಗೂ ಮುನ್ನ ಮುಂಬೈ ಇಂಡಿಯನ್ಸ್ ರೋಹಿತ್ ಶರ್ಮಾ ಅವರನ್ನು 16.3 ಕೋಟಿ ರೂ.ಗೆ ಉಳಿಸಿಕೊಂಡಿದೆ.

ರೋಹಿತ್ ನಾಯಕತ್ವದಲ್ಲಿ ಮುಂಬೈ ಇಂಡಿಯನ್ಸ್ 5 ಬಾರಿ ಪ್ರಶಸ್ತಿ ಗೆದ್ದುಕೊಂಡಿದೆ. ಐಪಿಎಲ್ 2025ರ ಮೆಗಾ ಹರಾಜಿಗೂ ಮುನ್ನ ಕೋಲ್ಕತ್ತಾ ನೈಟ್ ರೈಡರ್ಸ್ ಸುನಿಲ್ ನರೈನ್ ಅವರನ್ನು 12 ಕೋಟಿ ರೂ.ಗೆ ಉಳಿಸಿಕೊಂಡಿದೆ. ಅಲ್ಲದೆ ನರೈನ್ ಭಾಗಶಃ ತಮ್ಮ ಐಪಿಎಲ್ ವೃತ್ತಿಜೀವನವನ್ನು ಕೆಕೆಆರ್ ತಂಡದಲ್ಲೇ ಕಳೆದಿದ್ದಾರೆ. ನರೈನ್ ಇದುವರೆಗೆ 13 ಬಾರಿ ಕೆಕೆಆರ್ ತಂಡಕ್ಕೆ ರಿಟೈನ್ ಆಗಿದ್ದಾರೆ. ವೆಸ್ಟ್ ಇಂಡೀಸ್‌ನ ಮಾಜಿ ಆಟಗಾರ ಕೀರನ್ ಪೊಲಾರ್ಡ್ ಅವರನ್ನು ಸಹ ಮುಂಬೈ ಇಂಡಿಯನ್ಸ್ ಸತತ 12 ಸೀಸನ್‌ಗಳಲ್ಲಿ ರಿಟೈನ್ ಮಾಡಿಕೊಂಡಿತ್ತು. ಪೊಲಾರ್ಡ್ ತಮ್ಮ ಆಲ್‌ರೌಂಡ್ ಪ್ರದರ್ಶನದಿಂದಾಗಿ ಮುಂಬೈ ಫ್ರಾಂಚೈಸಿ ಪ್ರಶಸ್ತಿ ಗೆಲ್ಲುವಲ್ಲಿ ಪ್ರಮುಖ ಪಾತ್ರ ವಹಿಸುತ್ತಿದ್ದರು. ಐಪಿಎಲ್ 2025ರ ಹರಾಜಿಗೂ ಮುನ್ನ ಜಸ್ಪ್ರೀತ್ ಬುಮ್ರಾ ಅವರನ್ನು ಮುಂಬೈ ಇಂಡಿಯನ್ಸ್ 18 ಕೋಟಿ ರೂ.ಗೆ ಉಳಿಸಿಕೊಂಡಿದೆ. ತಂಡದ ಬೌಲಿಂಗ್ ಜೀವಾಳ ಎನಿಸಿಕೊಂಡಿರುವ ಬುಮ್ರಾ ಕೂಡ ಮುಂಬೈ ತಂಡದ ಪರ ಸಾಕಷ್ಟು ವರ್ಷದಿಂದ ಆಡಿಕೊಂಡು ಬರುತ್ತಿದ್ದಾರೆ. ಬುಮ್ರಾ 12 ವರ್ಷಗಳಿಂದ ಮುಂಬೈ ತಂಡದಲ್ಲಿ ಆಡುತ್ತಿದ್ದು, ಫ್ರಾಂಚೈಸಿ ಅವರನ್ನು 12 ಬಾರಿ ರಿಟೈನ್ ಮಾಡಿದೆ.



# ಭಾರತವನ್ನು ಸುಲಭವಾಗಿ ಸೋಲಿಸುತ್ತೇವೆ

ಭಾರತ ತಂಡ ನ್ಯೂಜಿಲೆಂಡ್ ವಿರುದ್ಧದ ಟೆಸ್ಟ್ ಸರಣಿಯಲ್ಲಿ ಸೋತಿರುವುದು ತೀವ್ರ ಟೀಕೆಗೆ ಕಾರಣವಾಗಿದೆ. ಮಾಜಿ ಆಟಗಾರರು ಮತ್ತು ವಾಸಿಂ ಅಕ್ರಮ್ ಅವರಂತಹ ಪಾಕಿಸ್ತಾನದ ಮಾಜಿ ಆಟಗಾರರು ಕೂಡ ಟೀಂ ಇಂಡಿಯಾವನ್ನು ಟೀಕಿಸಿದ್ದಾರೆ. ಅಕ್ರಮ್ ಅವರು ಸ್ಪಿನ್ ಪಿಚ್‌ನಲ್ಲಿ ಪಾಕಿಸ್ತಾನ, ಭಾರತವನ್ನು ಸೋಲಿಸಬಹುದು ಎಂದು ಹೇಳಿದ್ದಾರೆ. ಆದರೆ ಅವರಿಗೆ ಬಾಂಗ್ಲಾದೇಶದ ವಿರುದ್ಧದ ಪಾಕಿಸ್ತಾನದ ಸೋಲನ್ನು ನೆಟ್ಟಿಗರು ನೆನಪಿಸಿದ್ದಾರೆ. ನ್ಯೂಜಿಲೆಂಡ್ ವಿರುದ್ಧ ಮೂರು ಪಂದ್ಯಗಳ ಟೆಸ್ಟ್ ಸರಣಿಯನ್ನು ಸೋತಿರುವ ಟೀಂ ಇಂಡಿಯಾ ಟೀಕಾಕಾರರ ಬಾಯಿಗೆ ರಸದೌತಣದಂತಾಗಿದೆ. ಇಷ್ಟು ದಿನ ಟೀಂ ಇಂಡಿಯಾ ಬಗ್ಗೆ ಹೊಗಳಿಕೆಯ ಮಾತುಗಳನ್ನಾಡುತ್ತಿದ್ದವರು ಇದೀಗ ಭಾರತ ಟೆಸ್ಟ್ ತಂಡವನ್ನು ಇನ್ನಿಲ್ಲದಂತೆ ಟೀಕಿಸುತ್ತಿದ್ದಾರೆ. ಇದಕ್ಕೆ ಟೀಂ ಇಂಡಿಯಾದ ಮಾಜಿ ಆಟಗಾರರು ಸೇರಿಕೊಂಡಿರುವುದು ವಿಪರ್ಯಾಸ. ಈ ನಡುವೆ ಪಾಕಿಸ್ತಾನ ಮಾಜಿ ಆಟಗಾರರು ಕೂಡ ಟೀಂ ಇಂಡಿಯಾವನ್ನು ಗುರಿಯಾಗಿಸಿಕೊಂಡಿದ್ದು, ಸ್ಪಿನ್ ಟ್ರ್ಯಾಕ್‌ನಲ್ಲಿ ಪಾಕಿಸ್ತಾನವು ಕೂಡ ಟೆಸ್ಟ್‌ನಲ್ಲಿ ಭಾರತವನ್ನು ಸೋಲಿಸಬಹುದು ಎಂದು ಪಾಕ್ ತಂಡದ ಮಾಜಿ ವೇಗದ ಬೌಲರ್ ವಾಸಿಂ ಅಕ್ರಮ್ ಹೇಳಿದ್ದಾರೆ. ಹೌದು ಭಾರತ ತಂಡ ಇದುವರೆಗೆ ತವರಿನಲ್ಲಿ ಕಿವೀಸ್ ವಿರುದ್ಧ ಒಂದೇ ಒಂದು ಟೆಸ್ಟ್ ಸರಣಿಯನ್ನು ಸೋತಿರಲಿಲ್ಲ.



ಬಾಂಗ್ಲಾ ವಿರುದ್ಧದ ಸೋಲನ್ನ ಮರೆತ್ರಾ ಎಂದ ನೆಟ್ಟಿಗರು




ಟೆಸ್ಟ್ ಕ್ರಿಕೆಟ್‌ನಿಂದ ನಿವೃತ್ತಿ ಹೊಂದಬಹುದು ಎಂದು ಭವಿಷ್ಯ

# ಇದು ರೋಹಿತ್ ಶರ್ಮಾರ ಕೊನೆಯ ಟೆಸ್ಟ್ ಸರಣಿ

ರೋಹಿತ್ ಶರ್ಮಾ ಫಾರ್ಮ್ ಕಳವಳಕಾರಿ

ನ್ಯೂಜಿಲೆಂಡ್ ವಿರುದ್ಧದ ಟೆಸ್ಟ್ ಸರಣಿಯ ಸೋಲಿನ ನಂತರ ರೋಹಿತ್ ಶರ್ಮಾ ಅವರ ನಾಯಕತ್ವ ಮತ್ತು ಭವಿಷ್ಯದ ಬಗ್ಗೆ ಪ್ರಶ್ನೆಗಳು ಎದ್ದಿವೆ. ಕೃಷ್ಣಮಾಚಾರಿ ಶ್ರೀಕಾಂತ್ ರೋಹಿತ್ ಅವರ ಆಸ್ಟ್ರೇಲಿಯಾ ಪ್ರವಾಸದ ಪ್ರದರ್ಶನವನ್ನು ಅವಲಂಬಿಸಿ ಟೆಸ್ಟ್ ಕ್ರಿಕೆಟ್ ನಿಂದ ನಿವೃತ್ತಿ ಹೊಂದಬಹುದು ಎಂದು ಭವಿಷ್ಯ ನುಡಿದಿದ್ದಾರೆ. ರೋಹಿತ್ ಅವರ ಕಳಪೆ ಪ್ರದರ್ಶನ ಮತ್ತು ವಯಸ್ಸು ಇದಕ್ಕೆ ಕಾರಣವಾಗಿದೆ. ಭಾರತದ ಡಬ್ಲ್ಯುಟಿಸಿ ಫೈನಲ್ ಅವಕಾಶಗಳು ಕೂಡ ಈ ಸೋಲಿನಿಂದ ಕಷ್ಟಕರವಾಗಿವೆ. ನ್ಯೂಜಿಲೆಂಡ್ ವಿರುದ್ಧದ ಮೂರು ಪಂದ್ಯಗಳ ಟೆಸ್ಟ್ ಸರಣಿಯಲ್ಲಿ ಭಾರತ 3-0 ಸೋಲನ್ನು ಎದುರಿಸಬೇಕಾಯಿತು. ಈ ಸೋಲಿನೊಂದಿಗೆ ಟೀಂ ಇಂಡಿಯಾದ ಡಬ್ಲ್ಯುಟಿಸಿ ಫೈನಲ್ ಹಾದಿ ಮತ್ತಷ್ಟು ಕಠಿಣಗೊಂಡಿದೆ. ಇದೀಗ ಟೀಂ ಇಂಡಿಯಾ ಮುಂಬರುವ ಆಸ್ಟ್ರೇಲಿಯಾ ವಿರುದ್ಧದ ಐದು ಪಂದ್ಯಗಳ ಟೆಸ್ಟ್ ಸರಣಿಯಲ್ಲಿ ನಾಲ್ಕು ಪಂದ್ಯಗಳನ್ನು ಗೆದ್ದರಷ್ಟೇ ಫೈನಲ್‌ಗೆ ಸುಗಮವಾಗಿ ಅರ್ಹತೆ ಪಡೆಯಲ್ಲಿದೆ. ಇಲ್ಲದಿದ್ದರೆ, ಸತತ ಮೂರನೇ ಬಾರಿಗೆ ಫೈನಲ್ ಆಡುವ ಟೀಂ ಇಂಡಿಯಾ ಕನಸು ಭಗ್ನಗೊಳ್ಳಲಿದೆ. ಇನ್ನು ಕಿವೀಸ್ ವಿರುದ್ಧದ ಸೋಲಿನ ನಂತರ ಟೀಂ ಇಂಡಿಯಾ ನಾಯಕ ರೋಹಿತ್ ಶರ್ಮಾ ಅವರ ನಾಯಕತ್ವದ ಮೇಲೆ ಸಾಕಷ್ಟು ಪ್ರಶ್ನೆಗಳು ಎದ್ದಿವೆ. ಈ ಸರಣಿಯಲ್ಲಿ ಅವರ ಬ್ಯಾಟ್ ಸಾಕಷ್ಟು ಮೌನವಾಗಿತ್ತು. ಹೀಗಾಗಿ ರೋಹಿತ್‌ರನ್ನು ಟೆಸ್ಟ್ ನಾಯಕತ್ವದಿಂದ ಕೆಳಗಿಳಿಸಬೇಕು ಎಂಬ ಕೂಗು ಜೋರಾಗಿದೆ. ಈ ನಡುವೆ ಟೀಂ ಇಂಡಿಯಾದ ಅನುಭವಿ ಆಟಗಾರ ಕೃಷ್ಣಮಾಚಾರಿ ಶ್ರೀಕಾಂತ್ ರೋಹಿತ್ ಶರ್ಮಾ ಬಗ್ಗೆ ದೊಡ್ಡ ಹೇಳಿಕೆ ನೀಡಿದ್ದಾರೆ. ಇತ್ತೀಚಿನ ದಿನಗಳಲ್ಲಿ ಟೆಸ್ಟ್ ಕ್ರಿಕೆಟ್‌ನಲ್ಲಿ ರೋಹಿತ್ ಶರ್ಮಾ ಅವರ ಸಾಧನೆ ವಿಶೇಷವೇನಿಲ್ಲ. ಕಳೆದ 10 ಇನ್ನಿಂಗ್ಸ್‌ಗಳಲ್ಲಿ ರೋಹಿತ್ ಕೇವಲ 13.30ರ ಸರಾಸರಿಯಲ್ಲಿ 133 ರನ್ ಗಳಿಸಿದ್ದಾರೆ.

ಇದರ ಜೊತೆಗೆ ಮೇಲೆ ಹೇಳಿದಂತೆ ಈ ಬಾರಿ ಟೀಂ ಇಂಡಿಯಾ ಡಬ್ಲ್ಯುಟಿಸಿ ಫೈನಲ್ ತಲುಪುವುದು ಕಷ್ಟಕರವಾಗಿದೆ. ಟೀಂ ಇಂಡಿಯಾ ಕಳೆದ ಎರಡು ಡಬ್ಲ್ಯುಟಿಸಿ ಫೈನಲ್ ಪಂದ್ಯಗಳನ್ನು ಆಡಿತ್ತು. ಇದೀಗ ಟೀಂ ಇಂಡಿಯಾ ಮೂರನೇ ಬಾರಿಗೆ ಡಬ್ಲ್ಯುಟಿಸಿ ಫೈನಲ್‌ಗೆ ಪ್ರವೇಶಿಸಬೇಕಾದರೆ ಬಾರ್ಡರ್-ಗವಾಸ್ಕರ್ ಟ್ರೋಫಿಯಲ್ಲಿ 4 ಪಂದ್ಯಗಳನ್ನು ಗೆಲ್ಲಲೇಬೇಕು. ಆದರೆ ಈ ಸರಣಿಗೂ ಮುನ್ನ ರೋಹಿತ್ ಶರ್ಮಾ ಫಾರ್ಮ್ ಕಳವಳಕಾರಿಯಾಗಿದೆ. 1983 ರ ವಿಶ್ವಕಪ್ ವಿಜೇತ ತಂಡದಲ್ಲಿದ್ದ ಕೃಷ್ಣಮಾಚಾರಿ ಶ್ರೀಕಾಂತ್ ಅವರು ರೋಹಿತ್ ಬಗ್ಗೆ ಅಚ್ಚರಿಯ ಹೇಳಿಕೆ ನೀಡಿದ್ದು, ಆಸ್ಟ್ರೇಲಿಯಾದಲ್ಲಿ ರೋಹಿತ್ ತಮ್ಮ ಲಯವನ್ನು ಕಂಡುಕೊಳ್ಳುವಲ್ಲಿ ಯಶಸ್ವಿಯಾಗದಿದ್ದರೆ, ಅವರು ಸ್ವತಃ ಟೆಸ್ಟ್ ಕ್ರಿಕೆಟ್‌ಗೆ ನಿವೃತ್ತಿ ಘೋಷಿಸುತ್ತಾರೆ ಎಂದು ಭಾವಿಸಿದ್ದೇನೆ ಎಂದಿದ್ದಾರೆ.

Printed by : A. BALACHANDRA, Printed at : RAJHANS ENTERPRISES No. 134, 4th Main Road, Industrial Town, Rajajinagar, Bengaluru 560044, Karnataka. Owned By, Published By, Editor :T. HOMBE GOWDA, No. 1230, Jayamahal, Ground Floor, 13th Cross, 2nd Phase, Girinagar, Bengaluru 560 085, Karnataka. Email Id: udayavahininews@yahoo.com , epaper.udayavahini.in www.udayavahini.in Udaya vahini news Udaya vahini news
ಉದಯವಾಹಿನಿ ಪತ್ರಿಕೆ ಹೆಸರಿನಲ್ಲಿ ಯಾರಾದರೂ ಬ್ಲ್ಯಾಕ್‌ಮೇಲ್ ಮಾಡಿದರೆ ಅಥವಾ ಹೆಸರು ದುರ್ಬಳಕೆ ಮಾಡಿಕೊಳ್ಳುತ್ತಿದ್ದರೆ ಕೂಡಲೇ ಈ ನಂಬರ್‌ಗೆ ಕರೆ ಮಾಡಿ: 9448225966